ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 28 ಬುಧವಾರ 2025

ಸಂಪುಟ: 46 | ಸಂಚಿಕೆ: 42 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಭಾರತವನ್ನ ಭವ್ಯ ಭಾರತವನ್ನಾಗಿಸಿದ ಪ್ರಧಾನಮಂತ್ರಿ ನರೇಂದ್ರ ಮೋದಿ

ದೇಶದ ಪ್ರಧಾನಮಂತ್ರಿಯಾಗಿ 11 ವರ್ಷ ಪೂರೈಕೆ; 2014ರ ಮೇ 26ರಂದು ಮೋದಿ ಯುಗಾರಂಭ



ಪ್ರಧಾನಮಂತ್ರಿ ನರೇಂದ್ರ ಮೋದಿ

● ಡಾ. ಕೆ.ಬಿ.ಗಣಪತಿ

ನಮ್ಮ ಭಾರತ ಸ್ವಾತಂತ್ರ್ಯ ಗಳಿಸಿದ ಆಗಸ್ಟ್ 15, 1947ರಂದು ಘೋಷಣೆ ಮಾಡಿದಂತೆ ದೇಶದಲ್ಲಿ ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯವಾಗಿ ಯಾವುದೇ ಬದಲಾವಣೆ ಆಗಲೇ ಇಲ್ಲ. ಆಡಳಿತಾತ್ಮಕವಾಗಿ ಆಂಗ್ಲರು ಬಿಟ್ಟು ಹೋದಂತಹ ವ್ಯವಸ್ಥೆಯೇ ಮುಂದುವರೆದುಕೊಂಡು ಬಂದಿತು. ಆರ್ಥಿಕವಾಗಿಯೂ ಸಾಮಾನ್ಯ ಬೆಳವಣಿಗೆಯನ್ನಷ್ಟೇ ನಾವು ನೋಡಿದೆವು. ರಕ್ಷಣಾತ್ಮಕವಾಗಿ ಸದಾ ಆತಂಕವಾದದ ಹಾವಳಿ. ಅದಕ್ಕೆ ಕಾರಣ, ನಮ್ಮ ದೇಶಕ್ಕೆ ದೂರದೃಷ್ಟಿಯ ದಿಟ್ಟತನದ, ಧೈರ್ಯಶಾಲಿಯಾದ, ದೇಶಪ್ರೇಮಿ ರಾಜಕೀಯ ನಾಯಕತ್ವ ಸಿಗದೆ ಇರುವುದು.

ಅಧಿಕಾರಕ್ಕಾಗಿಯೇ ಎಲ್ಲಾ ರಾಜಕೀಯ ಪಕ್ಷಗಳೂ ಚುನಾವಣೆಯನ್ನು ಮನಬಂದಂತೆ ನಡೆಸಿಕೊಂಡು ಬಂದವು. ಧರ್ಮ ಹಾಗೂ ಜಾತಿಗಳ ಮೂಲಕ ಮತದಾರರನ್ನು ಒಡೆದು, ಹಣದ ಆಮಿಷದ ಮೂಲಕ ಗೆದ್ದು ಅಧಿಕಾರ ಹಿಡಿಯುವುದನ್ನು ಏಕಮಾತ್ರ ಉದ್ದೇಶವನ್ನಾಗಿ ಮಾಡಿಕೊಂಡಿದ್ದವು. ಆಳುವವರೇ ದೇಶವನ್ನು ಲೂಟಿ ಹೊಡೆಯುತ್ತಾ ಬಂದರು. ಇದರ ಫಲವಾಗಿ ಭಾರತ ಹಿಂದುಳಿದ ರಾಷ್ಟ್ರವಾಗಿಯೇ ಉಳಿದು ಹೋಯಿತು.

ಅದೇನೋ ದೇವರ ಕೃಪೆ. ಮೇ 26, 2014ರಂದು **ನರೇಂದ್ರ ಮೋದಿ ಯುಗ** ಆರಂಭವಾಯ್ತು. ಅವರು ಪ್ರಧಾನಿಯಾಗಿ ಆರಿಸಿ ಬಂದು, ದೇಶವನ್ನು ಎಲ್ಲಾ ರೀತಿಯಲ್ಲೂ ಸದೃಢಗೊಳಿಸಿದ್ದರಿಂದಲೇ ಇಂದು ನಾವು ಭಾರತೀಯರು ಎಂದು ಪ್ರಪಂಚದ ಎಲ್ಲಾ ರಾಷ್ಟ್ರಗಳ ಮುಂದೆ ಹೆಮ್ಮೆಯಿಂದ ಹೇಳಿಕೊಳ್ಳುವಂತಾಯಿತು. ಯಾವುದು ನಮಗೆ ಸಾಧ್ಯವಾಗುವುದಿಲ್ಲ ಎಂದು ಕೈಚೆಲ್ಲಿ, ನಿರಾಶೆಗೊಂಡಿದ್ದೆವೋ ಅದನ್ನು ಸಾಧ್ಯವಾಗುವಂತೆ ಮಾಡಿದ್ದು ಮೋದಿ. ಕಳೆದ 67 ವರ್ಷಗಳಿಂದ(1947–2014) ಮಾಡಲಾಗದಂತಹ ಅತ್ಯಂತ ಕ್ಲಿಷ್ಟಕರವಾದ ಕಾರ್ಯವನ್ನೂ ಸಹ ಚಾಣಾಕ್ಷತನದಿಂದ ಮೋದಿ ಮಾಡಿ ತೋರಿಸಿದ್ದಾರೆ.

ಕೇವಲ 11 ವರ್ಷಗಳಲ್ಲಿ ಅವರು ಮಾಡಿದ ಮಹತ್ತರ ಕಾರ್ಯಗಳಲ್ಲಿ ಬಹುಮುಖ್ಯವಾದವುಗಳೆಂದರೆ; **370ನೇ ವಿಧಿಯನ್ನು** ಸಂವಿಧಾನದಿಂದ ಕಿತ್ತೊಗೆದು ಕಾಶ್ಮೀರವನ್ನು ಪರಿಪೂರ್ಣವಾಗಿ ಭಾರತದಲ್ಲಿ ಅಂತರ್ಗತಗೊಳಿಸಿದ್ದು. ಹಾಗೂ ಪಹಲ್ಗಾಮ್ ಹತ್ಯಾಕಾಂಡಕ್ಕೆ ಪ್ರತೀಕಾರವಾಗಿ ಪಾಕ್ ಪ್ರಚೋದಿತ ಉಗ್ರವಾದಿಗಳನ್ನು ನಾಶ ಮಾಡಲು ಕೈಗೊಂಡ **'ಆಪರೇಷನ್ ಸಿಂಧೂರ'**. ಪಾಕಿಸ್ತಾನದ ಒಳನುಗ್ಗಿ ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿದ್ದಲ್ಲದೆ, ಅವರ **ವಾಯು ನೆಲೆಗಳ ನಾಶ** ಮಾಡಿದ್ದು.

ಇದು ಮಾತ್ರವಲ್ಲದೆ, ಪ್ರಧಾನಿ ಮೋದಿ ಕೋವಿಡ್ ಸೋಂಕಿನಿಂದ ದೇಶದ ಜನರನ್ನು ರಕ್ಷಿಸಿದರು. 'ಉಜ್ವಲ ಯೋಜನೆ'ಯಡಿ ನೂರು ಮಿಲಿಯನ್ ಎಲ್‌ಪಿಜಿ ಸಂಪರ್ಕ ಕಲ್ಪಿಸಿ ನಾರಿಯರ ಆರೋಗ್ಯ ಕಾಪಾಡಿದರು. ಪುಲ್ವಾಮ ದಾಳಿಗೆ ಪ್ರತೀಕಾರವಾಗಿ ಸರ್ಜಿಕಲ್ ಸ್ಟ್ರೈಕ್ ಮೂಲಕ ಉಗ್ರರ ಹುಟ್ಟಡಗಿಸಿದರು. 'ಸ್ವಚ್ಛ ಭಾರತ ಅಭಿಯಾನ'ದ ಮೂಲಕ ದೇಶದ ಜನರಲ್ಲಿ ಸ್ವಚ್ಛತೆ ಪ್ರಜ್ಞೆ ಮೂಡಿಸಿದ್ದಾರೆ. ಆಯುಷ್ಮಾನ್ ಭಾರತ್ ಮೂಲಕ ಆರೋಗ್ಯ ವಿಮಾ ಸೌಲಭ್ಯ, ದೇಶದಲ್ಲಿ 50 ಸಾವಿರ ಕಿ.ಮೀ. ಹೆದ್ದಾರಿ ನಿರ್ಮಾಣ, ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ), ಜಲಜೀವನ್ ಮಿಷನ್ ಮೂಲಕ ಮನೆ ಮನೆಗೆ ನಲ್ಲಿ ಸಂಪರ್ಕ, ಪ್ರಧಾನಮಂತ್ರಿ ಜನ್‌ಧನ್ ಯೋಜನೆ, ಕೌಶಲ್ಯ ಭಾರತ್ ಮಿಷನ್, ಮೇಕ್ ಇನ್ ಇಂಡಿಯಾ, ಬೇಟಿ ಪಡಾವೋ... ಬೇಟಿ ಬಚಾವೋ, ಸಂಸದ್ ಆದರ್ಶ ಗ್ರಾಮ ಯೋಜನೆ, ಶ್ರಮವೇವ್ ಜಯತೆ ಯೋಜನೆ, ಕಿಸಾನ್ ಸಮ್ಮಾನ್ ಹೀಗೆ ಹತ್ತಾರು ಮಹತ್ತರ ಯೋಜನೆಗಳನ್ನೇ ನೀಡುತ್ತಾ ಬಂದಿದ್ದಾರೆ.

ನಮ್ಮ ಪ್ರಧಾನಿ ಮೋದಿಯವರಿಂದ ಇಂತಹ ಇನ್ನೂ ಹಲವಾರು ಮಹತ್ಕಾರ್ಯಗಳು ಮುಂದುವರೆಯಲಿ ಎಂದು ಆಶಿಸೋಣವೇ...

ಪಕ್ಷ ವಿರೋಧಿ ಚಟುವಟಿಕೆ; ಬಿಜೆಪಿಯಿಂದ ಶಾಸಕರಾದ


ಎಸ್.ಟಿ.ಸೋಮಶೇಖರ್, ಶಿವರಾಂ ಹೆಬ್ಬಾರ್ ಉಚ್ಚಾಟನೆ

● ಪಕ್ಷದ ಪ್ರಾಥಮಿಕ ಸದಸ್ಯತ್ವ, ಎಲ್ಲಾ ಹುದ್ದೆಗಳಿಂದ 6 ವರ್ಷ ಹೊರಕ್ಕೆ ● ಈ ಇಬ್ಬರು ಶಾಸಕರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಗೆದ್ದ ನಂತರ ಬಿಜೆಪಿಗೆ ಚಕ್ಕರ್; ಕಾಂಗ್ರೆಸ್‌ನಲ್ಲಿ ಹಾಜರ್!

ಬೆಂಗಳೂರು, ಮೇ 27(ಕೆಎಂಶಿ)– ಆಡಳಿತಾರೂಢ ಕಾಂಗ್ರೆಸ್ ಜೊತೆ ಗುರುತಿಸಿಕೊಂಡು ಪಕ್ಷ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿದ್ದ ಶಾಸಕರಾದ ಶಿವರಾಂ ಹೆಬ್ಬಾರ್ ಹಾಗೂ ಎಸ್.ಟಿ. ಸೋಮಶೇಖರ್ ಅವರನ್ನು ಪಕ್ಷದಿಂದ ಆರು ವರ್ಷಗಳ ಕಾಲ ಬಿಜೆಪಿ ಉಚ್ಚಾಟಿಸಿದೆ.

ಪಕ್ಷ ವಿರೋಧಿ ಚಟುವಟಿಕೆಗೆ ಸಂಬಂಧಿಸಿದಂತೆ ನೋಟಿಸ್ ನೀಡಿದ ನಂತರವೂ ನೀವುಗಳು ಪಕ್ಷ ವಿರೋಧಿ ಚಟುವಟಿಕೆಗಳನ್ನು ಮುಂದುವರಿಸಿದ್ದರಿಂದ ನಿಮ್ಮನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವ ಹಾಗೂ ಎಲ್ಲಾ ತೆರನಾದ ಹುದ್ದೆಗಳಿಂದಲೂ ಉಚ್ಚಾಟಿಸಲಾಗಿದೆ ಎಂದು ಬಿಜೆಪಿ ಕೇಂದ್ರ ಶಿಸ್ತು ಸಮಿತಿ ಸದಸ್ಯ ಕಾರ್ಯದರ್ಶಿ ಓಂ ಪಾಠಕ್ ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

ನಿಮ್ಮಗಳ ಪಕ್ಷ ವಿರೋಧಿ ಚಟುವಟಿಕೆಗಳ ಬಗ್ಗೆ ಶಿಸ್ತು ಸಮಿತಿ ಗಂಭೀರವಾಗಿ ಪರಿಗಣಿಸಿ ಈ ಕ್ರಮ ಕೈಗೊಂಡಿದೆ ಎಂದಿದ್ದಾರೆ. ಶಿವರಾಂ ಹೆಬ್ಬಾರ್ ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ವಿಧಾನಸಭಾ ಕ್ಷೇತ್ರವನ್ನು, ಎಸ್.ಟಿ.ಸೋಮಶೇಖರ್ ಬೆಂಗಳೂರು ನಗರ ಯಶವಂತಪುರ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಕಳೆದ ಚುನಾವಣೆಯಲ್ಲಿ ಬಿಜೆಪಿ ಚಿಹ್ನೆಯಡಿ ಸ್ಪರ್ಧಿಸಿ ವಿಧಾನಸಭೆ ಪ್ರವೇಶಿಸಿದ್ದ ಇಬ್ಬರು ಶಾಸಕರು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದಲೇ ಕಾಂಗ್ರೆಸ್ ಜೊತೆ ಗುರುತಿಸಿಕೊಂಡಿದ್ದರು. ವಿಧಾನಸಭೆ ■ 6ನೇ ಪುಟಕ್ಕೆ



ಒಳ್ಳೆಯದಾಯ್ತು

ಬಿಜೆಪಿಯಲ್ಲಿ ರೇಪ್ ಮಾಡಿದವರನ್ನು ಉಚ್ಚಾಟನೆ ಮಾಡುವುದಿಲ್ಲ. ನಮ್ಮಂತಹವರನ್ನು ಉಚ್ಚಾಟನೆ ಮಾಡ್ತಾರೆ. ಇದನ್ನು ನಿರೀಕ್ಷಿಸಿದ್ದೆವು, ಒಳ್ಳೆಯದಾಯ್ತು. 1% ಸಹ ಬೇಸರ, ಅಸಮಾಧಾನ ಇಲ್ಲ. ಉಚ್ಚಾಟನೆ ಮಾಡಿದ್ದು ಖುಷಿ ಇದೆ ಬಿಜೆಪಿಯಲ್ಲಿ ನನ್ನ ಪರವಾಗಿ ಮಾತನಾಡಲು ಯಾರಿಗೂ ಧೈರ್ಯ ಇಲ್ಲ. ಮಾಡಬಾರದ್ದನ್ನ ಮಾಡಿರೋರು ಅಲ್ಲಿದ್ದಾರೆ. ಅತ್ಯಾಚಾರದ ಆರೋಪ ಹೊತ್ತಿರೋರು ಇದ್ದಾರೆ. ಅವರೆಲ್ಲರನ್ನೂ ಬಿಟ್ಟು ನನ್ನ ಉಚ್ಚಾಟನೆ ಮಾಡಿದ್ದಾರೆ. ಉಚ್ಚಾಟನೆ ಯಾಕೆ ಮಾಡಿದ್ದೀರಿ ಅಂತಾನೂ ಕೇಳೋದಿಲ್ಲ. ನಾನು ಈಗ ಫ್ರೀ ಬರ್ಡ್ ಆಗಿ ಓಡಾಡುತ್ತೇನೆ. ಮುಂದಿನ ನಡೆ ಬಗ್ಗೆ ಸದ್ಯ ಯೋಚನೆ ಮಾಡಿಲ್ಲ.

–ಎಸ್.ಟಿ. ಸೋಮಶೇಖರ್




ಸ್ವಾಗತಿಸುತ್ತೇನೆ

ಬಿಜೆಪಿಯ ಶಿಸ್ತು ಸಮಿತಿ ನನ್ನನ್ನು ಪಕ್ಷದಿಂದ ಆರು ವರ್ಷಗಳ ಕಾಲ ಉಚ್ಚಾಟನೆ ಮಾಡಿರುವ ಕುರಿತು ಈಗ ತಾನೇ ವಾಟ್ಸಪ್ ಮತ್ತು ಇ–ಮೇಲ್ ಮೂಲಕ ಕಳಿಸಿರುವ ಸಂದೇಶ ಬಂದು ತಲುಪಿದೆ. ಸಮಿತಿ ತೆಗೆದುಕೊಂಡಿರುವ ಈ ನಿರ್ಣಯವನ್ನು ಸ್ವಾಗತಿಸುತ್ತೇನೆ. ಬಿಜೆಪಿಯ ಶಿಸ್ತು ಸಮಿತಿ ನೋಟಿಸ್ ಮೂಲಕ ಕೇಳಿದ್ದ ಪ್ರಶ್ನೆಗೆ ನಾನು ಸೂಕ್ತವಾದ ಉತ್ತರ ಕೊಟ್ಟಿದ್ದೇನೆ. ಆದಾಗ್ಯೂ ಉಚ್ಚಾಟನೆ ಮಾಡಿರುವಂತದ್ದು ಒಂದು ಕಡೆ ಸಂದೇಹ ಮತ್ತು ಒಂದು ಕಡೆ ಸಂತೋಷ ಎರಡೂ ಉಂಟಾಗಿದೆ. ಆರಂಭದಲ್ಲಿಯೇ ಹೇಳಿದಂತೆ ಈಗ ಕೈಗೊಂಡಿರುವ ಕ್ರಮವನ್ನು ಸ್ವಾಗತ ಮಾಡುತ್ತೇನೆ.

–ಶಿವರಾಂ ಹೆಬ್ಬಾರ್

ಮಾಜಿ ಕ್ರಿಕೆಟ್ ತಾರೆ ಅನಿಲ್ ಕುಂಬ್ಳೆ ಅರಣ್ಯ ಇಲಾಖೆ ರಾಯಭಾರಿ



ಬೆಂಗಳೂರು, ಮೇ 27(ಕೆಎಂಶಿ)– ಮಾಜಿ ಟೆಸ್ಟ್ ಕ್ರಿಕೆಟಿಗ ಕರ್ನಾಟಕದ ಅನಿಲ್ ಕುಂಬ್ಳೆ ಅವರನ್ನು ಅರಣ್ಯ ಮತ್ತು ವನ್ಯಜೀವಿ ರಾಯಭಾರಿಯಾಗಿ ನಾಮ ನಿರ್ದೇಶನ ಮಾಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಇಂದಿಲ್ಲಿ ತಿಳಿಸಿದ್ದಾರೆ.

ಸಚಿವರಾಗಿ 2 ವರ್ಷ ಪೂರೈಸಿದ ಸಂದರ್ಭದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಕರ್ನಾಟಕ ವನ್ಯಜೀವಿ ಮಂಡಳಿ ಉಪಾಧ್ಯಕ್ಷರಾಗಿ ■ 6ನೇ ಪುಟಕ್ಕೆ

ಬಂಟ್ವಾಳದಲ್ಲಿ ವ್ಯಕ್ತಿಯ ಬರ್ಬರ ಹತ್ಯೆ; ದ.ಕನ್ನಡದಲ್ಲಿ ನಿಷೇಧಾಜ್ಞೆ



ರಹೀಮ್

ಬಂಟ್ವಾಳ, ಮೇ 27– ಮಂಗಳೂರಿನಲ್ಲಿ ಮತ್ತೆ ನೆತ್ತರು ಹರಿದಿದ್ದು ಹಿಂದೂ ಸಂಘಟನೆ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಬೆನ್ನಲ್ಲೇ ಇದೀಗ ಪಿಕಪ್ ವಾಹನ ಚಾಲಕನಾಗಿದ್ದ ರಹೀಮ್ ಎಂಬಾತನನ್ನು ಹಾಡಹಗಲೇ ಬೈಕಿನಲ್ಲಿ ಬಂದಿದ್ದವರು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿದ್ದಾರೆ.

ಬಂಟ್ವಾಳ ತಾಲೂಕಿನ ಕುರಿಯಾಳ ಸಮೀಪದ ಇರಾಕೋಡಿ ಎಂಬಲ್ಲಿ ಈ ಘಟನೆ ನಡೆದಿದ್ದು, ಕೊಳತ್ತಮಜಲು ನಿವಾಸಿ ಪಿಕಪ್ ಚಾಲಕ ರಹೀಮ್‌ನನ್ನು ಕೊಲೆ ಮಾಡಲಾಗಿದೆ. ಇರಾಕೋಡಿ ಎಂಬಲ್ಲಿ ಮನೆಯೊಂದರ ಮುಂದೆ ಮರಳು ಅನ್‌ಲೋಡ್ ಮಾಡುತ್ತಿದ್ದ ವೇಳೆ ಬೈಕಿನಲ್ಲಿ ಬಂದಿದ್ದ ಇಬ್ಬರು ದುಷ್ಕರ್ಮಿಗಳು ಕೃತ್ಯ ಎಸಗಿದ್ದಾರೆ. ಇನ್ನು ರಹೀಮ್ ಜೊತೆಗಿದ್ದ ಹನೀಫ್ ಎಂಬಾತನ ಮೇಲೂ ದಾಳಿ ಮಾಡಲಾಗಿದ್ದು ಆತನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಥಳಕ್ಕೆ ಬಂಟ್ವಾಳ ಗ್ರಾಮಾಂತರ ಪೋಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಈ ಹತ್ಯೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ದಕ್ಷಿಣ ಕನ್ನಡ ಜಿಲ್ಲಾದ್ಯಂತ ಎರಡು ದಿನ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ಸೆ.15ರವರೆಗೆ ಐಟಿಆರ್ ಸಲ್ಲಿಕೆಗೆ ಅವಕಾಶ

ನವದೆಹಲಿ, ಮೇ 27– 2025–26ನೇ ಸಾಲಿನ ಆದಾಯ ತೆರಿಗೆ ರಿಟರ್ನ್ಸ್ (ಐಟಿಆರ್) ಸಲ್ಲಿಸುವ ದಿನಾಂಕ ವನ್ನು ಆದಾಯ ತೆರಿಗೆ ಇಲಾಖೆ ಜುಲೈ 31ರಿಂದ ಸೆಪ್ಟೆಂಬರ್ 15ಕ್ಕೆ ವಿಸ್ತರಿಸಿದೆ. ತಮ್ಮ ಖಾತೆಗಳನ್ನು ಲೆಕ್ಕಪರಿಶೋಧನೆ ಮಾಡಿಸಿಕೊಳ್ಳುವ ಅಗತ್ಯವಿಲ್ಲದ ವ್ಯಕ್ತಿಗಳು ಮತ್ತು ಸಂಸ್ಥೆಗಳು ಜುಲೈ 31ರೊಳಗೆ ಆದಾಯ ತೆರಿಗೆ ರಿಟರ್ನ್ಸ್ (ಐಟಿಆರ್) ಸಲ್ಲಿಸಬೇಕಾಗಿತ್ತು.

ಅಧಿಸೂಚಿತ ಐಟಿಆರ್‌ಗಳಲ್ಲಿ ಪರಿಚಯಿಸಲಾದ ವ್ಯಾಪಕ ಬದಲಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಐಟಿಆರ್ ವ್ಯವಸ್ಥೆಯ ಸಿದ್ಧತೆ ಮತ್ತು ಬಿಡುಗಡೆಗೆ ಅಗತ್ಯವಿರುವ ಸಮಯವನ್ನು ಪರಿಗಣಿಸಿ, 2025–26ನೇ ಸಾಲಿನ ರಿಟರ್ನ್ಸ್ ಸಲ್ಲಿಸುವ ಅಂತಿಮ ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಕೇಂದ್ರೀಯ ನೇರ ತೆರಿಗೆ ಮಂಡಳಿ(ಸಿಬಿಡಿಟಿ) ಹೇಳಿಕೆಯಲ್ಲಿ ತಿಳಿಸಿದೆ.

ತೆರಿಗೆದಾರರಿಗೆ ಸುಗಮ ಮತ್ತು ಅನುಕೂಲಕರ ಫೈಲಿಂಗ್ ವ್ಯವಸ್ಥೆ ಮಾಡಿಕೊಡಲು, ಜುಲೈ 31ರಂದು ಮೂಲತಃ ನಿಗದಿಯಾಗಿದ್ದ ಐಟಿಆರ್ ಸಲ್ಲಿಸುವ ಅಂತಿಮ ದಿನಾಂಕವನ್ನು ಸೆಪ್ಟೆಂಬರ್ 15ರವರೆಗೆ ವಿಸ್ತರಿಸಲು ನಿರ್ಧರಿಸಲಾಗಿದೆ ಎಂದು ಸಿಬಿಡಿಟಿ ತಿಳಿಸಿದೆ.

ಕೊರೊನಾ ಹಾವಳಿ ವ್ಯಾಪಿಸುತ್ತಿದ್ದರೂ ಸದ್ಯ ಮಾಸ್ಕ್ ಧರಿಸುವುದು ಕಡ್ಡಾಯವಲ್ಲ


ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ಸ್ಪಷ್ಟನೆ

ಜ್ವರ, ಶೀತ, ನೆಗಡಿ ಇದ್ದವರು; ಹಿರಿಯರು, ಗರ್ಭಿಣಿಯರು ಜನದಟ್ಟಣೆ ಪ್ರದೇಶದಲ್ಲಿ ಮಾಸ್ಕ್ ಧರಿಸುವುದು



ಬೆಂಗಳೂರು, ಮೇ 27(ಕೆಎಂಶಿ)– ರಾಜ್ಯದಲ್ಲಿ ಕೊರೊನಾ ಪ್ರಕರಣಗಳು ಹೆಚ್ಚುತ್ತಿದ್ದರೂ ಮಾಸ್ಕ್ ಧರಿಸುವುದು ಕಡ್ಡಾಯ ಇಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜ್ವರ, ಶೀತ, ನೆಗಡಿ ಇದ್ದವರು, ಜನದಟ್ಟಣೆ ಸ್ಥಳಗಳಲ್ಲಿ ಹಿರಿಯರು ಹಾಗೂ ಗರ್ಭಿಣಿಯರು ಮಾಸ್ಕ್ ಧರಿಸಬೇಕು. ಈ ಬಾರಿ ನಿಗದಿತ ಸಮಯಕ್ಕೂ ಮುನ್ನವೇ ಮಳೆ ಹೆಚ್ಚಾಗಿರುವುದು ಮತ್ತು ಹವಾಮಾನ ವೈಪರೀತ್ಯದಿಂದ ಶೀತ ಸಮಸ್ಯೆ ಎದುರಾಗಿದೆ. ಸರ್ಕಾರ ತೀವ್ರ ನಿಗಾ ವಹಿಸಿದ್ದು ಕೋವಿಡ್ ಪ್ರಕರಣಗಳು ಕಂಡುಬರುತ್ತಿದ್ದರೂ ತೀವ್ರವಾಗಿ ಹರಡುತ್ತಿಲ್ಲ, ಆದ್ದರಿಂದ ಸಾರ್ವಜನಿಕರಲ್ಲಿ ಭಯಭೀತಿ ಬೇಡ, ಆದರೆ, ಎಚ್ಚರ ವಹಿಸಿ ಎಂದರು.



ಡಾ.ಶರಣ್ ಪ್ರಕಾಶ್

ಸರ್ಕಾರ ಎಲ್ಲಾ ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದೆ, ಸಿ–19 ಲಸಿಕೆ ಪಡೆಯಲು ಇಚ್ಛಿಸುವವರು, ಸರ್ಕಾರಿ ಆಸ್ಪತ್ರೆ ಹಾಗೂ ಆರೋಗ್ಯ ಕೇಂದ್ರಗಳಲ್ಲಿ ಪಡೆದುಕೊಳ್ಳಬಹುದಾಗಿದ್ದು, ವ್ಯವಸ್ಥೆ ಮಾಡಲಾಗಿದೆ. ಬೇಸಿಗೆ ರಜೆ ಬಳಿಕ ಶಾಲೆಗಳು ಪ್ರಾರಂಭವಾಗಲಿದ್ದು ವಿದ್ಯಾರ್ಥಿಗಳಿಗೆ ಜ್ವರ, ಶೀತ, ಕೆಮ್ಮು ಶಾಲೆಗಳಿಗೆ ಕಳುಹಿಸಬೇಡಿ, ಒಂದು ವೇಳೆ ಶಾಲೆಯಲ್ಲಿ ಮಕ್ಕಳಿಗೆ ಶೀತ, ನೆಗಡಿ ಕಂಡುಬಂದರೆ, ಕೂಡಲೇ ಪೋಷಕರಿಗೆ ದೂರವಾಣಿ ಕರೆ ಮಾಡಿ ಕಳುಹಿಸಿಕೊಡಬೇಕು.

ವೈದ್ಯಕೀಯ ಶಿಕ್ಷಣ ಇಲಾಖೆಯ ಎಲ್ಲಾ ಆಸ್ಪತ್ರೆ ನಿರ್ದೇಶಕರೊಂದಿಗೆ ಸಭೆ ನಡೆಸಲಾಗಿದೆ, ಲ್ಯಾಬ್ ವ್ಯವಸ್ಥೆ, ನಾಲ್ಕು ವಿಭಾಗಗಳಲ್ಲಿ ಟೆಸ್ಟಿಂಗ್, ಆಕ್ಸಿಜನ್, ಹಾಸಿಗೆ, ವೆಂಟಿಲೇಟರ್ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಲಾಗಿದೆ.

ಬೆಂಗಳೂರಿನಲ್ಲಿ ಹೆಚ್ಚು ಪ್ರಕರಣಗಳು ದಾಖಲಾಗಿವೆ, ದೊಡ್ಡ ಪ್ರಮಾಣದಲ್ಲಿ ಹರಡುತ್ತಿಲ್ಲ, ಜನತೆ ಆತಂಕಕ್ಕೆ ಒಳಗಾಗದೆ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿದರೆ ಎಲ್ಲರಿಗೂ ಕ್ಷೇಮ. ಜನರಿಗೆ ಈಗಾಗಲೇ ಕೋವಿಡ್ ಲಸಿಕೆ ನೀಡಲಾಗಿದೆ, ಮತ್ತೆ ಅವಶ್ಯಕತೆ ಇದ್ದಲ್ಲಿ ಕೇಂದ್ರ ಆರೋಗ್ಯ ಇಲಾಖೆಯೊಂದಿಗೆ ಚರ್ಚಿಸಿ ವ್ಯಾಕ್ಸಿನ್ ತರಿಸಲಾಗುವುದು. ಕೋವಿಡ್ ಟೆಸ್ಟ್‌ಗೆ ಅಗತ್ಯವಿರುವ ಸೌಲಭ್ಯಗಳ ಸಿದ್ಧತೆ ಮಾಡಿಕೊಳ್ಳಲು ಸೂಚಿಸಲಾಗಿದೆ, ಮುಂಜಾಗ್ರತಾ ಕ್ರಮವಾಗಿ ಆರೋಗ್ಯ ಸಿಬ್ಬಂದಿ ಮಾಸ್ಕ್ ಧರಿಸಬೇಕು, ಔಷಧ ಲಭ್ಯತೆ ಹಾಗೂ ಆಕ್ಸಿಜನ್ ಬೆಡ್‌ಗಳ ಪರಿಶೀಲನೆ ನಡೆಸಿ ವರದಿ ನೀಡಲು ಸೂಚಿಸಲಾಗಿದೆ ಎಂದರು.

ಹಾಸನ ಮಿತ್ರ

ಇಂದಿನಿಂದ ಕೊರೊನಾ ಪರೀಕ್ಷೆ ಆರಂಭ



ಸಂಸದ ಶ್ರೇಯಸ್ ಎಂ.ಪಟೇಲ್ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.

ಹಾಸನ: ಎಲ್ಲೆಡೆ ಕೋವಿಡ್ ಹರಡುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲೂ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಬುಧವಾರ (ಮೇ 28) ದಿಂದ ಕೊರೊನಾ ಪರೀಕ್ಷೆ ಆರಂಭವಾಗಲಿದೆ. ಯಾರೂ ಭಯ ಪಡದೆ ಮುನ್ನೆಚ್ಚರಿಕೆ ವಹಿಸಬೇಕೆಂದು ಸಂಸದ ಶ್ರೇಯಸ್ ಎಂ.ಪಟೇಲ್ ಸಲಹೆ ನೀಡಿದರು.

ನಗರದ ಸಾಲಗಾಮೆ ರಸ್ತೆ ಬಳಿ ಇರುವ ಜಿಲ್ಲಾ ಆರೋಗ್ಯ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಜಿಲ್ಲೆಯ ಎಲ್ಲಾ ತಾಲೂಕಿನ ಆರೋಗ್ಯಾಧಿಕಾರಿಗಳಿಂದ ಮಾಹಿತಿ ಪಡೆದು, ನಂತರ ಮಾತನಾಡಿದರು.

ಸರ್ಕಾರದ ಆದೇಶದಂತೆ ಕೋವಿಡ್ ಟೆಸ್ಟ್ ನಡೆಯಲಿದೆ. ಅದಕ್ಕೆ ಬೇಕಾದ ಎಲ್ಲಾ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಯಾವುದೇ ರೀತಿಯ ಔಷಧಿಗಳನ್ನು ಖಾಸಗಿ ಮೆಡಿಕಲ್ ಸ್ಟೋರ್‌ಗಳಿಗೆ ಬರೆಯಬಾರದು. ಎಲ್ಲವೂ ಸಾರ್ವಜನಿಕರಿಗೆ ಸುಲಭವಾಗಿ ಸಿಗುವಂತೆ ನೋಡಿಕೊಳ್ಳಬೇಕು. ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಮತ್ತು ವಯೋವೃದ್ಧರು ತಮ್ಮ ಆರೋಗ್ಯದ ಬಗ್ಗೆ ಎಚ್ಚರಿಕೆ ವಹಿಸಬೇಕು. ಜನನಿಬಿಡ ಪ್ರದೇಶಗಳಲ್ಲಿ ಗುಂಪು ಗುಂಪಾಗಿ ಜನ ಸೇರುವುದನ್ನು ಆದಷ್ಟು ಕಡಿಮೆ ಮಾಡುವುದು ಸೂಕ್ತ ಎಂದು ಸಲಹೆ ನೀಡಿದರು.

ಈ ವೇಳೆ ಯಾರೂ ಆತಂಕಕ್ಕೆ ಒಳಗಾಗುವುದು ಬೇಡ. ಮುನ್ನೆಚ್ಚರಿಕಾ ಕ್ರಮವಾಗಿ ಮಾಸ್ಕ್ ಧರಿಸಿ, ಸ್ಯಾನಿಟೈಸರ್ ಉಪಯೋಗಿಸಿ. ಜಿಲ್ಲೆಯ ವೈದ್ಯರು ಸನ್ನದ್ಧರಾಗಿದ್ದಾರೆ. ಮನೆ ಸುತ್ತ ಸ್ವಚ್ಛತೆ, ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಜಿಲ್ಲಾ ಆಸ್ಪತ್ರೆಯಲ್ಲಿ ಐಸೋಲೇಷನ್ ವಾರ್ಡ್‌ಗಳಾಗಿ ಸಿದ್ಧತೆ ಮಾಡಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾ ಧಿಕಾರಿ ಅನಿಲ್, ಜಿಲ್ಲಾ ಶಸ್ತ್ರ ಚಿಕಿತ್ಸಕ ನಾಗಪ್ಪ, ಹಿಮ್ಸ್‌ನ ರಾಘವೇಂದ್ರ, ಡಾ.ಚೇತನ್, ಸೇರಿದಂತೆ ಹಾಸನ ಜಿಲ್ಲೆಯಲ್ಲಿ ಎಲ್ಲಾ ತಾಲೂಕಿನ ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.

ಅರ್ಹ ರೈತರಿಗೆ ಸರ್ಕಾರದ ಸವಲತ್ತು ತಲುಪಿಸಿ



ಶ್ಯಾನೆಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷ ಆರ್.ಟಿ.ಬಸಪ್ಪ ರಂಗನಾಯಕನ ಕೊಪ್ಪಲು, ಉಪಾಧ್ಯಕ್ಷ ಕಣಿವೆ ನಾಯಕ್ ತಿಪ್ಪಘಟ್ಟ ಅವರನ್ನು ಶಾಸಕ ಶಿವಲಿಂಗೇಗೌಡ ಅಭಿನಂದಿಸಿದರು.

ಅರಸೀಕೆರೆ: ಸರ್ಕಾರ ನೀಡುವ ಸೌಲಭ್ಯಗಳನ್ನು ಅರ್ಹ ರೈತರಿಗೆ ತಲುಪಿಸಿ, ಸಹಕಾರ ಸಂಘಗಳ ಅಧ್ಯಕ್ಷರು ಅವರ ಏಳಿಗೆಗೆ ಪ್ರಯತ್ನಿಸಬೇಕು ಎಂದು ಶಾಸಕ ಕೆ.ಎಂ.ಶಿವಲಿಂಗೇಗೌಡ ಹೇಳಿದರು.

ತಾಲೂಕಿನ ಕಣಕಟ್ಟೆ ಹೋಬಳಿಯ ಶ್ಯಾನೆಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷ ಆರ್.ಟಿ.ಬಸಪ್ಪ ರಂಗನಾಯಕನ ಕೊಪ್ಪಲು, ಉಪಾಧ್ಯಕ್ಷ ಕಣಿವೆ ನಾಯಕ್ ತಿಪ್ಪಘಟ್ಟ ಅವರನ್ನು ಅಭಿನಂದಿಸಿ ಮಾತನಾಡಿದರು. ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಸಾಲ ನೀಡುವಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿದ್ದು, ಸಮರ್ಪಕವಾಗಿ ಸಾಲ ನೀಡಲಾಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ನೂತನ ಅಧ್ಯಕ್ಷ ಬಸಪ್ಪ ಮಾತನಾಡಿ, ಸಂಘದಲ್ಲಿರುವ ಸದಸ್ಯರು ಹಾಗೂ ಶಾಸಕರ ಮಾರ್ಗದರ್ಶನದಂತೆ ಸಂಘವನ್ನು ಬಲಪಡಿಸಿ ರೈತರಿಗೆ ಅನುಕೂಲ ಮಾಡಿಕೊಡುತ್ತೇನೆ ಎಂದು ಹೇಳಿದರು. ಪ್ರಾಥಮಿಕ ಕೃಷಿ ಪತ್ತಿನ ಸದಸ್ಯರಾದ ಶ್ಯಾನೆಗೆರೆ ಬಾಬು, ಜಿ.ಟಿ.ತಿಮ್ಮಪ್ಪ, ವಿಜಯ್‌ಕುಮಾರ್, ಮರಿ ಸಂಕಪ್ಪ, ಶ್ರೀನಿವಾಸ್, ಷಣ್ಮುಖ, ಶಶಿಕುಮಾರ್, ಶ್ರುತಿ ಮಂಜು, ರೀಟ ಸಿದ್ದೇಶ್, ರಂಗನಾಥ್, ಮುಖಂಡರು ಉಪಸ್ಥಿತರಿದ್ದರು.

ಯುವ ಜನತೆ ಸಾಮಾಜಿಕ ಕಳಕಳಿ ಮರೆತಂತಿದೆ



ಹಸಿರು ಭೂಮಿ ಪ್ರತಿಷ್ಠಾನದ ಸಂಸ್ಥಾಪಕ ವೆಂಕಟೇಶ್‌ಮೂರ್ತಿ ಮಾತನಾಡಿದರು.

ಹಾಸನ: ಯುವ ಜನತೆ ಸಮಾಜದ ಬಗ್ಗೆ ಸಾಮಾಜಿಕ ಕಳಕಳಿಯನ್ನು ಮರೆತಂತಿದೆ ಎಂದು ಹಿರಿಯ ಪತ್ರಕರ್ತ ಹಾಗೂ ಹಸಿರುಭೂಮಿ ಪ್ರತಿಷ್ಠಾನದ ಸಂಸ್ಥಾಪಕ ಆರ್.ಪಿ.ವೆಂಕಟೇಶ್ ಮೂರ್ತಿ ತಿಳಿಸಿದರು.

ನಗರದ ಸಮೀಪ ಇರುವ ಹಾಸನ್ ವಿವಿ ಹೇಮಗಂಗೋತ್ರಿ ಆವರಣದಲ್ಲಿ ವಿವಿಯ ಸಮಾಜಕಾರ್ಯ ವಿಭಾಗದಿಂದ ಹಮ್ಮಿಕೊಳ್ಳಲಾಗಿದ್ದ ಸಮಾಜ ಕಾರ್ಯ ದಿನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವ ಜನತೆ ಸಮಾಜದ ಬಗ್ಗೆ ಸಾಮಾಜಿಕ ಕಳಕಳಿ ಮರೆತಂತಿದೆ. ಸಮಾಜಕಾರ್ಯ ವಿಭಾಗ ಇಡೀ ಸಮಾಜದ ಕೈಗನ್ನಡಿಯಾಗಿದೆ. ಸರ್ಕಾರಿ ಶಾಲೆಗಳನ್ನು ಇಂದು ಸಾಮಾನ್ಯ ಜನರು ದತ್ತು ಪಡೆದು ನಡೆಸುವ ಸಂದರ್ಭವಿದೆ. ಎಲ್ಲರಿಗೂ ಶಿಕ್ಷಣ ಉಚಿತವಾಗಿ ಸಿಗಬೇಕು. ಆದರೆ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಿ ಸಮಾಜವನ್ನು ಕಟ್ಟುವ ಕೆಲಸ ಸರ್ಕಾರ ಮಾಡಬೇಕು. ಇಲ್ಲವಾದರೆ ಮುಂದೆ ದೊಡ್ಡ ಸಮಸ್ಯೆ ಎದರಾಗುವ ಸಾಧ್ಯತೆ ಹೆಚ್ಚಾಗಿದೆ ಎಂದರು.

ಸಮಾಜ ಕಾರ್ಯದ ಮುಖ್ಯಸ್ಥ ಡಾ.ಎಸ್.ಜೆ.ಮಹೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಡಾ.ಲೋಕೇಶ್ ಎಂ.ಒ.ಯು, ಡಾ.ಪ್ರದೀಪ್, ಡಾ.ಘಟ್ವರ್ಧನ್, ಡಾ.ವೇದ, ಶ್ರೀಮತಿ ಭಾನು ಇನ್ನಿತರು ಉಪಸ್ಥಿತರಿದ್ದರು.

ಡಿವೈಡರ್‌ಗೆ ಕಾರು ಡಿಕ್ಕಿ: ಇಬ್ಬರು ಯುವಕರ ಸಾವು



ಸಕಲೇಶಪುರ: ತಾಲೂಕಿನ ಬಾಗೆ ಗ್ರಾಮದ ಅರಸುನಗರ ಸಮೀಪ ರಸ್ತೆ ಮೇಲೆ ನಿಂತಿದ್ದ ನೀರು ಕಾಣದೇ ನಿಯಂತ್ರಣ ಕಳೆದುಕೊಂಡ ಕಾರು, ರಸ್ತೆಬದಿಯ ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸಾವನ್ನಪ್ಪಿ, ಇಬ್ಬರು ಗಾಯಗೊಂಡಿದ್ದಾರೆ. ಬೆಂಗಳೂರಿನ ಅಭಿಷೇಕ್ (27), ಶರತ್ (28) ಮೃತ ಪಟ್ಟಿದ್ದು, ರಾಜಶೇಖರ್ ಮತ್ತು ಸಂದೀಪ್ ಗಾಯಗೊಂಡಿದ್ದಾರೆ. ನಾಲ್ವರು ಯುವಕರು ಕಾರಿನಲ್ಲಿ ಬೆಂಗಳೂರಿನಿಂದ ಧರ್ಮಸ್ಥಳಕ್ಕೆ ತೆರಳುತ್ತಿದ್ದರು. ಧಾರಾಕಾರವಾಗಿ ಸುರಿಯುತ್ತಿರುವ ಮಳೆಯಿಂದ ರಸ್ತೆ ಮಧ್ಯದಲ್ಲಿ ನೀರು ನಿಂತಿದ್ದು, ನೀರಿನ ಮೇಲೆ ಹಾದು ಹೋಗಿದ್ದರಿಂದ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಕಬ್ಬಿಣದ ಡಿವೈಡರ್‌ಗೆ ಡಿಕ್ಕಿ ಹೊಡೆದಿದೆ. ಗಾಯಾಳುಗಳನ್ನು ಹಾಸನದ ಆಸ್ಪತ್ರೆಗೆ ದಾಖಲಿಸಲಾಗಿದೆ. ಸಕಲೇಶಪುರ ಗ್ರಾಮಾಂತರ ಠಾಣೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಎಂಡಿಎ ಪ್ರಭಾರ ಆಯುಕ್ತರಾಗಿ ಕೆ.ಆರ್.ರಕ್ಷಿತ್ ಅಧಿಕಾರ ಸ್ವೀಕಾರ

ಮೈಸೂರು, ಮೇ 27(ಆರ್‌ಕೆ)– ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ದ ಆಯುಕ್ತ (ಪ್ರಭಾರ)ರಾಗಿ ಕಿರಿಯ ಶ್ರೇಣಿ ಕೆಎಎಸ್ ಅಧಿಕಾರಿ ಕೆ.ಆರ್.ರಕ್ಷಿತ್ ಮಂಗಳವಾರ ಮಧ್ಯಾಹ್ನ ಪ್ರಾಧಿಕಾರದ ಕಚೇರಿಯಲ್ಲಿ ಅಧಿಕಾರ ವಹಿಸಿಕೊಂಡರು.

ನಿರ್ಗಮಿತ ಆಯುಕ್ತ ಎ.ಎನ್. ರಘುನಂದನ್ ಅವರು ದಾಖಲಾತಿಗಳಿಗೆ ಸಹಿ ಮಾಡುವ ಮೂಲಕ ರಕ್ಷಿತ್ ಅವರಿಗೆ ಅಧಿಕಾರ ಹಸ್ತಾಂತರಿಸಿ ಶುಭ ಕೋರಿ, ಬೆಂಗಳೂರಿಗೆ ತೆರಳಿದರು.

ನಂತರ ಮಾತನಾಡಿದ ರಕ್ಷಿತ್, ಮುಖ್ಯಮಂತ್ರಿಗಳು, ನಗರಾಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ನನ್ನನ್ನು ಎಂಡಿಎ ಆಯುಕ್ತರಾಗಿ ನಿಯೋಜಿಸಿ, ಜನರಿಗೆ ಒಳ್ಳೆಯ ಕೆಲಸ ಮಾಡಿ ಎಂದು ಸೂಚನೆ ನೀಡಿದ್ದಾರೆ. ಅವರ ನಂಬಿಕೆ, ವಿಶ್ವಾಸಕ್ಕೆ ಸ್ವಲ್ಪವೂ ಧಕ್ಕೆ ಬರದಂತೆ ಎಂಡಿಎಯಲ್ಲಿ ಜನಸ್ನೇಹಿ ಆಡಳಿತ ವ್ಯವಸ್ಥೆ ನೀಡುವುದಾಗಿ ತಿಳಿಸಿದರು.

ರೈತ ಬಂಧುಗಳನ್ನು ವಿಶ್ವಾಸಕ್ಕೆ ಪಡೆದು ಅವರ ಸಹಯೋಗದೊಂದಿಗೆ ವಸತಿ ಬಡಾವಣೆ ರಚಿಸಿ ವಸತಿರಹಿತರಿಗೆ ನಿಯಮಾನುಸಾರ ನಿವೇಶನ ಹಂಚುವ ಮೂಲಕ ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಮೂಲ ಉದ್ದೇಶ ಈಡೇರಿಸಬೇಕೆಂಬುದು ನನ್ನ ಮೊದಲ ಆದ್ಯತೆಯಾಗಿದೆ ಎಂದು ನುಡಿದರು.



ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ದ ಆಯುಕ್ತ (ಪ್ರಭಾರ)ರಾಗಿ ಕಿರಿಯ ಶ್ರೇಣಿ ಕೆಎಎಸ್ ಅಧಿಕಾರಿ ಕೆ.ಆರ್.ರಕ್ಷಿತ್ ಪ್ರಾಧಿಕಾರದ ಕಚೇರಿಯಲ್ಲಿ ನಿರ್ಗಮಿತ ಆಯುಕ್ತ ಎ.ಎನ್.ರಘುನಂದನ್ ಅವರಿಂದ ಅಧಿಕಾರ ವಹಿಸಿಕೊಂಡರು.

ರಘುನಂದನ್ 4 ದಿನ ಮಾತ್ರ ಎಂಡಿಎ ಆಯುಕ್ತ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಆಯುಕ್ತರಾಗಿದ್ದ ಎ.ಎನ್. ರಘುನಂದನ್ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ವಾಗಿ ಪರಿವರ್ತನೆಯಾದ ಬಳಿಕ ಕೇವಲ 4 ದಿನ ಆಯುಕ್ತರಾಗಿದ್ದರು. ಮೇ 23ರಂದು ಎಂಡಿಎ ಆಗಿ ಸರ್ಕಾರದಿಂದ ಅಧಿಕೃತ ಆದೇಶವಾಯಿತು. ನಂತರ 4ನೇ ಶನಿವಾರ ಮತ್ತು ಭಾನುವಾರ ರಜೆ ಇತ್ತು. ಈ ನಡುವೆ ಶುಕ್ರವಾರ ಮತ್ತು ಸೋಮವಾರ ಮಾತ್ರ ರಘುನಂದನ್ ಆಯುಕ್ತರಾಗಿ ಕೆಲಸ ಮಾಡಲು ಅವಕಾಶವಿತ್ತು. ಮೇ 27 (ಇಂದು)ಕ್ಕೆ ಕೆ.ಆರ್. ರಕ್ಷಿತ್ ಎಂಡಿಎ ಆಯುಕ್ತ (ಪ್ರಭಾರ)ರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ. ಹಾಗಾಗಿ ಎಂಡಿಎ ಮೊದಲ ಆಯುಕ್ತರ ಅವಧಿ ಕೇವಲ 4 ದಿನ ಅಷ್ಟೆ.

ಕೈಗೆಟಕುವ ದರದಲ್ಲಿ ಗುಂಪು ವಸತಿ ಯೋಜನೆ ಅನುಷ್ಠಾನ ಮಾಡಿ ಹಲವು ವರ್ಷಗಳಿಂದ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿ ಕಾಯುತ್ತಿರುವ ವಸತಿರಹಿತರಿಗೆ ಸೂರು ಒದಗಿಸುವ ಜವಾಬ್ದಾರಿ ಸಹ ನನ್ನ ಮೇಲಿದೆ ಎಂದರು.

ಮಹಾ ಯೋಜನೆ ನವೀಕರಣ, ಆಡಳಿತದಲ್ಲಿ ಸುಧಾರಣೆ, ಪ್ರಾಧಿಕಾರದ ಆಸ್ತಿ ಗುರುತಿಸಿ ಸಂರಕ್ಷಿಸುವ ಜೊತೆಗೆ ಸಂಸ್ಥೆಯ ಆರ್ಥಿಕ ಸಂಪನ್ಮೂಲ ಕ್ರೋಢೀಕರಣಕ್ಕೆ ಆದ್ಯತೆ ನೀಡುವುದಾಗಿಯೂ ರಕ್ಷಿತ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಎಂಡಿಎ ಅಧ್ಯಕ್ಷರಾದ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಎಂ.ಪಿ, ಎಂಎಲ್‌ಎ ಹಾಗೂ ಇತರ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪ್ರಾಧಿಕಾರದ ಘನತೆ, ಗೌರವಕ್ಕೆ ಧಕ್ಕೆಯಾಗದಂತೆ ಕೆಲಸ ಮಾಡುವುದು ತಮ್ಮ ಮೊದಲ ಆದ್ಯತೆ ಎಂದೂ ತಿಳಿಸಿದರು.

ಸರ್ಕಾರದಿಂದ ಆಗಿಂದಾಗ್ಗೆ ಬರುವ ಮಾರ್ಗಸೂಚಿಗಳು, ಕಾನೂನಿನನ್ವಯ ಪ್ರಾಧಿಕಾರದ ಕಾರ್ಯದರ್ಶಿ, ನಗರ ಯೋಜಕ ಸದಸ್ಯ, ಸೂಪರಿಂಟೆಂಡಿಂಗ್ ಇಂಜಿನಿಯರ್, ಎಲ್ಲಾ ಎಕ್ಸಿಕ್ಯೂಟಿವ್ ಇಂಜಿನಿಯರ್‌ಗಳು, ವಿಶೇಷ ತಹಸೀಲ್ದಾರ್‌ಗಳು ಸೇರಿದಂತೆ ಅಧೀನಾಧಿಕಾರಿಗಳು, ಸಿಬ್ಬಂದಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮೈಸೂರು ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡುವುದಾಗಿಯೂ ನುಡಿದರು.

ಭಾರೀ ಮಳೆ; ಜೂ.1ರವರೆಗೆ ನಾಗರಹೊಳೆಯ ವೀರನಹೊಸಳ್ಳಿ, ನಾಣಚ್ಚಿ ಗೇಟ್ ಸಫಾರಿ ಬಂದ್

ಮೈಸೂರು, ಮೇ 27(ಎಂಟಿವೈ)– ಕೊಡಗು ಹಾಗೂ ಕೇರಳದಲ್ಲಿ ಭಾರೀ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಹುಣಸೂರು ತಾಲೂಕಿನ ವೀರನಹೊಸಳ್ಳಿ ಹಾಗೂ ಕೊಡಗು ಜಿಲ್ಲೆಯ ನಾಣಚ್ಚಿ ಗೇಟ್ ಸಫಾರಿಯನ್ನು ನಾಳೆ(ಮೇ 28)ಯಿಂದ ಜೂನ್ 1ರವರೆಗೆ ಸ್ಥಗಿತಗೊಳಿಸಲಾಗಿದೆ.

ಸಫಾರಿ ವಲಯದಲ್ಲಿ ಮಳೆಯಿಂದಾಗಿ ತೇವಾಂಶ ಹೆಚ್ಚಾಗಿದ್ದು, ಸಫಾರಿ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ ಸಫಾರಿ ಬಂದ್ ಮಾಡಲಾಗಿದೆ. ಆದರೆ, ಹೆಚ್.ಡಿ.ಕೋಟೆ ತಾಲೂಕಿನ ಅಂತರಸಂತೆ ವಲಯದ ಕಾಕನಕೋಟೆ ಸಫಾರಿ ಕೇಂದ್ರದಿಂದ ಸಫಾರಿ ಎಂದಿನಂತೆ ಮುಂದುವರೆಯಲಿದೆ ಎಂದು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಾಗರಹೊಳೆ ಉಪವಿಭಾಗದ ಎಸಿಎಫ್ ಅನನ್ಯ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮೈಸೂರು ನಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 1 ಅಂಗನವಾಡಿ ಕಾರ್ಯಕರ್ತೆ ಹಾಗೂ 14 ಅಂಗನವಾಡಿ ಸಹಾಯಕಿಯರ ಖಾಲಿ ಹುದ್ದೆಗಳನ್ನು ಗೌರವ ಧನ ಆಧಾರಿತ ಸೇವೆಗಳನ್ನು ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತರಿಂದ ಅರ್ಜಿ ಆಹ್ವಾನಿಸಲಾಗಿದೆ. https://karnemakaone.kar.nic.in/abcd/ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿ, ಮೈಸೂರು ನಗರ, ಬಾಲಭವನ ಆವರಣ, ಬನ್ನಿಮಂಟಪ, ಮೈಸೂರು. ದೂ.ಸಂ: 0821–2491962 ಸಂಪರ್ಕಿಸಬಹುದು

ಮೈಸೂರು ರಸ್ತೆಗಳಲ್ಲಿ ಬಿಡಾಡಿ ದನಗಳ ಕಾರುಬಾರು!



ಮೈಸೂರಿನ ಸಯ್ಯಾಜಿರಾವ್ ರಸ್ತೆಯ ಹಳೇ ಆರ್‌ಎಂಸಿ ಸರ್ಕಲ್‌ನಲ್ಲಿ ಮಂಗಳವಾರ ಮಧ್ಯಾಹ್ನ ಕಂಡುಬಂದ ದೃಶ್ಯ.

ಮೈಸೂರು, ಮೇ 27(ಆರ್‌ಕೆ)– ಮೈಸೂರಲ್ಲಿ ಎಲ್ಲಿ ನೋಡಿದರೂ ಬಿಡಾಡಿ ದನಕರುಗಳದ್ದೇ ಕಾರುಬಾರು. ಸಯ್ಯಾಜಿರಾವ್ ರಸ್ತೆಯ ಓಲ್ಡ್ ಆರ್‌ಎಂಸಿ ಸರ್ಕಲ್ ಮಧ್ಯ ಭಾಗ 17 ಹಸು–ಕರುಗಳು ಒಟ್ಟಿಗೆ ಸ್ವಚ್ಛಂದವಾಗಿ ರಸ್ತೆಯಲ್ಲಿ ಅದೂ ಭಾರೀ ವಾಹನ ದಟ್ಟಣೆ ಇರುವ ವೃತ್ತದಲ್ಲಿ ವಿಹರಿಸಿದ್ದು ಭಾರೀ ಕಿರಿಕಿರಿಗೆ ಕಾರಣವಾಯಿತು. ಕೆಲ ಜಾನುವಾರುಗಳು ನಿರಾತಂಕವಾಗಿ ಮೆಲುಕು ಹಾಕುತ್ತಾ ಮಲಗಿದ್ದರೆ, ಉಳಿದವು ಅವುಗಳಿಗೆ ರಕ್ಷಣೆಯಾಗಿ ಸುತ್ತ ನಿಂತಿದ್ದವು.

ಟ್ರಾಫಿಕ್ ಸಿಗ್ನಲ್ ಇರುವ ಈ ಸರ್ಕಲ್‌ಗೆ 5 ರಸ್ತೆಗಳು ಕೂಡುತ್ತಿದ್ದು, ಸಿಗ್ನಲ್ ಬಂದಾಗ ವಾಹನಗಳು ರೇಸ್‌ಗೆ ಹೋಗುವಂತೆ ವೇಗವಾಗಿ ಚಲಿಸಿದರೂ, ಸರ್ಕಲ್ ಮಧ್ಯೆ ಇದ್ದ ಈ ಜಾನುವಾರು ಮಾತ್ರ ಸ್ವಲ್ಪವೂ ಅಲುಕದೇ ನಿಂತಿದ್ದವು.

ಇವು ಹಿಂಡು ಹಿಂಡಾಗಿ ನಿಂತಿದ್ದರಿಂದ ವಾಹನ ಸಂಚಾರಕ್ಕೆ ಅಡ್ಡಿಯಾಗುತ್ತಿತ್ತಾದರೂ, ವಾಹನ ಸವಾರರು ಮಾತ್ರ ಎಚ್ಚರಿಕೆಯಿಂದ ಚಾಲನೆ ಮಾಡಿದರೇ ಹೊರತು, ಜಾನುವಾರುಗಳ ತಂಟೆಗೆ ಹೋಗಲಿಲ್ಲ. ಇದೇ ರೀತಿ ಹೈವೇ ಸರ್ಕಲ್, ಮೇದರ್ ಬ್ಲಾಕ್, ಅಗ್ರಹಾರ ಸರ್ಕಲ್, ದೇವರಾಜ ಮೊಹಲ್ಲಾ, ಒಂಟಿಕೊಪ್ಪಲ್ ಸೇರಿದಂತೆ ಮೈಸೂರಿನ ಹಲವು ರಸ್ತೆ ಮತ್ತು ಸರ್ಕಲ್‌ಗಳಲ್ಲಿ ಬಿಡಾಡಿ ದನಗಳ ಹಾವಳಿ ಮುಂದುವರಿದಿದ್ದರೂ ಮೈಸೂರು ಪಾಲಿಕೆಯು ಯಾವುದೇ ಕ್ರಮ ವಹಿಸುತ್ತಿಲ್ಲ ಎಂದು ಸಾರ್ವಜನಿಕರು ದೂರಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

28.05.2025 ಬುಧವಾರ, ಮಳೆ ನಕ್ಷತ್ರ: ರೋಹಿಣಿ 25.05.2025 ರಿಂದ 07.06.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಶುಕ್ಲ ಪಕ್ಷ,
ತಿಥಿ: ಪಾಡ್ಯ, ನಕ್ಷತ್ರ: ಮೃಗಶಿರ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗದಿಂದ ಕಣ್ಣಿನ ದೃಷ್ಟಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ವಿಶೇಷ ಬೇಸಿಗೆ ಆರೋಗ್ಯ ಶಿಬಿರ, ಬೊಜ್ಜು ನಿವಾರಣೆ, ಮೂತ್ರ ಪಿಂಡ (ಕಿಡ್ನಿ) ಕಾಯಿಲೆಗೆ, ಆರೋಗ್ಯಾಯುಷ್ಯ ಆರೋಗ್ಯವರ್ಧಕ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಭುಜ ನೋವು, ದುಷ್ಟ ವ್ರಣ/ಮಾಯದ ಗಾಯ, ಮಾನಸಿಕ ಒತ್ತಡ ನಿವಾರಣೆ ಕುರಿತು ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, .ದೇವೇಗೌಡ ಸರ್ಕಲ್ ಬಳಿ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.

■ **ಸುಯೋಗ್ ಆಸ್ಪತ್ರೆ :** ಉಚಿತ ಕೀಲು, ಮೂಳೆ ತಪಾಸಣಾ ಶಿಬಿರ, ಸ್ಥಳ: ಸುಯೋಗ್ ಆಸ್ಪತ್ರೆ ಆವರಣ, ಬೆಳಗ್ಗೆ 10 ರಿಂದ.

■ **ಶ್ರೀ ಸೂತ್ರ ಆಯುರ್ಧಾಮ :** ಉಚಿತ ವೈದ್ಯಕೀಯ ತಪಾಸಣಾ ಮತ್ತು ಸಲಹಾ ಶಿಬಿರ, ಸ್ಥಳ: ಶ್ರೀ ಸೂತ್ರ ಆಯುರ್ಧಾಮ, ಚಾಮುಂಡಿಪುರಂ, ಬೆಳಗ್ಗೆ 10 ರಿಂದ.

■ **ನಿವೃತ್ತ ಶುಶ್ರೂಷಾಧಿಕಾರಿಗಳ ಸಂಘ :** ಫ್ಲಾರೆನ್ಸ್ ನೈಟಿಂಗೇಲ್‌ರವರ ಜಯಂತಿ ಮತ್ತು ಅಂತರರಾಷ್ಟ್ರೀಯ ಶುಶ್ರೂಷಕರ ದಿನಾಚರಣೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷೆ ಶ್ರೀಮತಿ ಶಿವಮ್ಮ, ಮುಖ್ಯ ಅತಿಥಿಗಳು : ಸಂಘದ ಮಾಜಿ ಅಧ್ಯಕ್ಷ ಜಿ. ಸಿದ್ದಯ್ಯ, ಉಪಸ್ಥಿತರು : ಸಂಘದ ಸಂಸ್ಥಾಪಕ ಅಧ್ಯಕ್ಷ ಡಾ. ಪಿ. ರಂಗಸ್ವಾಮಿ, ಗೌರವಾಧ್ಯಕ್ಷ ಕೆ.ಕೆ. ಕುಶಾಲಪ್ಪ, ಪ್ರಧಾನ ಕಾರ್ಯದರ್ಶಿ ಶ್ರೀಮತಿ ಹೇಮಲತಾ, ಖಜಾಂಚಿ ಶ್ರೀಮತಿ ಆಲೀಸ್ ಫ್ಲಾರೆನ್ಸ್ ಕ್ರಾಸ್ಟ, ಸ್ಥಳ: ಶ್ರೀ ಗುರು ರೆಸಿಡೆನ್ಸಿ ಹೋಟೆಲ್ ಸಭಾಂಗಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 11.30ಕ್ಕೆ

■ **ನ್ಯೂರೋಜೋನ್ ಬ್ರೈನ್ ಅಂಡ್ ಸ್ಪೈನ್ ಇನ್‌ಸ್ಟಿಟ್ಯೂಟ್ :** ಎಸ್.ಎಂ. ಕೃಷ್ಣ ಮೆಮೋರಿಯಲ್ ನ್ಯೂರೋಜೋನ್ ಉದ್ಘಾಟನಾ ಸಮಾರಂಭ, ಉದ್ಘಾಟನೆ : ಶ್ರೀಮತಿ ಪ್ರೇಮಾ ಕೃಷ್ಣ, ಮುಖ್ಯ ಅತಿಥಿಗಳು : ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಪಬ್ಲಿಕ್ ಟಿವಿ ಛೇರ್ಮನ್ ಹೆಚ್.ಆರ್. ರಂಗನಾಥ್, ಸ್ಥಳ: 205, 9ನೇ ಕ್ರಾಸ್, ಗೋಕುಲಂ 3ನೇ ಹಂತ, ಡಾಕ್ಟರ್ಸ್ ಕಾರ್ನರ್ ಹತ್ತಿರ, ಮಧ್ಯಾಹ್ನ 3 ರಿಂದ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಅವಧೂತ ದತ್ತ ಪೀಠ :** ಶ್ರೀ ದತ್ತ ವೆಂಕಟೇಶ್ವರ ಕ್ಷೇತ್ರದ 26ನೇ ಬ್ರಹ್ಮೋತ್ಸವ, ನಾದಮಂಟಪದ 27ನೇ ವಾರ್ಷಿಕೋತ್ಸವ ಹಾಗೂ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ 83ನೇ ಜನ್ಮದಿನಾಚರಣೆ, ಬೆಳಗ್ಗೆ 8ಕ್ಕೆ ಶ್ರೀ ಚಕ್ರ ಪೂಜೆ, 9ಕ್ಕೆ ಸಾಲಿಗ್ರಾಮ ಪೂಜಾ ಶ್ರೀ ದತ್ತ ವಂಕಟೇಶ್ವರ ದೇವಸ್ಥಾನದಲ್ಲಿ, ಮಧ್ಯಾಹ್ನ 3ಕ್ಕೆ ಜುಗಲ್‌ಬಂದಿ ಸಂಗೀತ ಕಾರ್ಯಕ್ರಮ, ವಯೋಲಿನ್–ವಿದ್ವಾನ್ ಪೆರಿ ತ್ಯಾಗರಾಜು, ಕೊಳಲು ವಾದನ–ಪ್ರಮೋದ್ ಉಮಾಪತಿ, ಸಂಜೆ 5ಕ್ಕೆ ಗರುಡ ವಾಹನ ಉತ್ಸವ, ಶ್ರೀ ದತ್ತ ವೆಂಕಟೇಶ್ವರ ದೇವಸ್ಥಾನ, ಸಂಜೆ 7ಕ್ಕೆ ವಿದ್ವಾನ್ ಶ್ರೀರಾಮ ಜೊನ್ನಲಗಡ್ಡ ಮತ್ತು ಬಳಗದಿಂದ ಕರ್ನಾಟಕ ಗಾಯನ ಗೋಷ್ಠಿ, ಸ್ಥಳ: ಅವಧೂತ ದತ್ತಪೀಠ, ನಂಜನಗೂಡು ರಸ್ತೆ.

■ **ಶ್ರೀ ನಾದಬ್ರಹ್ಮ ಸಂಗೀತ ಸಭಾ :** ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯ ಸಂಸ್ಮರಣಾ ಕಾರ್ಯಕ್ರಮ, ಗಾನ ಕಲಾಭೂಷಣ ವಿದ್ವಾನ್ ಆರ್.ಕೆ. ಪದ್ಮನಾಭ ಅವರಿಂದ ಕರ್ನಾಟಕ ಶಾಸ್ತ್ರೀಯ ಗಾಯನ, ವಿದುಷಿ ಸಿಂಧು ಸುಚೇತನ್–ಪಿಟೀಲು, ವಿದ್ವಾನ್ ಸಿ. ಚೆಲುವರಾಜು–ಮೃದಂಗ, ವಿದ್ವಾನ್ ಜಿ.ಎಸ್. ರಾಮಾನುಜಂ–ಘಟಂ, ಸ್ಥಳ: ಶ್ರೀ ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ

■ **ಶ್ರೀ ಸಪ್ತಮಾತೃಕಾ ಚೌಡೇಶ್ವರಿ ದೇವಸ್ಥಾನ – ಶ್ರೀ ಕ್ಷೇತ್ರ, ಮೈಸೂರು :** 20ನೇ ವಾರ್ಷಿಕ ಪ್ರತಿಷ್ಠಾ ವರ್ಧಂತ್ಯುತ್ಸವ–2025, ವಿಶೇಷ ಧಾರ್ಮಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಸೇವಾ ಕಾರ್ಯಕ್ರಮ, ಸಹಸ್ರ ಮೋದಕ ಹೋಮ, ಸ್ಥಳ: ಶ್ರೀ ಸಪ್ತಮಾತೃಕಾ ಚೌಡೇಶ್ವರಿ ದೇವಸ್ಥಾನ, ವಿಜಯನಗರ 3ನೇ ಹಂತ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಪಿ. ಎಸ್. ರಂಜನಿ, ಮತ್ತೂರು ಕೆ. ಸ್ವಾಮಿ, ನಿತಿನ್ ರಾಜಾರಾಂ ಶಾಸ್ತ್ರೀ, ವ್ಯಾಖ್ಯಾನ– ಡಾ. ಕೆ.ವಿ. ಭಾರಧ್ವಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ–ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಮತ್ತು ಪ್ಲೇಸ್ ಮೆಂಟ್ ಸೆಲ್‌ಗಳ ಪ್ರಾಮುಖ್ಯತೆ ಕುರಿತು ಕಾಲೇಜು ಶಿಕ್ಷಣ ಇಲಾಖೆಯ ವೃತ್ತಿ ಮಾರ್ಗದರ್ಶನ ವಿಭಾಗದ ನೋಡಲ್ ಅಧಿಕಾರಿಯಾಗಿದ್ದ ಪ್ರೊಫೆಸರ್ ಎ. ನಾರಾಯಣ ಪ್ರಸಾದ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 9.30 ಚಿತ್ರಗೀತೆಗಳು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ–ಪ್ರಶಾಂತ್ ರಾವ್ ಕದಂ – ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಮಿಶ್ರಮಾಧುರ್ಯ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ–ದೊರೆಸ್ವಾಮಿ ಅಯ್ಯಂಗಾರ್ – ವೀಣಾ ವಾದನ, 4.00 ಮಹಿಳಾ ರಂಗ–ಬದುಕು ಜಟಕಾಬಂಡಿ–ಸ್ವಯಂ ಉದ್ಯೋಗದಲ್ಲಿ ತೊಡಗಿರುವ ಅನ್ನಪೂರ್ಣ ಹಾಗೂ ಅವರ ಪತಿಯೊಂದಿಗೆ ಸಂದರ್ಶನ ಮಾತುಕತೆ, ಪ್ರಸ್ತುತಿ–ಜಾಂಪಣ್ಣ ಆಶೀಹಾಳ್, 4.30 ಹಿಂದಿ ಚಿತ್ರಗೀತೆಗಳು, 4.45 ಹಿಂದಿ ಪಾಠ, ಪ್ರಸ್ತುತಿ –ಆಯೇಷಾ ಸುಲ್ತಾನ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ ಮೇವು ಮೆಲುಕು ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಪಶು ಆಹಾರ ನಿರ್ವಹಣೆ ಕುರಿತ ನೇರ ಫೋನ್ ಇನ್ ಕಾರ್ಯಕ್ರಮ, ಭಾಗವಹಿಸುತ್ತಾರೆ: ಮೈಸೂರಿನ ಪಶು ಆಹಾರ ತಜ್ಞರಾದ ಡಾ. ಚನ್ನೇಗೌಡ. ಇವರೊಂದಿಗೆ ಭಾಗವಹಿಸುತ್ತಾರೆ: ಎನ್. ಕೇಶವಮೂರ್ತಿ, 7.45 ನಕ್ಷತ್ರ ಲೋಕ–ಸಿನಿ ಸೆಲೆಬ್ರಿಟಿಗಳೊಂದಿಗೆ ಮಾತುಕತೆ – ಭಾಗವಹಿಸುವ ಅತಿಥಿ ಹೆಸರಾಂತ ಚಲನಚಿತ್ರ ನಿರ್ದೇಶಕ ಬಹದ್ದೂರ್ ಚೇತನ್. ಇವರೊಂದಿಗೆ ಭಾಗವಹಿಸಲಿದ್ದಾರೆ–ಪ್ರಭುಸ್ವಾಮಿ ಮಳಿಮಠ್ ಹಾಗೂ ಶ್ರೀಮಾನ್ ಎಸ್., 8.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಡಾ.ಸಿ.ಎ. ಶೀಧರ್–ಕೊಳಲು ವಾದನ, 8.30 ಹಿಂದಿ ಚಿತ್ರಗೀತೆಗಳು, 9.30 ಕ್ರೀಡಾಲೋಕ, 10.00 ಹಳ್ಳಿಹಾಡು, ಪ್ರಸ್ತುತಿ: ಡಾ. ಮೈಸೂರು ಉಮೇಶ್, 10.30 ಸವಿನೆನಪು– ಹಳೆಯ ಕನ್ನಡ ಚಿತ್ರಗೀತೆಗಳು


■ **ರಸಾಯನಶಾಸ್ತ್ರ ಅಧ್ಯಯನ ವಿಭಾಗ, ಆರ್ಗ್ಯಾನಿಕ್ ಕೆಮಿಸ್ಟ್ರಿ ಅಧ್ಯಯನ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಪ್ರೊ. ಕೆ.ಎಸ್. ರಂಗಪ್ಪ ಅಭಿಮಾನಿ ಬಳಗ :** ಪ್ರೊ. ಕೆ.ಎಸ್. ರಂಗಪ್ಪ ಅವರ 70ನೇ ವರ್ಷದ ಹುಟ್ಟುಹಬ್ಬ ಆಚರಣೆ ಹಾಗೂ ಸನ್ಮಾನ ಸಮಾರಂಭ, ಮುಖ್ಯ ಅತಿಥಿಗಳು : ಐಐಎಸ್ಸಿ ಬೆಂಗಳೂರು ಮಾಜಿ ನಿರ್ದೇಶಕರು ಮತ್ತು ಹೈದರಾಬಾದ್ ವಿಶ್ವವಿದ್ಯಾನಿಲಯ, ತೆಲಂಗಾಣ ಮಾಜಿ ಕುಲಪತಿ ಪದ್ಮಶ್ರೀ ಪುರಸ್ಕೃತ ಪ್ರೊ. ಗೋವರ್ಧನ್ ಮೆಹ್ತ, ಸಂಸದರು ಹಾಗೂ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ಮಾಜಿ ನಿರ್ದೇಶಕರಾದ ಪದ್ಮಶ್ರೀ ಪುರಸ್ಕೃತ ಡಾ. ಸಿ.ಎನ್. ಮಂಜುನಾಥ್, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ವಿಶಿಷ್ಟ ಜೈವಿಕ ತಂತ್ರಜ್ಞಾನ ಸಂಸ್ಥೆ ಪ್ರಾಧ್ಯಾಪಕ ಪ್ರೊ. ಟಿ.ಪಿ. ಸಿಂಗ್, ರಾಷ್ಟ್ರೀಯ ವಿಜ್ಞಾನ ಅಕಾಡೆಮಿ ಅಧ್ಯಕ್ಷ ಪದ್ಮಶ್ರೀ ಪುರಸ್ಕೃತರಾದ ಪ್ರೊ. ವಿನೋದ್ ಕುಮಾರ್ ಸಿಂಗ್, ಸನ್ ಫಾರ್ಮಾ ಅಡ್ವಾನ್ಸಡ್ ರಿಸರ್ಚ್ ಕಂ. ಮುಖ್ಯಸ್ಥ ಡಾ. ಟಿ. ರಾಜಮನ್ನಾರ್, ವಿಶೇಷ ಆಹ್ವಾನಿತರು : ಡಿಪಿಎಸ್‌ಆರ್‌ಯು ನವದೆಹಲಿ, ಕುಲಪತಿ ಪ್ರೊ. ವಿ. ರವಿಚಂದ್ರಿಯನ್, ಕರಾಮುವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ, ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಭಾರತೀಯ ವಿಜ್ಞಾನ ಸಂಸ್ಥೆ ನಿವೃತ್ತ ಪ್ರಾಧ್ಯಾಪಕ ಪ್ರೊ. ಕೆ.ಜೆ. ರಾವ್, ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಸನ್ಮಾನಿತರು : ಮೈಸೂರು ವಿವಿ ಕುಲಪತಿ ಪ್ರೊ. ಕೆ.ಎಸ್. ರಂಗಪ್ಪ ಮತ್ತು ಶ್ರೀಮತಿ ಪೂರ್ಣಿಮಾದೇವಿ ರಂಗಪ್ಪ, ಅಧ್ಯಕ್ಷತೆ : ಮೈಸೂರು ವಿವಿ ನಿವೃತ್ತ ಕುಲಪತಿ ಪ್ರೊ. ಎಸ್.ಎನ್. ಹೆಗ್ಡೆ, ಸ್ಥಳ: ಸೆನೆಟ್ ಭವನ, ಮೈಸೂರು ವಿಶ್ವವಿದ್ಯಾನಿಲಯ, ಸಂಜೆ 5ಕ್ಕೆ.

ಬಿಳಿಗಿರಿರಂಗನಬೆಟ್ಟದಲ್ಲಿಂದು

■ **ಸುತ್ತೂರು ಶ್ರೀಮಠ, ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ:** ಜೀವನೋತ್ಸಾಹ ಶಿಬಿರದ ಸಮಾರೋಪ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಮಾರೋಪ ಭಾಷಣ : ಮೈಸೂರು ದಕ್ಷಿಣ ವಲಯದ ಡಿಐಜಿಪಿ ಡಾ. ಎಂ.ಬಿ. ಬೋರಲಿಂಗಯ್ಯ, ಅಧ್ಯಕ್ಷತೆ : ಚಾಮರಾಜನಗರದ ಜಿಲ್ಲಾಧಿಕಾರಿ ಶ್ರೀಮತಿ ಸಿ.ಟಿ.ಶಿಲ್ಪಾನಾಗ್, ಮುಖ್ಯ ಅತಿಥಿಗಳು : ಚಾಮರಾಜನಗರ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ.ಹೀರಾಲಾಲ್, ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಡಾ.ಮಾಲತಿಪ್ರಿಯ, ಸ್ಥಳ: ಬಿಳಿಗಿರಿರಂಗನಬೆಟ್ಟ, ಬೆಳಗ್ಗೆ 11.30 ರಿಂದ.

ಹೈದರಾಲಿ ರಸ್ತೆಯ 40 ಮರಗಳ ಮಾರಣ ಹೋಮದ ಕಹಿ ನೆನಪು ಮಾಸುವ ಮುನ್ನವೇ

ಸುಭಾಷ್‌ನಗರದಲ್ಲಿ ಹತ್ತಾರು ಮರಗಳ ಅಳಿವು–ಉಳಿವಿನ ಆತಂಕ



ಮೈಸೂರಿನ ಸುಭಾಷ್‌ನಗರದ 3ನೇ ಮುಖ್ಯ ರಸ್ತೆಯಲ್ಲಿರುವ ಮರಕ್ಕೆ ಸಂಖ್ಯೆ ನಮೂದಿಸಿ ಗುರುತು ಮಾಡಿರುವುದು.

ಮೈಸೂರು,ಮೇ 27(ಪಿಎಂ)– ಮೈಸೂರಿನ ನಜರ್‌ಬಾದಿನ ಹೈದರಾಲಿ ರಸ್ತೆಯಲ್ಲಿ ಸೊಂಪಾಗಿ ಬೆಳೆದಿದ್ದ 40 ಮರಗಳನ್ನು ನೆಲಕ್ಕುರಳಿಸಲಾಯಿತು. ಬಿಸಿಲಿನ ತಾಪದ ನಡುವೆಯೂ ಈ ರಸ್ತೆಯಲ್ಲಿ ಈ ಮರಗಳಿದ್ದ ಕಾರಣಕ್ಕೆ ನೆರಳು ಆವರಿಸಿ ಸವಾರರು ನಿಶ್ಚಿಂತೆಯಿಂದ ಸಾಗುತ್ತಿದ್ದರು. ಈ 40 ಮರಗಳ ಮಾರಣ ಹೋಮದ ಕಹಿ ನೆನಪು ಮಾಸುವ ಮುನ್ನವೇ ಸುಭಾಷ್‌ನಗರದ 3ನೇ ಮುಖ್ಯ ರಸ್ತೆಯಲ್ಲಿರುವ ಹತ್ತಾರು ಮರಗಳ ಅಳಿವು–ಉಳಿವಿನ ಪ್ರಶ್ನೆ ಎದುರಾಗಿದೆ.

ಸುಭಾಷ್‌ನಗರದ ಸದರಿ ರಸ್ತೆಯಲ್ಲಿ 135 ಮೀಟರ್ ಉದ್ದದವರೆಗೆ ಇಲ್ಲಿರುವ ಮಳೆ ನೀರು ಚರಂಡಿಯ ದುರಸ್ತಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಮೈಸೂರು ಮಹಾನಗರ ಪಾಲಿಕೆಯ ವಲಯ ಕಚೇರಿ 8ರ ವ್ಯಾಪ್ತಿಯ ಈ ರಸ್ತೆಯಲ್ಲಿ ನಡೆಯುತ್ತಿರುವ ಸದರಿ ಕಾಮಗಾರಿ ಕಾರಣ ಚರಂಡಿ ಪಕ್ಕದಲ್ಲಿರುವ ರಸ್ತೆಬದಿಯ ಹತ್ತಾರು ಮರಗಳ ಅಳಿವು ಉಳಿವಿನ ಪ್ರಶ್ನೆ ಇದೀಗ ಉದ್ಭವಿಸಿದೆ.

ಇಲ್ಲಿನ ಮರಗಳಿಗೆ ಸಂಖ್ಯೆಗಳನ್ನು ನಮೂದಿಸಿ ಗುರುತು ಮಾಡಿದ್ದು, ಅವುಗಳನ್ನು ಕಡಿಯುವ ಉದ್ದೇಶದಿಂದ ಈ ಕ್ರಮ ವಹಿಸಲಾಗಿದೆ ಎಂಬ ಆರೋಪ ಕೇಳಿ ಬಂದಿದೆ. ಆದರೆ ಪಾಲಿಕೆ ಮೂಲಗಳು ಹೇಳುವುದೇ ಬೇರೆ. ಮರಗಳನ್ನು ಕಡಿಯುವ ಉದ್ದೇಶದಿಂದ ಸಂಖ್ಯೆ ನಮೂದಿಸಿಲ್ಲ. ಬದಲಾಗಿ ಚರಂಡಿ ಕಾಮಗಾರಿ ಹಿನ್ನೆಲೆಯಲ್ಲಿ ಮರಗಳ ಸಂಬಂಧ ಯಾವ ಕ್ರಮ ಕೈಗೊಳ್ಳಬೇಕೆಂದು ಅರಣ್ಯ ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ಪಾಲಿಕೆ ಮೂಲಗಳು ಹೇಳುತ್ತಿವೆ.

ಮಳೆ ನೀರು ಚರಂಡಿ ದುರಸ್ತಿ ಕಾಮಗಾರಿ ಹಿನ್ನೆಲೆಯಲ್ಲಿ ಇಲ್ಲಿರುವ ಮರಗಳಿಗೆ ತೊಂದರೆಯಾಗಲಿದೆ. ಹಾಗಾಗಿ ಆ ಮರಗಳನ್ನು ಉಳಿಸಿಕೊಳ್ಳಬಹುದೇ ಅಥವಾ ತೆರವು ಮಾಡಬಹುದೇ ಎಂದು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳುವಂತೆ ಪಾಲಿಕೆಯಿಂದ ಅರಣ್ಯ ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ಪಾಲಿಕೆ ಮೂಲಗಳು ತಿಳಿಸಿವೆ. ಆದರೆ ಅಂತಿಮವಾಗಿ ಮರಗಳನ್ನು ಕಡಿಯುವ ಉದ್ದೇಶವನ್ನೇ ಪಾಲಿಕೆಯವರು ಹೊಂದಿದ್ದಾರೆ ಎಂದು ಪರಿಸರವಾದಿಗಳು ಆರೋಪಿಸಿದ್ದಾರೆ.

ಚರಂಡಿಯ ಬೇಸ್‌ಮೆಂಟ್ 6 ಮೀಟರ್‌ವರೆಗೆ ಹೋಗಲಿದೆ. ಮರಗಳು ಬೇಸ್‌ಮೆಂಟ್‌ನ ಹೊರಗೆ ಇದ್ದಿದ್ದರೆ ಯಾವುದೇ ತೊಂದರೆ ಆಗುತ್ತಿರಲಿಲ್ಲ. ಜೊತೆಗೆ ಕಾಮಗಾರಿ ವೇಳೆ ಕಾರ್ಮಿಕರ ಮೇಲೆ ಮರಗಳು ಬಿದ್ದರೆ ಪಾಲಿಕೆಯೇ ಹೊಣೆಯಾಗಬೇಕಾಗುತ್ತದೆ. ಹೀಗಾಗಿ ಉಳಿಸಿಕೊಳ್ಳಲು ಸಾಧ್ಯವೇ ಅಥವಾ ತೆರವುಗೊಳಿಸಬೇಕೇ ಎಂದು ಪರಿಶೀಲಿಸಲು ಪತ್ರ ಬರೆಯಲಾಗಿದೆ. ಈ ಸಂಬಂಧ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದು, ಆನಂತರದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಯಾವ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಮಾಹಿತಿ ಸದ್ಯ ಲಭ್ಯವಾಗಿಲ್ಲ. ಹಾಗಾಗಿ ಮರಗಳ ಬದಿಯಲ್ಲಿ ಯಾವುದೇ ಚರಂಡಿ ಕಾಮಗಾರಿಗೆ ಕೈ ಹಾಕಿಲ್ಲ. ಚರಂಡಿಗೆ ಹಾನಿಯಾಗಿದೆ ಎಂಬ ದೂರಿನ ಹಿನ್ನೆಲೆಯಲ್ಲಿ ದುರಸ್ತಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ಅರಣ್ಯ ಇಲಾಖೆ ಯಾವ ರೀತಿ ವರದಿ ನೀಡಲಿದೆ ಎಂದು ಕಾದು ನೋಡಲಾಗುತ್ತಿದೆ ಎಂದು ಪಾಲಿಕೆಯ ವಲಯ ಕಚೇರಿ 8ರ ಅಧಿಕಾರಿಗಳು ತಿಳಿಸಿದ್ದಾರೆ.

ಇಲ್ಲಿ 15 ಮರಗಳಿಗೆ ಸಂಖ್ಯೆ ನಮೂದಿಸಿ ಗುರುತು ಮಾಡಲಾಗಿದೆ ಎಂದು ಪರಿಸರವಾದಿಗಳು ಹೇಳುತ್ತಿದ್ದು, ಪತ್ರಿಕೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದಾಗ, 9 ಮರಗಳಿಗೆ ಮಾತ್ರ ಸಂಖ್ಯೆ ನಮೂದಿಸಿ ಗುರುತು ಮಾಡಿರುವುದು ಕಂಡು ಬಂದಿತು. ಮತ್ತೊಂದೆಡೆ ಅರಣ್ಯ ಇಲಾಖೆ ಅಧಿಕಾರಿಗಳು ಮರಗಳನ್ನು ಕಡಿಯಲು ಅನುಮತಿಯನ್ನೇ ನೀಡಿಲ್ಲ ಎಂದು ಹೇಳುತ್ತಿದ್ದು, ಒಟ್ಟಾರೆ ಇಲ್ಲಿನ ಮರಗಳ ಭವಿಷ್ಯ ಏನಾಗಲಿದೆ ಎಂಬುದೇ ಗೊಂದಲಮಯವಾಗಿದೆ.

ಮರ ತೆರವು ಉದ್ದೇಶ: ಪರಿಸರವಾದಿ ಭಾನುಮೋಹನ್ ಪತ್ರಿಕೆಯೊಂದಿಗೆ ಮಾತನಾಡಿ, ನಿನ್ನೆ ಸ್ಥಳಕ್ಕೆ ಭೇಟಿ ನೀಡಿದ್ದೆವು. ಅಲ್ಲಿರುವ ಖಾಸಗಿ ಶಿಕ್ಷಣ ಸಂಸ್ಥೆಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಮಳೆ ನೀರು ಚರಂಡಿಯ ದುರಸ್ತಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಹಾಗಾಗಿ ಮರಗಳನ್ನು ತೆರವುಗೊಳಿಸಲು ಪಾಲಿಕೆಯಿಂದ ಅರಣ್ಯ ಇಲಾಖೆಗೆ ಪತ್ರ ಬರೆದಿದೆ. ಆ ಸಂಸ್ಥೆಯ ಆವರಣವಿರುವ ವ್ಯಾಪ್ತಿಗೆ ಅನುಗುಣವಾಗಿ ಮಳೆ ನೀರು ಚರಂಡಿ ದುರಸ್ತಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಜೊತೆಗೆ ಚರಂಡಿ ಪಕ್ಕದಲ್ಲಿರುವ 11 ಮರಗಳನ್ನು ಕಡಿಯಬೇಕೆಂದು ಪಾಲಿಕೆಯಿಂದ ಅರಣ್ಯ ಇಲಾಖೆಗೆ ಪತ್ರ ಬರೆಯಲಾಗಿದೆ. ಯಾವುದೇ ಕಾರಣಕ್ಕೂ ಮರಗಳನ್ನು ಕಡಿಯಬಾರದು ಎಂದು ಒತ್ತಾಯಿಸಿದರು.

ಪಾಲಿಕೆ ಪ್ರಸ್ತಾಪಿಸಿದೆ: 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಅರಣ್ಯ ಇಲಾಖೆಯ ಡಿಸಿಎಫ್ ಡಾ.ಬಸವರಾಜು, ಸದರಿ ಚರಂಡಿ ಕಾಮಗಾರಿ ಕಾರಣ 15 ಮರಗಳನ್ನು ತೆಗೆಯಬೇಕೆಂದು ಗುರುತಿಸಿರುವ ಮೈಸೂರು ಮಹಾನಗರ ಪಾಲಿಕೆಯು ಈ ಸಂಬಂಧ ಅರಣ್ಯ ಇಲಾಖೆಯ ಆರ್‌ಎಫ್‌ಓ ಕಚೇರಿಗೆ ಅರ್ಜಿ ಸಲ್ಲಿಸಿದೆ. ಹೀಗಾಗಿ ಕಾಮಗಾರಿಯ ಡಿಪಿಆರ್, ವಿನ್ಯಾಸದ ವಿವರ, ಯೋಜನೆಯ ಅಗತ್ಯತೆ ಮತ್ತು ಮರಗಳನ್ನು ಕಡಿಯುವ ಬದಲಾಗಿ ಪರ್ಯಾಯ ಮಾರ್ಗಗಳನ್ನು ಕಂಡುಕೊಳ್ಳುವ ಸಂಬಂಧ ಅರಣ್ಯ ಇಲಾಖೆ ಆರ್‌ಎಫ್‌ಓ ಅವರು ಪಾಲಿಕೆಯಿಂದ ಮಾಹಿತಿ ಕೇಳಿದ್ದಾರೆ. ಇದರ ಹೊರತಾಗಿ ಇಲ್ಲಿನ ಯಾವುದೇ ಮರಗಳನ್ನು ಕಡಿಯಲು ಅರಣ್ಯ ಇಲಾಖೆ ಅನುಮತಿ ನೀಡಿಲ್ಲ ಎಂದು ತಿಳಿಸಿದರು.

ಆರೋಗ್ಯ ಇಲಾಖೆ ಸಿಬ್ಬಂದಿಗೆ ಕೌನ್ಸಿಲಿಂಗ್ ಮೂಲಕ ವರ್ಗಾವಣೆ

ಮೈಸೂರು,ಮೇ 27(ಎಸ್‌ಪಿಎನ್)– 2025–26ನೇ ಸಾಲಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಗ್ರೂಪ್–ಎ, ಬಿ, ಸಿ ಮತ್ತು ಡಿ ವೃಂದದ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆಯನ್ನು ಸಮಾಲೋಚನೆ ಮೂಲಕ ಹಮ್ಮಿಕೊಳ್ಳುವಂತೆ ಅಧೀನ ಕಾರ್ಯದರ್ಶಿ ಬಿ.ಎಸ್.ಪ್ರದೀಪ್ ಕುಮಾರ್ ಆದೇಶಿಸಿದ್ದಾರೆ.

ಈ ಇಲಾಖೆಗೆ ಸಂಬಂಧಿಸಿದಂತೆ ಕರ್ನಾಟಕ ನಾಗರಿಕ ಸೇವಾ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ನಿಯಮಗಳು, 2011ರ ನಿಯಮದಂತೆ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಹಮ್ಮಿಕೊಳ್ಳಲು ಆದೇಶಿಸಿದೆ.

ವಿಶೇಷ ವರ್ಗದ ಕೋರಿಕೆ ವರ್ಗಾವಣೆಗೆ ಮೇ 23ರಿಂದ 30ರವರೆಗೆ ಸಲ್ಲಿಸಬಹುದಾಗಿದೆ. ಕಚೇರಿಯಲ್ಲಿ ಸ್ವೀಕೃತವಾದ ವರ್ಗಾವಣೆ ಮಾಹಿತಿ ಅರ್ಜಿ ಹಾಗೂ ಜಿಲ್ಲೆಯ ಎಲ್ಲಾ ವೃಂದವಾರು ಖಾಲಿ ಹುದ್ದೆಗಳ ಮಾಹಿತಿಯನ್ನು ದೃಢೀಕರಿಸಿ ಆಯುಕ್ತಾಲಯಕ್ಕೆ ಕಳುಹಿಸಲು ಜೂ.2ರಂದು ಸಂಜೆ 5 ಗಂಟೆ ಕೊನೆಯ ದಿನ. ಆಯುಕ್ತಾಲಯದಲ್ಲಿ ಸ್ವೀಕೃತಗೊಂಡ ಮಾಹಿತಿಯನ್ನು ಪರಿಶೀಲಿಸಿ ತಾತ್ಕಾಲಿಕ ಪಟ್ಟಿಗೆ ಅರ್ಹ ಅಭ್ಯರ್ಥಿಗೆ ಆಕ್ಷೇಪ ಸಲ್ಲಿಸಲು ಜೂ.6ರಿಂದ ಜೂ.12ರವರೆಗೆ ಕಾಲಾವಕಾಶ ನೀಡಿದೆ. ಪ್ರಕಟಿತ ಅಂತಿಮ ಪಟ್ಟಿಯಂತೆ ವೃಂದವಾರು ಕೌನ್ಸಿಲಿಂಗ್ ಜೂ.15ರಿಂದ ಪ್ರಾರಂಭಿಸುವಂತೆ ಸೂಚಿಸಿದ್ದಾರೆ.

ಗಣತಿ ಕಾರ್ಯದಲ್ಲಿ ತೊಡಗಿದ ಶಿಕ್ಷಕರಿಗೆ ಗಳಿಕೆ ರಜೆಗೆ ಮನವಿ

ಮೈಸೂರು, ಮೇ 27(ಎಸ್‌ಪಿಎನ್)– ಬೇಸಿಗೆ ರಜೆಯಲ್ಲಿ ಗಣತಿದಾರರಾಗಿ ಕಾರ್ಯ ನಿರ್ವಹಿಸಿದ ಶಿಕ್ಷಕರಿಗೆ ಗಳಿಕೆ ರಜೆಯನ್ನು ಮಂಜೂರು ಮಾಡುವಂತೆ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಶಾಲಾ ಶಿಕ್ಷಣ ಇಲಾಖೆಗೆ ಮನವಿ ಮಾಡಿದೆ.

ಒಳ ಮೀಸಲಾತಿ ಕುರಿತು ನ್ಯಾ.ಹೆಚ್.ಎನ್.ನಾಗಮೋಹನ್ ದಾಸ್ ಆಯೋಗದ ನಿರ್ದೇಶನದಂತೆ ರಾಜ್ಯಾದ್ಯಂತ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು ಒಳಮೀಸಲಾತಿ ಗಣತಿ ಸಮೀಕ್ಷೆಯಲ್ಲಿ ಪಾಲ್ಗೊಂಡಿದ್ದರು.

ಮೇ 5ರಿಂದ 17ರವರೆಗೆ ಮನೆಮನೆ ಸಮೀಕ್ಷೆ, ಮೇ 19ರಿಂದ 21ರವರೆಗೆ ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ, ಮೇ 19ರಿಂದ 23ರವರೆಗೆ ಆನ್‌ಲೈನ್ ಮೂಲಕ ಸಮೀಕ್ಷೆಯಲ್ಲಿ ಪಾಲ್ಗೊಂಡಿದ್ದಾರೆ. ಈ ಮೂರು ರೀತಿಯ ಗಣತಿಯಲ್ಲಿ ಭಾಗವಹಿಸಿರುವ ಶಿಕ್ಷಕರು ಗಳಿಕೆ ರಜೆ ಪಡೆಯಲು ಕೆಸಿಎಸ್‌ಆರ್ ಸೇವಾ ನಿಯಮಾವಳಿಯಂತೆ ಅರ್ಹರಿದ್ದಾರೆ ಹಾಗೂ ಬೇಸಿಗೆ ರಜಾ ಸಂದರ್ಭದಲ್ಲಿ ಶಿಕ್ಷಕರು ಗಣತಿದಾರರಾಗಿ ಕಾರ್ಯ ನಿರ್ವಹಿಸಿದ್ದು, ಈ ಶಿಕ್ಷಕರಿಗೆ ಗಳಿಕೆ ರಜೆ ಮಂಜೂರು ಮಾಡುವಂತೆ ಶಾಲಾ ಶಿಕ್ಷಣ ಇಲಾಖೆ ಆಯುಕ್ತ ಡಾ.ಕೆ.ವಿ. ತ್ರಿಲೋಕ್‌ಚಂದ್ರ ಅವರಿಗೆ, ಸಂಘದ ಅಧ್ಯಕ್ಷ ಕೆ.ನಾಗೇಶ್ ಮನವಿ ಮಾಡಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಅಜ್ಜಿ: ಓದುವಾಗ ಹುಡುಗರು ಹುಡುಗಿಯರ ಹಿಂದೆ ಬೀಳಬಾರದು.
ಮೊಮ್ಮಗ: ಅದಕ್ಕೆ ನಾನು ಡೈಲಿ ಓದಾದ್ಮೇಲೆ ಹುಡುಗಿ ಹಿಂದೆ ಬೀಳ್ತೀನಿ...!

ಮೈಸೂರು ಮಿತ್ರ

ಬುಧವಾರ, 28 ಮೇ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಮಡಕೆಯು ಮಾಡುವಡೆ ಮಣ್ಣೆ ಮೊದಲು, ತೊಡಿಗೆಯು ಮಾಡುವಡೆ ಹೊನ್ನೇ ಮೊದಲು, ಶಿವಪಥವನರಿವಡೆ ಗುರುಪಥವೇ ಮೊದಲು, ಕೂಡಲ ಸಂಗಮದೇವನರಿವಡೆ ಶರಣರ ಸಂಗವೇ ಮೊದಲು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಿನ್ನಲ್ಲಿ ನೀ ಹುಡುಕು, ಅರಿಷಡ್ವರ್ಗಗಳ ಹೊರ ಹಾಕು.

ನಿಮ್ಮ ಪತ್ರಗಳು

■ ಗಬ್ಬೆದ್ದು ನಾರುತ್ತಿರುವ ಪ್ರಾದೇಶಿಕ ಸಾರಿಗೆ ಕಚೇರಿ ಶೌಚಾಲಯ!

ಮಾನ್ಯರೇ,



ಕಾರ್ಯನಿಮಿತ್ತ ಮೈಸೂರಿನ ಪೂರ್ವ ಪ್ರಾದೇಶಿಕ ಕಚೇರಿಗೆ ಹೋಗಿದ್ದೆ. ಗಂಟೆಗಟ್ಟಲೆ ಕಾಯುವಾಗ ಮೂತ್ರ ವಿಸರ್ಜಿಸಲು ಸಾರ್ವಜನಿಕ ಶೌಚಾಲಯಕ್ಕೆ ಹೋದೆ. ಅಲ್ಲಿನ ದುಸ್ಥಿತಿ ಕಂಡು ಬೇಸರ ಮೂಡಿತು. ಕೈ ತೊಳೆಯುವ ಬೇಸಿನ್ ಬಳಿ ಬಿದ್ದ ಸಿಗರೇಟ್ ಪ್ಯಾಕುಗಳು ಹಾಗೂ ಸೇದಿದ ಸಿಗರೇಟ್ ತುಂಡುಗಳು ಶೌಚಾಲಯವನ್ನು ಚೊಕ್ಕಟಗೊಳಿಸಿ ಹಲವು ದಿವಸಗಳೇ ಆಗಿದೆ ಎಂದು ಸಾರಿ ಹೇಳುತ್ತಿತ್ತು. ಉತ್ತಮ ವ್ಯವಸ್ಥೆಯನ್ನು ದುರುಪಯೋಗ ಮಾಡಿಕೊಂಡ ಸಾರ್ವಜನಿಕರ ಬಗ್ಗೆ ಹಾಗೂ ಶೌಚಾಲಯವನ್ನು ಚೊಕ್ಕಟಗೊಳಿಸದ ಸಾರಿಗೆ ಕಚೇರಿ ಸಿಬ್ಬಂದಿ ಬಗ್ಗೆಯೂ ಕೋಪ ಬಂತು. ತಮ್ಮ ಉಪಯೋಗಕ್ಕಾಗಿ ಬೀಗ ಹಾಕಿಕೊಂಡು ಶೌಚಾಲಯವನ್ನು ಸ್ವಚ್ಛವಾಗಿರಿಸಿಕೊಳ್ಳುವ ಸಾರಿಗೆ ಕಚೇರಿಯ ಸಿಬ್ಬಂದಿ ಸಾರ್ವಜನಿಕ ಶೌಚಾಲಯದ ಬಗ್ಗೆ ನಿರ್ಲಕ್ಷ್ಯ ತೋರುವುದೇಕೆ?

–ಕೊ.ಸು.ನರಸಿಂಹ ಮೂರ್ತಿ, ಚಾಮರಾಜಪುರಂ, ಮೈಸೂರು

■ ಬಾನು ಮುಷ್ತಾಕ್‌ಗೆ ಬೂಕರ್ ಪ್ರಶಸ್ತಿ; ಕನ್ನಡಿಗರಿಗೆ ಹೆಮ್ಮೆ



ಮಾನ್ಯರೆ,

2025ರ ಪ್ರತಿಷ್ಠಿತ ಅಂತರ ರಾಷ್ಟ್ರೀಯ 'ಬೂಕರ್ ಪ್ರಶಸ್ತಿ'ಗೆ ಭಾಜನರಾದ ಕನ್ನಡದ ಖ್ಯಾತ ಲೇಖಕಿ, ಹಾಸನದ ಬಾನು ಮುಷ್ತಾಕ್ ಅವರ ಹಾರ್ಟ್ ಲ್ಯಾಂಪ್ (ಎದೆಯ ಹಣತೆ), ಕನ್ನಡ ಸಣ್ಣ ಕತೆಗಳ ಸಂಕಲನಕ್ಕೆ ಜಾಗತಿಕ ಮಟ್ಟದಲ್ಲಿ ಕನ್ನಡ ಭಾಷೆಗೆ ಇದೇ ಪ್ರಥಮ ಬಾರಿಗೆ ಬೂಕರ್ ಪ್ರಶಸ್ತಿ ಬಂದಿರುವುದು ಕನ್ನಡಿಗರೆಲ್ಲರ ಹೆಮ್ಮೆಯ ವಿಷಯ.

ಬಾನು ಮುಷ್ತಾಕ್, ಪತ್ರಕರ್ತೆಯಾಗಿ, ಲೇಖಕಿಯಾಗಿ, ವಕೀಲರಾಗಿ, ಹಾಸನದ ನಗರಸಭಾ ಸದಸ್ಯೆಯಾಗಿ ಎಲ್ಲಾ ಸಮುದಾಯಗಳ ಹೆಣ್ಣು ಮಕ್ಕಳು ಅನುಭವಿಸುವ ನೋವುಗಳನ್ನು ಅರಿತಿರುವ, ಮಹಿಳಾ ದೌರ್ಜನ್ಯದ ವಿರುದ್ಧ ಹೋರಾಟ ಮಾಡಿರುವ, ಹಲವು ಹತ್ತು ಕ್ಷೇತ್ರಗಳಲ್ಲಿ ಅನುಭವ ಹೊಂದಿರುವ ಪ್ರತಿಭಾವಂತ ಮಹಿಳೆ.

ಸದ್ಯದಲ್ಲೇ, ಕರ್ನಾಟಕದ ವಿಧಾನ ಪರಿಷತ್‌ಗೆ ಕಾಂಗ್ರೆಸ್‌ನಿಂದ ನಾಲ್ಕು ಸ್ಥಾನಗಳನ್ನು ತುಂಬುವ ಅವಕಾಶ ಇರುವುದರಿಂದ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರನ್ನು ಕರ್ನಾಟಕದ ವಿಧಾನ ಪರಿಷತ್‌ನ ಸದಸ್ಯೆಯನ್ನಾಗಿ ಮಾಡಿದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವು ತನ್ನ ಘನತೆಯನ್ನು ಹೆಚ್ಚಿಸಿಕೊಳ್ಳುವುದರ ಮೂಲಕ ಕನ್ನಡದ ಲೇಖಕಿಗೆ ಮತ್ತು ಸಾಹಿತ್ಯ ಕ್ಷೇತ್ರಕ್ಕೆ ಸರ್ಕಾರ ಕೊಡುವ ದೊಡ್ಡ ಗೌರವ ನೀಡಿದಂತಾಗುತ್ತದೆ. ಈ ಬಗ್ಗೆ ಸರ್ಕಾರ ಸೂಕ್ತ ನಿರ್ಧಾರ ತೆಗೆದುಕೊಳ್ಳಬೇಕು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

■ ಪುನರ್ ಪರಿಶೀಲಿಸಬೇಕೆಂದು ಮನವಿ

ಮಾನ್ಯರೆ,



ಮೈಸೂರಿನ ಹೈದರಾಲಿ ರಸ್ತೆಯಲ್ಲಿ 40ಕ್ಕೂ ಹೆಚ್ಚು ಮರಗಳ ಮರಣ ಹೋಮ ನಡೆದು ಹೋಯಿತು. ಇದರ ಬೆನ್ನಲ್ಲೇ ಸುಭಾಷ್ ನಗರದ 3ನೇ ಮುಖ್ಯ ರಸ್ತೆಯಲ್ಲಿ ಅರಣ್ಯ ಇಲಾಖೆಯಿಂದ ಮತ್ತು ಆ ರಸ್ತೆಯ ನಿವಾಸಿಗಳೇ ಸಸಿ ನೆಟ್ಟು ಬೆಳಸಿದ ಸುಮಾರು 15 ಮರಗಳಿವೆ. ಆ ಮರಗಳ ಕಾರಣದಿಂದ ಇಲ್ಲಿ ಪ್ರಾಣಿ–ಪಕ್ಷಿಗಳು ಮತ್ತು ಸಾರ್ವಜನಿಕರು ಹಾಗೂ ವಾಹನಗಳಿಗೆ ನೆರಳು ದೊರಕುತ್ತಿವೆ. ಸುಮಾರು 25 ವರ್ಷಗಳಿಂದ ಬೆಳೆದ ಈ ಮರಗಳು ಗೃಹ ಸಚಿವರಾದ ಜಿ. ಪರಮೇಶ್ವರ್ ಅವರ ಕ್ವೆಸ್ಟ್ ಅಕಾಡೆಮಿ ಎಂಬ ಶಿಕ್ಷಣ ಸಂಸ್ಥೆಯ ಕಟ್ಟಡದ ಪಕ್ಕದ ರಸ್ತೆಯಲ್ಲಿ ಇವೆ. ಅನುಕೂಲತೆಗಾಗಿ ಅಕ್ರಮವಾಗಿ ಈ ಮರಗಳ ಮಾರಣ ಹೋಮ ನಡೆಯಬಹುದು. ಇದಕ್ಕೆ ಕೈಗನ್ನಡಿ ಎಂದರೆ ಮರಗಳಿಗೆ ಕೆಂಪು ಬಣ್ಣದಲ್ಲಿ ದಪ್ಪದಾಗಿ ಮಾಡಿರುವ ಮಾರ್ಕ್. ಈ ರಸ್ತೆಯ ಅಕ್ಕ ಪಕ್ಕದಲ್ಲಿ ಮರಗಳಿವೆ. ಅವುಗಳಿಗೆ ಈ ರೀತಿ ಮಾಡಿಲ್ಲ. ಬೇರೆಲ್ಲಾ ಮರಗಳನ್ನು ಬಿಟ್ಟು ಕೇವಲ ಆ ರಸ್ತೆಯ ಮರಗಳನ್ನು ಕಡಿಯಲು ಮಾರ್ಕಿಂಗ್ ಕೂಡ ಮಾಡಲಾಗಿದೆ. ಅರಣ್ಯ ಇಲಾಖೆ ಹಾಗೂ ಮಹಾ ನಗರಪಾಲಿಕೆ ಈ ಮರಗಳಿಗೆ ಮಾರ್ಕ್ ಮಾಡಿರುವುದು ಯಾರೆಂಬುದನ್ನು ಪರಿಶೀಲಿಸಿ ಮರ ಕಡಿಯುವ ಅಕ್ರಮವನ್ನು ನಿಲ್ಲಿಸಬೇಕೆಂದು, ಅರಣ್ಯ ಇಲಾಖೆಯವರು ಮತ್ತು ಪಾಲಿಕೆ ಇದನ್ನು ಪುನರ್ ಪರಿಶೀಲನೆ ಮಾಡಬೇಕೆಂದು ಈ ಮೂಲಕ ಮನವಿ.

–ಗೋವಿತ್ ಕಿರಣ್, ರಾಜೇಂದ್ರ ನಗರ, ಮೈಸೂರು

ತಿದ್ದುಪಡಿ ಹಾಗೂ ಸ್ಪಷ್ಟನೆ

ಮಂಗಳವಾರದ 'ಮೈಸೂರು ಮಿತ್ರ' ಸಂಚಿಕೆಯ 4ನೇ ಪುಟದಲ್ಲಿನ ಕಾರ್ಕಳ ಆನಂದ ಭಟ್ ಅವರ 'ದಿಕ್ಸೂದೆಸೆ' ಅಂಕಣದ 'ನ್ಯಾಷನಲ್ ಹೆರಾಲ್ಡ್ ಹಗರಣ: ಏನಿದು ಪ್ರಕರಣ' ಲೇಖನದಲ್ಲಿ ಯಂಗ್ ಇಂಡಿಯಾ ಪ್ರೈವೆಟ್ ಲಿಮಿಟೆಡ್ ಕಂಪನಿಯಲ್ಲಿ ಸೋನಿಯಾ–ರಾಹುಲ್ ಹೂಡಿಕೆ ಪ್ರಮಾಣ ಶೇ.7 ಎಂದು ಪ್ರಕಟವಾಗಿದ್ದು, ಅದನ್ನು ಶೇ.76 ಎಂದು ಓದಿಕೊಳ್ಳುವುದು.–ಸಂ.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಮುದ್ದುರಾಮನು ಕಂಡ ಕಾಲ ಮಹಿಮೆ

ಪ್ರೇಮಕವಿ, ದಾರ್ಶನಿಕ ಕವಿ, ನೀತಿ ಬೋಧಕ ಕವಿ ಕೆ.ಸಿ. ಶಿವಪ್ಪನವರು ನಮ್ಮ ಕಾಲದ ಒಂದು ವಿಸ್ಮಯ. ಅವರು ರಚಿಸಿದ ಚೌಪದಿಗಳು ಹಲವು ಸಾವಿರಗಳ ಸಂಖ್ಯೆಯನ್ನು ಮೀರಿವೆ. ಮುದ್ದುರಾಮನ ಮನಸ್ಸು, ಮುದ್ದುರಾಮನ ಬದುಕು, ಮುದ್ದುರಾಮನ ಅರಿವು ಇತ್ಯಾದಿ ಶೀರ್ಷಿಕೆಗಳಲ್ಲಿ ಇವು ಪ್ರಕಟವಾಗಿ ಕನ್ನಡ ಸಾಹಿತ್ಯದ ಸಿರಿವಂತಿಕೆಯನ್ನು ಹೆಚ್ಚಿಸಿವೆ. ಮುದ್ದುರಾಮನ ಬದುಕಿನಲ್ಲಿ 'ಕಾಲ ಬಾಳಿನ ಆಸ್ತಿ', 'ಅರಿವೆ ಗುರು ಜೀವನಕೆ', 'ಶಕ್ತಿ ಮಂಜವೊ ನೀನು', 'ಸಂಬಂಧ ಅತಿ ಸೂಕ್ಷ್ಮ', 'ಉಕ್ತಿಯಲಿ ಶಕ್ತಿಯಿದೆ', 'ಮೌಲ್ಯವೆಂದರೆ ಹಿರಿಮೆ', 'ತಮ ಅಳಿದರಿದೆ ಬೆಳಕು', 'ಬದುಕಿದಂತಿದೆ ಬಣ್ಣ', 'ಬಾಳು ಋಣಮಣಿಮಾಲೆ' ಎಂಬ ಒಂಬತ್ತು ವಿಭಾಗಗಳು ಇವೆ. ಜೀವನದ ಬಗೆಗೆ ಶಿವಪ್ಪನವರ ಪರಿಪಕ್ವ ಚಿಂತನೆಯ ನುಡಿಗಳನ್ನು ಇವುಗಳಲ್ಲಿ ನೋಡಬಹುದು.

ಕಾಲ ಎಂಬ ಪರಿಕಲ್ಪನೆ

ಭೂಮಿ, ನೀರು, ಬೆಂಕಿ, ಗಾಳಿ ಇತ್ಯಾದಿಗಳಂತೆ ಕಾಲ ಒಂದು ಭೌತ ವಸ್ತುವಲ್ಲ. ಕಾಲವನ್ನು ಸೂಚಿಸುವ ಗಡಿಯಾರ ಮುಂತಾದ ಸಾಧನಗಳಿದ್ದರೂ ಕಾಲವನ್ನು ಕಂಡವರಿಲ್ಲ. ಆದರೆ ಕಾಲ ಎಂಬುದು ಇಲ್ಲದೆ ಯಾವ ಕಾರ್ಯವೂ ನಡೆಯದು. ಸೂರ್ಯೋದಯ, ಸೂರ್ಯಾಸ್ತ, ಋತುಗಳ ಬದಲಾವಣೆ ಇತ್ಯಾದಿಗಳಿಂದ ಕಾಲವನ್ನು ಮಾನವನು ಅಳೆಯುತ್ತಾನೆ. ಕಾಲದ ಮಹಿಮೆಯನ್ನು ಉಪನಿಷತ್ತುಗಳೂ ಹೇಳಿವೆ, ಕವಿಗಳೂ ದಾರ್ಶನಿಕರೂ ಹೇಳಿದ್ದಾರೆ. ಮುದ್ದುರಾಮನು ಕಾಲ ಮಹಿಮೆಯನ್ನು ಹೇಗೆ ಹೇಳಿದ್ದಾನೆಂದು ನೋಡೋಣ.

ಮರೆತೆಲ್ಲ ತೊಡಕುಗಳ, ಸರಿಸುತ್ತ ಹಳಕುಗಳ
ನಿಂತೋಡುತಿದೆ ಮುಂದೆ ಈ ಕಾಲಪಕ್ಷಿ!
ನಾಳೆ ಬಾನಂಚಿನಲಿ ನವರೇಖೆ ಏನಿದೆಯೊ!
ಕಾಲಮಹಿಮೆಗೆ ನಮಿಸೊ ಮುದ್ದುರಾಮ.

ಕಾಲವನ್ನು ಇಲ್ಲಿ ಪಕ್ಷಿ ಎಂದು ರೂಪಕ ಮಾಡಲಾಗಿದೆ. ಪಕ್ಷಿ ಹಾರುವಂತೆ ಕಾಲವೂ ನಾವು ನೋಡುತ್ತಿರುವಂತೆ ಹಾರಿ ಹೋಗುತ್ತಿರುವಂತೆ ಕಾಣಿಸುವುದರಿಂದ ಈ ರೂಪಕ. ಯಾವ ತೊಡಕು ಬಂದರೂ ಕಾಲ ನಿಲ್ಲುವುದಿಲ್ಲ. ಹಳೆಯದಾದುದನ್ನೆಲ್ಲ ಪಕ್ಕಕ್ಕೆ ಸರಿಸಿ ಹೊಸದನ್ನು ಸ್ವಾಗತಿಸುತ್ತಾ ಕಾಲ ಮುಂದೆ ಮುಂದೆ ಸಾಗುತ್ತಿದೆ. ನಾಳೆ ಬಾನಂಚಿನಲ್ಲಿ, ಬಾಳಿನ ಅಂಚಿನಲ್ಲೂ ಹೊಸರೇಖೆ ಯಾವುದು ಮೂಡುವುದೋ ತಿಳಿಯದು. ಅದು ಇಂತಹುದೇ ಆಗಬೇಕೆಂದು ಹೇಳುವ ಅಧಿಕಾರ ನಮಗಿಲ್ಲ. ಅದು ಕಾಲಾಧೀನ. ಆದ್ದರಿಂದ ಮುದ್ದುರಾಮ ಹೇಳುತ್ತಾನೆ, ಕಾಲಮಹಿಮೆಗೆ ನಮಿಸೊ ಇದನ್ನೇ ಪ್ರಾಚೀನರು. ಕಾಲಾಯ ತಸ್ಮೈ ನಮಃ ಎಂದರು.

ಎಲ್ಲ ಕಾಲಕ್ಕೆ ಅಧೀನ, ನಾವೇನೂ ಮಾಡಲಾಗದು ಎಂಬ ಹತಾಶೆ ಮುದ್ದುರಾಮನದಲ್ಲ.

ಕಂಡುದನೆ ನೀ ಕಂಡು ಕೇಳಿದುದನೇ ಕೇಳಿ
ಜೀವ ಬರಡಾಗುವುದು ಎಂದೊ ಒಂದು ದಿನ
ಪಡೆ ಆಗ ನವನಯನ, ನವಕರ್ಣ ಹೊಸತನಕ
ಕಾಲ ಸಂಜೀವಿನಿಯೊ ಮುದ್ದುರಾಮ.

ನೋಡಿದ್ದನ್ನೇ ನೋಡುವುದು, ಕೇಳಿದ್ದನ್ನೇ ಕೇಳುವುದು, ಅನುಭವಿಸಿದ್ದನ್ನೇ ಅನುಭವಿಸುವುದು ಬದುಕಿನಲ್ಲಿ ಅನಿವಾರ್ಯ. ಇದರಿಂದ ಜೀವನವೇ ಬರಡು ಎನಿಸಬಹುದು. ಆದರೆ ಆಗ ನಿರಾಶರಾಗಬಾರದು. ನವನಯನ ಎಂದರೆ ಹೊಸ ಕಣ್ಣನ್ನು ತೆರೆಯಬೇಕು. ಹೊಸ ಕಿವಿಗಳನ್ನು ಪಡೆಯಬೇಕು. ಆಗ ಜಗತ್ತಿನಲ್ಲಿ ಎಲ್ಲವೂ ಹೊಸದಾಗುತ್ತದೆ. ಆದ್ದರಿಂದಲೇ, ಕಾಲ ಸಂಜೀವಿನಿ. ರಾಮಾಯಣದಲ್ಲಿ ರಾವಣನ ಅಷ್ಟ ಘಂಟಾ ಶಕ್ತಿಯ ಹೊಡೆತದಿಂದ ಉರುಳಿಬಿದ್ದ ಲಕ್ಷ್ಮಣನ ಪ್ರಾಣಗಳನ್ನು ಉಜ್ಜೀವನಗೊಳಿಸಿದ್ದು ಸಂಜೀವಿನೀ ಎಂಬ ಮೂಲಿಕೆ. ಹಾಗೆ ಕಾಲವೂ ನಮ್ಮಲ್ಲಿ ನವಚೈತನ್ಯವನ್ನು ತುಂಬುವುದರಿಂದ ಅದೇ ಸಂಜೀವಿನಿ. ಕಾಲಕ್ಕೆ ಈ ಶಕ್ತಿ ಇಲ್ಲದೆ ಹೋಗಿದ್ದರೆ ಈ ಪ್ರಪಂಚದಲ್ಲಿ ಎಲ್ಲರೂ ಸದಾ ಅಳುತ್ತಲೇ ಇರಬೇಕಾಗಿತ್ತು.

ಕಾಲವೇ ಮೃತ್ಯು, ಕಾಲವೇ ಯಮ ಎಂದು ಹೆದರಿ ಕೂತಿರುವವರು ನಿರಾಶಾವಾದಿಗಳು. ಕಾಲ ಸಂಜೀವಿನಿ, ಕಾಲ ದುಃಖಗಳ ಸಿದ್ಧೌಷಧ ಎಂದು ಭಾವಿಸಿ ಮುನ್ನುಗ್ಗುವವರು ಆಶಾವಾದಿಗಳು. ಇದೇ ಚಿಂತನೆ ಇನ್ನೊಂದು ಪದ್ಯದಲ್ಲೂ ಮುಂದುವರಿದಿದೆ–

ನಾಳೆ ಏನೋ ಎಂದು ಇಂದೇಕೆ ಅಳುತಿರುವೆ
ಇಂದಾಗುವುದರ ಅರಿವು ನಿನ್ನೆ ನಿನಗಿತ್ತೆ?
ಏನಾಗಬೇಕೊ ಅದು ಆಗುವುದು ಅದರಂತೆ
ಕಾಲ ಪ್ರಶ್ನಾತೀತ ಮುದ್ದುರಾಮ ॥

ನಾಳೆ ಏನಾಗುವುದೋ ಎಂಬ ಚಿಂತೆಯಲ್ಲಿ ಇಂದಿನ ಸುಖವನ್ನು ಹಾಳು ಮಾಡಿಕೊಳ್ಳುವ ದಡ್ಡರು ಲೋಕದಲ್ಲಿದ್ದಾರೆ. ನಾಳೆ ಚಳಿ ಹೆಚ್ಚಾದೀತು ಎಂದು ಇಂದೇ ನಡುಗುವ ಮೂರ್ಖರಿಗೆ ಏನು ಹೇಳುವುದು? ಅಂತಹವರನ್ನು ಉದ್ದೇಶಿಸಿ ಮುದ್ದುರಾಮ ಕೇಳುತ್ತಿದ್ದಾನೆ – ನಾಳೆ ಏನೋ ಎಂದು ಇಂದೇಕೆ ಅಳುತಿರುವೆ? ಮುಂದಾಗುವುದರ ಬಗೆಗೆ ಯೋಚಿಸುವವರಿಗೆ ಮತ್ತೊಂದು ಪ್ರಶ್ನೆ. ಇಂದಾಗುವುದರ ಅರಿವು ನಿನ್ನೆ ನಿನಗಿತ್ತೆ? ಪ್ರತಿದಿನವೂ ಆಶ್ಚರ್ಯಗಳ ಮಾಲೆ. ಒಳ್ಳೆಯದೂ ಅಷ್ಟೆ, ಕೆಟ್ಟದ್ದೂ ಅಷ್ಟೆ. ಅನಿರೀಕ್ಷಿತವಾದದ್ದು ಎಷ್ಟೋ ಆಗಿ ಬಿಡುತ್ತದೆ. ಈ ಕ್ಷಣದಲ್ಲಿ ನಡೆಯುತ್ತಿರುವುದನ್ನು ಹಿಂದೆ ನಾವು ನಿರೀಕ್ಷಿಸಿರಲಿಲ್ಲ. ಪ್ರತಿಯೊಬ್ಬರ ಮನೆಯಲ್ಲಿ ಟೆಲಿವಿಶನ್ ಇರುತ್ತದೆ. ಪ್ರತಿಯೊಬ್ಬರ ಕೈಯಲ್ಲಿ ಸಂಚಾರಿ ದೂರವಾಣಿ (ಮೊಬೈಲ್ ಫೋನ್) ಇರುವುದೆಂದು ಮೂವತ್ತು ವರ್ಷಗಳ ಹಿಂದೆ ಯಾರು ನಿರೀಕ್ಷಿಸಿದ್ದರು? ಏನಾಗಬೇಕೊ ಅದು ಆಗುವುದು. ಅದರ ಪ್ರಭುಗಳು ನಾವಲ್ಲ. ಅದನ್ನು ನಿಶ್ಚಯಿಸುವುದು ಕಾಲ. ಹೀಗೇಕೆ ಮಾಡಿದೆ ಎಂದು ಕಾಲವನ್ನು ಕೇಳುವಂತಿಲ್ಲ. ಅದು ಪ್ರಶ್ನಾತೀತ. ಅದು ಮಾಡಿದುದನ್ನು ತೆಪ್ಪಗೆ ಒಪ್ಪಿಕೊಳ್ಳಬೇಕಷ್ಟೆ.

ಎಷ್ಟೋ ಜನರು ಶನಿವಾರ ಅಶುಭವಾರ, ಅಮಾವಾಸ್ಯೆ ಶುಭ ತಿಥಿಯಲ್ಲ, ಆಷಾಢಮಾಸ ಒಳ್ಳೆಯದಲ್ಲ, ಇತ್ಯಾದಿ ಮೂಢನಂಬಿಕೆಗಳನ್ನು ಇಟ್ಟುಕೊಂಡು ಒದ್ದಾಡುತ್ತಾರೆ. ಅವರನ್ನು ಕುರಿತು ಮುದ್ದುರಾಮ ಹೇಳುತ್ತಾನೆ –

ದಿಟ್ಟತೆಯ ಪಾಲಿಸುತ ಭಯವ ಹೊಡೆದೋಡಿಸುತ
ಎಂದು ಮನ ಹಿಗ್ಗುವುದೊ ಅಂದೆ ಕಾರ್ತೀಕ
ಸಂದೇಹ ಬಳಿ ಸುಳಿಯದಾ ಗಳಿಗೆ ಶುಭ ಲಗ್ನ
ಎಲ್ಲ ದಿನ ಶುಭ ದಿನವೊ ಮುದ್ದುರಾಮ ॥

ವರ್ಷದಲ್ಲಿ ಒಮ್ಮೆ ಆಷಾಢ ಮಾಸಾನಂತರ ಬರುವ ತಿಂಗಳೇ ಕಾರ್ತೀಕ (ಕಾರ್ತಿಕ) ಎಂಬ ಶುಭಮಾಸ ಎಂದುಕೊಳ್ಳಬಹುದು. ಅದು ಸರಿಯಲ್ಲ. ದಿಟ್ಟತೆಯನ್ನು ಹೊಂದಿದ ಮನುಷ್ಯನು ಯಾವ ಕಾಲದಲ್ಲಿ ಭಯವನ್ನು ಹೊಡೆದೋಡಿಸಿ ಮನಸ್ಸಿನಲ್ಲಿ ಹಿಗ್ಗುವನೋ ಅಂದೇ ಕಾರ್ತಿಕಮಾಸ ಎಂದು ತಿಳಿದುಕೊಳ್ಳಬೇಕು. ಶುಭಲಗ್ನ ಎಂದರೆ ಸಂದೇಹಗಳಿಲ್ಲದೆ ಮನಸ್ಸು ಪ್ರಸನ್ನವಾಗಿರುವ ಗಳಿಗೆ (ಘಟಿಕಾ). ಆದ್ದರಿಂದ ಜಗತ್ತಿನಲ್ಲಿ ಕೆಟ್ಟ ದಿನ, ಒಳ್ಳೆಯ ದಿನ ಎಂದಿಲ್ಲ, ಎಲ್ಲವೂ ಶುಭ ದಿನಗಳೇ.

ಜನರ ಸ್ವಭಾವವೇನೆಂದರೆ ಅವರು ತಮ್ಮ ಗತವೈಭವವನ್ನು ನೆನಪಿಸಿಕೊಂಡು 'ನಾನು ಹಾಗಿದ್ದೆ, ಹೀಗಿದ್ದೆ, ಈಗ ಹೀಗಾಗಿಬಿಟ್ಟೆ ಎಂದು ಕೊರಗುತ್ತಾರೆ. ಅಪ್ಸರೆಯಂತೆ ಲತಾಂಗಿಯಾಗಿದ್ದ ತರುಣಿ ಸ್ಥೂಲ ಶರೀರದ ಹೆಂಗುಸಾಗುವುದು ಸ್ವಾಭಾವಿಕವೇ. ಆಗ ಕೊರಗುವುದು ಮಾತ್ರ ತಪ್ಪು. ಇದು ಕಾಲಕೃತವಾದ ಬದಲಾವಣೆ. ಇದನ್ನು ಸಹಿಸಿಕೊಳ್ಳುವುದು ಅನಿವಾರ್ಯ. ಮುದ್ದುರಾಮನ ನುಡಿ –

ಹೀಗಿದ್ದೆ ಹಾಗಿದ್ದೆ ಎಂದು ಕೊರಗುವೆ ಏಕೆ?
ಮುಡಿದ ಮಲ್ಲಿಗೆ ಒಮ್ಮೆ ಬಾಡುವುದು ಸಹಜ.
ನೆನೆಯುತ್ತ ನಿನ್ನೆಯನೆ ಮರೆಯದಿರು ಈ ದಿನವ
ಇಂದು ಎಂದರೆ ಸ್ವರ್ಗ ಮುದ್ದುರಾಮ.

ಎಷ್ಟು ಸೊಗಸಾದ ಘಮಘಮಿಸುವ ಮಲ್ಲಿಗೆ ಹೂವಾದರೂ ಅದು ಮಾರನೆಯ ದಿನ ಬಾಡಿ ಹೋಗುತ್ತದೆ. ಅದನ್ನು ಎಸೆಯಲೇ ಬೇಕು. ಹಾಗೆ ನಿನ್ನೆ ಇದ್ದ ಯೌವನ ಇಂದು ಇರುವುದಿಲ್ಲ. ಅದನ್ನು ಮರೆಯಲೇಬೇಕು. ನಾನು ಹೀಗಿದ್ದೆ, ಹಾಗಿದ್ದೆ ಎಂದು ಹೇಳಿಕೊಳ್ಳುವುದು ಹಾಸ್ಯಾಸ್ಪದ. ಕಳೆದು ಹೋದ ದಿನಗಳನ್ನು ನೆನೆದು ಇಂದಿನ ದಿನವನ್ನು ಮರೆಯುವುದು ಅವಿವೇಕ.

ಕಾಲವು ಸತತವಾಗಿ ತಿರುಗುತ್ತಿರುವುದರಿಂದ ಅದನ್ನು ಚಕ್ರಕ್ಕೆ ಹೋಲಿಸುವ ಅಥವಾ ಚಕ್ರವೆಂದು ರೂಪಕ ಮಾಡುವ ಸಂಪ್ರದಾಯ ಇದೆ. ಅದನ್ನೂ ಶಿವಪ್ಪನವರು ಒಂದು ಪದ್ಯದಲ್ಲಿ ಬಳಸಿಕೊಂಡಿದ್ದಾರೆ –

ನಿನ್ನ ಮಾಯಾದಂಡ ತಿರುಗಿದಾ ಕ್ಷಣದಲ್ಲೆ
ಸರಿದು ನಿಲ್ಲುವುದೇನು ಒಂದು ಶತಮಾನ!
ವೇಗ ಒಂದೇ ಇಲ್ಲಿ ಈ ಕಾಲಚಕ್ರಕ್ಕೆ
ವಾರಕೇಳೇ ದಿವಸ ಮುದ್ದುರಾಮ॥

ಮನುಷ್ಯನ ಆಶೆ–ಆಕಾಂಕ್ಷೆಗಳು ಏನೇ ಇದ್ದರೂ, ಅವನು ಯಾವುದೇ ಮಾಯಾದಂಡವನ್ನು ತಿರುಗಿಸಿದರೂ ಶತಮಾನವು ಪಕ್ಕಕ್ಕೆ ಸರಿದು ನಿಲ್ಲುವುದಿಲ್ಲ. ಯಾವನ ಇಚ್ಛಾನುಸಾರವಾಗಿಯೂ ಕಾಲಚಕ್ರದ ವೇಗ ಹೆಚ್ಚು ಕಡಿಮೆಯಾಗುವುದಿಲ್ಲ. ಸದಾ ಅದರ ವೇಗ ಒಂದೇ ಆಗಿರುತ್ತದೆ. ವಾರಕ್ಕೆ ಏಳೇ ದಿವಸ. ಅದು ಎಂಟೂ ಆಗುವುದಿಲ್ಲ. ಆರೂ ಆಗುವುದಿಲ್ಲ. ಕಾಲ ನಿಯಮವನ್ನು ಮುರಿಯಲಾಗದು ಎಂಬುದು ಇದರ ತಾತ್ಪರ್ಯ.

Time and tide wait for none ಎಂಬ ಇಂಗ್ಲಿಷ್ ಗಾದೆಯಿದೆ. ರಾಜನೂ ಈ ಬಗೆಗೆ ಏನೂ ಮಾಡಲಾರನು. ಮುನ್ನಡೆಯುವುದು ಲೋಕ ಯಾರಿರಲಿ ಇಲ್ಲದಿರಲಿ

ನೀ ಅಳಿದೆ ಎಂದೇನು ರವಿ ಮೂಡದಿಹನೇ?
ಬೀಸದೇ ತಂಗಾಳಿ? ಗಮಗಮಿಸದೇ ಹೂವು
ಕಾಲ ಕಾಯದು ನಿನಗೆ ಮುದ್ದುರಾಮ ॥

ಯಾರಿಗಾಗಿಯೂ ಕಾಲ ಕಾಯುವುದಿಲ್ಲ. ಯಾವ ರಾಜನು ಸತ್ತರೂ, ಯಾವ ಚಕ್ರವರ್ತಿಯು ಮೃತನಾದರೂ ಸೂರ್ಯನು ಹುಟ್ಟುವುದು, ಗಾಳಿ ಬೀಸುವುದು, ಹೂವು ಪರಿಮಳಿಸುವುದು ತಪ್ಪುವುದಿಲ್ಲ. ಇನ್ನು ಸಾಮಾನ್ಯರ ಪಾಡೇನು? ಯಾರಿರಲಿ ಇಲ್ಲದಿರಲಿ ಲೋಕ ಮುನ್ನಡೆಯುವುದು. None is indispensible. ಆದ್ದರಿಂದ ಮಾನವನು ಕಾಲಮಹಿಮೆಗೆ ತಲೆಬಾಗಬೇಕು. ನಾವು ತುಂಬ ಮುಖ್ಯರು. ನಾವಿಲ್ಲದೆ ಈ ಲೋಕ ಹೇಗೆ ನಡೆದೀತು ಎಂದುಕೊಳ್ಳುವುದು ಮೂರ್ಖತೆಯ ಪರಮಾವಧಿ ಎಂಬುದನ್ನು ಈ ಪದ್ಯ ಅಭಿವ್ಯಂಜಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣ

ನಾಳೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ವಿಚಾರಣೆ





ಮೈಸೂರು, ಮೇ27(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ಬಗ್ಗೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಮೇ 29ರಂದು ವಿಚಾರಣೆ ನಡೆಯಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣದ ಬಗ್ಗೆ ಅಂತಿಮ ವರದಿ ಸಲ್ಲಿಸದ ಬಗ್ಗೆ ಜನಪ್ರತಿನಿಧಿಗಳ ನ್ಯಾಯಾಲಯ ಕಳೆದ ವಿಚಾರಣೆ ವೇಳೆ ತೀವ್ರ ಅಸಮಾಧಾನ ವ್ಯಕ್ತಪಡಿಸಿತ್ತು.

ಮೇ 29ರಂದು ನಡೆಯುವ ವಿಚಾರಣೆ ವೇಳೆ ಅಂತಿಮ ವರದಿ ಸಲ್ಲಿಸಬೇಕು ಎಂದು ಜನಪ್ರತಿನಿಧಿ ನ್ಯಾಯಾಲಯಗಳ ನ್ಯಾಯಾಧೀಶ ಸಂತೋಷ್ ಗಜಾನನ ಭಟ್, ಲೋಕಾಯುಕ್ತರಿಗೆ ತಾಕೀತು ಮಾಡಿದ್ದರು. ಅದರಂತೆ ಮೇ 29ರಂದು ನಡೆಯುವ ವಿಚಾರಣೆ ವೇಳೆ ಲೋಕಾಯುಕ್ತರು ಅಂತಿಮ ವರದಿ ಸಲ್ಲಿಸಬೇಕು. ಆದರೆ ಇನ್ನು ತನಿಖೆ ನಡೆಸಬೇಕಾಗಿರುವ ಕಾರಣ ಅಂತಿಮ ವರದಿ ಸಲ್ಲಿಕೆಗೆ ಮತ್ತಷ್ಟು ಕಾಲಾವಕಾಶ ನೀಡುವಂತೆ ಲೋಕಾಯುಕ್ತರು ನ್ಯಾಯಾಲಯಕ್ಕೆ ಮನವಿ ಮಾಡಲಿದ್ದಾರೆ ಎಂದು ಲೋಕಾಯುಕ್ತ ಮೂಲಗಳು 'ಮೈಸೂರು ಮಿತ್ರ'ನಿಗೆ ತಿಳಿಸಿವೆ.

ಆದರೆ ಲೋಕಾಯುಕ್ತರು, ರಾಜಕಾರಣಿಗಳು ಹಾಗೂ ಪ್ರಭಾವಿಗಳನ್ನು ರಕ್ಷಿಸಲು ತಂತ್ರ ರೂಪಿಸಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ದೂರಿದ್ದಾರೆ.

ತಮ್ಮ ಜಮೀನಿಗೆ ಪರಿಹಾರ ನೀಡಬೇಕೆಂದು ಆಸ್ತಿ ಮಾಲೀಕರು ಮುಡಾಗೆ ಮನವಿ ಮಾಡಿದ್ದರು. ಆದರೆ ಅಧಿಕಾರಿಗಳು 50:50 ಅನುಪಾತದಲ್ಲಿ ಕಾನೂನು ರೀತ್ಯಾ ಪರಿಹಾರ ನೀಡದೆ ನಿಯಮ ಉಲ್ಲಂಘಿಸಿ ಪರಿಹಾರ ನೀಡಿದ್ದಾರೆಂಬ ಅಂಶವನ್ನು ಲೋಕಾಯುಕ್ತರು ತಾವು ಸಲ್ಲಿಸುವ ಅಂತಿಮ ವರದಿಯಲ್ಲಿ ಉಲ್ಲೇಖಿಸಲಿದ್ದಾರೆ ಎಂದು ಹೇಳಿದರು.

ಮುಡಾ ಅಧಿಕಾರಿಗಳ ಮೇಲೆ ಎಲ್ಲಾ ತಪ್ಪು ಹೊರಿಸುವ ಲೋಕಾಯುಕ್ತರು ರಾಜಕಾರಣಿಗಳು ಸೇರಿದಂತೆ ಪ್ರಭಾವಿಗಳನ್ನು ರಕ್ಷಿಸುವ ಕಾರ್ಯಕ್ಕೆ ನಿಂತಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ.

ಅಮಾನತುಪಡಿಸಿಕೊಂಡ ವಾಹನಗಳ ಹಿಂಪಡೆಯುವಂತೆ ಸೂಚನೆ

ಮೈಸೂರು, ಮೇ 27– ಮೈಸೂರು ನಗರ ವಿ.ವಿ.ಪುರಂ ಸಂಚಾರ ಪೊಲೀಸ್ ಠಾಣೆಯಲ್ಲಿ ವಾರಸುದಾರರು ಇಲ್ಲದೆ ಇರುವ ವಿವಿಧ ಮಾದರಿಯ ವಾಹನಗಳನ್ನು ಅಮಾನತುಪಡಿಸಿಕೊಂಡಿದ್ದು, ವಾಹನಗಳ ವಾರಸುದಾರರ ಪತ್ತೆ ಸಂಬಂಧವಾಗಿ ಎಲ್ಲಾ ರೀತಿಯ ಪ್ರಯತ್ನಗಳು ಕೈಗೊಂಡರೂ ವಾಹನಗಳ ವಾರಸುದಾರರು ಪತ್ತೆಯಾಗದೇ ಠಾಣಾ ಆವರಣದಲ್ಲಿ ಬಾಕಿ ಉಳಿದಿದೆ.

ಸದರಿ ವಾಹನಗಳ ವಾರಸುದಾರರು ಅಥವಾ ವಿಮಾ ಕಂಪನಿ ಯಾರಾದರೂ ಇದ್ದಲ್ಲಿ ಮೂಲ ದಾಖಲಾತಿಗಳೊಂದಿಗೆ ಮೂರನೇ ಮೈಸೂರಿನ ಜೆಎಂಎಫ್‌ಸಿ ನ್ಯಾಯಾಲಯ ಅಥವಾ ವಿ.ವಿ ಪುರಂ ಸಂಚಾರ ಪೊಲೀಸ್ ಠಾಣೆಯ ಠಾಣಾಧಿಕಾರಿಯವರನ್ನು ಸಂಪರ್ಕಿಸಿ ಸೂಕ್ತ ದಾಖಲಾತಿಗಳನ್ನು ಹಾಜರು ಪಡಿಸಿ ವಾಹನವನ್ನು ತಮ್ಮ ವಶಕ್ಕೆ ಪಡೆಯುವುದು.

ವಾಹನಗಳ ಸಂಖ್ಯೆ: KA09EC 9240, 14EB4984, KA09EG4914, KA09EC5000, KA09EU3149, KA04ER7545, KA55J6806, KA05EB2374, KA11J3429, KA09EM3767, KA03EM5289, KA09EN0483, KA09HX1468, KA40L8372, KA09ED8453, KA02S9736, KA09ED3338, KA04ET5624, KA55E5434, KA10K2178, KA41E6727, KA03Y1443, KAO5ES2210, KA05ED3176, KA01 EF8846, KA09EJ6617 ತಪ್ಪಿದ್ದಲ್ಲಿ ಸರ್ಕಾರ ಮುಟ್ಟುಗೋಲು ಹಾಕಿಕೊಂಡು ಹರಾಜು ಮೂಲಕ ವಾಹನಗಳನ್ನು ವಿಲೇವಾರಿ ಮಾಡಿ ಬಂದ ಹಣವನ್ನು ಸರ್ಕಾರದ ಖಜಾನೆಗೆ ಜಮಾ ಮಾಡಲಾಗುವುದು ಎಂದು ವಿ.ವಿ.ಪುರಂ ಸಂಚಾರ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾರತದ ಯುದ್ಧ ವಿಮಾನಗಳಿಗೆ ಶಕ್ತಿ ತುಂಬಲು 'ಕಾವೇರಿ ಜೆಟ್ ಇಂಜಿನ್' ಅಭಿವೃದ್ಧಿ: ರಷ್ಯಾದಲ್ಲಿ ಪರೀಕ್ಷೆ!

ನವದೆಹಲಿ: ಭಾರತದ ರಕ್ಷಣಾ ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆ ಸ್ಥಳೀಯವಾಗಿ ಅಭಿವೃದ್ಧಿಪಡಿಸಿರುವ ಕಾವೇರಿ ಜೆಟ್ ಇಂಜಿನ್ ಪರೀಕ್ಷೆಯನ್ನು ರಷ್ಯಾದಲ್ಲಿ ನಡೆಸುತ್ತಿದೆ. ಭಾರತದ ದೀರ್ಘ ಶ್ರೇಣಿಯ ಮಾನವ ರಹಿತ ಯುದ್ಧ ವಿಮಾನಗಳಿಗೆ ಶಕ್ತಿ ತುಂಬಲು ಈ ಎಂಜಿನ್ ಬಳಸಲು ಯೋಜಿಸುತ್ತಿದೆ. ಇದು ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸಲು ಸಹಾಯ ಮಾಡುತ್ತದೆ.



ಸದ್ಯ ರಷ್ಯಾದಲ್ಲಿ ಕಾವೇರಿಯ ಇಂಜಿನ್ ಪರೀಕ್ಷೆ ನಡೆಯುತ್ತಿದೆ. ಅಲ್ಲಿ ಸುಮಾರು 25 ಗಂಟೆಗಳ ಪರೀಕ್ಷೆ ಬಾಕಿಯಿದೆ. ಪರೀಕ್ಷೆಯ ವೇಳಾಪಟ್ಟಿಯನ್ನು ಅಲ್ಲಿನ ಅಧಿಕಾರಿಗಳು ನೀಡಬೇಕು ಎಂದು ರಕ್ಷಣಾ ಅಧಿಕಾರಿಗಳು ತಿಳಿಸಿರುವುದಾಗಿ ಸುದ್ದಿಸಂಸ್ಥೆ ಎಎನ್‌ಐ ವರದಿ ಮಾಡಿದೆ. ಸ್ವದೇಶಿ ನಿರ್ಮಿತ ಮಾನವ ರಹಿತ ಯುದ್ಧ ವಿಮಾನ ಯೋಜನೆಗಳಿಗೆ ಶಕ್ತಿ ನೀಡಲು ಕಾವೇರಿ ಜೆಟ್ ಇಂಜಿನ್ ಸಿದ್ಧವಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಟ್ರೆಂಡ್ ಆಯ್ತು FundKaveri engine project: ಈ ಯೋಜನೆಗಾಗಿ ಸರ್ಕಾರದಿಂದ ಅನುದಾನ ಕೇಳಿ ಸಾಮಾಜಿಕ ಮಾಧ್ಯಮಗಳಲ್ಲಿ # FundKaveri engine project ಟ್ರೆಂಡ್ ಆದ ನಂತರ ಕಾವೇರಿ ಇಂಜಿನ್ ಬಗ್ಗೆ ಜನರು ಕುತೂಹಲ ವ್ಯಕ್ತಪಡಿಸುತ್ತಿದ್ದಾರೆ.

ಪಾಕ್-ಚೀನಾಗೆ ಖಡಕ್ ತಿರುಗೇಟು

5ನೇ ತಲೆಮಾರಿನ ಸ್ಟೆಲ್ತ್ ಫೈಟರ್ ಜೆಟ್ ವಿಮಾನ ತಯಾರಿಕೆಗೆ ಭಾರತ ಅನುಮೋದನೆ

ನವದೆಹಲಿ, ಮೇ 27– ಭಾರತೀಯ ಸೇನೆಯ ಆಪರೇಷನ್ ಸಿಂಧೂರ ಕಾರ್ಯಾಚರಣೆ ಬಳಿಕ ಚೀನಾದಿಂದ ಎ35 ಯುದ್ಧ ವಿಮಾನ ಖರೀದಿಗೆ ಪಾಕಿಸ್ತಾನ ಮುಂದಾಗಿರುವಂತೆಯೇ ಇತ್ತ ಭಾರತ ಸರ್ಕಾರ 5ನೇ ತಲೆಮಾರಿನ ಸ್ಟೆಲ್ತ್ ಫೈಟರ್ ಜೆಟ್ ವಿಮಾನ ತಯಾರಿಕೆಗೆ ಅನುಮೋದನೆ ನೀಡುವ ಮೂಲಕ ಪಾಕಿಸ್ತಾನ ಮತ್ತು ಚೀನಾ ಎರಡೂ ದೇಶಗಳಿಗೆ ಖಡಕ್ ತಿರುಗೇಟು ನೀಡಿದೆ.

ಜಾಗತಿಕ ಮಟ್ಟದಲ್ಲಿ ತನ್ನಷ್ಟೇ ವೇಗವಾಗಿ ಬೆಳೆಯುತ್ತಿರುವ ಭಾರತದ ಪ್ರಗತಿ ಸಹಿಸಿಕೊಳ್ಳಲಾಗದ ಚೀನಾ, ತನ್ನ ಮಿತ್ರ ರಾಷ್ಟ್ರ ಪಾಕಿಸ್ತಾನಕ್ಕೆ ಸ್ಟೆಲ್ತ್ ಫೈಟರ್ ಜೆಟ್‌ಗಳನ್ನು ಪೂರೈಸಲು ಮುಂದಾಗಿರುವಂತೆಯೇ ಇತ್ತ ಭಾರತ ಕೂಡ ಇದಕ್ಕೆ ಖಡಕ್ ತಿರುಗೇಟು ನೀಡಿದ್ದು, ತನ್ನದೇ ಆದ ಸ್ಟೆಲ್ತ್ ಫೈಟರ್ ಜೆಟ್ ವಿಮಾನವನ್ನು ತಯಾರಿಸುವ ಚೌಕಟ್ಟನ್ನು ಅನುಮೋದಿಸಿದೆ.



ಭಾರತದ ಅತ್ಯಂತ ಮುಂದುವರಿದ ಫೈಟರ್ ಜೆಟ್–ದೇಶದ ಮೊದಲ ಸ್ಟೆಲ್ತ್ ವಿಮಾನವನ್ನು ನಿರ್ಮಿಸುವ ಯೋಜನೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮಂಗಳವಾರ ಅನುಮೋದನೆ ನೀಡಿದ್ದಾರೆ. ಈ ಫೈಟರ್ ಜೆಟ್ ಅವಳಿ–ಎಂಜಿನ್, 5ನೇ ತಲೆಮಾರಿನ ಮಿಲಿಟರಿ ವಿಮಾನವಾಗಿರಲಿದ್ದು, ಈ ಕಾರ್ಯಕ್ರಮವನ್ನು ಸರ್ಕಾರಿ ಸ್ವಾಮ್ಯದ ಏರೋನಾಟಿಕಲ್ ಡೆವಲಪ್‌ಮೆಂಟ್ ಏಜೆನ್ಸಿ ಅಥವಾ ಎಡಿಎ ಕಾರ್ಯಗತಗೊಳಿಸಲಿದೆ.

ಎಡಿಎ ಶೀಘ್ರದಲ್ಲೇ ಸಾರ್ವಜನಿಕ ಮತ್ತು ಖಾಸಗಿ ರಕ್ಷಣಾ ಸಂಸ್ಥೆಗಳನ್ನು ಸ್ಟೆಲ್ತ್ ವಿಮಾನದ ಮೂಲ ಮಾದರಿಯನ್ನು ಅಭಿವೃದ್ಧಿಪಡಿಸುವ ಮೂಲಕ ಮಹತ್ವಾಕಾಂಕ್ಷೆಯ ಯೋಜನೆಯಲ್ಲಿ ಭಾಗವಹಿಸಲು ತಮ್ಮ ಆರಂಭಿಕ ಆಸಕ್ತಿಯನ್ನು ವ್ಯಕ್ತಪಡಿಸಲು ಆಹ್ವಾನಿಸಲಿದೆ ಎಂದು ರಕ್ಷಣಾ ಸಚಿವಾಲಯದ ಮೂಲಗಳು ತಿಳಿಸಿವೆ.

ಭಾರತದ ರಕ್ಷಣಾ ಸಚಿವಾಲಯದ ಹೇಳಿಕೆಯ ಪ್ರಕಾರ, ಸ್ಟೆಲ್ತ್ ಫೈಟರ್ ಕಾರ್ಯಕ್ರಮವನ್ನು ದೇಶೀಯ ಸಂಸ್ಥೆ ಮಾತ್ರ ಮುನ್ನಡೆಸುತ್ತದೆ. ಇದಕ್ಕಾಗಿ ಸ್ವತಂತ್ರವಾಗಿ ಮತ್ತು ಜಂಟಿ ಉದ್ಯಮವಾಗಿ ಬಿಡ್‌ಗಳನ್ನು ಮಾಡಬಹುದು. ಈ ಬಿಡ್‌ಗಳನ್ನು ಸರ್ಕಾರ ನಡೆಸುವ ಸಂಸ್ಥೆಗಳು ಮತ್ತು ಖಾಸಗಿ ಉದ್ಯಮಗಳು ಎರಡೂ ಮಾಡಬಹುದು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಶ್ರೀಗಳಿಗೆ ಪುಷ್ಪ ನಮನ...




ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರ ಜನ್ಮೋತ್ಸವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಜಂಗಲ್ ಲಾಡ್ಜ್ ಅಧ್ಯಕ್ಷರೂ ಆದ ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು, ಮೈಸೂರು ಮಹಾನಗರಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ ಅವರು ಶ್ರೀಗಳಿಗೆ ಪುಷ್ಪನಮನ ಸಲ್ಲಿಸಿ, ಆಶೀರ್ವಾದ ಪಡೆದರು.

ಶಾಸಕ ಜಿ.ಡಿ.ಹರೀಶ್‌ಗೌಡರಿಗೆ ಅಭಿನಂದನೆ...



ಎರಡು ವರ್ಷ ಪೂರೈಸಿದ ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡರಿಗೆ ನಿಖಿಲ್ ಕುಮಾರಸ್ವಾಮಿ ಅಭಿಮಾನಿಗಳ ಬಳಗದ ವತಿಯಿಂದ ಅಭಿನಂದನೆ ಸಲ್ಲಿಸಲಾಯಿತು. ಬಳಗದ ಅಧ್ಯಕ್ಷ ಪ್ರದೀಪ್ ಕೃಷ್ಣೇಗೌಡ, ಕುಮಾರ್, ಜೆಸಿಬಿ ರಾಘು, ಅಜಯ್, ಪ್ರಮೋದ್, ನಾಗರಾಜು ಈ ವೇಳೆ ಉಪಸ್ಥಿತರಿದ್ದರು.

ಮಾಯಪ್ಪಗೆ ಅಭಿನಂದನೆ...



ಮೈಸೂರು ತಾಲೂಕು ಇಲವಾಲದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪ್ರಯುಕ್ತ ನಾಗವಾಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಾಯಪ್ಪ ಅವರನ್ನು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ನಾಗವಾಲ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸಿ. ನರೇಂದ್ರ ಅಭಿನಂದಿಸಿದರು. ಈ ಸಂದರ್ಭದಲ್ಲಿ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ಅಧ್ಯಕ್ಷ ಹುಯಿಲಾಳು ರಾಮಸ್ವಾಮಿ, ನಾಗವಾಲ ಗ್ರಾಪಂ ಮಾಜಿ ಅಧ್ಯಕ್ಷ ಕೆ.ಮಹೇಶ್, ಗ್ರಾಪಂ ಸದಸ್ಯ ಬಿ.ಕೆ.ಈಶ್ವರ, ಮಾಜಿ ಸದಸ್ಯ ಶಿವಣ್ಣ, ಮುಖಂಡರಾದ ಶಿವರಾಜು, ಬೊಮ್ಮೇನಹಳ್ಳಿ ಶಿವಣ್ಣ, ಪಾಪಯ್ಯ, ನಾಗವಾಲ ಶಿವು ಉಪಸ್ಥಿತರಿದ್ದರು.

ಸಿಎಂ ಸಿದ್ದರಾಮಯ್ಯ ಸರ್ಕಾರ ಇತ್ತೀಚೆಗೆ ಬರೀ ಅವಿವೇಕದ ನಿರ್ಧಾರ ಕೈಗೊಳ್ಳುತ್ತಿದೆ

● ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಾಗ್ದಾಳಿ ● ನೀತಿ ಆಯೋಗದ ಸಭೆಗೆ ಹೋಗದೇ ರಾಜ್ಯಕ್ಕೆ ದ್ರೋಹ ಎಸಗಲಾಗಿದೆ ● ಜನೌಷಧಿ ಕೇಂದ್ರ ಮುಚ್ಚುವುದು ಜನವಿರೋಧಿ ನಿರ್ಧಾರ

ಬೆಂಗಳೂರು, ಮೇ 27(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ಇತ್ತೀಚಿನ ದಿನಗಳಲ್ಲಿ ಅವಿವೇಕದ ನಿರ್ಧಾರಗಳನ್ನು ಪದೇ ಪದೇ ತೆಗೆದುಕೊಳ್ಳುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತೀವ್ರವಾಗಿ ಟೀಕಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೆಹಲಿಯಲ್ಲಿ ನಡೆದ ನೀತಿ ಆಯೋಗದ ಸಭೆಗೆ ಬಹುತೇಕ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಿದ್ದಾರೆ. ಕಾಂಗ್ರೆಸ್ ಆಡಳಿತದ ಹಿಮಾಚಲ ಪ್ರದೇಶ, ತೆಲಂಗಾಣಗಳ ಮುಖ್ಯಮಂತ್ರಿಗಳು ಭಾಗವಹಿಸಿ ತಮ್ಮ ಅಭಿಪ್ರಾಯ ತಿಳಿಸಿದ್ದಾರೆ. ಸಿದ್ದರಾಮಯ್ಯ ಹಾಜರಾಗಲಿಲ್ಲ, ಕಾರಣವೂ ತಿಳಿದಿಲ್ಲ.

ನೀತಿ ಆಯೋಗದ ಸಭೆಗೆ ಹೋಗದೇ ರಾಜ್ಯಕ್ಕೆ ಅಪಚಾರ, ದ್ರೋಹ ಎಸಗಿದ್ದಾರೆ ಸಿದ್ದರಾಮಯ್ಯ. ರಾಜ್ಯದ ಮುಖ್ಯಮಂತ್ರಿಗಳೇ ಅಥವಾ ಕಾಂಗ್ರೆಸ್ ಮುಖ್ಯಮಂತ್ರಿಯೇ ಎಂಬುದನ್ನು ಜನತೆಗೆ ಸ್ಪಷ್ಟಪಡಿಸಬೇಕು. ಅಪಪ್ರಚಾರ ಮಾಡುತ್ತಾ, ಕೇಂದ್ರದ ಜೊತೆ ಸಂಘರ್ಷದ ಹಾದಿ ತುಳಿದು ರಾಜ್ಯಕ್ಕೆ ಅನ್ಯಾಯ ಮಾಡುವುದು ಸರಿಯಲ್ಲ, ಇದು ಅಕ್ಷಮ್ಯ ಅಪರಾಧ ಎಂದರು.

ಜನೌಷಧಿ ಕೇಂದ್ರ ಮುಚ್ಚಲು ನಿರ್ಧಾರ: ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಸರ್ಕಾರಿ ಆಸ್ಪತ್ರೆ ಆವರಣದಲ್ಲಿನ ಜನೌಷಧಿ ಕೇಂದ್ರಗಳನ್ನು ತಾಂತ್ರಿಕ ಕಾರಣಗಳ ಮೇಲೆ ಮುಚ್ಚಲು ಹೊರಟಿರುವುದು ಮತ್ತು ಹೊಸ ಜನೌಷಧಿ ಕೇಂದ್ರಗಳಿಗೆ ಅವಕಾಶ ನೀಡದಿರುವ ನಿರ್ಧಾರ ಯಾವ ಮೂರ್ಖರ ಸಲಹೆಯೋ ತಿಳಿದಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಪ್ರಧಾನಿ ಮೋದಿ ದೇಶದ ಪ್ರತಿಯೊಬ್ಬ ಕಡು ಬಡವರಿಗೂ ಅನುಕೂಲ ಆಗಬೇಕು, ಕೈಗೆಟಕುವ ದರದಲ್ಲಿ ಔಷಧ ಸಿಗಬೇಕು ಎಂಬ ಸದುದ್ದೇಶದಿಂದ ಜನೌಷಧಿ ಕೇಂದ್ರಗಳನ್ನು 2014ರಿಂದ ಅನುಷ್ಠಾನಕ್ಕೆ ತಂದಿದ್ದಾರೆ. ಅಂದಿನ ಕೇಂದ್ರ ಸಚಿವ ಅನಂತ ಕುಮಾರ್ ರಾಜ್ಯದಲ್ಲೂ ಇದನ್ನು ಅನುಷ್ಠಾನಕ್ಕೆ ತಂದರು, ಜನೌಷಧಿ ಕೇಂದ್ರಗಳಿಂದ ದೇಶದ ಬಡವರಿಗೆ ವಾರ್ಷಿಕ ಸುಮಾರು 30ರಿಂದ 40 ಸಾವಿರ ಕೋಟಿ ರೂ. ಉಳಿತಾಯವಾಗಿದೆ.

ಆಸ್ಪತ್ರೆಗಳಲ್ಲಿ ಔಷಧಿಗಳು ಸರಿಯಾಗಿ ಸಿಗುತ್ತಿಲ್ಲ, ವೈದ್ಯರು ಔಷಧಿ ಚೀಟಿ ಬರೆದು ಕೊಡುತ್ತಾರೆ, ಬಡವರು ಖಾಸಗಿ ಔಷಧಿ ಅಂಗಡಿಯಿಂದ ಖರೀದಿಸುವ ಪರಿಸ್ಥಿತಿ ಇದೆ, ಜನೌಷಧಿ ಕೇಂದ್ರಗಳ ಸ್ಥಾಪನೆಯಿಂದ ನೂರಾರು ಯುವ ಜನರಿಗೆ ಉದ್ಯೋಗ ಲಭಿಸುತ್ತದೆ ಎಂದರು.



ಕೇಂದ್ರ ಸರ್ಕಾರದ ಯೋಜನೆಗೆ ಕಲ್ಲು ಹಾಕುವುದು, ಬಡವರಿಗೆ ಅನ್ಯಾಯ ಮಾಡುವುದು ಸರಿಯಲ್ಲ, ಜನೌಷಧಿ ಕೇಂದ್ರಗಳನ್ನು ಮುಚ್ಚುವ ನಿರ್ಧಾರ ಹಿಂಪಡೆಯದಿದ್ದರೆ ಬಿಜೆಪಿ ಹೋರಾಟಕ್ಕೆ ಕರೆ ಕೊಡಲಿದೆ. ಮೋದಿ ಹಿಂದುಳಿದ ಸಮುದಾಯಕ್ಕೆ ಸೇರಿದವರೆಂಬುದನ್ನು ಸಹಿಸಿಕೊಳ್ಳಲು ಕಾಂಗ್ರೆಸ್ಸಿಗರಿಗೆ ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.

ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡಲು ನಿರ್ಧರಿಸಿರುವುದು, ಯಾವ ಸಚಿವರಿಗೆ ಏನೆನ್ನಿಸುತ್ತದೋ ಅದನ್ನು ಸಚಿವ ಸಂಪುಟದಲ್ಲಿ ನಿರ್ಧರಿಸುವ ಕೆಲಸ ಆಗುತ್ತಿದೆ. ಮರು ನಾಮಕರಣಕ್ಕೆ ರಿಯಲ್ ಎಸ್ಟೇಟ್ ಮಾನದಂಡವೇ? ಹಿಂದೆ ಮುಂದೆ ಆಲೋಚಿಸದೆ ಇಂಥ ನಿರ್ಧಾರ ಮಾಡಲಾಗಿದೆ ಎಂದು ಇದೇ ವೇಳೆ ವಾಗ್ದಾಳಿ ನಡೆಸಿದರು.

ಮೈಸೂರು ಸ್ಯಾಂಡಲ್ ಸೋಪ್‌ಗೆ ರಾಯಭಾರಿ: ಮೈಸೂರು ಸ್ಯಾಂಡಲ್ ಸೋಪ್ ವಿಚಾರ ಹಗುರವಾಗಿ ತೆಗೆದುಕೊಳ್ಳುವ ವಿಷಯವಲ್ಲ, 1916ರಲ್ಲಿ ಮಹಾರಾಜರ ನಿರ್ಧಾರ ಇದರ ಹಿಂದಿದೆ. ರಾಜ್ಯ ಸರ್ಕಾರ ಈಗ ಯಾರೋ ಪರಿಣಿತರು ಹೇಳುತ್ತಾರೆಂದು 6.5 ಕೋಟಿ ರೂ. ಕೊಟ್ಟು ಬಾಲಿವುಡ್ ನಟಿ ತಮನ್ನಾ ಭಾಟಿಯಾ ಅವರನ್ನು ಬ್ರ್ಯಾಂಡ್ ಅಂಬಾಸಿಡರ್ ಮಾಡುವುದು ಸರಿಯಲ್ಲ.

ಮದ್ಯದ ದರ ಏರಿಕೆ: ರಾಜ್ಯ ಸರ್ಕಾರ ಹಣಕಾಸು ಕ್ರೋಢೀಕರಣಕ್ಕೆ ಪರದಾಡುತ್ತಿದೆ. ದೇಶದ ಯಾವ ರಾಜ್ಯದಲ್ಲೂ ಇಲ್ಲದ ಎಕ್ಸೈಸ್ ನೀತಿ ಇಲ್ಲಿದೆ, ಶೇ.200ರಿಂದ ಶೇ.250ರಷ್ಟು ಮದ್ಯದ ದರ ಏರಿಸಲಾಗಿದೆ ಎಂದು ಹೇಳಿದರು.

ಮಂಡ್ಯದಲ್ಲಿ ನಾಯಿ ಕಡಿತಕ್ಕೆ ಮಗುವಿಗೆ ಚಿಕಿತ್ಸೆ ಕೊಡಿಸಲು ಪೋಷಕರು ಹೋಗುತ್ತಿದ್ದ ದ್ವಿಚಕ್ರ ವಾಹನ ತಡೆದ ಪೊಲೀಸರು, ಬೈಕ್ ಕೀ ಕಿತ್ತುಕೊಳ್ಳುವ ಭರದಲ್ಲಿ ಶಿಶು ಜಾರಿಬಿದ್ದು ಮೃತಪಟ್ಟಿದ್ದು, ಇದಕ್ಕೆ ಹೊಣೆ, ಟ್ರಾಫಿಕ್ ಪೊಲೀಸ್‌ರಿಗೂ ಆದಾಯ ಟಾರ್ಗೆಟ್ ನೀಡಿರುವ ಪರಿಣಾಮ ಇದಾಗಿದೆ ಎಂದರು.

ಕಾಂಗ್ರೆಸ್ ಸರ್ಕಾರ ವಿರೋಧ ಪಕ್ಷಗಳ ಶಾಸಕರ ಮೇಲೆ ಕೇಸ್ ದಾಖಲಿಸಿ ಬೆದರಿಕೆ ಹಾಕುವ ಕುತಂತ್ರ ಮಾಡುತ್ತಿದೆ. ಜಿಲ್ಲಾಡಳಿತ ವೈಫಲ್ಯದ ಕೈಗೊಂಬೆ ಆಗಿರುವ ಪೊಲೀಸ್ ಇಲಾಖೆ ರವಿಕುಮಾರ್ ವಿರುದ್ಧ 3ನೇ ವ್ಯಕ್ತಿಯಿಂದ ದೂರು ಕೊಡಿಸಿ ಎಫ್‌ಐಆರ್ ಹಾಕಲಾಗಿದೆ, ಮಂಗಳೂರಿನಲ್ಲಿ ಶಾಸಕ ಭರತ್ ಶೆಟ್ಟಿ ವಿರುದ್ಧ ಎಫ್‌ಐಆರ್ ಮಾಡಿದ್ದಾರೆ, ಹರೀಶ್ ಪೂಂಜಾರ ವಿರುದ್ಧವೂ ಎಫ್‌ಐಆರ್ ಮಾಡಿದ್ದರು.

ಒತ್ತಡಕ್ಕೆ ಮಣಿದು ಶಾಸಕರ ಅಮಾನತು ರದ್ದು: ಸರ್ಕಾರ ಒತ್ತಡಕ್ಕೆ ಮಣಿದು ಬಿಜೆಪಿಯ 18 ಶಾಸಕರ ಅಮಾನತು ವಾಪಸ್ ಪಡೆದಿದೆ, ವಿಪಕ್ಷವನ್ನು ಹತ್ತಿಕ್ಕುವ ಕೆಲಸ ನಡೆದಿದೆ, ಇದು ಪ್ರಜಾಪ್ರಭುತ್ವದ ಕಗ್ಗೊಲೆ ಎಂದರು.

ವೈಫಲ್ಯ ಪ್ರಶ್ನಿಸಿದರೆ ಕೇಸ್ : ಕಾಂಗ್ರೆಸ್ ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ಭ್ರಷ್ಟಾಚಾರ, ಬೆಲೆ ಏರಿಕೆ, ತೆರಿಗೆ ವಸೂಲಿ ಕ್ರಮಗಳಿಂದ ಜನರ ಶಾಪಕ್ಕೆ ಗುರಿಯಾಗಿದೆ, ವೈಫಲ್ಯ ಬಿಚ್ಚಿಡಲು ಚಾರ್ಜ್‌ಶೀಟ್ ಬಿಡುಗಡೆ ಮಾಡಿದ್ದೆವು, ಅದಕ್ಕೆ ನಮ್ಮ ವಿರುದ್ಧ ಮಾನನಷ್ಟ ಮೊಕದ್ದಮೆ ಹಾಕಿದ್ದಾರೆ. ಕೃಷ್ಣಾ ಮೇಲ್ದಂಡೆ ಯೋಜನೆಗೆ ಎಷ್ಟು ಹಣ ಕೊಟ್ಟಿದ್ದೀರಿ, ಮಳೆ, ಬಿತ್ತನೆ ಬೀಜ, ರೈತರ ಸಮಸ್ಯೆಗಳ ಕುರಿತು ರಾಜ್ಯ ಸರ್ಕಾರ ತಲೆಕೆಡಿಸಿಕೊಂಡಿಲ್ಲ, ಕಾಳಜಿಯೂ ಇಲ್ಲ. ಕೇಂದ್ರದ ವಿರುದ್ಧ ಆರೋಪ ಮಾಡುವುದು, ಸಂಘರ್ಷದ ಹಾದಿ ತುಳಿಯುವುದನ್ನು ಬಿಟ್ಟು, ಬಡವರ, ದೀನ ದಲಿತರ, ರೈತರ ಅಭಿವೃದ್ಧಿ ಕಡೆಗೆ ಗಮನ ಕೊಡಿ ಎಂದರು.

ಪ್ರಧಾನಿ ನರೇಂದ್ರ ಮೋದಿ ಸಾಧನೆ ಅನನ್ಯ

ಪ್ರಧಾನಿ ಮೋದಿ ಅವರ ದೂರದೃಷ್ಟಿ ಮತ್ತು ಸಮರ್ಥ ನಾಯಕತ್ವದ ಪರಿಣಾಮವಾಗಿ ಭಾರತ ವಿಶ್ವದ 4ನೇ ದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ದೇಶದ ಪ್ರಧಾನಿ ಮೋದಿ 11 ವರ್ಷಗಳ ದೇಶ ಸೇವೆ ಪೂರೈಸಿದ್ದು, 11 ವರ್ಷಗಳಿಗೂ ಹೆಚ್ಚು ಕಾಲ ಗುಜರಾತ್ ಮುಖ್ಯಮಂತ್ರಿಗಳಾಗಿ, ನಂತರ ದೇಶದ ಪ್ರಧಾನಿಗಳಾಗಿ ಉತ್ತಮ ಆಡಳಿತ ನೀಡಿದ್ದಾರೆ, ಅಲ್ಲದೆ ಭಾರತವನ್ನು ಎಲ್ಲ ರಂಗಗಳಲ್ಲಿಯೂ ಮುನ್ನಡೆಸುವ ಕೆಲಸ ಮಾಡುತ್ತಿದ್ದಾರೆ ಎಂದರು.

ಕಳೆದ 11 ವರ್ಷಗಳಲ್ಲಿ ಎನ್‌ಡಿಎ ಸರ್ಕಾರದ ಡಿಜಿಟಲ್ ಇಂಡಿಯಾ, ಜನ್ ಧನ್ ಯೋಜನೆ, ಸ್ವಚ್ಛ ಭಾರತ್ ಮಿಷನ್, ಮೇಕ್ ಇನ್ ಇಂಡಿಯಾ, ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ, ಜಲ ಜೀವನ್ ಮಿಷನ್, ಸ್ಟಾರ್ಟಪ್ ಇಂಡಿಯಾ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ, ಇದರ ಪರಿಣಾಮ ಭಾರತ ನಾಲ್ಕನೇ ದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ.

ಕೇಂದ್ರದಲ್ಲಿ ಮೋದಿ ಅಧಿಕಾರ ವಹಿಸಿಕೊಂಡ ನಂತರ 2014ರಿಂದೀಚೆಗೆ ವಿದ್ಯುದೀಕರಣ ಸೇರಿದಂತೆ ಕರ್ನಾಟಕ ರೈಲ್ವೆ ಅಭಿವೃದ್ಧಿಗೆ 5,000 ಕೋಟಿ ರೂ. ನೀಡಿದ್ದಾರೆ. ರಾಜ್ಯಕ್ಕೆ 10 ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳನ್ನು ನೀಡಲಾಗಿದೆ, ಹೆದ್ದಾರಿಗಳ ಅಭಿವೃದ್ಧಿಗೆ ಸಹಕಾರ, ಅನುದಾನ ನೀಡುತ್ತಿದೆ, ರಾಜ್ಯದ ಜನರ ಪರವಾಗಿ ಮೋದಿ ಅವರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ...



ಮೈಸೂರಿನ ಗಾಂಧಿನಗರದ ಶ್ರೀ ಮಲೆ ಮಹದೇಶ್ವರ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಟ್ರಸ್ಟ್‌ನಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಆಯೋಜಿಸಲಾಗಿತ್ತು. ಮುಖ್ಯ ಅತಿಥಿಗಳಾಗಿ ಅಕ್ಕ ಐಎಎಸ್ ಅಕಾಡೆಮಿ ಅಧ್ಯಕ್ಷ ಡಾ.ಶಿವಕುಮಾರ್, ಮಹದೇವಣ್ಣ, ಸಿದ್ದಪ್ಪ, ಪ್ರವೀಣ್, ಜಯದೇವ್ ಇನ್ನಿತರರು ಉಪಸ್ಥಿತರಿದ್ದರು.

ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

ಮೈಸೂರು, ಮೇ27–ರಾಜ್ಯ ಸರ್ಕಾರಿ ನೌಕರರ ಸಂಘವು 2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚಿನ ಅಂಕ ಪಡೆದ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 31–05–2025. ವಿದ್ಯಾರ್ಥಿಯು 2025ರ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ, ಶೇ.90ಕ್ಕಿಂತ ಹೆಚ್ಚಿನ ಅಂಕ ಪಡೆದು ತೇರ್ಗಡೆಯಾಗಿರಬೇಕು. ವಿದ್ಯಾರ್ಥಿಯ ತಂದೆ ಇಲ್ಲವೇ ತಾಯಿ ರಾಜ್ಯ ಸರ್ಕಾರದ ಯಾವುದಾದರೊಂದು ಇಲಾಖೆಯಲ್ಲಿ ಖಾಯಂ ಸರ್ಕಾರಿ ನೌಕರರಾಗಿರಬೇಕು. ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ದೃಢೀಕೃತ ಅಂಕಪಟ್ಟಿ, ಇಲಾಖೆಯ ಸೇವಾ ದೃಢೀಕರಣ ಪತ್ರ ಹಾಗೂ ಸಂಬಂಧಪಟ್ಟ ಜಿಲ್ಲಾ, ತಾಲೂಕಿನ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಿಂದ ಪಡೆದ ದೃಢೀಕರಣ ಪತ್ರ ಲಗತ್ತಿಸುವುದು. http://ksgeanews.blogspot.com/2025/05/sslc-puc-2025.html ಲಿಂಕ್ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು. ಮಾಹಿತಿಗೆ ಮೊ.9448208750 ಸಂಪರ್ಕಿಸುವುದು.

ನಾಳೆ ಸುತ್ತೂರು ಶ್ರೀಕ್ಷೇತ್ರದಲ್ಲಿ ಅಧ್ಯಯನ ಶಿಬಿರದ ಉದ್ಘಾಟನೆ

ಮೈಸೂರು, ಮೇ 27–ಸುತ್ತೂರು ಶ್ರೀಮಠ, ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳ ಸಂಯುಕ್ತಾಶ್ರಯದಲ್ಲಿ ಮೇ 29ರಿಂದ ಜೂನ್ 2ರವರೆಗೆ ಸುತ್ತೂರು ಶ್ರೀಕ್ಷೇತ್ರದಲ್ಲಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಮಠಾಧಿಪತಿಗಳು, ಸಾಧಕರು ಹಾಗೂ ಆಧ್ಯಾತ್ಮಿಕ ಜಿಜ್ಞಾಸುಗಳಿಗೆ ಅಧ್ಯಯನ ಶಿಬಿರವನ್ನು ನಿಜಗುಣ ಶಿವಯೋಗಿಗಳವರ ಅನುಭವ ಸಾರ ಗ್ರಂಥದ ಕುರಿತು ಏರ್ಪಡಿಸಲಾಗಿದೆ.

ಶಿಬಿರವನ್ನು ಮೇ 29ರಂದು ಬೆಳಗ್ಗೆ 10 ಗಂಟೆಗೆ ವಿಶ್ರಾಂತ ಕುಲಪತಿ ಪ್ರೊ. ಮಲ್ಲೇಪುರಂ ಜಿ.ವೆಂಕಟೇಶ್ ಉದ್ಘಾಟಿಸಲಿದ್ದು, ನಿವೃತ್ತ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಹಾಗೂ ನಾಗಪುರದ ವಿ.ಎನ್. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಬೋರ್ಡ್ ಆಫ್ ಗವರ್ನರ್ಸ್ ಚೇರ್‌ಮನ್ ಎಂ.ಮದನ್ ಗೋಪಾಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಶಾಸಕ ಮಹಿಮಾ ಪಟೇಲ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಘೋಡಗೇರಿಯ ಶ್ರೀ ಶಿವಾನಂದ ಮಠದ ಶ್ರೀ ಮಲ್ಲಯ್ಯ ಸ್ವಾಮಿಗಳು, ಬೀದರ್‌ನ ಗುರುದೇವಾಶ್ರಮದ ಶ್ರೀ ಗಣೇಶಾನಂದ ಮಹಾರಾಜ್ ಹಾಗೂ ವಿಶ್ರಾಂತ ಪ್ರಾಧ್ಯಾಪಕ ಡಾ.ಕೆ.ಅನಂತ ರಾಮು ಉಪನ್ಯಾಸ ನೀಡಲಿದ್ದಾರೆ.

ರಾಷ್ಟ್ರ ಮಟ್ಟಕ್ಕೆ ಆಯ್ಕೆ



ಸರ್ಕಾರಿ ನೌಕರರ ಸಂಘದ ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಸರಕಾರಿ ಪದವಿ ಪೂರ್ವ ಕಾಲೇಜು ಒಂಟಿಕೊಪ್ಪಲಿನ ಉಪನ್ಯಾಸಕರಾದ ಮಧುಸೂದನ್ ಮತ್ತು ಹರ್ಷವರ್ಧನ್ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಮಹೇಶ್ ನೇಮಕ



ಮೈಸೂರು: ಮೈಸೂರು ಜಿಲ್ಲಾ ಅಮರ ಶಿಲ್ಪಿ ವೇದಿಕೆ ಜಿಲ್ಲಾಧ್ಯಕ್ಷರಾಗಿ ಮಹೇಶ್ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಿಸಿಪಿ ಮಸೂದೆಗೆ ರಾಷ್ಟ್ರಪತಿ ಅನುಮೋದನೆ: ತ್ವರಿತ ನ್ಯಾಯ ವಿಲೇವಾರಿ; ವಿಚಾರಣೆಗೆ ಮುನ್ನ ಮಧ್ಯಸ್ಥಿಕೆ

ಬೆಂಗಳೂರು, ಮೇ 27– ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಗರಿಕ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ಮಸೂದೆ, 2024 (CCP ಕರ್ನಾಟಕ ತಿದ್ದುಪಡಿ ಮಸೂದೆ, 2024)ಕ್ಕೆ ಒಪ್ಪಿಗೆ ನೀಡಿದ್ದಾರೆ. ಈ ಬಗ್ಗೆ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ.

ಇದರೊಂದಿಗೆ, ವಿವಿಧ ಅಧೀನ ನ್ಯಾಯಾಲಯಗಳಲ್ಲಿನ ಪ್ರಕರಣಗಳನ್ನು ನಿಗದಿತ ಸಮಯದೊಳಗೆ ವಿಲೇವಾರಿ ಮಾಡಬೇಕಾಗುತ್ತದೆ. ಪ್ರಕರಣವನ್ನು ವಿಚಾರಣೆಗೆ ಕೈಗೆತ್ತಿಕೊಳ್ಳುವ ಮೊದಲು, ಮಧ್ಯಸ್ಥಿಕೆಗೆ ಅವಕಾಶವಿರುತ್ತದೆ, ಇದಕ್ಕಾಗಿ ಎರಡು ತಿಂಗಳ ಕಾಲಾವಕಾಶ ನೀಡಲಾಗುತ್ತದೆ.ದೇಶದಲ್ಲಿ ಇದು ಮೊದಲ ವಿಶೇಷ ಕಾನೂನು ಆಗಿದೆ.

ಕಕ್ಷಿದಾರರು ಎರಡು ತಿಂಗಳೊಳಗೆ ಮಧ್ಯಸ್ಥಿಕೆ ಮೂಲಕ ಪ್ರಕರಣವನ್ನು ಪರಿಹರಿಸಲು ಕಡ್ಡಾಯವಾಗಿ ಪ್ರಯತ್ನಿಸಬೇಕು. ಇದು ಆಗದಿದ್ದರೆ ಮಾತ್ರ ನ್ಯಾಯಾಲಯವು ಪ್ರಕರಣವನ್ನು ಕೈಗೆತ್ತಿಕೊಳ್ಳುತ್ತದೆ. ಇದು ಐತಿಹಾಸಿಕ ಕಾನೂನಾಗಿದ್ದು, ಸಿವಿಲ್ ನ್ಯಾಯಾಲಯಗಳಲ್ಲಿ 24 ತಿಂಗಳೊಳಗೆ ವಿಚಾರಣೆಯನ್ನು ಪೂರ್ಣಗೊಳಿಸಲು ಒತ್ತಾಯಿಸುತ್ತದೆ. ವಿಚಾರಣೆಯ ಮೊದಲ ದಿನ ಅಥವಾ ಪ್ರಕರಣ ದಾಖಲಾಗಿದ್ದಾಗಲೆಲ್ಲಾ, ತೀರ್ಪಿನ ದಿನಾಂಕವನ್ನು ಸಹ ನಿಗದಿಪಡಿಸಲಾಗುತ್ತದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಹೇಳಿದ್ದಾರೆ.



ವಕೀಲರು ಸೇರಿದಂತೆ ಕಾನೂನು ಸಮುದಾಯದವರು ಸಹಕರಿಸುವಂತೆ ಮನವಿ ಮಾಡಿದ ಸಚಿವರು, ಪ್ರಕರಣ ಇತ್ಯರ್ಥವಾಗುವವರೆಗೆ ವೇಳಾಪಟ್ಟಿಯನ್ನು ನಿಗದಿಪಡಿಸಲಾಗುವುದು ಎಂದು ಹೇಳಿದರು. ಅಧೀನ ನ್ಯಾಯಾಲಯಗಳಲ್ಲಿ ಸುಮಾರು 10 ಲಕ್ಷ ಪ್ರಕರಣಗಳು ಬಾಕಿ ಉಳಿದಿವೆ. ಅವುಗಳಲ್ಲಿ ಹೆಚ್ಚಿನವು ಭೂ ಸಂಬಂಧಿ ಪ್ರಕರಣಗಳಾಗಿವೆ.

ಕಳೆದ ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಮಸೂದೆಯನ್ನು ಉಭಯ ಸದನಗಳಲ್ಲಿ ಅಂಗೀಕರಿಸಿ, ನಂತರ ರಾಜ್ಯಪಾಲರಿಗೆ ಕಳುಹಿಸಲಾಗಿತ್ತು. ರಾಜ್ಯಪಾಲರು ಇದನ್ನು ರಾಷ್ಟ್ರಪತಿಗಳಿಗೆ ಉಲ್ಲೇಖಿಸಿದರು. ಮೇ 19ರಂದು ಅನುಮೋದನೆ ನೀಡಿದರು. ಈ ಕಾನೂನು ಸಿವಿಲ್ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಸಹಾಯ ಮಾಡುತ್ತದೆ. ನಾವು ಹಲವು ವರ್ಷಗಳಿಂದ ಇದರ ಬಗ್ಗೆ ಮಾತನಾಡುತ್ತಿದ್ದೇವೆ. ಕೆಲವು ಪ್ರಕರಣಗಳು 20 ವರ್ಷಗಳಿಂದಲೂ ಬಾಕಿ ಇವೆ ಎಂದು ಹೇಳಿದರು.

ಕಿಟಕಿ ಮೆಶ್ ಕತ್ತರಿಸಿ ಕಳವಿಗೆ ಯತ್ನ

ವಿಜಯನಗರ ರೈಲ್ವೆ ಬಡಾವಣೆಯಲ್ಲಿ ಕೃತ್ಯ



ಮೈಸೂರು, ಮೇ 27(ಆರ್‌ಕೆ)–ಮನೆಯೊಂದರ ಕಿಟಕಿ ಮೆಶ್ ಕತ್ತರಿಸಿ ಕಳವಿಗೆ ವಿಫಲ ಯತ್ನ ಮಾಡಿರುವ ಘಟನೆ ಮೈಸೂರಿನ ವಿಜಯಗರ ರೈಲ್ವೆ ಬಡಾವಣೆಯಲ್ಲಿ ಕಳೆದ ರಾತ್ರಿ ಸಂಭವಿಸಿದೆ.


ರೈಲ್ವೆ ಬಡಾವಣೆ 18ನೇ ಕ್ರಾಸ್ ನಿವಾಸಿ ವಸುದೇವ ಎಂಬುವರ ಮನೆಯ ಕಿಟಕಿಗೆ ಅಳವಡಿಸಿದ್ದ ಮೆಸ್ ಅನ್ನು ಕತ್ತರಿಸಿ ಮುಂದೆ ಗಿಡಕ್ಕೆ ಸಪೋರ್ಟ್ ಆಗಿ ನೆಟ್ಟಿದ ಕಟ್ಟಿಗೆಯಿಂದ ಕೊಠಡಿಯಲ್ಲಿ ನೇತು ಹಾಕಿದ್ದ ಶರ್ಟ್, ಪ್ಯಾಂಟ್ ಅನ್ನು ಎಳೆದುಕೊಂಡು ಜೇಬು ಶೋಧಿಸಿ ಹಣ ಸಿಗದ ಕಾರಣ ಅವುಗಳನ್ನು ಕೊಠಡಿಯಲ್ಲಿ ಮಲಗಿದ್ದವರ ಮೇಲೆಸೆದು ಪರಾರಿಯಾಗಿದ್ದಾರೆ. ಮುಂಜಾನೆ ಸುಮಾರು 2ರಿಂದ 3 ಗಂಟೆ ಸಮಯದಲ್ಲಿ ವಸುದೇವ ಅವರು ಗಾಢ ನಿದ್ರೆಯಲ್ಲಿದ್ದಾಗ ಖದೀಮರು ಈ ಕೃತ್ಯ ಎಸಗಿದ್ದಾರೆಂಬುದು ಇಂದು ಬೆಳಗ್ಗೆ ಎಚ್ಚರವಾದಾಗ ತಿಳಿದು ಬಂದಿದೆ. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ವಿಜಯನಗರ ಠಾಣೆ ಪೊಲೀಸರು ಮಹಜರು ನಡೆಸಿದರು.

ಅರಮನೆ ಸೌತ್ ಗೇಟ್ ಬಳಿ ಅಪರಿಚಿತ ವ್ಯಕ್ತಿ ಮೃತದೇಹ ಪತ್ತೆ

ಮೈಸೂರು, ಮಾ.27(ಆರ್‌ಕೆ)– ಮೈಸೂರಿನ ಅರಮನೆ ದಕ್ಷಿಣ ದ್ವಾರದ ಬಳಿ ಅಪರಿಚಿತ ವ್ಯಕ್ತಿಯ ಮೃತದೇಹ ಇಂದು ಬೆಳಗ್ಗೆ ಪತ್ತೆಯಾಗಿದೆ. ಸುಮಾರು 45 ವರ್ಷ ವಯಸ್ಸಿನ ವ್ಯಕ್ತಿಯ ಮೃತದೇಹದ ಬಳಿ ಖಾಲಿ ಪ್ಲಾಸ್ಟಿಕ್ ಬಾಟಲಿಗಳ ಚೀಲವಿದ್ದು, ಆತ ಚಿಂದಿ ಆಯುವವರಾಗಿದ್ದು, ರಾತ್ರಿ ಮಲಗಿದ್ದಲ್ಲೇ ಸಾವನ್ನಪ್ಪಿದ್ದು, ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ದೇವರಾಜ ಠಾಣೆ ಪೊಲೀಸರು ಮಹಜರು ನಡೆಸಿ, ಪ್ರಕರಣ ದಾಖಲಿಸಿಕೊಂಡು ಮೃತದೇಹವನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸಾಗಿಸಿದರು. ವಾರಸುದಾರಿದ್ದಲ್ಲಿ ದೇವರಾಜ ಠಾಣೆ (0821–2418305, ನಗರ ಪೊಲೀಸ್ ಕಂಟ್ರೋಲ್ ರೂಂ. 0821–2418339)ಗೆ ಸಂಪರ್ಕಿಸುವಂತೆ ಕೋರಲಾಗಿದೆ.

ಮೈಸೂರಲ್ಲಿ ಟಿಪ್ಪು ಸುಲ್ತಾನರ 233ನೇ ಗಂಧದ ಉರುಸ್ ಆಚರಣೆ

ಫೌಂಟನ್ ವೃತ್ತದಿಂದ ಶ್ರೀರಂಗಪಟ್ಟಣದವರೆಗೆ ಶ್ರೀಗಂಧದ ಕರಂಡಿಕೆ ಮೆರವಣಿಗೆ



ಟಿಪ್ಪುಸುಲ್ತಾನರ 233ನೇ ಗಂಧದ ಉರುಸ್‌ನಲ್ಲಿ ಶ್ರೀಗಂಧದ ಕರಂಡಿಕೆಯನ್ನು ಶಾಸಕ ತನ್ವೀರ್ ಸೇಠ್ ಹೊತ್ತು ಸಾಗಿದರು.

ಮೈಸೂರು, ಮೇ27(ಜಿಎ)– ಮೈಸೂರಿನ ಮಿಲಾದ್ ಬಾಗ್ ಉದ್ಯಾನವನದಲ್ಲಿ ಟಿಪ್ಪು ಸುಲ್ತಾನರ 233ನೇ ಗಂಧದ ಉರುಸ್ ಕಾರ್ಯಕ್ರಮವನ್ನು ಟಿಪ್ಪು ಸುಲ್ತಾನ್ ವೆಲ್‌ಫೇರ್ ಮತ್ತು ಉರುಸ್ ಸಮಿತಿಯ ನೇತೃತ್ವದಲ್ಲಿ ಮಂಗಳವಾರ ಆಚರಿಸಲಾಯಿತು.

ವಿವಿಧ ಸೂಫಿ ಸಂತರು, ಟಿಪ್ಪು ಸುಲ್ತಾನರ ಅಭಿಮಾನಿಗಳು, ಸಂಘ ಸಂಸ್ಥೆಗಳ ಮುಖಂಡರು, ವಿವಿಧ ಮಸೀದಿಗಳ ಧರ್ಮ ಗುರುಗಳು ಮತ್ತು ಸರ್ ಖಾಜಿ ಸೈಯದ್ ಉಸ್ಮಾನ್ ಅವರ ಸಮ್ಮುಖದಲ್ಲಿ ವಾಡಿಕೆಯಂತೆ ಶ್ರೀಗಂಧದ ಕರಂಡಿಕೆಯನ್ನು ಶಾಸಕ ತನ್ವೀರ್ ಸೇಠ್ ತಲೆಯ ಮೇಲೆ ಹೊತ್ತು ಸೂಫಿಗಳ ವಾದ್ಯದ ಮೆರವಣಿಗೆಯೊಂದಿಗೆ ಮಿಲಾದ್ ಪಾರ್ಕಿನಿಂದ ಪಾದಯಾತ್ರೆ ಹೊರಟು ಬಳಿಕ ಅಲಂಕೃತ ಸಾರೋಟಿನಲ್ಲಿ ನಗರದ ಫೌಂಟನ್ ವೃತ್ತದವರೆಗೂ ಸಾಗಿದರು. ಬಳಿಕ ಅದನ್ನು ವಾಹನದ ಮೂಲಕ ಶ್ರೀರಂಗಪಟ್ಟಣದ ಗುಂಬಜ್‌ನಲ್ಲಿರುವ ಹಜರತ್ ಟಿಪ್ಪು ಸುಲ್ತಾನ ಸಮಾಧಿಗೆ ಕೊಂಡೊಯ್ಯಲಾಯಿತು.

ವೇದಿಕೆ ಕಾರ್ಯಕ್ರಮದಲ್ಲಿ ಟಿಪ್ಪು ಸುಲ್ತಾನ್ ವೆಲ್‌ಫೇರ್ ಮತ್ತು ಉರುಸ್ ಸಮಿತಿ ಅಧ್ಯಕ್ಷ, ಹೈಕೋರ್ಟ್ ವಕೀಲರೂ ಆದ ಎಂ.ಎಸ್.ಮುಕ್ರಂ ಮಾತನಾಡಿ, ಟಿಪ್ಪು ಸುಲ್ತಾನ್ ಎಂಬ ಹೆಸರೇ ಒಂದು ದೊಡ್ಡ ಶಕ್ತಿಯಾಗಿದೆ. ಆ ಹೆಸರನ್ನು ಹೇಳಿದರೆ ಎಂತಹ ಬಲಹೀನರೂ ಶೂರರಾಗುತ್ತಾರೆ, ಅಳುವವನ ಮುಖದಲ್ಲಿ ನಗೆ ಸೂಸುತ್ತದೆ, ದೇಶ ದ್ರೋಹಿಗಳ ಎದೆಯಲ್ಲಿ ನಡುಕ ಉಂಟಾಗುತ್ತದೆ. ಅಂತಹ ಶಕ್ತಿ ಟಿಪ್ಪು ಸುಲ್ತಾನರ ಹೆಸರಿಗಿದೆ ಎಂದ ಮೇಲೆ ಅವರ ಶಕ್ತಿ ಎಂತಹದು ಎಂಬುದನ್ನು ಅರ್ಥಮಾಡಿಕೊಳ್ಳಬೇಕು ಎಂದರು.

ಟಿಪ್ಪು ಕೇವಲ ಶೂರರು ಮಾತ್ರವಲ್ಲ ಅಪ್ಪಟ ದೇಶ ಪ್ರೇಮಿಗಳಾಗಿದ್ದವರು, ಸಾಮಾಜಿಕ ನ್ಯಾಯದ ಹರಿಕಾರರು, ದುಷ್ಟರನ್ನು ಶಿಕ್ಷಿಸಿ ಶಿಷ್ಟರನ್ನು ರಕ್ಷಿಸುವ ಮಹಾ ಪರಾಕ್ರಮಿಯೂ ಆಗಿದ್ದರು. ಇಂದು ಕೇವಲ ಅವರು ಮುಸ್ಲಿಂ ಧರ್ಮೀಯರು ಎಂಬ ಕಾರಣಕ್ಕೆ ಅವರನ್ನು ಕಡೆಗಣಿಸಲಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಇತಿಹಾಸ ತಜ್ಞ ಪ್ರೊ.ಪಿ.ವಿ.ನಂಜರಾಜ ಅರಸು ಮಾತನಾಡಿ, ಕೇವಲ ಓಟಿನ ರಾಜಕಾರಣಕ್ಕಾಗಿ ಟಿಪ್ಪು ಸುಲ್ತಾನ ಎಂಬ ಮಹಾನ್ ದೇಶ ಪ್ರೇಮಿಯನ್ನು ಕಡೆಗಣಿಸಲಾಗಿದೆ. ಶೃಂಗೇರಿ ಮಠವನ್ನು ಲೂಟಿ ಮಾಡಿ, ಶಾರದಾಂಬೆಯ ಮೂಲ ವಿಗ್ರಹವನ್ನು ನದಿಗೆ ಎಸೆದವರು ಬ್ರಾಹ್ಮಣ ಪೇಶ್ವೆಗಳು, ಆದರೆ ಮಠದ ಪುನರ್ ನಿರ್ಮಾಣಕ್ಕೆ ಟಿಪ್ಪು ಸುಲ್ತಾನರು ಹಣ ಕೊಟ್ಟು ಮಠವನ್ನು ಶತೃಗಳಿಂದ ರಕ್ಷಿಸುತ್ತಾರೆ. ಇಂತಹ ಸತ್ಯ ನಮಗೆ ತಿಳಿದಿದ್ದರೂ ನಾವು ಸುಳ್ಳನ್ನೆ ನಂಬುವಂತೆ ಟಿಪ್ಪು ವಿರುದ್ಧ ಮಾತನಾಡುತ್ತೇವೆ ಎಂದರು.

ಕಾರ್ಯಕ್ರಮದಲ್ಲಿ ಎಂ.ಎಫ್.ಕಲೀಂ, ಮಜೀದ್ ಅಹಮದ್, ಮೊಹಮ್ಮದ್ ರಫಿ, ರಘುರಾಜೇ ಅರಸ್, ಶೌಕತ್ ಅಲಿ ಖಾನ್, ಮೊಹಮ್ಮದ್ ಅಸ್ಲಂ, ಅಜೀಜ್ ಅಲಿ ಕಿಷ್ಟಿ ಮತ್ತಿತರರು ಪಾಲ್ಗೊಂಡಿದರು.

ಮಂಡ್ಯದ ಸರ್ಕಾರಿ ಕಚೇರಿಗಳಿಗೆ ಉಪಲೋಕಾಯುಕ್ತ ಭೇಟಿ

ಜನರಿಗೆ ಸ್ಪಂದಿಸದ ಅಧಿಕಾರಿ, ಸಿಬ್ಬಂದಿಗೆ ತೀವ್ರ ತರಾಟೆ, ಮೂರು ಕಚೇರಿಗಳ ವಿರುದ್ಧ ದೂರು ದಾಖಲು

ಮಂಡ್ಯ,ಮೇ27– ಮೂರು ದಿನಗಳ ಪ್ರವಾಸಕ್ಕಾಗಿ ಕಳೆದ ಸೋಮವಾರ ಸಂಜೆಯಿಂದ ಮಂಡ್ಯ ಜಿಲ್ಲೆಯಲ್ಲಿ ಪ್ರವಾಸ ಹಮ್ಮಿಕೊಂಡಿರುವ ನ್ಯಾಯ ಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪಸೋಮವಾರ ಸಂಜೆಯಿಂದ ಮಂಗಳವಾರ ರಾತ್ರಿಯವರೆಗೂ ಮಂಡ್ಯ ತಾಲೂಕಿನ ವಿವಿಧ ಸರ್ಕಾರಿ ಕಚೇರಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಸಾರ್ವಜನಿಕರಿಗೆ ಸ್ಪಂದಿಸದ ಅಧಿಕಾರಿಗಳು, ಸಿಬ್ಬಂದಿಗಳನ್ನು ತೀವ್ರ ತರಾಟೆಗೆ ತೆಗೆದು ಕೊಂಡ ಅವರು, ಮೂರು ಸರ್ಕಾರಿ ಕಚೇರಿಯ ವಿರುದ್ಧ ಸ್ವಯಂ ಆಸಕ್ತಿ ದೂರು ದಾಖಲಿಸಿದ್ದಾರೆ.



ಉಪಲೋಕಾಯುಕ್ತ ಬಿ.ವೀರಪ್ಪ ಮಿಮ್ಸ್ ಆಸ್ಪತ್ರೆಯಲ್ಲಿ ರೋಗಿಗಳ ಆರೋಗ್ಯ ವಿಚಾರಿಸಿದರು.

ಇಂಡುವಾಳು ಗ್ರಾಪಂಗೆ ದಿಢೀರ್ ಭೇಟಿ: ಸೋಮವಾರ ಸಂಜೆ ಆರು ಗಂಟೆಯಿಂದ ರಾತ್ರಿ 9 ಗಂಟೆವರೆಗೆ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಮೊದಲು ಮಂಡ್ಯ ತಾಲೂಕಿನ ಇಂಡವಾಳು ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೊದಲಿಗೆ ಕಚೇರಿಗೆ ಭೇಟಿ ನೀಡಿ ಹಾಜರಾತಿ, ಚಲನ–ವಲನ ವಹಿ, ನಗದು ವಹಿ, 15ನೇ ಹಣಕಾಸು ಯೋಜನೆ ವಹಿ ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ವಹಿಗಳನ್ನು ಪೂರ್ಣಗೊಳಿಸದೇ ಇರುವ ಬಗ್ಗೆ, ಚೆಕ್‌ಗಳಿಗೆ ಪಿಡಿಒ ಅವರು ಸಹಿ ಮಾಡಿ ಯಾರದೇ ಹೆಸರು ನಮೂದಿಸದೇ ಇರುವ ಬಗ್ಗೆ ತರಾಟೆಗೆ ತೆಗೆದುಕೊಂಡರು. ತಕ್ಷಣ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಕಚೇರಿಗೆ ಕರೆಸುವಂತೆ ನಿರ್ದೇಶಿಸಿದರು. ಗೋಮಾಳದಲ್ಲಿ ಮನೆ ಕಟ್ಟಲು 9&11 ನೀಡಿರುವ ಬಗ್ಗೆ ದಾಖಲೆಗಳನ್ನು ಹಾಜರುಪಡಿಸುವಂತೆ ತಿಳಿಸಿದರು. ಈ ಹಿಂದೆ ಕಾರ್ಯನಿರ್ವಹಿಸುತ್ತದೆ. ಪಿಡಿಒ ಅವರ ಮಾಹಿತಿಯನ್ನು ಸಹ ಪಡೆದುಕೊಂಡರು.

ಪಿಡಿಒ ಅವರಿಂದ ಮೊಬೈಲ್ ಪಡೆದು ಅವರ ಖಾತೆಯಲ್ಲಿ ವಹಿವಾಟು ನಡೆಸಿರುವ ಬಗ್ಗೆ ವಿಚಾರಣೆ ನಡೆಸಿದರು. ಸಂಬಳ ಹಾಗೂ ವಹಿವಾಟಿನ ಬಗ್ಗೆ ಸಂದೇಹ ಉಂಟಾಗಿದ್ದು, ಇವರು ವಿವಿಧ ಬ್ಯಾಂಕ್‌ಗಳಲ್ಲಿ ಹೊಂದಿರುವ ಖಾತೆ ಹಾಗೂ ಸ್ಟೇಟ್‌ಮೆಂಟ್‌ಗಳನ್ನು ತರಿಸಿಕೊಡುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದರು.

ನರೇಗಾದಲ್ಲಿ ಕೈಗೊಂಡಿರುವ ಕೆಲಸಗಳು, ಇಂಗು ಗುಂಡಿ, ರಸ್ತೆ ದೀಪಗಳ ಕಾಮಗಾರಿಗಳ ಕುರಿತು ಮಾಹಿತಿ ಪಡೆದುಕೊಂಡರು. ನೀವೇನು ಪಂಚಾಯತ್ ಡೆವಲಮೆಂಟ್ ಆಫೀಸರ್ ಅಥವಾ ಪಂಚಾಯತ್ ಡ್ಯಾಮೇಜ್ ಆಫೀಸರ್ ಅಂತ ಕಿಡಿಕಾರಿದ ಅವರು, ಇಂಗು ಗುಂಡಿ ಮಾಡುವುದರಿಂದ ಕೆರೆಗಳಿಗೆ ಗಲೀಜು ನೀರು ಮಿಶ್ರಣವಾಗಲು ಸಾಧ್ಯವಿಲ್ಲ ಆದುದರಿಂದ ಪಂಚಾಯಿತಿಗಳು ಇಂಗು ಗುಂಡಿ ನಿರ್ಮಾಣ ಮಾಡಲು ಹೆಚ್ಚು ಒತ್ತು ನೀಡಬೇಕು ಎಂದು ಉಪಲೋಕಾಯುಕ್ತರು ತಿಳಿಸಿದರು.

ಇಂಡವಾಳು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಇರುವ ಜನಸಂಖ್ಯೆ, ಕುಟುಂಬಗಳು ಹಾಗೂ ಕರ ಸಂಗ್ರಹಣೆ ಮಾಡಿರುವ ಕುರಿತು ಮಾಹಿತಿ ಪಡೆದುಕೊಂಡ ನಂತರ ಕಚೇರಿಯ ದ್ವಿತೀಯ ದರ್ಜೆ ಸಹಾಯಕರು ಕಚೇರಿಯಲ್ಲಿ ಹಾಜರಿಲ್ಲದ ಬಗ್ಗೆ ಹಾಗೂ ದಾಖಲೆಗಳನ್ನು ಪರಿಶೀಲನೆಗೆ ನೀಡದೇ ಇರುವ ಬಗ್ಗೆ ಹಲವು ದಿನಗಳ ಹಿಂದೆಯೇ ಭೇಟಿ ನೀಡುವುದಾಗಿ ಮಾಹಿತಿ ನೀಡಿದ್ದರೂ ಸರಿಯಾಗಿ ದಾಖಲೆ ಹಾಜರು ಪಡೆಸಿರುವುದಿಲ್ಲ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದರು.

ಮಂಡ್ಯ ತಾ.ಪಂ. ಕಚೇರಿ, ಬಂಗಾರ ದೊಡ್ಡಿ ನಾಲೆ ಹಾಗೂ ವೆಲ್ಲೆಸ್ಲಿ ಬ್ರಿಡ್ಜ್ ಪರಿಶೀಲನೆ ನಡೆಸಿದರಲ್ಲದೆ, ಮಿಮ್ಸ್ ಆಸ್ಪತ್ರೆಯ ರೋಗಿಗಳ ಆರೋಗ್ಯ ವಿಚಾರಿಸಿ ಆಹಾರ ಗುಣಮಟ್ಟವನ್ನು ಪರೀಕ್ಷಿಸಿದರು. ಈ ಬಗ್ಗೆ ವರದಿ ನೀಡುವಂತೆ ಸೂಚಿಸಿದರು.

ಕಾವೇರಿ ನದಿ ತೀರದ ಅಕ್ರಮ ಕಟ್ಟಡಗಳ ತೆರವಿಗೆ ಉಪ ಲೋಕಾಯುಕ್ತ ಸೂಚನೆ

ಶ್ರೀರಂಗಪಟ್ಟಣ, ಮೇ 27– ಕಾವೇರಿ ನದಿ ತೀರದ ಎರಡೂ ಬದಿಯ ಬಫರ್ ಝೋನ್ ಶೀಘ್ರವಾಗಿ ಗುರುತಿಸಿ ಅಕ್ರಮ ಕಟ್ಟಡಗಳಿಗೆ ತ್ವರಿತವಾಗಿ ನೋಟೀಸ್ ನೀಡಿ ತೆರವುಗೊಳಿಸುವಂತೆ ನ್ಯಾಯಮೂರ್ತಿ ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಜಿಲ್ಲಾಧಿಕಾರಿ ಡಾ.ಕುಮಾರ ಸೇರಿದಂತೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸ್ಥಳದಲ್ಲೆ ಸೂಚನೆ ನೀಡಿದರು.



ಕಾವೇರಿ ನದಿ ತೀರ ಪ್ರದೇಶವನ್ನು ಉಪಲೋಕಾಯುಕ್ತರಾದ ಬಿ.ವೀರಪ್ಪ ವೀಕ್ಷಿಸಿದರು.

ಪಟ್ಟಣದ ಹೊರ ವಲಯದ ಚಂದ್ರವನ ಆಶ್ರಮದ ಬಳಿಯ ಬಂಗಾರದೊಡ್ಡಿ ನಾಲೆ ಹಾಗೂ ಪಟ್ಟಣದ ವೆಲ್ಲೆಸ್ಲಿ ಸೇತುವೆ ಬಳಿಯ ಕಾವೇರಿ ನದಿ ತೀರ ಪ್ರದೇಶವನ್ನು ವೀಕ್ಷಿಸಿದ ಅವರು, ಕಾವೇರಿ ನದಿಯನ್ನು ಒತ್ತುವರಿ ಮಾಡಿಕೊಂಡು ಅಕ್ರಮವಾಗಿ ಕಟ್ಟಡಗಳನ್ನು ನಿರ್ಮಿಸಿಕೊಂಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದರ ಜೊತೆಗೆ ನದಿ ತೀರ ಪ್ರದೇಶದ ಬಫರ್ ಝೋನ್ ಗುರುತಿಸಲು ಮುಂದಾಗುವಂತೆ ತಿಳಿಸಿದರು.

ಕೆಲವರು ಕಾವೇರಿ ನದಿ ತೀರ ಪ್ರದೇಶವನ್ನು ಒತ್ತುವರಿ ಮಾಡಿಕೊಂಡು ರೆಸಾರ್ಟ್ ಸೇರಿದಂತೆ ಮೋಜು ಮಸ್ತಿಯ ತಾಣಗಳನ್ನಾಗಿ ನಿರ್ಮಿಸಿಕೊಂಡಿರುವ ಬಗ್ಗೆ ದೂರುಗಳು ಬಂದಿದ್ದು. ನದಿ ಒತ್ತುವರಿ ಮಾಡಿಕೊಂಡು ವಾಣಿಜ್ಯ ಉದ್ದೇಶಕ್ಕೆ ಬಳಸಿಕೊಳ್ಳುತ್ತಿರುವವರ ವಿರುದ್ಧ ತ್ವರಿತವಾಗಿ ನೋಟೀಸ್ ಜಾರಿ ಮಾಡುವಂತೆ ಸೂಚಿಸಿದರು.

ಈ ವೇಳೆ ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್ ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ, ತಹಸೀಲ್ದಾರ್ ಪರಶುರಾಮ್ ಸತ್ತಿಗೇರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಆನಂದ್, ಲೋಕಾಯುಕ್ತದ ಉಪನಿಬಂಧಕರಾದ ಅರವಿಂದ್, ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಸುರೇಶ್ ಬಾಬು, ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಾಲಕಿ ಸಾವು ಪ್ರಕರಣ: ಸೂಕ್ತ ಚಿಕಿತ್ಸೆ ನೀಡದ ತಾಲೂಕು ಆಸ್ಪತ್ರೆ ವಿರುದ್ಧ ಬೃಹತ್ ಪ್ರತಿಭಟನೆ



ಮದ್ದೂರು, ಮೇ 27– ಮಂಡ್ಯದಲ್ಲಿ ಸಂಚಾರ ಪೊಲೀಸರು ಬೈಕ್ ಅಡ್ಡಗಟ್ಟಿದ್ದರ ಪರಿಣಾಮ ತಾಲೂಕಿನ ಗೊರವನಹಳ್ಳಿಯ 3 ವರ್ಷದ ಬಾಲಕಿ ರಿತೀಕ್ಷಾ ಮೃತಪಟ್ಟಿದ್ದ ಹಿನ್ನೆಲೆಯಲ್ಲಿ ಪಟ್ಟಣದ ಗುರುಶಾಂತಪ್ಪ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯೆದುರು ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಗುರುಶಾಂತಪ್ಪ ಸರ್ಕಾರಿ ಆಸ್ಪತ್ರೆಯಲ್ಲೇ ಸೂಕ್ತ ಚಿಕಿತ್ಸೆ ನೀಡಿದ್ದರೆ ಪಾಲಕರು ಮಂಡ್ಯ ಜಿಲ್ಲಾಸ್ಪತ್ರೆಗೆ ಕರೆದುಕೊಂಡು ಹೋಗುವ ಪರಿಸ್ಥಿತಿ ಹಾಗೂ ದುರ್ಘಟನೆ ಸಂಭವಿಸುತ್ತಿರಲಿಲ್ಲ ಎಂದು ಆರೋಪಿಸಿ ಪಟ್ಟಣದ ಆಸ್ಪತ್ರೆಯ ಆಡಳಿತಾಧಿಕಾರಿ ಹಾಗೂ ಮುಖ್ಯ ವೈದ್ಯಾಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಪ್ರಗತಿಪರ ಸಂಘಟನೆಗಳ ಒಕ್ಕೂಟದ ಸಂಚಾಲಕ ನ.ಲಿ.ಕೃಷ್ಣ, ಕರ್ನಾಟಕ ಜನಪರ ವೇದಿಕೆಯ ಜಿಲ್ಲಾಧ್ಯಕ್ಷ ವಿ.ಸಿ.ಉಮಾಶಂಕರ್, ತೆಂಗು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಲಕ್ಷ್ಮಣ್ ಚನ್ನಸಂದ್ರ ಮಾತನಾಡಿದರು. ಈ ವೇಳೆ ಸ್ಥಳಕ್ಕೆ ಆಗಮಿಸಿದ್ದ ಆರೋಗ್ಯ ಇಲಾಖೆಯ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕುಮಾರ್ ಮಾತನಾಡಿ, ಈ ರೀತಿಯ ದುರ್ಘಟನೆ ಆಗಬಾರದಿತ್ತು. ಪಟ್ಟಣದ ಸರ್ಕಾರಿ ಆಸ್ಪತ್ರೆಯ ವೈದ್ಯರೂ ಸೇರಿದಂತೆ ಎಲ್ಲಾ ಆಯಾಮದಲ್ಲೂ ತನಿಖಾ ತಂಡವನ್ನು ರಚಿಸಿ ಸೂಕ್ತ ತನಿಖೆ ನಡೆಸಲಾಗುವುದು ಎಂದ ಅವರು, ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಯಾವುದೇ ಅವ್ಯವಸ್ಥೆಗಳಿದ್ದರೂ ಆ ಬಗ್ಗೆ ಪರಿಶೀಲನೆ ನಡೆಸಿ ಮೇಲಾಧಿಕಾರಿಗಳ ಗಮನಕ್ಕೆ ತಂದು ಕ್ರಮ ಕೈಗೊಳ್ಳಲಾಗುವುದು ಎಂದರು.

ತಹಸೀಲ್ದಾರ್ ಸೀತಾರಾಮು ಮಾತನಾಡಿ, ನಾಯಿ ಕಡಿತದ ಚಿಕಿತ್ಸೆಗೆ ಆಸ್ಪತ್ರೆಗೆ ಬಂದ ಬಾಲಕಿ ರಿತೀಕ್ಷಾಗೆ ಜಿಲ್ಲಾಸ್ಪತ್ರೆಗೆ ಶಿಫಾರಸ್ಸು ಮಾಡಿದ ವೈದ್ಯರು, ಆಂಬುಲೆನ್ಸ್ ವ್ಯವಸ್ಥೆ ಮಾಡಿಕೊಡದೆ ನಿರ್ಲಕ್ಷ್ಯ ತೋರಿದ್ದು ವಿಷಾದನೀಯವಾಗಿದ್ದು ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯುವುದಾಗಿ ಭರವಸೆ ನೀಡಿದರು.

ರೈತ ಆತ್ಮಹತ್ಯೆ

ಕೆ.ಆರ್.ಪೇಟೆ, ಮೇ 27–ಸಾಲದ ಬಾಧೆ ತಾಳಲಾರದೆ ರೈತನೊಬ್ಬ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಬೂಕನಕೆರೆ ಹೋಬಳಿಯ ಮರಟೀಕೊಪ್ಪಲಿನಲ್ಲಿ ಸಂಭವಿಸಿದೆ.



ಗ್ರಾಮದ ನಾಗರಾಜೇಗೌಡರ ಮಗ ಮಂಜೇಗೌಡ(46) ಆತ್ಮಹತ್ಯೆಗೆ ಶರಣಾದ ರೈತ.

ಮೃತ ಮಂಜೇಗೌಡ ಜಮೀನು ಅಭಿವೃದ್ಧಿ ಪಡಿಸುವ ಸಲುವಾಗಿ ಕರ್ನಾಟಕ ಗ್ರಾಮೀಣ ಬ್ಯಾಂಕ್, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ಸಾಲ ಮಾಡಿಕೊಂಡಿದ್ದಲ್ಲದೆ ಚಿನ್ನದ ಮೇಲೆ ಮತ್ತು ಖಾಸಗಿ ವ್ಯಕ್ತಿಗಳಿಂದ ಸಾಲ ಪಡೆದಿದ್ದರು.

ಸಾಲದ ಬಾಧೆ ತಾಳಲಾರದೆ ತಮ್ಮ ಪತ್ನಿಯ ಊರು ವಡ್ಡಗುಡಿ ಗ್ರಾಮಕ್ಕೆ ಹೋಗಿ ಬರುತ್ತೇನೆ ಎಂದು ಹೇಳಿ ಇದೇ ದಾರಿಯಲ್ಲಿ ಸಿಗುವ ಸಾಧಗೋನಹಳ್ಳಿ ಅರಣ್ಯ ಪ್ರದೇಶದಲ್ಲಿ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಗ್ರಾಮಾಂತರ ಪೊಲೀಸರು ತಿಳಿಸಿದ್ದಾರೆ.

ಮೃತ ಮಂಜೇಗೌಡ ಪತ್ನಿ ಶೃತಿ ಹಾಗೂ ಇಬ್ಬರು ಹೆಣ್ಣು ಮಕ್ಕಳನ್ನು ಅಗಲಿದ್ದಾರೆ. ಘಟನೆ ಕುರಿತು ಕೆಆರ್.ಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪೊಲೀಸರ ತಪಾಸಣೆ ವೇಳೆ ಬೈಕ್‌ನಿಂದ ಬಿದ್ದು ಮಗು ಸಾವನ್ನಪ್ಪಿದ ಪ್ರಕರಣ

ಮೃತ ಬಾಲಕಿ ಕುಟುಂಬಕ್ಕೆ ಸಚಿವ ಚಲುವರಾಯಸ್ವಾಮಿ ಸಾಂತ್ವನ

ಮದ್ದೂರು, ಮೇ27– ನಾಯಿ ಕಡಿತಕ್ಕೊಳಗಾಗಿ ಚಿಕಿತ್ಸೆಗೆ ಆಗಮಿಸಿದ ಬಾಲಕಿ ರಿತೀಕ್ಷಾಗೆ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ಕಳುಹಿಸಲು ಅಂಬ್ಯುಲೆನ್ಸ್ ಸೇವೆ ಒದಗಿಸದ ಪಟ್ಟಣದ ಗುರುಶಾಂತಪ್ಪ ಸರ್ಕಾರಿ ಆಸ್ಪತ್ರೆಯ ವೈದ್ಯರು ಹಾಗೂ ಮಾನವೀಯತೆ ಮರೆಯದ ಕರ್ತವ್ಯಲೋಪವೆಸಗಿರುವ ಪೊಲೀಸ್ ಅಧಿಕಾರಿಗಳ ಮೇಲೆ ಸಮಗ್ರ ತನಿಖೆ ನಡೆಸಿ ಮೃತ ಬಾಲಕಿಯ ಪಾಲಕರಿಗೆ ಸೂಕ್ತ ನ್ಯಾಯ ಕೊಡಿಸಲಾಗುವುದು ಎಂದು ಸಚಿವ ಎನ್. ಚಲುವರಾಯಸ್ವಾಮಿ ಭರವಸೆ ನೀಡಿದರು.



ಮಂಡ್ಯ ನಗರದ ಸ್ವರ್ಣಸಂದ್ರಬಳಿ ಸೋಮವಾರ ಪೊಲೀಸರ ಕರ್ತವ್ಯಲೋಪದಿಂದ ಮೃತಳಾದ ಮದ್ದೂರು ತಾಲೂಕಿನ ಗೊರವನಹಳ್ಳಿ ಗ್ರಾಮದ ಮೃತ ಬಾಲಕಿ ರಿತೀಕ್ಷಾ ಪಾಲಕರನ್ನು ಮಂಗಳವಾರ ಭೇಟಿ ಮಾಡಿದಾಗ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮುಂದೆ ಮೃತ ಬಾಲಕಿಯ ಪಾಲಕರು ಆಕ್ರಂದನದಿಂದ ಮಮ್ಮಲ ಮರುಗಿದರು.

ತಾಳ್ಮೆಯಿಂದ ಪಾಲಕರ ಅಳಲು ಆಲಿಸಿದ ಸಚಿವ ಎನ್.ಚಲುವರಾಯಸ್ವಾಮಿ ಹಾಗೂ ಮಂಡ್ಯ ಕ್ಷೇತ್ರದ ಶಾಸಕ ರವಿಕುಮಾರ್ ಗಣಿಗ ಅವರು, ಕರ್ತವ್ಯಲೋಪದ ಬಗ್ಗೆ ಸಮಗ್ರ ತನಿಖೆಗೆ ಈಗಾಗಲೇ ದಕ್ಷಿಣ ವಲಯ ಪೊಲೀಸ್ ಮಹಾ ಅಧೀಕ್ಷಕ ಬೋರಲಿಂಗಯ್ಯ ಅವರಿಗೆ ಸೂಚಿಸಲಾಗಿದೆ. ಅಮಾನತುಗೊಂಡಿರುವ ಎಎಸ್‌ಐಗಳ ಮೇಲೆ ಕ್ರಮ ಜರುಗಿಸುವ ಭರವಸೆ ವ್ಯಕ್ತಪಡಿಸಿದರು.

ನಾಯಿ ಮತ್ತು ಹಾವು ಕಡಿತಕ್ಕೊಳಗಾದ ರೋಗಿಗಳಿಗೆ ಅಗತ್ಯ ಔಷಧ ಪೂರೈಸಲು ಕ್ರಮ ವಹಿಸಲಾಗುವುದು. ಹೆಚ್ಚಿನ ಚಿಕಿತ್ಸೆ ಹಿನ್ನೆಲೆಯಲ್ಲಿ ಮಿಮ್ಸ್‌ಗೆ ಬಾಲಕಿಯನ್ನು ಕರೆದೊಯ್ಯುವಂತೆ ಸೂಚಿಸಿದ ವೈದ್ಯರು, ಅಂಬ್ಯುಲೆನ್ಸ್ ಸೇವೆ ನೀಡದೇ ಉದಾಸೀನ ಮಾಡಿರುವ ಬಗ್ಗೆಯೂ ಸಮಗ್ರ ತನಿಖೆ ಮಾಡಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಶಾಸಕ ರವಿಕುಮಾರ್ ಗಣಿಗ, ಪಿ. ಸಂದರ್ಶ, ಹರೀಶ್‌ಬಾಬು, ಗೊರವನಹಳ್ಳಿ ಪಿ.ರಾಘವ, ಪುರಸಭಾ ಮಾಜಿ ಅಧ್ಯಕ್ಷ ಎಂ.ಪಿ.ಅಮರ್‌ಬಾಬು ಸೇರಿದಂತೆ ಇತರರು ಇದ್ದರು.

12 ವರ್ಷದ ನಂತರ ದೆಹಲಿ ಐಐಟಿ ಪಠ್ಯಕ್ರಮ ಪರಿಷ್ಕರಣೆ

ನವದೆಹಲಿ: ದೆಹಲಿಯ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ(ಐಐಟಿ) 12 ವರ್ಷಗಳ ನಂತರ ತನ್ನ ಪಠ್ಯಕ್ರಮವನ್ನು ಪರಿಷ್ಕರಿಸಿದೆ. ವಿದ್ಯಾರ್ಥಿಗಳ ಮೇಲಿನ ಹೊರೆ ತಗ್ಗಿಸುವುದು ಮತ್ತು ಉದ್ಯಮ ವಲಯದ ಬದಲಾವಣೆಗಳಿಗೆ ಪೂರಕವಾಗಿ ಪರಿಷ್ಕರಣೆ ನಡೆದಿದೆ ಎಂದು ಸಂಸ್ಥೆಯ ನಿರ್ದೇಶಕ ರಂಗನ್ ಬ್ಯಾನರ್ಜಿ ತಿಳಿಸಿದ್ದಾರೆ.

ಮಂಗಳವಾರ ಸುದ್ದಿಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ, 'ಹೊಸ ಅನ್ವೇಷಣೆಯಾದ ಕೃತಕ ಬುದ್ಧಿಮತ್ತೆ (ಆರ್ಟಿಫಿಷಿಯಲ್ ಇಂಟಲಿಜೆನ್ಸ್?ಎಐ) ಮತ್ತು ಸುಸ್ಥಿರತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಪಠ್ಯಕ್ರಮದ ಬದಲಾವಣೆ ಆಗಿದೆ' ಎಂದು ಅವರು ತಿಳಿಸಿದರು. 2013ರಲ್ಲಿ ಪಠ್ಯಕ್ರಮದ ಪರಿಷ್ಕರಣೆ ನಡೆದಿತ್ತು. ಉದ್ಯಮ ಮತ್ತು ಸಮಾಜ ವಿಜ್ಞಾನ ಪರಿಣತರ ಅಭಿಪ್ರಾಯ ಆಧರಿಸಿ ಹೊಸ ಪಠ್ಯ ರೂಪಿಸಲಾಗಿದೆ. 15 ಸದಸ್ಯರ ಸಮಿತಿಯು ಸ್ಟ್ಯಾನ್‌ಫೋರ್ಡ್, ಕ್ಯಾಲಿಫೋರ್ನಿಯಾ ಸೇರಿ ಎಂಟು ಪ್ರತಿಷ್ಠಿತ ಸಂಸ್ಥೆಗಳ ಪಠ್ಯ ಅವಲೋಕಿಸಿ ಪರಿಷ್ಕರಣೆ ಮಾಡಿದೆ ಎಂದರು.

ತರಗತಿಗಳ ಸಂಖ್ಯೆಯನ್ನು 300ರಿಂದ 150ಕ್ಕೆ ತಗ್ಗಿಸಲಾಗಿದೆ. ಕಲಿಕೆಯ ಮೇಲೆ ವೈಯಕ್ತಿಕ ನಿಗಾ ಇಡುವುದು ಇದರಿಂದ ಸಾಧ್ಯವಾಗಲಿದೆ.

ಬಿ.ಟೆಕ್ ಪದವಿ ಜತೆಗೆ ಆನರ್ಸ್ ಪ್ರೋಗ್ರಾಂ ಅಳವಡಿಸಿದ್ದು, ದೆಹಲಿ ಐಐಟಿಯಲ್ಲಿ ಪದವಿಪೂರ್ವ ವಿದ್ಯಾರ್ಥಿಗಳು ಮೂರನೇ ವರ್ಷದ ಅಂತ್ಯದಲ್ಲಿ ಯಾವುದೇ ಎಂ.ಟೆಕ್ ಪದವಿಗೆ ಅರ್ಜಿ ಸಲ್ಲಿಸಬಹುದು. ಐದು ವರ್ಷಗಳಲ್ಲಿ ವಿದ್ಯಾರ್ಥಿಯು ಪದವಿ ಮತ್ತು ಸ್ನಾತಕೋತ್ತರ ಎರಡೂ ಪಡೆಯಲು ಇದು ಅನುವು ಮಾಡಲಿದೆ ಎಂದರು.

ಒಂದನೇ ಪುಟದಿಂದ

ಶಿವರಾಂ ಹೆಬ್ಬಾರ್ ಉಚ್ಚಾಟನೆ

ಒಳಗೆ ಮತ್ತು ಹೊರಗೆ ಪಕ್ಷದ ನಿಯಮಾವಳಿಗಳಿಗೆ ವಿರುದ್ಧವಾಗಿ ನಡೆದುಕೊಂಡಿದ್ದಲ್ಲದೆ, ಪಕ್ಷ ಆಗಿಂದಾಗ್ಯೆ ನೀಡುತ್ತಿದ್ದ ನೋಟಿಸ್‌ಗಳಿಗೂ ಇವರುಗಳು ಯಾವುದೇ ಪ್ರತಿಕ್ರಿಯೆ ನೀಡಿರಲಿಲ್ಲ. ಸದನದಲ್ಲಿ ಸರ್ಕಾರದ ವಿರುದ್ಧ ಪ್ರತಿಪಕ್ಷ ಬಿಜೆಪಿ ಕೆಲವು ತೀರ್ಮಾನಗಳನ್ನು ಕೈಗೊಂಡಾಗ ತಮ್ಮ ಶಾಸಕಾಂಗ ಪಕ್ಷದ ನಾಯಕರ ವಿರುದ್ಧವಾಗಿ ನಡೆದುಕೊಳ್ಳುವ ಮೂಲಕ ಸರ್ಕಾರದ ಬೆಂಬಲಕ್ಕೆ ನಿಲ್ಲುತ್ತಿದ್ದರು.

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಂತರ ನಡೆಯುವ ಔತಣಕೂಟಗಳಲ್ಲೂ ಇವರು ಭಾಗವಹಿಸುತ್ತಿದ್ದರು. ವಿಧಾನಸಭೆಯಿಂದ ರಾಜ್ಯಸಭೆ ಮತ್ತು ವಿಧಾನ ಪರಿಷತ್ತಿಗೆ ನಡೆದ ದ್ವೈವಾರ್ಷಿಕ ಚುನಾವಣೆಗಳಲ್ಲೂ ಇವರು ಕಾಂಗ್ರೆಸ್ ಅಭ್ಯರ್ಥಿಗಳ ಪರವಾಗಿ ಮತ ಚಲಾವಣೆ ಮಾಡಿದ್ದರು.

ಕಳೆದ ಲೋಕಸಭಾ ಚುನಾವಣೆಯಲ್ಲೂ ಅಧಿಕೃತ ಬಿಜೆಪಿ ಅಭ್ಯರ್ಥಿ ವಿರುದ್ಧವಾಗಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಸಾರ್ವಜನಿಕವಾಗಿಯೇ ಬೆಂಬಲ ವ್ಯಕ್ತಪಡಿಸಿದ್ದರು. ಇವರಿಬ್ಬರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ರಾಜ್ಯ ಘಟಕ ಕೇಂದ್ರ ಸಮಿತಿಗೆ ದೂರು ನೀಡಿತ್ತು.

ದೂರಿನ ಆಧಾರದ ಮೇಲೆ ಎರಡು ವರ್ಷಗಳ ನಂತರ ಪಕ್ಷದ ಶಾಸಕರ ವಿರುದ್ಧ ಕೇಂದ್ರ ಶಿಸ್ತು ಸಮಿತಿ ಕ್ರಮ ಕೈಗೊಂಡಿದೆ. ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ಮೂಲತಃ ಕಾಂಗ್ರೆಸ್ಸಿನವರೇ, ಎಚ್.ಡಿ.ಕುಮಾರಸ್ವಾಮಿ ನೇತೃತ್ವದ ಜೆಡಿಎಸ್–ಕಾಂಗ್ರೆಸ್ ಸರ್ಕಾರ ಪತನಗೊಳ್ಳುವಲ್ಲಿ ಇವರ ಪಾತ್ರವೂ ದೊಡ್ಡದಿತ್ತು.

ಕುಮಾರಸ್ವಾಮಿ ವಿರುದ್ಧ ಸಿಡಿದೆದ್ದ 16 ಕಾಂಗ್ರೆಸ್ ಮತ್ತು ಜೆಡಿಎಸ್ ಶಾಸಕರು ಅಂದು ವಿಧಾನಸಭಾ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರಿಂದ ಸರ್ಕಾರ ಬಹುಮತ ಕಳೆದುಕೊಂಡು ಪತನಗೊಂಡಿತ್ತು.

ಕಾಂಗ್ರೆಸ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ ನಂತರ ಇವರುಗಳು ಬಿಜೆಪಿ ಸೇರ್ಪಡೆಗೊಂಡು ಬಿ.ಎಸ್.ಯಡಿಯೂರಪ್ಪ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬರುವಲ್ಲಿ ಕಾರಣಕರ್ತರಾಗಿದ್ದರು.

ಆ ನಂತರ ತೆರವಾದ ತಮ್ಮ ಕ್ಷೇತ್ರಗಳ ಉಪಚುನಾವಣೆಯಲ್ಲಿ ಬಿಜೆಪಿ ಚಿಹ್ನೆಯಡಿ ಪುನರಾಯ್ಕೆಗೊಂಡು ಸಂಪುಟ ದರ್ಜೆ ಸಚಿವರಾಗಿ ಅಧಿಕಾರ ಸವಿದಿದ್ದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಈ ಇಬ್ಬರು ಬಿಜೆಪಿಯಿಂದ ಗೆಲುವು ಸಾಧಿಸಿದರಾದರೂ ಪಕ್ಷ ಅಧಿಕಾರಕ್ಕೆ ಬರದ ಹಿನ್ನೆಲೆಯಲ್ಲಿ ಮತ್ತೆ ಕಾಂಗ್ರೆಸ್ ಕಡೆ ವಾಲಿದರು.

ಕುಂಬ್ಳೆ ಅರಣ್ಯ ಇಲಾಖೆ ರಾಯಭಾರಿ

ಸೇವೆ ಸಲ್ಲಿಸಿದ ಅನುಭವ ಇರುವ ಅನಿಲ್ ಕುಂಬ್ಳೆ ವಿಶ್ವಾದ್ಯಂತ ಖ್ಯಾತಿ ಹೊಂದಿದ್ದು, ಅರಣ್ಯ ಸಂರಕ್ಷಣೆ, ಅರಣ್ಯ ಸಂವರ್ಧನೆ, ವೃಕ್ಷ ಸಂರಕ್ಷಣೆ, ವನ್ಯಜೀವಿ ಸಂರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಿದ್ದಾರೆ ಎಂದರು. ಅನಿಲ್ ಕುಂಬ್ಳೆ ಅವರಿಗೆ ವನ್ಯಜೀವಿಗಳ ಬಗ್ಗೆ ಅಪಾರ ಕಾಳಜಿ ಇದೆ, ಅರಣ್ಯದ ಬಗ್ಗೆ ಪ್ರೀತಿ ಇದೆ. ಅವರು ಯಾವುದೇ ಸಂಭಾವನೆ ಪಡೆಯದೆ ರಾಯಭಾರಿ ಆಗಲು ಸಮ್ಮತಿಸಿದ್ದಾರೆ ಎಂದು ಖಂಡ್ರೆ ಸ್ಪಷ್ಟಪಡಿಸಿದರು.

ಇಸ್ರೋನಲ್ಲಿ ಉದ್ಯೋಗ ಕೊಡಿಸುವುದಾಗಿ ವಂಚನೆ

ಸಂತ್ರಸ್ತೆ ವಿರುದ್ಧವೇ ಎಫ್‌ಐಆರ್ ದಾಖಲಿಸಲು ಹೈಕೋರ್ಟ್ ಸೂಚನೆ!

ಬೆಂಗಳೂರು: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ)ಯಲ್ಲಿ ಉದ್ಯೋಗ ಗಿಟ್ಟಿಸುವ ನೆಪದಲ್ಲಿ ಮಹಿಳೆ ಮತ್ತು ಆಕೆಯ ಸಹಚರರು 1 ಕೋಟಿ ರೂ.ಗೂ ಹೆಚ್ಚು ವಂಚನೆ ಮಾಡಿದ್ದಾರೆ ಎಂದು ಹೇಳಿಕೊಂಡ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸುವಂತೆ ಕರ್ನಾಟಕ ಹೈಕೋರ್ಟ್ ಮಂಗಳವಾರ ಬೆಂಗಳೂರು ಪೊಲೀಸರಿಗೆ ನಿರ್ದೇಶನ ನೀಡಿದೆ. ಈ ವ್ಯವಹಾರವು ಅಸಾಮಾನ್ಯ ಸ್ವರೂಪ ಎಂದು ಉಲ್ಲೇಖಿಸಿ, ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ನೇತೃತ್ವದ ರಜಾ ಪೀಠ ನಿರ್ದೇಶನ ನೀಡಿದೆ.

ಇಸ್ರೋದಂತಹ ಪ್ರತಿಷ್ಠಿತ ಸಂಸ್ಥೆಯಲ್ಲಿ ಉದ್ಯೋಗ ಪಡೆಯಲು ಅರ್ಜಿದಾರರಿಗೆ (ಆರೋಪಿ ಮಹಿಳೆ) ಮತ್ತು ಇತರರಿಗೆ 1.03 ಕೋಟಿ ರೂ. ಪಾವತಿಸಿ ದ್ದಾರೆ ಎಂಬುದು ದೂರುದಾರರ ಆರೋಪ. ಆದ್ದರಿಂದ, ಮೊದಲ ಪ್ರತಿವಾದಿ (ಅನ್ನಪೂರ್ಣೇಶ್ವರಿ ನಗರ ಪೊಲೀಸರು) ದೂರುದಾರರ ವಿರುದ್ಧ ದೂರು ದಾಖಲಿಸುವಂತೆ ನಿರ್ದೇಶಿಸಲಾಗಿದೆ ಎಂದು ನ್ಯಾಯಾಲಯ ತಿಳಿಸಿದೆ. ಇಸ್ರೋದಂತಹ ಪ್ರತಿಷ್ಠಿತ ಸಂಸ್ಥೆಯಲ್ಲಿ ಉದ್ಯೋಗ ಪಡೆಯುವ ಉದ್ದೇಶದಿಂದ ಅರ್ಜಿದಾರರು ಮತ್ತು ಇತರರಿಗೆ 1.03 ಕೋಟಿ ರೂ.ಗಳನ್ನು ಪಾವತಿಸಲಾಗಿದೆ ಎಂದು ದೂರುದಾರ ಹೇಳಿಕೆಯ ಹಿನ್ನೆಲೆಯಲ್ಲಿ ನ್ಯಾಯಾಲಯವು ಈ ಪ್ರಕರಣ ದಾಖಲಿಸಲು ನಿರ್ದೇಶನ ನೀಡಿದೆ.

ಈ ಆದೇಶದ ಪ್ರತಿಯನ್ನು ಇಸ್ರೋ ಅಧ್ಯಕ್ಷರಿಗೆ ಕಳುಹಿಸುವಂತೆ ನ್ಯಾಯಾಲಯ ನಿರ್ದೇಶಿಸಿದ್ದು ಜೂನ್ 4 ರಂದು ನಡೆಯಲಿರುವ ಮುಂದಿನ ವಿಚಾರಣೆಯೊಳಗೆ ಅಂತಹ ಸಂವಹನದ ಪುರಾವೆಯನ್ನು ಸಲ್ಲಿಸುವಂತೆ ರಿಜಿಸ್ಟ್ರಾರ್ ಜ್ಯೂಡಿಷಿಯಲ್ ಅವರನ್ನು ಕೇಳಿತು.

ಕೊಳ್ಳೆಗಾಲ ಮತ್ತು ಚಿಕ್ಕಮಗಳೂರು ಪಟ್ಟಣ ಪೊಲೀಸ್ ಠಾಣೆಗಳಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣಗಳ ಬಗ್ಗೆ ವಿವರಗಳನ್ನು ಒದಗಿಸುವಂತೆ ಅರ್ಜಿದಾರರಾದ ವಿನುತಾ ಎಂ.ಇ.ಗೆ ಸೂಚಿಸಲಾಗಿದೆ. ಆಗಸ್ಟ್ 2024 ರಲ್ಲಿ, ವಿನುತಾ ನಾಗರಭಾವಿಯಲ್ಲಿರುವ ತಮ್ಮ ನಿವಾಸಕ್ಕೆ ಭೇಟಿ ನೀಡಿ ಇಸ್ರೋದಲ್ಲಿ ಗ್ರಾಫಿಕ್ ಡಿಸೈನರ್ ಹುದ್ದೆಯನ್ನು ಪಡೆದುಕೊಳ್ಳಬಹುದೆಂದು ಮನವೊಲಿಸಿದರು ಎಂದು ದೂರುದಾರ ಸಂಜಯ್ ಎನ್ ಆರೋಪಿಸಿದ್ದಾರೆ.

ಆರಂಭದಲ್ಲಿ ಅವರು 37 ಲಕ್ಷ ರೂ.ಗಳನ್ನು ಪಡೆದರು, ನಂತರ ವಿಕ್ಟೋರಿಯಾ ಆಸ್ಪತ್ರೆಯಿಂದ ಫಿಟ್‌ನೆಸ್ ಪ್ರಮಾಣಪತ್ರವನ್ನು ಪಡೆದರು, ಆದರೆ ಯಾವುದೇ ಉದ್ಯೋಗದ ಪ್ರಸ್ತಾಪವನ್ನು ನೀಡಲಿಲ್ಲ. ನಂತರ, ಅವರು ಹೆಚ್ಚುವರಿಯಾಗಿ 23 ಲಕ್ಷ ರೂ.ಗಳನ್ನು ಕೇಳಿದರು, ಅದನ್ನು ತಾನು ನಗದು ರೂಪದಲ್ಲಿ ಪಾವತಿಸಿದ್ದೇನೆಂದು ಆರೋಪಿ ಹೇಳಿದ್ದರು. ಆರೋಪಿ ಇಸ್ರೋದಲ್ಲಿ ಸುಪ್ರಥೋ ಪಾಥೋ, ರೆಡ್ಡಪ್ಪ, ರಾಜೇಂದ್ರ ಎ.ಕೆ. ಮತ್ತು ಅನಿಲ್ ಕುಮಾರ್ ಎಂಬ ವ್ಯಕ್ತಿಗಳಿಗೆ ತನ್ನನ್ನು ಪರಿಚಯಿಸಿದ್ದಾಗಿ ಸಂಜಯ್ ಹೇಳಿಕೊಂಡಿದ್ದು, ಅವರು ಕೂಡ ಹಣಕ್ಕಾಗಿ ಬೇಡಿಕೆ ಇಟ್ಟಿದ್ದರು ಎಂದು ಆರೋಪಿಸಿದ್ದಾರೆ.

ಉದ್ಯೋಗದ ಆಫರ್ ಸನ್ನಿಹಿತವಾಗಿದೆ ಎಂದು ನಂಬಿ, ಅಂತಿಮವಾಗಿ ಒಟ್ಟು 1.03 ಕೋಟಿ ರೂ.ಗಳನ್ನು ಪಾವತಿಸಿದ್ದೇನೆಂದು ಸಂಜಯ್ ಹೇಳಿದ್ದಾರೆ. ಯಾವುದೇ ಉದ್ಯೋಗ ಸಿಗದಿದ್ದಾಗ ಮತ್ತು ಹಣವನ್ನು ಹಿಂತಿರುಗಿಸದಿದ್ದಾಗ, ಆತ ದೂರು ದಾಖಲಿಸಿದ್ದಾರೆ.

ಜಾಮೀನು ಕೋರುವಾಗ, ವಿನುತಾ ಅವರ ವಕೀಲರು ಅವರು ಗೃಹಿಣಿ ಮತ್ತು ಪ್ರಕರಣದ ಇತರ ಸಹ–ಆರೋಪಿಗಳಿಗೆ ಈಗಾಗಲೇ ಜಾಮೀನು ನೀಡಲಾಗಿದೆ ಎಂದು ವಾದಿಸಿದರು. ಆದಾಗ್ಯೂ, ವಿನುತಾ ಅವರಿಗೆ ಕ್ರಿಮಿನಲ್ ಒಳಗೊಳ್ಳುವಿಕೆಯ ಇತಿಹಾಸವಿದೆ ಎಂದು ನ್ಯಾಯಾಲಯ ಗಮನಿಸಿದೆ.

ಹಿಂದಿನ ಪ್ರಕರಣಗಳಲ್ಲಿ ಭಾಗಿಯಾಗಿರುವುದು ಅವರ ಪತ್ನಿಯೇ ಹೊರತು ಅವರ ಪತಿಯಲ್ಲ ಎಂದು ಅವರ ವಕೀಲರು ಪ್ರತಿವಾದ ಮಂಡಿಸಿದರು ಮತ್ತು ಷರತ್ತುಬದ್ಧ ಜಾಮೀನನ್ನು ಪರಿಗಣಿಸುವಂತೆ ನ್ಯಾಯಾಲಯವನ್ನು ಒತ್ತಾಯಿಸಿದರು. ನ್ಯಾಯಾಲಯ ಜೂನ್ 4ಕ್ಕೆ ವಿಚಾರಣೆಯನ್ನು ಮುಂದೂಡಿದೆ.

ರಾಜ್ಯದ ಉಪನೋಂದಣಾಧಿಕಾರಿ ಕಚೇರಿಗಳು ಭಾನುವಾರವೂ ಕೆಲಸ ಮಾಡಲು ಆದೇಶ

ಬೆಂಗಳೂರು, ಮೇ 27– ಸಾರ್ವಜನಿಕರ ಉಪಯೋಗಕ್ಕಾಗಿ ರಾಜ್ಯದಲ್ಲಿ ಜಿಲ್ಲೆಗೆ ಒಂದು ಉಪನೋಂದಣಾಧಿಕಾರಿಗಳ ಕಚೇರಿಯು 2 ಮತ್ತು 4ನೇ ಶನಿವಾರ ಹಾಗೂ ಎಲ್ಲಾ ಭಾನುವಾರಗಳಂದು ಕಾರ್ಯನಿರ್ವಹಿಸಲು ಸರ್ಕಾರ ಆದೇಶ ಹೊರಡಿಸಿದೆ.

ರಾಜ್ಯ ರಾಜಧಾನಿ ಬೆಂಗಳೂರಿನ ಬಸವನಗುಡಿ ಉಪನೋಂದಣಾಧಿಕಾರಿಗಳ ಕಚೇರಿ, ಗಾಂಧಿನಗರ ಉಪನೋಂದಣಾಧಿಕಾರಿಗಳ ಕಚೇರಿ, ಜಯನಗರ ಉಪನೋಂದಣಾಧಿಕಾರಿಗಳ ಕಚೇರಿ, ರಾಜಾಜಿನಗರದ ಮಾದನಾಯಕನಹಳ್ಳಿ ಉಪನೋಂದಣಾಧಿಕಾರಿಗಳ ಕಚೇರಿ, ಶಿವಾಜಿನಗರ ಉಪನೋಂದಣಾಧಿಕಾರಿಗಳ ಕಚೇರಿಗಳು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಉಪನೋಂದಣಾಧಿಕಾರಿಗಳ ಕಚೇರಿ ಕೆಲಸದ ದಿನ ಮತ್ತು ರಜಾ ದಿನಗಳಂದೂ ಕಾರ್ಯ ನಿರ್ವಹಿಸಲಿವೆ.

ಜೊತೆಗೆ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಾದ ಚಿತ್ರದುರ್ಗ ಉಪನೋಂದಣಾಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಉಪನೋಂದಣಾಧಿಕಾರಿಗಳ ಕಚೇರಿ, ದಾವಣಗೆರೆ ಉಪನೋಂದಣಾಧಿಕಾರಿಗಳ ಕಚೇರಿ, ರಾಮನಗರ ಉಪನೋಂದಣಾಧಿಕಾರಿಗಳ ಕಚೇರಿ, ಶಿವಮೊಗ್ಗ ಉಪನೋಂದಣಾಧಿಕಾರಿಗಳ ಕಚೇರಿ, ತುಮಕೂರು ಜಿಲ್ಲೆಯ ಕುಣಿಗಲ್ ಉಪನೋಂದಣಾಧಿಕಾರಿಗಳ ಕಚೇರಿ, ಕೋಲಾರ ಉಪನೋಂದಣಾಧಿಕಾರಿಗಳ ಕಚೇರಿ, ಬೆಳಗಾವಿ ಜಿಲ್ಲೆಯ ಮೂಡಲಗಿ ಉಪನೋಂದಣಾಧಿಕಾರಿಗಳ ಕಚೇರಿ, ಬಾಗಲಕೋಟೆ ಜಿಲ್ಲೆಯ ಇಳಕಲ್ ಉಪನೋಂದಣಾಧಿಕಾರಿಗಳ ಕಚೇರಿ, ಧಾರವಾಡ ಜಿಲ್ಲೆಯ ಹುಬ್ಬಳ್ಳಿ ಉತ್ತರ ಉಪನೋಂದಣಾಧಿಕಾರಿಗಳ ಕಚೇರಿ, ಗದಗ್ ಜಿಲ್ಲೆಯ ಗಜೇಂದ್ರಗಢ ಉಪನೋಂದಣಾಧಿಕಾರಿಗಳ ಕಚೇರಿ, ಕಾರವಾರ/ ಉತ್ತರಕನ್ನಡದ ಕುಮಟಾ ಉಪನೋಂದಣಾಧಿಕಾರಿಗಳ ಕಚೇರಿ, ಹಾವೇರಿ ಉಪನೋಂದಣಾಧಿಕಾರಿಗಳ ಕಚೇರಿ, ವಿಜಯಪುರ ಉಪನೋಂದಣಾಧಿಕಾರಿಗಳ ಕಚೇರಿ, ಚಾಮರಾಜನಗರ ಜಿಲ್ಲೆಯ ಕುದೇರು ಉಪನೋಂದಣಾಧಿಕಾರಿಗಳ ಕಚೇರಿ, ಹಾಸನ ಜಿಲ್ಲೆಯ ಸಕಲೇಶಪುರ ಉಪನೋಂದಣಾಧಿಕಾರಿಗಳ ಕಚೇರಿ, ಕೊಡಗು ಜಿಲ್ಲೆಯ ಮಡಿಕೇರಿ ಉಪನೋಂದಣಾಧಿಕಾರಿಗಳ ಕಚೇರಿ, ಚಿಕ್ಕಮಗಳೂರು ಉಪನೋಂದಣಾಧಿಕಾರಿಗಳ ಕಚೇರಿ, ದಕ್ಷಿಣಕನ್ನಡ ಜಿಲ್ಲೆಯ ಮಂಗಳೂರು ಸಿಟಿ ಉಪನೋಂದಣಾಧಿಕಾರಿಗಳ ಕಚೇರಿ, ಮಂಡ್ಯ ಜಿಲ್ಲೆಯ ಮಳವಳ್ಳಿ ಉಪನೋಂದಣಾಧಿಕಾರಿಗಳ ಕಚೇರಿ, ಮೈಸೂರು ಜಿಲ್ಲೆಯ ಮೈಸೂರು ದಕ್ಷಿಣ ಉಪನೋಂದಣಾಧಿಕಾರಿಗಳ ಕಚೇರಿ, ಉಡುಪಿ ಉಪನೋಂದಣಾಧಿಕಾರಿಗಳ ಕಚೇರಿ, ಕೊಪ್ಪಳ ಜಿಲ್ಲೆಯ ಗಂಗಾವತಿ ಉಪನೋಂದಣಾಧಿಕಾರಿಗಳ ಕಚೇರಿ, ಬೀದರ್ನ ಉಪನೋಂದಣಾಧಿಕಾರಿಗಳ ಕಚೇರಿ, ಗುಲ್ಬರ್ಗಾ ಉಪನೋಂದಣಾಧಿಕಾರಿಗಳ ಕಚೇರಿ, ರಾಯಚೂರು ಉಪನೋಂದಣಾಧಿಕಾರಿಗಳ ಕಚೇರಿ, ಯಾದಗಿರಿ ಉಪನೋಂದಣಾಧಿಕಾರಿಗಳ ಕಚೇರಿ, ಬಳ್ಳಾರಿ ಉಪನೋಂದಣಾಧಿಕಾರಿಗಳ ಕಚೇರಿ ಹಾಗೂ ವಿಜಯನಗರ ಜಿಲ್ಲೆಯ ಹೂವಿನಹಡಗಲಿ ಉಪನೋಂದಣಾಧಿಕಾರಿಗಳ ಕಚೇರಿಗಳು ಕಾರ್ಯನಿರ್ವಹಿಸಲಿವೆ ಎಂದು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ.

ಸಾರ್ವಜನಿಕರು ಸಂಬಂಧಪಟ್ಟ ಜಿಲ್ಲೆಯ ಯಾವುದೇ ಸ್ವತ್ತುಗಳನ್ನು ಆ ಸಂಬಂಧಿಸಿದ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡೆದುಕೊಳ್ಳಬೇಕು ಎಂದು ನೋಂದಣಿ ಮಹಾಪರೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಳೆ ಕಾರಣ ಇಂದಿನ ರೇಸ್ ಮೇ 30ಕ್ಕೆ ಮುಂದೂಡಿಕೆ

ಮೈಸೂರು,ಮೇ 27(ಪಿಎಂ)– ಮೈಸೂರು ಬೇಸಿಗೆ ರೇಸ್ ಸಂಬಂಧ ಮೇ 28ರಂದು ನಿಗದಿಯಾಗಿದ್ದ ಮೊದಲ ದಿನದ ರೇಸ್ ಅನ್ನು ಮಳೆಯ ಕಾರಣ ಮೇ 30ಕ್ಕೆ ಮುಂದೂಡಲಾಗಿದೆ. ಕಳೆದ ಕೆಲ ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ರೇಸ್ ಟ್ರಾಕ್‌ನ ಸ್ಥಿತಿಯು ರೇಸಿಂಗ್‌ಗೆ ಅನುಕೂಲವಾಗಿಲ್ಲದ ಕಾರಣ ಮೈಸೂರು ರೇಸ್ ಕ್ಲಬ್ ಲಿಮಿಟೆಡ್‌ನ ಸ್ಟೀವರ್ಡ್‌ಗಳು, ಮೈಸೂರು ಬೇಸಿಗೆ ರೇಸ್‌ಗಳು ಮೊದಲ ದಿನದ ರೇಸ್ ಅನ್ನು ಮುಂದೂಡಿ ನಿರ್ಧಾರ ಕೈಗೊಂಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಮಾಜಿ ಸಚಿವ ವೀರಕುಮಾರ ಪಾಟೀಲ ಪುತ್ರ ಪ್ರೀತಮ್ ಅರೆಸ್ಟ್

ಚಿಕ್ಕೋಡಿ, ಮೇ 27– ವರದಕ್ಷಿಣೆ ಕಿರುಕುಳ ಹಾಗೂ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ವೀರಕುಮಾರ ಪಾಟೀಲ ಪುತ್ರ ಪ್ರೀತಮ್‌ನನ್ನು ಪುಣೆ ಪೊಲೀಸರು ಬಂಧಿಸಿದ್ದಾರೆ. ವೈಷ್ಣವಿ ಹಗವಣೆ ವರದಕ್ಷಿಣೆ ಕಿರುಕುಳ ಹಾಗೂ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಮುಖ ಆರೋಪಿಗಳಾದ ವೈಷ್ಣವಿ ಮಾವ ರಾಜೇಂದ್ರ, ಮೈದುನ ಸುಶೀಲ್‌ಗೆ ಆಶ್ರಯ ಹಾಗೂ ಆರ್ಥಿಕ ಸಹಾಯ ಆರೋಪದಡಿ ಪ್ರೀತಮ್‌ನನ್ನು ಬಂಧಿಸಲಾಗಿದೆ. ಕೊಲೆ ಆರೋಪಿಗಳು ಅಜೀತ್ ಪವಾರ್ ಬಣದ ಎನ್‌ಸಿಪಿ ಪಕ್ಷದ ಮುಖಂಡರಾಗಿರುವ ಹಿನ್ನೆಲೆಯಲ್ಲಿ ಮಹಾರಾಷ್ಟ್ರದಲ್ಲಿ ವೈಷ್ಣವಿ ಕೊಲೆ ಪ್ರಕರಣ ಸಂಚಲನ ಮೂಡಿಸಿದೆ.

ವಜಾಗೊಂಡ ಉದ್ಯೋಗಿಗೆ ನಿವೃತ್ತಿ ನಂತರದ ಸೌಲಭ್ಯ ಇಲ್ಲ: ಕೇಂದ್ರ ಸರ್ಕಾರ

ನವದೆಹಲಿ: ಪಿಂಚಣಿ ನಿಯಮಗಳಿಗೆ ತಿದ್ದುಪಡಿ ತಂದಿರುವ ಕೇಂದ್ರ ಸರ್ಕಾರವು ಸಾರ್ವಜನಿಕ ವಲಯದ ಉದ್ಯಮಗಳಲ್ಲಿ (ಪಿಎಸ್‌ಯು) ವಜಾಗೊಂಡ ಅಥವಾ ತಗೆದುಹಾಕಲಾದ ಉದ್ಯೋಗಿಗಳಿಗೆ ಇನ್ನು ಮುಂದೆ ನಿವೃತ್ತಿ ನಂತರದ ಸೌಲಭ್ಯಗಳು ಸಿಗುವುದಿಲ್ಲ. ಅವುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂದು ತಿಳಿಸಿದೆ.

ಸಿಬ್ಬಂದಿ ಸುಧಾರಣಾ ಇಲಾಖೆಯು ಕೇಂದ್ರ ನಾಗರಿಕ ಸೇವಾ (ಪಿಂಚಣಿ) ಅಧಿನಿಯಮ–2021ರಲ್ಲಿ ಹಲವು ಬದಲಾವಣೆಗಳನ್ನು ಚಾಲ್ತಿಗೆ ತಂದಿದೆ.

ದುರ್ನಡತೆ ಆಧಾರದಲ್ಲಿ ಸರ್ಕಾರಿ ಉದ್ಯೋಗಿಯ ವಜಾ ಅಥವಾ ಹೊರಹಾಕುವ ನಿರ್ಧಾರ ಪರಿಶೀಲಿಸುವ ಅಧಿಕಾರವು ಆಡಳಿತ ಸುಧಾರಣಾ ಇಲಾಖೆಗೆ ಇದೆ ಎಂದೂ ಸರ್ಕಾರ ತಿಳಿಸಿದೆ.

ಇತ್ತೀಚೆಗೆ ಅಧಿಸೂಚನೆಗೊಂಡ ಕೇಂದ್ರ ನಾಗರಿಕ ಸೇವಾ (ಪಿಂಚಣಿ) ತಿದ್ದುಪಡಿ ನಿಯಮ–2025ರ ಪ್ರಕಾರ, 'ದುರ್ನಡತೆ ಆಧಾರದ ಮೇಲೆ ಸಾರ್ವಜನಿಕ ವಲಯದ ಉದ್ಯೋಗಿ ವಿರುದ್ಧ ವಜಾ ಕ್ರಮ ಕೈಗೊಂಡಲ್ಲಿ ಆತನ ನಿವೃತ್ತಿ ನಂತರದ ಸೌಲಭ್ಯಗಳನ್ನು ಮುಟ್ಟುಗೋಲು ಹಾಕಿಕೊಳ್ಳಬಹುದು. ಸರ್ಕಾರದ ಅಡಿಯಲ್ಲಿ ಸಲ್ಲಿಸಿದ ಸೇವೆಗೂ ಇದು ಅನ್ವಯ ಆಗಲಿದೆ' ಎಂದು ಹೇಳಿದೆ. ಈ ಹಿಂದಿನ ನಿಯಮಗಳಲ್ಲಿ ಸಾರ್ವಜನಿಕ ವಲಯದ ಉದ್ಯೋಗಿಯ ನಿವೃತ್ತಿ ನಂತರದ ಸೌಲಭ್ಯಗಳ ಮುಟ್ಟುಗೋಲು ಅವಕಾಶ ಇರಲಿಲ್ಲ.

ಅಲ್ಲದೇ ಉದ್ಯೋಗಿಯ ಪಿಂಚಣಿ ಮತ್ತು ಕುಟುಂಬ ಪಿಂಚಣಿಯ ಮುಂದುವರಿಕೆ ಅಥವಾ ಮಂಜೂರಾತಿ ಅವಕಾಶಗಳು ಭವಿಷ್ಯದ ಆತನ ಉತ್ತಮ ನಡವಳಿಕೆಯನ್ನು ಅವಲಂಬಿಸಿರುತ್ತದೆ ಮತ್ತು ಸಹಾನುಭೂತಿ ಭತ್ಯೆಗೂ ಇದು ಅನ್ವಯ ಆಗಲಿದೆ ಎಂದು ಹೊಸ ನಿಯಮ ಹೇಳುತ್ತದೆ.

2003ರ ಡಿಸೆಂಬರ್ 31ರಂದು ಮತ್ತು ಅದಕ್ಕೂ ಮುನ್ನ ನೇಮಕವಾದ ಸರ್ಕಾರಿ ಉದ್ಯೋಗಿಗಳಿಗೆ ಕೇಂದ್ರ ಸಾರ್ವಜನಿಕ ಸೇವಾ(ಪಿಂಚಣಿ) ನಿಯಮವು–2021 ಅನ್ವಯಿಸುತ್ತದೆ. ರೈಲ್ವೆ ಉದ್ಯೋಗಿಗಳು, ತಾತ್ಕಾಲಿಕ ಮತ್ತು ದಿನ ಗುತ್ತಿಗೆ ಆಧಾರದ ಉದ್ಯೋಗಿಗಳು, ಐಎಎಸ್, ಐಪಿಎಸ್ ಮತ್ತು ಭಾರತೀಯ ಅರಣ್ಯ ಸೇವೆ ಸೇರಿ ಇತರರಿಗೆ ಇದು ಅನ್ವಯಿಸುವುದಿಲ್ಲ.

ಸರ್ದಾರ್ ವಲ್ಲಭಭಾಯಿ ಪಟೇಲ್ ಸಲಹೆ ಸ್ವೀಕರಿಸಿದ್ದರೆ 75 ವರ್ಷದ ಹಿಂದೆಯೇ ಭಯೋತ್ಪಾದಕರ ಹಾವಳಿ ತಪ್ಪುತ್ತಿತ್ತು!

ಗಾಂಧಿನಗರ, ಮೇ 27– ಮೇ 26, 2014ರಂದು, ನಾನು ಮೊದಲ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದೆ. ಆ ಸಮಯದಲ್ಲಿ, ಭಾರತದ ಆರ್ಥಿಕತೆ ವಿಶ್ವದಲ್ಲಿ 11ನೇ ಸ್ಥಾನದಲ್ಲಿತ್ತು. ಇಂದು, ಭಾರತ ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿದೆ. ನಾವು ಈಗ ಜಪಾನ್ ಅನ್ನು ಹಿಂದಿಕ್ಕಿದ್ದೇವೆ ಎಂಬುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ.

ನಾವು ಆರನೇ ಸ್ಥಾನದಿಂದ ಐದನೇ ಸ್ಥಾನಕ್ಕೆ ಆರ್ಥಿಕತೆಯಲ್ಲಿ ಏರಿಕೆಯಾದಾಗ ವಿಶೇಷವಾಗಿ ಯುವಕರಲ್ಲಿ ಉತ್ಸಾಹ ಕಂಡು ಬಂತು. ಭಾರತವು 250 ವರ್ಷಗಳ ಕಾಲ ನಮ್ಮನ್ನು ಆಳಿದ ರಾಷ್ಟ್ರವಾದ ಯುನೈಟೆಡ್ ಕಿಂಗ್‌ಡಮ್ ಅನ್ನು ಹಿಂದಿಕ್ಕಿದೆ ಎಂಬುದು ನಮಗೆ ಹೆಮ್ಮೆಯ ಸಂಗತಿ ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ತವರು ರಾಜ್ಯ ಗುಜರಾತ್‌ನಲ್ಲಿ ಹೇಳಿದ್ದಾರೆ.

ಪ್ರಾಕ್ಸಿ ಯುದ್ಧ ಅಲ್ಲ: ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಇನ್ನು ಮುಂದೆ ಪ್ರಾಕ್ಸಿ ಯುದ್ಧ ಎಂದು ಕರೆಯಲಾಗುವುದಿಲ್ಲ. ಮೇ 6ರ ನಂತರ ಮೃತಪಟ್ಟ ಭಯೋತ್ಪಾದಕರಿಗೆ ಪಾಕಿಸ್ತಾನದಲ್ಲಿ ಸರ್ಕಾರಿ ಗೌರವಗಳನ್ನು ನೀಡಲಾಯಿತು. ಪಾಕಿಸ್ತಾನದ ಧ್ವಜಗಳನ್ನು ಅವರ ಶವಪೆಟ್ಟಿಗೆಯ ಮೇಲೆ ಇರಿಸಲಾಯಿತು. ಪಾಕಿಸ್ತಾನ ಸೈನ್ಯ ಅವರಿಗೆ ನಮಸ್ಕರಿಸಿತು. ಭಯೋತ್ಪಾದಕ ಚಟುವಟಿಕೆಗಳು ಪ್ರಾಕ್ಸಿ ಯುದ್ಧವಲ್ಲ. ಅದರ ಉತ್ತಮವಾಗಿ ಯೋಜಿತ ಯುದ್ಧ ತಂತ್ರ ಎಂದು ಇದು ಸಾಬೀತುಪಡಿಸುತ್ತದೆ ಎಂದರು.

ನೀವು ಈಗಾಗಲೇ ಯುದ್ಧದಲ್ಲಿದ್ದು, ಅದಕ್ಕೆ ತಕ್ಕಂತೆ ಪ್ರತಿಕ್ರಿಯೆಯನ್ನು ಪಡೆಯುತ್ತೀರಿ. ನಾವು ಯಾರೊಂದಿಗೂ ದ್ವೇಷವನ್ನು ಬಯಸುವುದಿಲ್ಲ. ಶಾಂತಿಯುತವಾಗಿ ಬದುಕಲು ಬಯಸುತ್ತೇವೆ. ನಾವು


ನರೇಂದ್ರ ಮೋದಿ

ಲೋಕ ಕಲ್ಯಾಣಕ್ಕೆ ಕೊಡುಗೆ ನೀಡಲು ಸಾಧ್ಯವಾಗುವಂತೆ ಪ್ರಗತಿ ಹೊಂದಲು ಬಯಸುತ್ತೇವೆ ಎಂದರು.

1947ರಲ್ಲಿ ಭಾರತ ವಿಭಜನೆಯಾದ ಸಮಯವನ್ನು ನೆನಪಿಸಿಕೊಂಡ ಪ್ರಧಾನಿ ಮೋದಿ, ಪಾಕಿಸ್ತಾನವು ಭಯೋತ್ಪಾದಕರ ಸಹಾಯದಿಂದ ಕಾಶ್ಮೀರದ ಒಂದು ಭಾಗವನ್ನು ಸ್ವಾಧೀನಪಡಿಸಿಕೊಂಡಿತು ಎಂದು ಹೇಳಿದರು. ಆ ದಿನ ಆ ಭಯೋತ್ಪಾದಕರು ಕೊಲ್ಲಲ್ಪಟ್ಟಿದ್ದರೆ, ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಸಲಹೆಯನ್ನು ಸ್ವೀಕರಿಸಿದ್ದರೆ, ಭಾರತದಲ್ಲಿ ಕಳೆದ 75 ವರ್ಷಗಳಿಂದ ನಡೆಯುತ್ತಿರುವ ಭಯೋತ್ಪಾದಕ ಚಟುವಟಿಕೆಗಳ ಸರಣಿ ಅಂದೇ ನಿಲ್ಲುತ್ತಿತ್ತು ಎಂದು ಅಭಿಪ್ರಾಯಪಟ್ಟರು.

1947ರಲ್ಲಿ, ಭಾರತ ಮಾತೆಯನ್ನು ತುಂಡು ತುಂಡಾಗಿ ಹರಿದು ಹಾಕಲಾಯಿತು. ಸರಪಳಿಗಳನ್ನು ಕತ್ತರಿಸಬೇಕಿತ್ತು, ಆದರೆ ತೋಳುಗಳನ್ನು ಕತ್ತರಿಸಲಾಯಿತು. ದೇಶವನ್ನು ಮೂರು ಭಾಗಗಳಾಗಿ ವಿಂಗಡಿಸಲಾಯಿತು. ಅದೇ ರಾತ್ರಿ, ಕಾಶ್ಮೀರದ ಮಣ್ಣಿನಲ್ಲಿ ಮೊದಲ ಭಯೋತ್ಪಾದಕ ದಾಳಿ ನಡೆಯಿತು. ಪಾಕಿಸ್ತಾನವು ಮುಜಾಹಿದ್ದೀನ್‌ಗಳ ಹೆಸರಿನಲ್ಲಿ ಭಯೋತ್ಪಾದಕರ ಸಹಾಯದಿಂದ ಭಾರತದ ಒಂದು ಭಾಗವನ್ನು ವಶಪಡಿಸಿಕೊಂಡಿತು.

ಆ ದಿನ ಈ ಮುಜಾಹಿದ್ದೀನ್‌ಗಳನ್ನು ಕೊಂದು ಸರ್ದಾರ್ ಪಟೇಲ್ ಅವರ ಸಲಹೆಯನ್ನು ಸ್ವೀಕರಿಸಿದ್ದರೆ, ಕಳೆದ 75 ವರ್ಷಗಳಿಂದ ನಡೆಯುತ್ತಿರುವ ಈ ಸರಣಿ (ಭಯೋತ್ಪಾದಕ ಘಟನೆಗಳು) ಕಾಣುತ್ತಿರಲಿಲ್ಲ. ದೇಹವು ಎಷ್ಟೇ ಬಲಿಷ್ಠವಾಗಿದ್ದರೂ ಅಥವಾ ಆರೋಗ್ಯಕರವಾಗಿದ್ದರೂ, ಒಂದೇ ಒಂದು ಮುಳ್ಳು ಕೂಡ ನಿರಂತರ ನೋವನ್ನು ಉಂಟು ಮಾಡಬಹುದು. ನಮ್ಮ ಸರ್ಕಾರ ಮುಳ್ಳನ್ನು ತೆಗೆದುಹಾಕಬೇಕು ಎಂದು ನಿರ್ಧರಿಸಿದೆ ಎಂದರು.

ಯುದ್ಧದಲ್ಲಿ ಪಾಕಿಸ್ತಾನ, ಭಾರತವನ್ನು ಸೋಲಿಸಲು ಸಾಧ್ಯವಿಲ್ಲ. ಅದಕ್ಕಾಗಿಯೇ ಅವರು ಪರೋಕ್ಷ ಯುದ್ಧವನ್ನು ಪ್ರಾರಂಭಿಸಿದ್ದಾರೆ. ಭಯೋತ್ಪಾದಕರು ಭಾರತದ ಮೇಲೆ ದಾಳಿ ಮಾಡುತ್ತಲೇ ಇದ್ದರೂ ಭಾರತ ಸಹಿಸಿಕೊಂಡು ಬಂದಿದೆ ಎಂದರು.

ಬೆಂಗಳೂರಲ್ಲಿ ಮತ್ತೆ ಟೋಯಿಂಗ್



ಬೆಂಗಳೂರು, ಮೇ 27– ಇತ್ತೀಚೆಗಷ್ಟೆ ಉಪ ಮುಖ್ಯಮಂತ್ರಿ ಡಿಕೆ ಶಿವ ಕುಮಾರ್ ಅವರು ಬೆಂಗಳೂರು ನಗರದಲ್ಲಿ ಮತ್ತೆ ಟೋಯಿಂಗ್ ಆರಂಭಿಸುವುದಾಗಿ ಹೇಳಿದ್ದರು. ಇದರ ಬೆನ್ನಲ್ಲೇ ಗೃಹ ಸಚಿವ ಜಿ. ಪರಮೇಶ್ವರ್ ನಗರದಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿದೆ. ಈ ಟ್ರಾಫಿಕ್ ಸಮಸ್ಯೆಗೆ ಕಡಿವಾಣ ಹಾಕಲು ಮತ್ತೆ ಟೋಯಿಂಗ್ ಪ್ರಾರಂಭಿಸುತ್ತೇವೆ ಎಂದು ಅಧಿಕೃತವಾಗಿ ಹೇಳಿಕೆ ನೀಡಿದ್ದಾರೆ.



ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹಿಂದೆ ಟ್ರಾಫಿಕ್ ಸಮಸ್ಯೆಗೆ ಟೋಯಿಂಗ್ ಮಾಡಲಾಗುತ್ತಿತ್ತು. ಮತ್ತೆ ಈಗ ಅದನ್ನು ಜಾರಿಗೆ ತರುತ್ತೇವೆ. ಪೊಲೀಸ್ ಸಿಬ್ಬಂದಿ ಮತ್ತು ಹೋಮ್ ಗಾರ್ಡ್ಸ್‌ಗಳನ್ನು ಬಳಸಿಕೊಂಡು ಟೋಯಿಂಗ್ ಮಾಡುತ್ತೇವೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ಟ್ರಾಫಿಕ್ ಸಮಸ್ಯೆ ಹೆಚ್ಚುತ್ತಿದೆ. ಇದರ ಬಗ್ಗೆ ಸಂಪೂರ್ಣ ಮಾಹಿತಿ ತೆಗೆದುಕೊಂಡಿದ್ದೇನೆ. ಬಿಬಿಎಂಪಿ ಮತ್ತು ಪೊಲೀಸರು ಒಟ್ಟಾಗಿ ಕಾರ್ಯಾಚರಣೆ ನಡೆಸಿದರೆ ಟ್ರಾಫಿಕ್ ಸಮಸ್ಯೆ ಬಗೆಹರಿಯುತ್ತದೆ. ಬೆಂಗಳೂರಿನ 19 ಕಡೆ ಹೆಚ್ಚು ಸಂಚಾರ ದಟ್ಟಣೆ ಉಂಟಾಗುತ್ತಿದೆ. ಇದಕ್ಕೆ ಕಾರಣವನ್ನು ಟ್ರಾಫಿಕ್ ಪೊಲೀಸರು ಗುರುತಿಸಿದ್ದಾರೆ. ಒಂದು ವಾರದ ಒಳಗೆ ವರದಿ ನೀಡುವಂತೆ ಸೂಚನೆ ನೀಡಿದ್ದೇನೆ. ಟ್ರಾಫಿಕ್ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಲು ಕೆಲಸ ಮಾಡುತ್ತಿದ್ದೇವೆ ಎಂದರು.

9 ಸಾವಿರ ಸಿಸಿ ಕ್ಯಾಮೆರಾ ಅಳವಡಿಕೆ: ಮಹಿಳಾ ಮತ್ತು ಮಕ್ಕಳ ಸುರಕ್ಷತೆ ಬಗ್ಗೆ ಸೂಕ್ತ ಕ್ರಮ ತೆಗೆದುಕೊಂಡಿದ್ದೇವೆ. ಮಹಿಳೆಯರ ಸುರಕ್ಷತೆ ಸಲುವಾಗಿ ಬೆಂಗಳೂರು ನಗರದಲ್ಲಿ 9 ಸಾವಿರ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ನಗರದಲ್ಲಿ 30 ಸೇಫ್ಟಿ ಐಲ್ಯಾಂಡ್ ಸ್ಥಾಪಿಸಿದ್ದೇವೆ. ರಾತ್ರಿ ವೇಳೆ ಮಹಿಳೆಯರು ಓಡಾಡುವ ಡಾರ್ಕ್ ಏರಿಯಾಗಳಲ್ಲಿ ಹೆಚ್ಚು ಗಮನ ಹರಿಸುತ್ತೇವೆ. ನಿರ್ಭಯ ಯೋಜನೆಯಡಿ ಕೇಂದ್ರ ಸರ್ಕಾರ 667 ಕೋಟಿ ರೂ. ನೀಡಿದೆ. ಈ ಹಣವನ್ನು ಮಹಿಳೆಯರ ಸುರಕ್ಷತೆಗಾಗಿ ಖರ್ಚು ಮಾಡಿದ್ದೇವೆ. ಬೆಂಗಳೂರು ಸುರಕ್ಷಿತ ನಗರಗಳಲ್ಲಿ ಒಂದು ಎಂದು ಹೈದರಾಬಾದ್‌ನ ಸಂಸ್ಥೆಯೊಂದು ವರದಿ ನೀಡಿದೆ. ಇನ್ನೂ ಹೆಚ್ಚಿನ ಪರಿಣಾಮಕಾರಿ ಕೆಲಸ ಮಾಡಬೇಕಿದೆ ಎಂದು ಹೇಳಿದ್ದಾರೆ

ಬೆಂಗಳೂರಿನಲ್ಲಿ ಡ್ರಗ್ಸ್ ಕಂಟ್ರೋಲ್ ಮಾಡಿದ್ದೇವೆ. ಇನ್ನೂ ಅನೇಕ ಕಡೆ ಡ್ರಗ್ಸ್ ಸಿಗುತ್ತಿದೆ. ಈ ಬಗ್ಗೆ ಮಾಹಿತಿ ಇದೆ. ಡ್ರಗ್ಸ್ ಮಾರಾಟ ಸಂಬಂಧ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಆಯಾ ಇನ್ಸ್‌ಪೆಕ್ಟರ್‌ಗಳು ಜವಾಬ್ದಾರಿಯಾಗಿರುತ್ತಾರೆ. ಡ್ರಗ್ಸ್ ಮಾರಾಟ ಮತ್ತು ಸೇವನೆಯನ್ನು ಸಂಪೂರ್ಣವಾಗಿ ನಿರ್ನಾಮ ಮಾಡಲು ಕೆಲವು ಸೂಚನೆ ನೀಡಿದ್ದೇನೆ ಎಂದರು.

ಪ್ರಸಿದ್ಧ ಮೈಸೂರು ಸ್ಯಾಂಡಲ್ ಸೋಪಿಗೆ ರಾಯಭಾರಿ ಬೇಕೆ ಬೇಕು ಎಂದಾದರೆ ಪ್ರಧಾನಿ ಮೋದಿಯೇ ಸಾಕಲ್ಲವೇ!?

ಮೈಸೂರು, ಮೇ 27– ನಾಡಿನ ಸಂಸ್ಕೃತಿ, ಪರಂಪರೆ ಪಡಿಯಚ್ಚಾಗಿರುವ ಕನ್ನಡ ನಾಡಿನ ಅಸ್ಮಿತೆ, ನಮ್ಮ ಹೆಮ್ಮೆಯ ಮೈಸೂರು ಸ್ಯಾಂಡಲ್ ಸೋಪಿಗೆ ನಟಿಯೊಬ್ಬರನ್ನು ರಾಯಭಾರಿಯಾಗಿ ನೇಮಿಸಿರುವುದು ಸರಕಾರದ ಅಕ್ಷಮ್ಯವೆಂದು ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಕೆ.ವಿ.ಶ್ರೀಧರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ಸ್ಯಾಂಡಲ್ ಸೋಪು ಬೇರೆ ಸೋಪುಗಳಂತಲ್ಲ. ಆ ಸೋಪಿನಲ್ಲಿ ನಾಡಿನ ಪರಂಪರೆಯಿದೆ, ಸಂಸ್ಕೃತಿಯಿದೆ, ಪರಿಸರವಿದೆ, ಕನ್ನಡದ ಪರಿಮಳವಿದೆ. ಇಂತಹ ಹಿರಿಮೆಯುಳ್ಳ, ಸಾಂಸ್ಕೃತಿಕ ಹಾಗೂ ಗತವೈಭವವುಳ್ಳ ಶತಮಾನ ಕಾಲದ ಸೋಪನ್ನು ಬೇರೆ ಸೋಪುಗಳಂತೆ ಪರಿಗಣಿಸಿರುವುದೇ ಮಹಾ ಲೋಪ. ಅದರ ಜತೆಗೆ ನಟಿಯನ್ನು ರಾಯಭಾರಿಯಾಗಿ ನೇಮಿಸಿ, ಆಕೆಗೆ 6.20 ಕೋಟಿ ರೂ. ಸಂಭಾವನೆ ನೀಡಿರುವುದು ಕನ್ನಡ ನಾಡಿನ ಜನರಿಗೆ ಮಾಡಿದ ದ್ರೋಹವೇ ಸರಿ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಷ್ಟಕ್ಕೂ ಆಕೆಯನ್ನು ರಾಯಭಾರಿಯನ್ನಾಗಿ ನೇಮಿಸಿರುವ ಸರಕಾರದ ಉದ್ದೇಶವಾದರೂ ಏನು. ಮೈಸೂರು ಸ್ಯಾಂಡಲ್ ಸೋಪು ಬಳಸಿದರೆ ತಮನ್ನಾ ಅವರಂತೆ ಹೊಳೆಯುತ್ತಾರೆ ಎಂತಲೋ? ಈ ಬಗ್ಗೆ ಸರಕಾರ ಮೊದಲು ಸ್ಪಷ್ಟಪಡಿಸಬೇಕು. ಸರಕಾರ ಬಹುಶಃ ಮೈಸೂರು ಸ್ಯಾಂಡಲ್ ಸೋಪನ್ನು ಬೇರೆ ಬೇರೆ ಸೋಪುಗಳಂತೆ ಪರಿಗಣಿಸಿದೆ. ಮೊದಲು ಧೋರಣೆ ಬದಲಾಗಬೇಕು.


ಕೆ.ವಿ.ಶ್ರೀಧರ್

ಮೈಸೂರು ಸ್ಯಾಂಡಲ್ ಸರಿಸಾಟಿಯಾದ ಬೇರೊಂದಿಲ್ಲ. ಅದು ಬೆಳೆದು ಬಂದಿರುವ ಹಾದಿಯೇ ಅಂತಹದ್ದು. ಇಂತಹ ಪ್ರತಿಷ್ಠಿತ ಉತ್ಪನ್ನಕ್ಕೆ ಯಾರನ್ನಾದರೂ ರಾಯ ಭಾರಿಯಾಗಿ ನೇಮಿಸಲು ಅದೇನು ಸರಕಾರದ ಗ್ಯಾರಂಟಿ ಯೋಜನೆಯೇ? ಮೈಸೂರಿನವರೇ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ಸ್ಯಾಂಡಲ್ ಸೋಪಿನ ಇತಿಹಾಸ ಮರೆತಿರುವುದು ಅತ್ಯಂತ ಖೇದಕರ ಸಂಗತಿ.

ನೆಲಮೂಲ ಸಂಸ್ಕೃತಿಗೆ ಧಕ್ಕೆ ಬೇಡ: ಮೈಸೂರು ಸ್ಯಾಂಡಲ್ ಸೋಪಿಗೆ ರಾಯಭಾರಿಯ ಅಗತ್ಯವಿದ್ದರೆ, ಅದಕ್ಕೆ ನಟಿಯರೇ ಏಕೆ ಬೇಕು. ವಿಜ್ಞಾನ, ತಂತ್ರಜ್ಞಾನ, ಕ್ರೀಡೆ, ಶಿಕ್ಷಣ, ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಾಕಷ್ಟು ಹಿರಿಮೆಯುಳ್ಳವರು ಈ ನಾಡಲ್ಲಿದ್ದಾರೆ. ಅವರನ್ನು ನೇಮಿಸಬಹುದಲ್ಲ. ಪ್ರಚಾರವೇ ಮುಖ್ಯ ಉದ್ದೇಶ



ವಾದರೆ ಪ್ರಸ್ತುತ ದೇಶದ ಘನತವೆತ್ತ ಪ್ರಧಾನಮಂತ್ರಿಗಳಿಗಿಂತ ಬೇರೊಬ್ಬ ಖ್ಯಾತನಾಮರು ಬೇಕೆ. ರಾಜಕೀಯವನ್ನು ಬದಿಗಿಟ್ಟು ನೋಡಿದರೆ ಪ್ರಧಾನಿ ನರೇಂದ್ರ ಮೋದಿ ಅವರೇ ದೊಡ್ಡ ರಾಯಭಾರಿಯಾಗುತ್ತಾರೆ. ಅವರ ಕೈಯಲ್ಲೊಂದು ಸೋಪಿಟ್ಟು ಫೋಟೋ ತೆಗೆಸಿ ಸಾಮಾಜಿಕ ಜಾಲತಾಣದಲ್ಲಿ ಹಾಕಿದ್ದರೆ ಸಾಕಿತ್ತು. ಜಗತ್ತಿನ ಮೂಲೆ ಮೂಲೆಗೂ ತಲುಪುತ್ತಿತ್ತು. ಎಚ್.ಡಿ. ದೇವೇಗೌಡರು ಪ್ರಧಾನ ಮಂತ್ರಿಗಳಾಗಿದ್ದಾಗ ಇಡೀ ದೇಶಕ್ಕೆ ರಾಗಿ ಮುದ್ದೆಯನ್ನು ಹೀಗೆ ಪರಿಚಯಿಸಿದ್ದರು. ಇಂದು ದೇಶದ ನಾನಾ ಹೋಟೆಲ್‌ಗಳಲ್ಲಿ ರಾಗಿಮುದ್ದೆ ದೊರೆಯುತ್ತಿದೆ ಎಂದರೆ ಅದಕ್ಕೆ ದೇವೇಗೌಡರೇ ಕಾರಣ. ಹಾಗಾಗಿ, ರಾಜ್ಯ ಸರಕಾರ ರಾಜಕೀಯ ಬದಿಗಿಟ್ಟು ನರೇಂದ್ರ ಮೋದಿ ಅವರ ಕೈಗೆ ಒಂದು ಸೋಪಿನ ಬಾಕ್ಸ್ ನೀಡಲಿ ಸಾಕು ಮೈಸೂರು ಸ್ಯಾಂಡಲ್ ಸೋಪು ಜಾಗತಿಕ ಮಾರುಕಟ್ಟೆಯಲ್ಲಿ ಬಿಸಿ ದೋಸೆಯಂತೆ ಮಾರಾಟವಾಗಲಿದೆ.

ಕನ್ನಡದಲ್ಲಿ ಅಧಿಕ ಅಂಕ ಪಡೆದವರಿಗೆ ಸನ್ಮಾನ

ವಿದ್ಯಾರ್ಥಿಗಳಲ್ಲಿ ಕನ್ನಡ ಪ್ರಜ್ಞೆಯ ಜಾಗೃತಿ ಅಗತ್ಯ: ಶಾಸಕ ಶ್ರೀವತ್ಸ



ಮೈಸೂರು, ಮೇ 27 (ಜಿಎ)– ಮೈಸೂರಿನ ನಮೋ ಯೋಗ ಭವನದಲ್ಲಿ ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ ವತಿಯಿಂದ ಪ್ರಸಕ್ತ ಸಾಲಿನ 10ನೇ ತರಗತಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 100ಕ್ಕೂ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಪುರಸ್ಕರಿಸಿದ್ದು, ಈ ಮೂಲಕ ಅವರಲ್ಲಿ ಮಾತೃ ಭಾಷಾಭಿಮಾನ ಬೆಳೆಸಲು ಪ್ರೇರಣೆಯಾಗಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕನ್ನಡ ಭಾಷೆ ಉಳಿವಿಗೆ ಸಂಘಟಿತ ಪ್ರಯತ್ನ ಅಗತ್ಯವಾಗಿದೆ. ಮಾತೃ ಭಾಷೆ ಬೆಳವಣಿಗೆಗೆ ಶ್ರಮಿಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯವಾಗಿದೆ. ಇಂದಿನ ಪೀಳಿಗೆಯಲ್ಲಿ ಕನ್ನಡ ಭಾಷೆ ಅಭಿಮಾನ ಬೆಳೆಸುವುದು ಮತ್ತು ಸಾಧನೆಯ ಹೊಸ ಕನಸು ಬಿತ್ತುವ ಪ್ರಾಮಾಣಿಕ ಕಾರ್ಯ ಶ್ಲಾಘನೀಯ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಹೇಳಿದರು.

2025ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡದಲ್ಲಿ ನೂರಕ್ಕೂ ಹೆಚ್ಚು ಅಂಕ ಪಡೆದ ರಾಹುಲ್ ಗಾಂಧಿ, ಅಭಯ್, ಲಹರಿ ಜಿ ಆರ್, ರಾಜೇಶ್, ಪ್ರವೀಣ್, ಶಾಂಭವಿ, ಸ್ಪಂದನ, ಐಶ್ವರ್ಯ, ಗೌತಮ್, ಕಿರಣ್‌ಕುಮಾರ್, ನಾಗರಾಜು ಅವರನ್ನು ಸನ್ಮಾನಿಸಿ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಹಿರಿಯ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮುತ್ತಣ್ಣ, ಪಾಲಿಕೆ ಮಾಜಿ ಸದಸ್ಯ ಬಿ.ವಿ. ಮಂಜುನಾಥ್, ಕೆಪಿಸಿಸಿ ಸದಸ್ಯರಾದ ನಜರ್‌ಬಾದ್ ನಟರಾಜ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ನಿರೂಪಕ ಅಜಯ್ ಶಾಸ್ತ್ರಿ, ಜಿ.ರಾಘವೇಂದ್ರ, ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷೆ ರೇಖಾ ಶ್ರೀನಿವಾಸ್, ಸಮಾಜ ಸೇವಕರಾದ ಖುಷಿ ವಿನು, ರವಿಚಂದ್ರ, ಸುಚೇಂದ್ರ, ಶ್ರೀಕಾಂತ್ ಕಶ್ಯಪ್, ಮಹಾನ್ ಶ್ರೇಯಸ್, ಚಕ್ರಪಾಣಿ, ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಕಲಬುರಗಿ ಡಿಸಿಗೆ ನಿಂದನೆ: ಬಿಜೆಪಿ ಎಂಎಲ್ಸಿ ರವಿಕುಮಾರ್ ವಿರುದ್ಧ ಕೇಸ್

ಕಲಬುರಗಿ, ಮೇ 27– ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಪರಿಶಿಷ್ಟ ಜಾತಿಯವರಿಗೆ ಸಾರ್ವಜನಿಕವಾಗಿ ಬೆದರಿಕೆ ಹಾಕಿ, ಜಾತಿ ನಿಂದನೆ ಮಾಡಿದ ಆರೋಪದಡಿ ವಿಧಾನಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ವಿರುದ್ಧ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ದತ್ತಾತ್ರೇಯ ಇಕ್ಕಳಕಿ ಅವರು ನೀಡಿದ ದೂರಿನ ಅನ್ವಯ ರವಿಕುಮಾರ್ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಎಸ್‌ಸಿ–ಎಸ್‌ಟಿ) ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಗರದಲ್ಲಿ ಈಚೆಗೆ ಬಿಜೆಪಿಯ ಪ್ರತಿಭಟನೆ ನಡೆಯಿತು. ರವಿಕುಮಾರ್ ಅವರು ತಮ್ಮ ಭಾಷಣದಲ್ಲಿ 'ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರು ಪಾಕಿಸ್ತಾನದವರೋ ಅಥವಾ ಭಾರತದವರೋ ಎಂಬುದು ಖಚಿತವಾಗಿಲ್ಲ. ಶಹಾಬಾದ್ ಡಿವೈಎಸ್‌ಪಿ ಶಂಕರಗೌಡ ಪಾಟೀಲ, ಸಿಪಿಐಗಳಾದ ಚಂದ್ರಶೇಖರ ತಿಗಡಿ ಮತ್ತು ನಟರಾಜ ಲಾಡೆ ಅವರು ಕರ್ತವ್ಯ ನಿರ್ವಹಿಸಲು ಅಸಮರ್ಥರಾಗಿದ್ದಾರೆ ಎಂದು ಹೇಳಿಕೆ ಕೊಟ್ಟಿದ್ದಾರೆ ಎಂದು ದೂರಿನಲ್ಲಿ ಆರೋಪಿಸಿದ್ದಾರೆ.

ರವಿಕುಮಾರ್, ಮುಸ್ಲಿಮರ ವಿರುದ್ಧ ದ್ವೇಷವನ್ನು ಹುಟ್ಟು ಹಾಕಿ, ಪೊಲೀಸ್ ಅಧಿಕಾರಿಗಳನ್ನು ಗುಲಾಮರು ಎಂದು ಅವಹೇಳನಕಾರಿ ಪದ ಬಳಸಿದ್ದಾರೆ. ಅವರ ವಿರುದ್ಧ ತನಿಖೆ ನಡೆಸಬೇಕು ಎಂದಿದ್ದಾರೆ. ಬಿಜೆಪಿ ನಾಯಕರು ಅಧಿಕಾರಿಗಳ ವಿರುದ್ಧವೂ ಅವಹೇಳನಕಾರಿ ಹೇಳಿಕೆಗಳನ್ನು ನೀಡಲು ಪ್ರಾರಂಭಿಸಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ಹೇಳಿಕೆಯಲ್ಲಿ ತಿಳಿಸಿದ್ದಾರೆ.

'ಪಾರು' ಸೀರಿಯಲ್ ಖ್ಯಾತಿಯ ಶ್ರೀಧರ್ ನಾಯಕ್ ನಿಧನ

ಬೆಂಗಳೂರು, ಮೇ 27– 'ಪಾರು' ಸೀರಿಯಲ್ ಖ್ಯಾತಿಯ ನಟ ಶ್ರೀಧರ್ ನಾಯಕ್ ನಿಧನರಾಗಿದ್ದಾರೆ. ಅನಾರೋಗ್ಯದಿಂದ ಬಳಲುತ್ತಿದ್ದ ನಟ, ಹೆಬ್ಬಾಳದ ಬ್ಯಾಪ್ಟಿಸ್ಟ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.



ಗುರುತೇ ಸಿಗದಷ್ಟು ಶ್ರೀಧರ್ ನಾಯಕ್ ಬದಲಾಗಿದ್ದನ್ನು ನೋಡಿ ಚಿತ್ರರಂಗದವರಿಗೆ ಶಾಕ್ ಆಗಿತ್ತು. ಆರ್ಥಿಕ ಸಮಸ್ಯೆಯಿಂದ ಬಳಲುತ್ತಿದ್ದ ಅವರು ಸಹಾಯಕ್ಕಾಗಿ ಕೋರಿದ್ದರು. 'ಪಾರು', 'ವಧು', 'ಮಂಗಳ ಗೌರಿ', 'ಮನೆಯೇ ಮಂತ್ರಾಲಯ' ಸೇರಿದಂತೆ 40ಕ್ಕೂ ಹೆಚ್ಚು ಧಾರಾವಾಹಿ ಮತ್ತು 'ಮ್ಯಾಕ್ಸ್', 'ರಾಜಾ ಮಾರ್ತಾಂಡ', 'ಈಶ ಮಹೇಶ' ಸೇರಿ ಹಲವು ಸಿನಿಮಾಗಳಲ್ಲೂ ಅಭಿನಯಿಸಿದ್ದರು. ಕಿರುತೆರೆ, ಹಿರಿತೆರೆ ಎರಡರಲ್ಲೂ ಕೆಲಸ ಮಾಡಿದ್ದರು.

ಹೆಬ್ಬಾಳ ಚಿತಾಗಾರದಲ್ಲಿ ಇಂದು ಅಂತ್ಯಸಂಸ್ಕಾರ ನೆರವೇರಿತು. ಸೆಲೆಬ್ರಿಟಿಗಳು ಆರ್ಥಿಕವಾಗಿ ಸದೃಢರಾಗಿರುತ್ತಾರೆ. ಯಾವುದೇ ಸಮಸ್ಯೆ ಇರುವುದಿಲ್ಲ, ವೈಯಕ್ತಿಕ ಜೀವನವೂ ಉತ್ತಮವಾಗಿರುತ್ತದೆ ಎಂಬ ಅಭಿಪ್ರಾಯ ಜನಸಾಮಾನ್ಯರದ್ದು. ಆದರೆ ಶ್ರೀಧರ್ ನಾಯಕ್ ಅವರು ಚಿಕಿತ್ಸೆಗೆ ಬೇಕಾದ ಕನಿಷ್ಠ ಹಣ ಹೊಂದಿಸುವುದೂ ಕಷ್ಟವಾಯಿತು.

ಏಕಲವ್ಯ ನಗರದಲ್ಲಿ ಕಾನೂನು ಅರಿವು ಕಾರ್ಯಕ್ರಮ

ಮೈಸೂರು, ಮೇ 27– ಮೈಸೂರಿನ ವಿದ್ಯಾವರ್ಧಕ ಕಾನೂನು ಕಾಲೇಜು ವತಿಯಿಂದ ಏಕಲವ್ಯನಗರದಲ್ಲಿ ಕಾನೂನು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಮೈಸೂರಿನ ವಿಜಯನಗರ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ರವಿಪ್ರಸಾದ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿ ಹೆಣ್ಣು ಮಕ್ಕಳ ಮೇಲೆ ನಿರಂತರ ದೌರ್ಜನ್ಯ ಗಳಾಗುತ್ತಿದ್ದು, ಈ ದೌರ್ಜನ್ಯವನ್ನು ತಪ್ಪಿಸಲು ಭಾರತ ಸರ್ಕಾರ ಪೋಕ್ಸೋ ಕಾಯ್ದೆಯನ್ನು ಜಾರಿಗೆ ತಂದಿತು. 18 ವರ್ಷಗಳ ಒಳಪಟ್ಟ ಗಂಡು ಮತ್ತು ಹೆಣ್ಣು ಹದಿಹರೆಯದ ಮಕ್ಕಳಾಗಿರುತ್ತಾರೆ ಎಂದು ಘೋಷಣೆ ಮಾಡಿ ಈ ಮಕ್ಕಳ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯ ಇತರೆ ಮಾನಸಿಕ ಹಿಂಸೆ, ಕಿರುಕುಳವನ್ನು ತಪ್ಪಿಸಲು ಈ ಪೋಕ್ಸೋ ಕಾಯ್ದೆ ಬಹಳ ಮಹತ್ವದ್ದಾಗಿದೆ. ಈ ಕಾಯ್ದೆ ಪ್ರಕಾರ ಘಟನೆ ನಡೆದ ತಕ್ಷಣವೇ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಳ್ಳಬೇಕು. ತಪ್ಪಿದರೆ ಪೊಲೀಸ್ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ



ವಿದ್ಯಾವರ್ಧಕ ಕಾನೂನು ಕಾಲೇಜು ವತಿಯಿಂದ ಏಕಲವ್ಯನಗರದಲ್ಲಿ ಕಾನೂನು ಅರಿವಿನ ಜಾಗೃತಿ ಕಾರ್ಯಕ್ರಮ ನಡೆಯಿತು.

ಮಾಡಬಹುದು. ಈ ನಿಟ್ಟಿನಲ್ಲಿ ವಿದ್ಯಾವರ್ಧಕ ಕಾನೂನು ಕಾಲೇಜು ವತಿಯಿಂದ ಕೊಳಚೆ ಪ್ರದೇಶದ ನಿವಾಸಿಗಳಿಗೆ ಕಾನೂನಿನ ಬಗ್ಗೆ ಅರಿವು ಮೂಡಿಸುತ್ತಿರುವುದು ಶ್ಲಾಘನೀಯ ಎಂದರು.

ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಹೆಚ್.ಎಸ್.ಶಿವಕುಮಾರ್ ಮಾತನಾಡಿ, ಮಹಿಳೆಯರ ಆಸ್ತಿ ಮೇಲಿನ ಹಕ್ಕುಗಳ ಬಗ್ಗೆ ಮಾತನಾಡಿ, ತಂದೆ ತಾಯಿ ಆಸ್ತಿಯ ಮೇಲೆ ಮಹಿಳೆಯರಿಗೆ ಇರುವಂತಹ ಹಕ್ಕು, ಪತಿಯ ಆಸ್ತಿಯ ಮೇಲೆ ಪತ್ನಿಗೆ ಇರುವಂತಹ ಆಸ್ತಿಯ ಹಕ್ಕುಗಳ ಬಗ್ಗೆ ಸಭೆಯಲ್ಲಿದ್ದವರಿಗೆ ಅರಿವು ಮೂಡಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ.ಪಿ.ದೀಪು ಮಾತನಾಡಿ, ಕಾನೂನು ಸೇವಾ ಪ್ರಾಧಿಕಾರದಲ್ಲಿ ಸಿಗುವ ಉಚಿತ ಕಾನೂನು ಮತ್ತು ನೆರವು ಮತ್ತು ಅರಿವಿನ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ದಸಂಸದ ಜಿಲ್ಲಾ ಸಂಚಾಲಕ ನಿಂಗರಾಜ್ ಮಲ್ಲಾಡಿ, ವಿದ್ಯಾವರ್ಧಕ ಕಾನೂನು ಕಾಲೇಜಿನ ಸಂಯೋಜಕ ಡಾ.ಎ.ಆರ್.ಪ್ರಕೃತಿ, ಅಲೆಮಾರಿ ಅಭಿವೃದ್ಧಿ ನಿಗಮದ ಅಧಿಕಾರಿ ಅನಿಲ್, ಮಂಜುನಾಥ್, ದಸಂಸದ ಹೆಚ್.ಬಿ. ದಿವಾಕರ್, ನಂಜಪ್ಪ ಬಸವನಗುಡಿ, ಗ್ರಾಪಂ ಸದಸ್ಯರಾದ ಶ್ಯಾದನಹಳ್ಳಿ ನಾರಾಯಣ, ರೇವಣ್ಣ, ರಾಮುಸ್ವಾಮಿ, ಅಲೆಮಾರಿ ಸಂಘದ ವೈಕುಮಾರ, ಯುವ ಮುಖಂಡರಾದ ನಂದನ್‌ಕುಮಾರ್, ಸತೀಶ, ಅಂಗವಿಕಲರ ಸಂಘದ ಅಧ್ಯಕ್ಷ ಕೆರೆಯೂರು ಶಿವಶೆಟ್ಟಿ, ನಂಜಪ್ಪ, ವಿದ್ಯಾರ್ಥಿಗಳಾದ ಕೆ.ಎನ್.ಪ್ರೀತಿ, ಅರುಣ, ಏಕಲವ್ಯನಗರದ ನೂರಾರು ಗ್ರಾಮಸ್ಥರು ಉಪಸ್ಥಿತರಿದ್ದರು.

ನಾಳೆ ಸಾಮೂಹಿಕ ಉಪನಯನ

ಮೈಸೂರು, ಮೇ 27– ಮೈಸೂರಿನ ಕೆಆರ್‌ಎಸ್ ರಸ್ತೆಯ ಮಂಟಿ ಸಮೀಪವಿರುವ ಸಾಧನಹಳ್ಳಿ ಶ್ರೀ ಸಪ್ತರ್ಷಿ ಗುರುಕುಲ ಸೇವಾಶ್ರಮದಲ್ಲಿ ಮೇ 29ರಂದು ಗುರುವಾರ ಸಾಮೂಹಿಕ ಉಪನಯನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಆಶ್ರಮದ ಸಂಸ್ಥಾಪಕ ಪೀಠಾಧ್ಯಕ್ಷರಾದ ಶ್ರೀ ಅಭಿನವ ರಾಮಾನುಜ ಜೀಯರ್ ಅವರ ಆಶೀರ್ವಾದದೊಂದಿಗೆ ಅಂದು ಬೆಳಗ್ಗೆ ಗೋಪೂಜೆ, ಗಣಹೋಮ, ನವಗ್ರಹ, ಗಾಯಿತ್ರಿಹೋಮ, ಬ್ರಹ್ಮೋಪದೇಶ, ಮಹಾಸುದರ್ಶನಹೋಮ ಹಾಗೂ ಗೃಹದೇವತಾ ಆರಾಧನೆ, ಮಹಾ ಮಂಗಳಾರತಿ, ಶಾತುಮೊರೆ, ತೀರ್ಥ ಪ್ರಸಾದ ಏರ್ಪಡಿಸಲಾಗಿದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಮೊ.89045 79168, 94484 34111, 9986 672522 ಸಂಪರ್ಕಿಸಬಹುದು.

ದೇಶ - ವಿದೇಶ

ಮತ್ತೆ ಭಾರತದ ಜೊತೆ ಶಾಂತಿ ಮಾತುಕತೆಗೆ ಪಾಕ್ ಪ್ರಸ್ತಾಪ

ಟೆಹರಾನ್: ಪಾಕಿಸ್ತಾನದ ಪ್ರಧಾನಿ ಶಹಬಾಜ್ ಷರೀಫ್ ಮತ್ತೊಮ್ಮೆ ಭಾರತದ ಜೊತೆ ಶಾಂತಿ ಮಾತುಕತೆಯ ಪ್ರಸ್ತಾಪ ಇರಿಸಿದ್ದಾರೆ.



ಟರ್ಕಿಯ ನಂತರ ಷರೀಫ್ ಈಗ ಎರಡು ದಿನಗಳ ಭೇಟಿಗಾಗಿ ಇರಾನ್‌ಗೆ ಆಗಮಿಸಿದ್ದಾರೆ. ಈ ವೇಳೆ ಟೆಹರಾನ್‌ನಲ್ಲಿ ಮಾತನಾಡಿದ ಅವರು, ಕಾಶ್ಮೀರ ಸಮಸ್ಯೆ, ಭಯೋತ್ಪಾದನೆ, ನೀರು ಹಂಚಿಕೆ ಮತ್ತು ವ್ಯಾಪಾರ ಸೇರಿದಂತೆ ಬಾಕಿ ಇರುವ ಸಮಸ್ಯೆಗಳನ್ನ ಮಾತುಕತೆ ಮೂಲಕ ಇತ್ಯರ್ಥಪಡಿಸಿಕೊಳ್ಳುವ ಇಂಗಿತ ವ್ಯಕ್ತಪಡಿಸಿದ್ದಾರೆ. ಕಾಶ್ಮೀರ ಸಮಸ್ಯೆ ಮತ್ತು ನೀರಿನ ಸಮಸ್ಯೆ ಸೇರಿದಂತೆ ಎಲ್ಲಾ ವಿವಾದಗಳನ್ನು ಮಾತುಕತೆಗಳ ಮೂಲಕ ಪರಿಹರಿಸಲು ನಾವು ಬಯಸುತ್ತೇವೆ. ವ್ಯಾಪಾರ ಮತ್ತು ಭಯೋತ್ಪಾದನೆ ನಿಗ್ರಹದ ಬಗ್ಗೆ ನಮ್ಮ ನೆರೆಹೊರೆಯವರೊಂದಿಗೆ ಮಾತನಾಡಲು ಸಹ ಸಿದ್ಧರಿದ್ದೇವೆ ಎಂದು ಹೇಳಿದ್ದಾರೆ. ಪಾಕಿಸ್ತಾನದೊಂದಿಗೆ ಮಾತುಕತೆ ನಡೆಯುತ್ತದೆ ಎಂದಾ ದರೆ, ಅದು ಭಯೋತ್ಪಾದನೆ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಬಗ್ಗೆ ಇರುತ್ತದೆ ಎಂದು ಭಾರತ ಸ್ಪಷ್ಟವಾಗಿ ತಿಳಿಸಿದೆ.

ಮುಂಬೈಯಲ್ಲಿ 106 ಮಿ.ಮೀ ಮಳೆ: ಮತ್ತೆ ಮಳೆ ಮುನ್ಸೂಚನೆ

ಮುಂಬೈ: ಮುಂಬೈ ನಗರ ಸೇರಿದಂತೆ ಇತರೆ ಪ್ರದೇಶಗಳಲ್ಲಿ ಕಳೆದ 24 ಗಂಟೆಗಳ ಅವಧಿಯಲ್ಲಿ ಸರಾಸರಿ 106 ಮಿ.ಮೀ ಮಳೆಯಾಗಿದೆ. ಧಾರಾಕಾರ ಮಳೆಯಿಂದಾಗಿ ಇಂದು ಬೆಳಿಗ್ಗೆ ಉಪನಗರ ರೈಲುಗಳು ಸೇರಿದಂತೆ ಸಾರ್ವಜನಿಕ ಸಾರಿಗೆ ಸೇವೆಗಳಲ್ಲಿ ವ್ಯತ್ಯಯ ಉಂಟಾಗಿತ್ತು. ಆದರೆ, ಬೃಹತ್ ಮುಂಬೈ ವಿದ್ಯುತ್ ಸರಬರಾಜು ಮತ್ತು ಸಾರಿಗೆ ಸಂಸ್ಥೆಯ (ಬೆಸ್ಟ್) ಬಸ್‌ಗಳು ಮತ್ತು ಮೆಟ್ರೊ ಸೇವೆಗಳು ಎಂದಿನಂತೆ ಮುಂದುವರಿದಿವೆ. ಬೃಹತ್ ಮುಂಬೈ ಮಹಾನಗರ ಪಾಲಿಕೆ (ಬಿಎಂಸಿ) ಪ್ರಕಾರ, 'ನರಿಮನ್ ಪಾಯಿಂಟ್‌ನಲ್ಲಿ ಮೇ 25ರಂದು ರಾತ್ರಿ 10ರಿಂದ ಮೇ 26ರಂದು ಬೆಳಿಗ್ಗೆ 11ರವರೆಗೆ 252 ಮಿ.ಮೀ ಅತಿ ಹೆಚ್ಚು ಮಳೆಯಾಗಿದೆ. ನಂತರ ಬಿಎಂಸಿ ಪ್ರಧಾನ ಕಚೇರಿ ಬಳಿ (216 ಮಿ.ಮೀ) ಮತ್ತು ಕೊಲಾಬಾ ಪಂಪಿಂಗ್ ಸ್ಟೇಷನ್‌ನಲ್ಲಿ (207 ಮಿ.ಮೀ) ಮಳೆಯಾಗಿದೆ ಎಂದು ತಿಳಿದು ಬಂದಿದೆ.



ಮುಂದಿನ 24 ಗಂಟೆಗಳಲ್ಲಿ ನಗರ ಮತ್ತು ಉಪನಗರಗಳಲ್ಲಿ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ ವಿರಲಿದ್ದು, ಕೆಲವೆಡೆ ಬಿರುಗಾಳಿ, ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ.

ಕೋರ್ಸ್ ಡ್ರಾಪ್ ಔಟ್ ಆದ್ರೆ ವೀಸಾ ಬ್ಯಾನ್; ವಿದೇಶಿ ವಿದ್ಯಾರ್ಥಿಗಳಿಗೆ ಅಮೆರಿಕ ಎಚ್ಚರಿಕೆ

ವಾಷಿಂಗ್ಟನ್: ಹಾರ್ವರ್ಡ್ ವಿಶ್ವವಿದ್ಯಾಲಯವು ಅಂತಾರಾಷ್ಟ್ರೀಯ ವಿದ್ಯಾರ್ಥಿಗಳ ದಾಖಲಾತಿಯನ್ನು ನಿಷೇಧಿಸಿತ್ತು. ಇದೀಗ ಅಮೆರಿಕವು ದೇಶದಲ್ಲಿರುವ ಭಾರತೀಯ ಮತ್ತು ವಿದೇಶಿ ವಿದ್ಯಾರ್ಥಿಗಳಿಗೆ ಹೊಸ ಎಚ್ಚರಿಕೆ ನೀಡಿದೆ. ಭಾರತದಲ್ಲಿನ ಅಮೆರಿಕ ರಾಯಭಾರ ಕಚೇರಿ ಹಂಚಿಕೊಂಡ ಇತ್ತೀಚಿನ ಪ್ರಕಟಣೆಯ ಪ್ರಕಾರ, ವಿದೇಶಿ ವಿದ್ಯಾರ್ಥಿಗಳು ತರಗತಿಗಳಿಗೆ ನಿರಂತರವಾಗಿ ಗೈರು ಹಾಜರಾದರೆ, ಅಥವಾ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಕೊಂಡವರ ವೀಸಾವನ್ನು ರದ್ದುಗೊಳಿಸುತ್ತೇವೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.



ವಿದ್ಯಾರ್ಥಿಗಳು ತಮ್ಮ ಕೋರ್ಸ್‌ಗಳನ್ನು ಅರ್ಧಕ್ಕೇ ವಿಶ್ವವಿದ್ಯಾಲಯ ತೊರೆದು ಹೋದರೆ ಅಂತವರ ವೀಸಾವನ್ನು ರದ್ದುಗೊಳಿಸಲಾಗುತ್ತದೆ ಎಂದು ಅಮೆರಿಕ ಆಡಳಿತ ಹೇಳಿದೆ. ಯಾವುದೇ ಸಮಸ್ಯೆಗಳನ್ನು ತಪ್ಪಿಸಲು ಯಾವಾಗಲೂ ನಿಮ್ಮ ವೀಸಾದ ನಿಯಮಗಳನ್ನು ಪಾಲಿಸಿ ಮತ್ತು ನಿಮ್ಮ ವಿದ್ಯಾರ್ಥಿ ಸ್ಥಿತಿಯನ್ನು ಕಾಪಾಡಿಕೊಳ್ಳಿ ಎಂದು ಅಧಿಕೃತ ಹೇಳಿಕೆಯಲ್ಲಿ ತಿಳಿಸಿದೆ. ಈ ವರ್ಷದ ಆರಂಭದಲ್ಲಿ ಅಮೆರಿಕ ಸರ್ಕಾರವು ಪ್ರಮುಖ ಗಡೀಪಾರು ಕಾರ್ಯಾಚರಣೆ ನಡೆಸಿದ ನಂತರ ಈ ಎಚ್ಚರಿಕೆ ಬಂದಿದೆ.

ಒಂದೇ ಕುಟುಂಬದ 7 ಮಂದಿ ಆತ್ಮಹತ್ಯೆ: ಕಾರಿನಲ್ಲಿ ಶವ ಪತ್ತೆ

ಡೆಹ್ರಾಡೂನ್: ಒಂದೇ ಕುಟುಂಬದ ಏಳು ಮಂದಿ ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ಹರ್ಯಾಣದ ಪಂಚಕುಲದಲ್ಲಿ ನಡೆದಿದೆ. ಡೆಹ್ರಾಡೂನ್ ಮೂಲದ 6 ಮಂದಿ ಮನೆಯ ಹೊರಗೆ ನಿಲ್ಲಿಸಿದ್ದ ಕಾರಿನೊಳಗೆ ಆತ್ಮಹತ್ಯೆ ಮಾಡಿಕೊಂಡಿದ್ದು, ಶವಗಳು ಲಾಕ್ ಆಗಿದ್ದ ಸ್ಥಿತಿಯಲ್ಲಿ ಪತ್ತೆಯಾಗಿವೆ. ಮೂಲಗಳ ಪ್ರಕಾರ, ಕುಟುಂಬ ಸದಸ್ಯರು ಭಾರೀ ಸಾಲ ಮತ್ತು ಆರ್ಥಿಕ ಸಂಕಷ್ಟದಲ್ಲಿದ್ದರಿಂದ ಈ ಕಠಿಣ ನಿರ್ಧಾರ ತೆಗೆದುಕೊಂಡಿದ್ದಾರೆ. ಕಾರಿನೊಳಗೆ ಕುಟುಂಬ ಸದಸ್ಯರು ಹೆಣಗಾಡುತ್ತಿರುವುದನ್ನು ನೋಡಿದ ಸ್ಥಳೀಯ ನಿವಾಸಿಗಳು ಪೊಲೀಸರಿಗೆ ಮಾಹಿತಿ ನೀಡಿದರು. ಪೊಲೀಸರು ಆಗಮಿಸುತ್ತಿದ್ದಂತೆಯೇ ಬಾಗಿಲು ಒಡೆದು ಪ್ರಜ್ಞಾಹೀನ ಸ್ಥಿತಿಯಲ್ಲಿದ್ದವರನ್ನು ಖಾಸಗಿ ಮತ್ತು ನಾಗರಿಕ ಆಸ್ಪತ್ರೆಗೆ ಸಾಗಿಸಲಾಯಿತಾದರೂ ಅಲ್ಲಿ ಮೃತಪಟ್ಟಿದ್ದಾರೆ. ಮೃತರನ್ನು ಪ್ರವೀಣ್ ಮಿತ್ತಲ್ (42), ಅವರ ಪೋಷಕರು, ಪತ್ನಿ ಮತ್ತು ಮೂವರು ಮಕ್ಕಳೆಂದು ಗುರುತಿಸಲಾಗಿದೆ. ಆರಂಭಿಕ ತನಿಖೆ ನಂತರ, ಇದು ಆತ್ಮಹತ್ಯೆ ಪ್ರಕರಣದಂತೆ ತೋರುತ್ತಿದೆ. ವಿಧಿವಿಜ್ಞಾನ ತಂಡವು ಸ್ಥಳಕ್ಕೆ ಆಗಮಿಸಿ ಸ್ಥಳದಿಂದ ಎಲ್ಲಾ ಪುರಾವೆಗಳನ್ನು ಸಂಗ್ರಹಿಸಿ ವೈಜ್ಞಾನಿಕವಾಗಿ ವಿಶ್ಲೇಷಿಸುತ್ತೇವೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಹಿಮಾದ್ರಿ ಕೌಶಿಕ್ ಹೇಳಿದ್ದಾರೆ.



ಫುಟ್‌ಬಾಲ್ ಚಾಂಪಿಯನ್‌ಶಿಪ್ ಜಯದ ಮೆರವಣಿಗೆ ವೇಳೆ ಹರಿದ ಮಿನಿವ್ಯಾನ್

ಲಂಡನ್: ಫುಟ್‌ಬಾಲ್ ಪ್ರೀಮಿಯರ್ ಲೀಗ್ ಚಾಂಪಿಯನ್‌ಶಿಪ್‌ನಲ್ಲಿ ತಮ್ಮ ತಂಡ ಜಯ ಸಾಧಿಸಿದ ಸಂಭ್ರಮವನ್ನು ಆಚರಿಸುತ್ತಿದ್ದ ಲಿವರ್‌ಪೂಲ್ ತಂಡದ ಅಭಿಮಾನಿಗಳ ಮೇಲೆ ಮಿನಿವ್ಯಾನ್ ಹರಿದು 25ಕ್ಕೂ ಹೆಚ್ಚು ಜನ ಗಂಭೀರವಾಗಿ ಗಾಯಗೊಂಡ ಘಟನೆ ಇಂಗ್ಲೆಂಡ್‌ನ ಲಿವರ್‌ಪೂಲ್ ನಗರದಲ್ಲಿ ನಡೆದಿದೆ. ಜನರ ಮೇಲೆ ಮಿನಿವ್ಯಾನ್ ಹರಿಸಿದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಸಂಭ್ರಮಾಚರಣೆಗೆ 10 ಸಾವಿರಕ್ಕೂ ಹೆಚ್ಚು ಜನರು 16 ಕಿ.ಮೀಗೂ ಅಧಿಕ ದೂರ ಮೆರವಣಿಗೆ ನಡೆಸುತ್ತಿದ್ದರು. ಈ ವೇಳೆ ಏಕಾಏಕಿ ಬಂದ ಮಿನಿವ್ಯಾನ್ 27 ಜನರನ್ನು ಗಾಯಗೊಳಿಸಿದೆ. ತಕ್ಷಣ ಆಂಬುಲೆನ್ಸ್ ಮೂಲಕ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಈವರೆಗೆ ಯಾವುದೇ ಸಾವು ಸಂಭವಿಸಿದ ಬಗ್ಗೆ ವರದಿಯಾಗಿಲ್ಲ. ಘಟನೆಯು ಯಾವುದೇ ಭಯೋತ್ಪಾದಕ ಹಿನ್ನೆಲೆಯಲ್ಲಿ ನಡೆದಿಲ್ಲ, ತನಿಖೆ ಮುಂದುವರಿಸಲಾಗಿದೆ ಎಂದು ಪೊಲೀಸರು ಪ್ರಾಥಮಿಕ ತನಿಖೆಯ ಬಳಿಕ ತಿಳಿಸಿರುವುದಾಗಿ ವರದಿಯಾಗಿದೆ. ಕಳೆದ ತಿಂಗಳು ನಡೆದ ಫುಟ್‌ಬಾಲ್ ಪ್ರೀಮಿಯರ್ ಲೀಗ್ ಚಾಂಪಿಯನ್‌ಶಿಪ್‌ನಲ್ಲಿ ಟೊಟೆನ್‌ಹ್ಯಾಮ್ ತಂಡವನ್ನು ಸೋಲಿಸಿ ಲಿವರ್‌ಪೂಲ್ ತಂಡ ಪ್ರಶಸ್ತಿಯನ್ನು ಗೆದ್ದಿತ್ತು.



ಮೈಸೂರು ಮಿತ್ರ ಬುಧವಾರ 28 ಮೇ 2025

ಮಳೆ ಆರ್ಭಟ ಕಡಿಮೆಯಾದರೂ ಅನಾಹುತ ತಪ್ಪಿಲ್ಲ



ಮಡಿಕೇರಿ, ಮೇ 27– ಜಿಲ್ಲೆಯಲ್ಲಿ ವರುಣನ ಆರ್ಭಟ ಕಡಿಮೆಯಾಗಿದ್ದರೂ, ಮಳೆ ಹಾಗೂ ಭಾರೀ ಗಾಳಿಗೆ ಮರಗಳು ಮುರಿದು ಬಿದ್ದ ಪರಿಣಾಮ ಅನಾಹುತಗಳು ಮುಂದುವರೆದಿವೆ. ಚೇಲಾವರ ಗ್ರಾಮದಲ್ಲಿ ಗಾಳಿ ಮಳೆಗೆ ಬೃಹತ್ ಗಾತ್ರದ ಮರವೊಂದು ಮನೆಯ ಮೇಲೆ ಉರುಳಿ ಬಿದ್ದು, ಮೂವರು ಪ್ರಾಣಾಪಾಯದಿಂದ ಪಾರಾದ ಘಟನೆ ನಡೆದಿದೆ. ಚೇಲಾವರ ಗ್ರಾಮದ ಕುಟ್ಟನ ಕಾರ್ಯಪ್ಪ ಎಂಬುವರ ಮನೆಯ ಸಮೀಪವಿರುವ ಹಳೆಯ ಮನೆಯಲ್ಲಿ ಮಗ ಸುನಿಲ್, ಪತ್ನಿ ಹಾಗೂ ಮಗು ಇದ್ದ ಸಂದರ್ಭದಲ್ಲಿ ಮರ ಮನೆಯ ಮೇಲೆ ಬಿದ್ದಿದೆ. ಅದೃಷ್ಟವಶಾಂತ್ ಮನೆಯಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮನೆಗೆ ತೀವ್ರ ಹಾನಿಯಾಗಿದ್ದು, ದಿನ ಬಳಕೆ ವಸ್ತುಗಳು ಮಳೆ ನೀರಿನಿಂದ ಹಾನಿಗೀಡಾಗಿವೆ. ಸ್ಥಳಕ್ಕೆ ನಾಪೋಕ್ಲು ಕಂದಾಯ ಪರಿವೀಕ್ಷಕ ರವಿಕುಮಾರ್, ಗ್ರಾಮ ಲೆಕ್ಕಿಗ ಸ್ವಾತಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕೌಶಿ ಕಾವೇರಮ್ಮ, ಸದಸ್ಯರಾದ ಈರಪ್ಪ ಭೇಟಿ ನೀಡಿ ಪರಿಶೀಲಿಸಿದರು.

ಕೋಕೇರಿ, ಪಾರಾಣೆ ಗ್ರಾಮದಲ್ಲೂ ಮನೆ ಮೇಲೆ ಮರ ಬಿದ್ದು ಹಾನಿಯಾಗಿರುವ ಬಗ್ಗೆ ವರದಿಯಾಗಿದೆ. ಭಾಗಮಂಡಲ ನಿವಾಸಿ ಪದಕಲ್ಲು ಗ್ರಾಮದ ಭಾಸ್ಕರ ಎಂಬವರ ಮನೆಯ ಗೋಡೆ ಕುಸಿದು ಬಿದ್ದು, ಹಾನಿಯಾಗಿದೆ. ಶನಿವಾರಸಂತೆ ಹೋಬಳಿ ಕೋರಲಳ್ಳಿ ಗ್ರಾಮದ ಲಲಿತ ಎಂಬವರ ಮನೆ ಮೇಲೆ ಮರ ಬಿದ್ದಿದ್ದು ಹೆಂಚುಗಳು ನೆಲಕಚ್ಚಿವೆ. ಅರಣ್ಯ ಇಲಾಖಾ ಸಿಬ್ಬಂದಿ ಮರವನ್ನು ತೆರವುಗೊಳಿಸಿದ್ದಾರೆ. ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಮಳೆಹಾನಿ ಪರಿಶೀಲನೆ ನಡೆಸಿದರು.

ಮರೆಯಾಗದ ಪ್ರವಾಹ ಆತಂಕ: ತಲಕಾವೇರಿ, ಭಾಗಮಂಡಲ ವ್ಯಾಪ್ತಿಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆ ಹಿನ್ನೆಲೆ ಕಾವೇರಿ ನದಿ ನೀರು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ಸಿದ್ದಾಪುರ, ನೆಲ್ಯಹುದಿಕೇರಿ, ಕರಡಿಗೋಡು ಭಾಗಗಳಲ್ಲಿ ಈಗಾಗಲೇ ನದಿ ದಡದ ಸಂಪರ್ಕ ರಸ್ತೆಗಳು ಪ್ರವಾಹ ನೀರಿನಲ್ಲಿ ಮುಳುಗಿವೆ. ಕೊಂಡಂಗೇರಿ, ಹಚ್ಚಿನಾಡು, ಕಕ್ಕಟಕಾಡು, ಗುಯ್ಯ, ಕೂಡುಗದ್ದೆ, ಕರಡಿಗೋಡು, ಬೆಟ್ಟದ ಕಾಡು, ಕುಂಬಾರಗುಂಡಿ ಸೇರಿದಂತೆ ನದಿ ದಡ ಗ್ರಾಮ ನಿವಾಸಿಗಳು ಪ್ರವಾಹ ಆತಂಕದಲ್ಲಿ ದಿನ ಕಳೆಯುತ್ತಿದ್ದಾರೆ.

ಚೆಸ್ಕಾಂಗೆ ಭಾರೀ ಹಾನಿ: 4 ದಿನಗಳಿಂದ ಸುರಿದ ಮಳೆಗೆ ಚೆಸ್ಕಾಂ ಇಲಾಖೆಗೆ ತೀವ್ರ ಹಾನಿ ಸಂಭವಿಸಿದೆ. ಈಗಾಗಲೇ 621 ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದರೆ, ಅಷ್ಟೇ ಪ್ರಮಾಣದಲ್ಲಿ ವಿದ್ಯುತ್ ತಂತಿಗಳಿಗೆ ಹಾನಿಯಾಗಿವೆ. ಅದರ ಜೊತೆಯಲ್ಲೇ ಟ್ರಾನ್ಸ್ ಫಾರ್ಮರ್‌ಗಳು ಹಾನಿಗೀಡಾಗಿವೆ. ಚೆಸ್ಕಾಂಗೆ ಈಗಾಗಲೇ 70 ಲಕ್ಷ ರೂ. ನಷ್ಟ ಸಂಭವಿಸಿರಬಹುದು ಎಂದು ಅಂದಾಜಿಸಲಾಗಿದೆ.

ಹೆಚ್ಚುವರಿ ಸಿಬ್ಬಂದಿ ನಿಯೋಜನೆ: ಜಿಲ್ಲೆಯಲ್ಲಿ ವಿದ್ಯುತ್ ಅನಾಹುತದ ದುರಸ್ಥಿಗೆ ಮಂಡ್ಯ, ಚಾಮರಾಜನಗರ, ಮೈಸೂರು ಹಾಗೂ ಹಾಸನ ವಿಭಾಗಗಳಿಂದ ಒಟ್ಟು 74 ಚೆಸ್ಕಾಂ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ. ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಕೋರಿಕೆ ಮೇರೆಗೆ ಪವರ್ ಮ್ಯಾನ್, ಮೆಕಾನಿಕ್, ಸಹಾಯಕ ಪವರ್ ಮ್ಯಾನ್, ಕಿರಿಯ ಪವರ್ ಮ್ಯಾನ್ ದರ್ಜೆಯ ಸಿಬ್ಬಂದಿಗಳನ್ನು ತುರ್ತು ಕಾರ್ಯಕ್ಕೆ ಕೊಡಗು ಜಿಲ್ಲೆಗೆ ನಿಯೋಜಿಸಿ ಚೆಸ್ಕಾಂ ನಿಗಮ ಆದೇಶಿಸಿದೆ.

ಭಾರಿ ಮಳೆಗೆ ಹಳ್ಳಿಗಟ್ಟಿನಲ್ಲಿ ಮನೆ ಕುಸಿದು ಹಾನಿ



ಪೊನ್ನಂಪೇಟೆ, ಮೇ 27– ಸೋಮವಾರ ರಾತ್ರಿ ಸುರಿದ ಧಾರಾಕಾರ ಮಳೆಗೆ ವಾಸದ ಮನೆಯೊಂದು ಕುಸಿದು ಸಂಪೂರ್ಣ ಹಾನಿ ಸಂಭವಿಸಿದ ಘಟನೆ ಪೊನ್ನಂಪೇಟೆ ಅರುವತ್ತೋಕ್ಲು ಗ್ರಾಪಂ ವ್ಯಾಪ್ತಿಯ ಹಳ್ಳಿಗಟ್ಟುವಿನಲ್ಲಿ ನಡೆದಿದೆ.

ಗ್ರಾಮದ ಚಿಮ್ಮಿಚ್ಚಿರ ಕೆ. ಅಬ್ದುಲ್ಲಾ ಎಂಬುವವರೇ ಭಾರಿ ಮಳೆಗೆ ಮನೆ ಕಳೆದುಕೊಂಡವರಾಗಿದ್ದಾರೆ. ಎಂದಿನಂತೆ ಅಬ್ದುಲ್ಲಾ ಅವರು ತಮ್ಮ ಕುಟುಂಬದವರೊಂದಿಗೆ ರಾತ್ರಿ ಮಲಗಿದ್ದ ಸಂದರ್ಭದಲ್ಲಿ ಈ ಘಟನೆ ಸಂಭವಿಸಿದೆ ಎನ್ನಲಾಗಿದೆ. ಮನೆಯ ಗೋಡೆ ಕುಸಿಯುತ್ತಿರುವ ಮುನ್ಸೂಚನೆ ಅರಿತ ಅಬ್ದುಲ್ಲಾ, ಸಹೋದರ ಮುಜೀಬ್ ತೋರಿದ ಸಮಯ ಪ್ರಜ್ಞೆಯಿಂದಾಗಿ ಯಾವುದೇ ಜೀವ ಹಾನಿ ಸಂಭವಿಸಿಲ್ಲ. ಗೋಡೆ ಬಿರುಕು ಬಿಡುತ್ತಾ ಮೆಲ್ಲನೆ ಕುಸಿಯುತ್ತಿರುವುದನ್ನು ಗಮನಿಸಿದ ಇವರು ಪಕ್ಕದ ಕೋಣೆಯಲ್ಲಿ ಮಲಗಿದ್ದ ಇವರ ತಾಯಿ ಮತ್ತು ಮಕ್ಕಳನ್ನು ಕೂಡಲೇ ಎಬ್ಬಿಸಿ ಬೇರೆಡೆಗೆ ಕರೆದೊಯ್ದು ಪ್ರಾಣ ರಕ್ಷಣೆ ಮಾಡಿದ್ದಾರೆ.

ರಾತ್ರಿ ನಿರಂತರವಾಗಿ ಸುರಿದ ಧಾರಾಕಾರ ಮಳೆಯಿಂದಾಗಿ ಮನೆಯ ಗೋಡೆಯ ಭಾಗಕ್ಕೆ ನೀರು ನುಗ್ಗಿದ್ದೇ ಹಾನಿ ಸಂಭವಿಸಲು ಕಾರಣ ಎನ್ನಲಾಗಿದೆ. ವಾಸಿಸುವ ಮನೆ ಸಂಪೂರ್ಣವಾಗಿ ಹಾನಿಗೊಳಗಾಗಿದ್ದು, ವಾಸಿಸಲು ಸಾಧ್ಯವಾಗುವುದಿಲ್ಲ. ನೀರು ಮತ್ತು ನುಗ್ಗಿದ್ದರಿಂದಾಗಿ ಭಾರಿ ನಷ್ಟ ಸಂಭವಿಸಿದೆ ಎಂದು ಅಬ್ದುಲ್ಲಾ ತಿಳಿಸಿದರು.

ಪೊನ್ನಂಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೀದೇರಿರ ನವೀನ್, ಪೊನ್ನಂಪೇಟೆ ಪಟ್ಟಣ ಪಂಚಾಯತ್ ಉಪಾಧ್ಯಕ್ಷ ಆಲೀರ ರಶೀದ್ ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಪರಿಹಾರ ನೀಡಲು ಸರ್ಕಾರಕ್ಕೆ ವರದಿ ಸಲ್ಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಪೊನ್ನಂಪೇಟೆ ಪಟ್ಟಣ ಪಂಚಾಯತಿ ಸದಸ್ಯರುಗಳಾದ ಮೂಕಳೇರ ಸುಮಿತಾ, ಕೊಳೇರ ಭಾರತಿ ಮೊದಲಾದವರು ಹಾಜರಿದ್ದರು. ತಹಶೀಲ್ದಾರ್ ಮೋಹನ್ ಕುಮಾರ್, ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲಿಸಿದರು.

ವಿಪತ್ತು ನಿರ್ವಹಣೆ ಸಮರ್ಥವಾಗಿ ನಿಭಾಯಿಸಲು ಅಧಿಕಾರಿಗಳಿಗೆ ಸೂಚನೆ



ಮುಂಗಾರು ಆರಂಭ ಹಿನ್ನೆಲೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಧಿಕಾರಿಗಳ ಸಭೆ ನಡೆಸಿದರು.

ಮಡಿಕೇರಿ ಮೇ 27– ವಿಪತ್ತು ನಿರ್ವಹಣೆ ಸಂಬಂಧ ಜಿಲ್ಲಾ ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಅವರ ಜೊತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಹ ಸಮನ್ವಯ ಸಾಧಿಸಿ ವಿಪತ್ತು ನಿರ್ವಹಣೆ ಮಾಡುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎನ್.ವಿ. ಪ್ರಸಾದ್ ಕರೆ ನೀಡಿದ್ದಾರೆ.

ಮುಂಗಾರು ಆರಂಭ ಹಿನ್ನೆಲೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ ವತಿಯಿಂದ ಕೈಗೊಂಡಿರುವ ಕ್ರಮಗಳ ಬಗ್ಗೆ ಮಂಗಳವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಅಧಿಕಾರಿಗಳು ಪರಸ್ಪರ ಸಮನ್ವಯತೆ ಸಾಧಿಸಿ ಕೊಂಡು ಮುಂಗಾರು ಅವಧಿಯಲ್ಲಿ ಸಮರೋಪಾದಿ ಪರಿಹಾರ ಕಾರ್ಯ ನಡೆಸಬೇಕೆಂದು ಸೂಚಿಸಿದರು.


ಅಗತ್ಯವಿರುವ ಕಡೆಗಳಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಬೇಕು. ಈ ಬಾರಿ ಮುಂಗಾರು ಮುಂಚಿತವಾಗಿ ಆರಂಭವಾಗಿರುವುದರಿಂದ ಮುಂದಿನ ದಿನಗಳಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ. ಆದ್ದರಿಂದ ಜಿಲ್ಲೆಯ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶದಲ್ಲಿನ ಜನರನ್ನು ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಿ, ಉತ್ತಮ ಆಹಾರ ನೀಡಬೇಕು. ಯಾವುದೇ ಕಾರಣಕ್ಕೂ ದೂರು ಬರದಂತೆ ಗಮನಹರಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಅವರು ಕಿವಿಮಾತು ಹೇಳಿದರು.

ಮಳೆಯಿಂದ ಉಂಟಾಗುವ ಹಾನಿ ಸಂಬಂಧ ಜಿಲ್ಲಾಡಳಿತದಿಂದ ಆರಂಭಿಸಿರುವ ವಾಟ್ಸ್‌ಆಪ್ ಗುಂಪಿಗೆ ಅಧಿಕಾರಿಗಳು ಮತ್ತು ಸಾರ್ವಜನಿಕರು ಛಾಯಾಚಿತ್ರ ಹಾಗೂ ವಾಯ್ಸ್ ರೆಕಾರ್ಡ್ ಸಹಿತ ಮಾಹಿತಿ ನೀಡಬಹುದಾಗಿದೆ ಹಾಗೆಯೇ ತಾಲೂಕು ಮಟ್ಟದಲ್ಲಿಯೂ ಸಹ ತಹಶೀಲ್ದಾರರ ನೇತೃತ್ವದಲ್ಲಿ ವಾಟ್ಸ್‌ಆಪ್ ಗುಂಪು ರಚಿಸಿಕೊಂಡು ತಾಪಂ ಇಒ, ಪಿಡಿಒ, ಗ್ರಾಪಂ ಕಾರ್ಯದರ್ಶಿ, ಲೋಕೋಪಯೋಗಿ, ಪಂಚಾಯತ್ ರಾಜ್ ಎಂಜಿನಿಯರ್‌ಗಳು, ಪೊಲೀಸ್, ಅಗ್ನಿಶಾಮಕ, ಗ್ರಾಮ ಸಹಾಯಕರು, ಗೃಹರಕ್ಷಕದಳ ಗುಂಪಿಗೆ ಸೇರಿಸಿಕೊಂಡು ವಿಪತ್ತು ನಿರ್ವಹಣೆಯನ್ನು ನಿರ್ವಹಿಸಬೇಕು ಎಂದರು.

ಮಡಿಕೇರಿ ತಾಲೂಕು ವಿಪತ್ತು ನಿರ್ವಹಣಾ ಕೇಂದ್ರ 08272–228396, ವಿರಾಜಪೇಟೆ ತಾಲೂಕು ವಿಪತ್ತು ನಿರ್ವಹಣಾ ಕೇಂದ್ರ–08274–257328, ಸೋಮವಾರಪೇಟೆ ತಾಲೂಕು ವಿಪತ್ತು ನಿರ್ವಹಣಾ ಕೇಂದ್ರ–08276–282045, ಕುಶಾಲನಗರ ತಾಲೂಕು ವಿಪತ್ತು ನಿರ್ವಹಣಾ ಕೇಂದ್ರ–08276–200198 ಹಾಗೂ ಪೊನ್ನಂಪೇಟೆ ತಾಲೂಕು ವಿಪತ್ತು ನಿರ್ವಹಣಾ ಕೇಂದ್ರ–08274–249700 ಸಹಾಯವಾಣಿ ಕೇಂದ್ರ ಆರಂಭಿಸಲಾಗಿದೆ ಎಂದರು. ಜಿಲ್ಲಾಡಳಿತ ಬಳಿ ಪ್ರಾಕೃತಿಕ ವಿಕೋಪ ನಿರ್ವಹಣೆಗೆ 40 ಕೋಟಿ ರೂ. ಹಣವಿದೆ. ಜೊತೆಗೆ ತಹಶೀಲ್ದಾರರ ಬಳಿಯು ಸಹ ಹಣವಿದೆ ಎಂದು ಜಿಲ್ಲಾಧಿಕಾರಿ ವೆಂಕಟರಾಜಾ ಹೇಳಿದರೆ, ಜಿಪಂ ಸಿಇಒ ಆನಂದ್ ಪ್ರಕಾಶ್ ಮೀನಾ ಶಾಲಾ ಕೊಠಡಿ ದುರಸ್ತಿಗೆ ಪಂಚಾಯತ್ ರಾಜ್ ಎಂಜಿನಿಯರ್‌ಗೆ ವಹಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಪ್ರಕೃತಿ ವಿಕೋಪ ಕಂಟ್ರೋಲ್ ರೂಮ್ ಸಹಾಯವಾಣಿ ಕೇಂದ್ರ ಕಾರ್ಯ ನಿರ್ವಹಿಸಲಿವೆ. ಹಾಗೆಯೇ ಸೆಸ್ಕ್, ಅರಣ್ಯ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಹಾಯವಾಣಿ ಕೇಂದ್ರ ತೆರೆಯಲಾಗಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ತಿಳಿಸಿದರು. ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಚಂದ್ರಶೇಖರ್, ಉಪ ವಿಭಾಗಾಧಿಕಾರಿ ವಿನಾಯಕ ನರ್ವಡೆ ಕಂದಾಯ ಇಲಾಖೆಯ ಮಾಹಿತಿ ನೀಡಿದರು.

ಮರ ಬಿದ್ದು ಕಾಫಿ ಬೆಳೆಗಾರ ಬಲಿ



ಮಡಿಕೇರಿ, ಮೇ 27– ಭಾರಿ ಗಾಳಿ ಮಳೆಗೆ ಮರ ಬಿದ್ದು ಕಾಫಿ ಬೆಳೆಗಾರರೊಬ್ಬರು ಮೃತಪಟ್ಟ ಘಟನೆ ವಿರಾಜಪೇಟೆ ತಾಲೂಕಿನ ಅಮ್ಮತ್ತಿ ಹೋಬಳಿಯ ಬಾಡಗ ಬಾಣಂಗಾಲ ಗ್ರಾಮದ ಜನತಾ ಕಾಲೋನಿಯಲ್ಲಿ ಇಂದು ಬೆಳಿಗ್ಗೆ ನಡೆದಿದೆ. ಅಲ್ಲಿನ ನಿವಾಸಿ ಪೊನ್ನಚಂಡ ವಿಷ್ಣು ಬೆಳ್ಳಿಯಪ್ಪ (65) ಎಂಬವರೇ ಮೃತಪಟ್ಟವರು.

ಬೆಳಿಗ್ಗೆ 7.30ರ ಸಮಯದಲ್ಲಿ ವಿಷ್ಣು ಬೆಳ್ಳಿಯಪ್ಪ ಹೊರ ಬರುತ್ತಿದ್ದ ಸಂದರ್ಭ ಮನೆಯ ಆವರಣದಲ್ಲಿದ್ದ ಮಾವಿನ ಮರ ಬುಡ ಸಹಿತ ಮಗುಚಿ ಮನೆಯ ಮೇಲೆ ಬಿದ್ದಿದೆ. ಈ ವೇಳೆ ಮನೆಯ ಹೊರಗಿದ್ದ ವಿಷ್ಣು ಬೆಳ್ಳಿಯಪ್ಪ ಅವರ ತಲೆಯ ಭಾಗಕ್ಕೆ ಗಂಭೀರ ಗಾಯವಾಗಿದೆ. ತಕ್ಷಣವೇ ಅವರನ್ನು ಸಿದ್ದಾಪುರ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಘಟನಾ ಸ್ಥಳಕ್ಕೆ ಸಿದ್ದಾಪುರ ಪೊಲೀಸರು, ಸ್ಥಳೀಯ ಗ್ರಾಮ ಪಂಚಾಯಿತಿ ಅಧಿಕಾರಿಗಳು ಮತ್ತು ಸದಸ್ಯರು, ಕಂದಾಯ ಇಲಾಖೆ, ಅರಣ್ಯ ಇಲಾಖೆ ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಂತಿ ಬೇಲಿಗೆ ಸಿಲುಕಿದ್ದ ಚಿರತೆ ರಕ್ಷಣೆ



ಮಡಿಕೇರಿ,ಮೇ 27– ತೋಟದ ತಂತಿ ಬೇಲಿಗೆ ಸಿಲುಕಿದ್ದ ಚಿರತೆಯನ್ನು ರಕ್ಷಿಸಿದ ಘಟನೆ ವಿರಾಜಪೇಟೆ ತಾಲೂಕಿನ ಕೆದಮುಳ್ಳೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಮಾಳೇಟಿರ ಗೌತಮ್ ಎಂಬವರ ತೋಟದ ತಂತಿಗೆ ಚಿರತೆ ಸಿಲುಕಿಕೊಂಡು ಪ್ರಾಣ ಉಳಿಸಿಕೊಳ್ಳಲು ಹರ ಸಾಹಸ ಪಡುತ್ತಿತ್ತು ತೋಟದ ಮಾಲೀಕ ಗೌತಮ್ ರಾಜ್ಯ ವನ್ಯ ಜೀವಿ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ ಅವರಿಗೆ ಮಾಹಿತಿ ನೀಡಿದರು. ಅರವಳಿಕೆ ತಜ್ಞ ರಂಜನ್ ಚಿರತೆಗೆ ಅರವಳಿಕೆ ನೀಡಿ ಬಳಿಕ ಬಲೆಯ ಸಹಾಯದಿಂದ ಹಿಡಿದು ತುತಿಯಿಂದ ಬಿಡಿಸಿ ಪ್ರಾಥಮಿಕ ಚಿಕಿತ್ಸೆನೀಡಲಾಯಿತು. ನಂತರ ಚಿರತೆಯನ್ನು ಬೋನ್‌ಗೆ ಹಾಕಿ ನಾಗರಹೊಳೆ ಅರಣ್ಯಕ್ಕೆ ಕೊಂಡೊಯ್ದು ಸುರಕ್ಷಿತವಾಗಿ ಬಿಡಲಾಯಿತು. ಈ ವೇಳೆ ಸಂಕೇತ್ ಪೂವಯ್ಯ, ಎಸಿಎಫ್ ಗೋಪಾಲ್, ಆರ್‌ಎಫ್‌ಓ ಶಿವರಾಮ್, ಅರವಳಿಕೆ ತಜ್ಞ ರಂಜನ್, ಪಶುವೈದ್ಯ ರಮೇಶ್ ಹಾಗೂ ಅರಣ್ಯ ಸಿಬ್ಬಂದಿಗಳು ಹಾಜರಿದ್ದರು.

ಮೂವರ ಬಂಧನ: 31 ಚೀಲ ಕಾಫಿ ವಶ

ಮಡಿಕೇರಿ, ಮೇ 27– ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಮೂರು ಕಾಫಿ ಕಳವು ಪ್ರಕರಣವನ್ನು ಪತ್ತೆ ಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಸುಂಟಿಕೊಪ್ಪದ ಮಹೇಶ್(44), ಮದೆ ಗ್ರಾಮದ ಕೆಆರ್. ವಿನೋದ್ (39) ಮತ್ತುಗಾಳಿಬೀಡು ಮೊಣ್ಣಂಗೇರಿ ಗ್ರಾಮದ ಕೆ.ಎಂ.ರಾಮಯ್ಯ (28) ಎಂಬವರೇ ಬಂಧಿತರಾಗಿದ್ದಾರೆ. ಆರೋಪಿಗಳು ಕಳವು ಮಾಡಿದ್ದ 31 ಚೀಲ ಕಾಫಿ, ಕೃತ್ಯಕ್ಕೆ ಬಳಸಿದ ಮಾರುತಿ ಕಾರು, ರಾಡ್ ಕಟ್ಟರ್, ಒಂದು ಹಾರೆಯನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಆರೋಪಿಗಳನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ.

ಅಸ್ಥಾನ ಹಾಡಿಯಲ್ಲಿ ಚಿರತೆ ದಾಳಿಗೆ ಹಸು ಬಲಿ

ಸಿದ್ದಾಪುರ, ಮೇ 27– ವಿರಾಜಪೇಟೆ ತಾಲೂಕಿನ ಮಾಲ್ದಾರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಸ್ಥಾನ ಹಾಡಿಯಲ್ಲಿ ಚಿರತೆ ದಾಳಿಗೆ ನಾಲ್ಕೂ ವರೆ ವರ್ಷದ ಹಸು ಬಲಿಯಾಗಿದೆ. ಗ್ರಾಮದ ಹೆಚ್.ಸಿ. ಮಾಲ ಎಂಬವರಿಗೆ ಸೇರಿದ ಹಸು ಜಮೀನಿನಲ್ಲಿ ಮೇಯುತ್ತಿದ್ದಾಗ ಚಿರತೆ ದಾಳಿ ನಡೆಸಿ ಕೊಂದು ಹಾಕಿದೆ. ವಿಷಯ ತಿಳಿದ ತಕ್ಷಣವೇ ಕುಶಾಲನಗರ ವಲಯದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಪಶು ವೈದ್ಯಾಧಿಕಾರಿ ನವೀನ್, ಗ್ರಾಪಂ ಉಪಾಧ್ಯಕ್ಷ ಕುಂಞಣ್ಣ, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಾಡಂಚಿನ ಗ್ರಾಮಗಳಲ್ಲಿ ಕಾಡುಪ್ರಾಣಿಗಳ ಹಾವಳಿ ಮಿತಿಮೀರಿದ್ದು ಜಾನುವಾರುಗಳು ನಿರಂತರ ಬಲಿಯಾಗುತ್ತಿದೆ. ಕಾಡು ಪ್ರಾಣಿಗಳ ಹಾವಳಿಯನ್ನು ಶಾಶ್ವತವಾಗಿ ತಡೆಗಟ್ಟುವಲ್ಲಿ ಅರಣ್ಯ ಇಲಾಖೆ ವಿಫಲವಾಗಿದ್ದು ರೈತರ ಜಾನುವಾರುಗಳ ಬಲಿಗೆ ಅರಣ್ಯ ಇಲಾಖೆ ಸೂಕ್ತ ಪರಿಹಾರ ನೀಡಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಯಳಂದೂರು: ಪೌರ ನೌಕರರಿಂದ ಅನಿರ್ದಿಷ್ಟಾವಧಿ ಧರಣಿ



ಪಟ್ಟಣ ಪಂಚಾಯಿತಿ ಮುಂಭಾಗ ಪಟ್ಟಣ ಪಂಚಾಯಿತಿ ಪೌರ ನೌಕರರು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು.

ಯಳಂದೂರು, ಮೇ 27(ವಿನಾಗರಾಜು)– ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘ ಕರೆ ನೀಡಿರುವ ಪೌರ ನೌಕರರ ಅನಿರ್ದಿಷ್ಟಾವಧಿ ಧರಣಿಗೆ ಪಟ್ಟಣ ಪಂಚಾಯಿತಿ ನೌಕರರು ಬೆಂಬಲ ಸೂಚಿಸಿದರು.

ರಾಜ್ಯಾದ್ಯಂತ ಪೌರ ನೌಕರರ ಸಂಘದ ಎಲ್ಲಾ ಸದಸ್ಯರೂ ಕಸ ಸಂಗ್ರಹ, ವಿಲೇವಾರಿ, ಸ್ವಚ್ಛತೆ, ನೀರು ಪೂರೈಕೆ, ಒಳಚರಂಡಿ ನಿರ್ವಹಣೆ ಕೆಲಸವನ್ನು ಸ್ಥಗಿತಗೊಳಿಸಿ ಬೇಡಿಕೆ ಈಡೇರುವವರೆಗೂ ಪ್ರತಿಭಟನೆ ನಡೆಸಲಿದ್ದಾರೆ.

ಸಂಸ್ಥೆಗಳಾದ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿಗಳ ಪೌರ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಬೇಕು, ನಗದು ರಹಿತ ಆರೋಗ್ಯ ಚಿಕಿತ್ಸಾ ಸೌಲಭ್ಯ ಯೋಜನೆಯಾದ ಜ್ಯೋತಿ ಸಂಜೀವಿನಿಯನ್ನು ಪೌರ ನೌಕರರಿಗೂ ವಿಸ್ತರಿಸಬೇಕು, ಸರ್ಕಾರಿ ನೌಕರರಿಗೆ ಸಿಗುವ ಎಲ್ಲಾ ಸೌಲಭ್ಯಗಳನ್ನು ಈಡೇರಿಸಬೇಕು, ಹೊರಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜುದಾರರು, ವಾಹನ ಚಾಲಕರು, ಲೋಡರ್‌ಗಳು, ಕ್ಲೀನರ್‌ಗಳು, ಸ್ವಚ್ಚತಾ ಮೇಲ್ವಿಚಾರಕರು, ಉದ್ಯಾನ ನಿರ್ವಹಣೆಗಾರರು ಸೇರಿದಂತೆ ವಿವಿಧ ವೃಂದದ ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು, ದಿನಗೂಲಿ ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು, ಟೈಮ್ ಸ್ಕೇಲ್ ನೌಕರರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು, ವಾಹನ ಚಾಲಕರು, ನೀರು ಪೂರೈಕೆ ನೌಕರರು, ನೇರ ಪಾವತಿ ಪೌರಕಾರ್ಮಿಕರನ್ನು ಖಾಯಂಗೊಳಿಸಬೇಕು, ನೌಕರರಿಗೆ ಎಸ್‌ಎಫ್‌ಸಿ ಮುಕ್ತ ನಿಧಿಯಿಂದ ವೇತನ ನೀಡಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ನೌಕರರಾದ ಜಯಲಕ್ಷ್ಮಿ ಆರ್. ಸುರೇಶ್, ಮನೋಜ್, ಪರಶಿವಮೂರ್ತಿ, ಎಲ್. ರೇಖಾ, ಆರ್. ವಿಜಯ ಮಲ್ಲಿಕಾರ್ಜುನಸ್ವಾಮಿ, ಲಕ್ಷ್ಮಿ ರಘುಪತಿ, ಜಗದೀಶ್, ಸಂತೋಷ್, ಮಾದೇಶ್, ಆಮಾಸೆ, ನಾಗರಾಜು, ಆರ್ಯಮ್ಮ ಬಿ.ಸಿ. ಮಂಜುನಾಥ್, ಗಣೇಶ್, ಸುರೇಶ್, ರಾಮು, ಬಿಳಿಗಿರಿ, ರಂಗಸ್ವಾಮಿ ಕುಮಾರ. ಮಂಜುನಾಥ, ಶೋಭಾ, ಶಾಂತಿ, ನಾಗಮ್ಮ, ಬಣ್ಣಮ್ಮ ಮತ್ತಿತರರಿದ್ದರು.

ಚಾ.ನಗರದಲ್ಲೂ ಅನಿರ್ಧಿಷ್ಟಾವಧಿ ಮುಷ್ಕರ



ವಿವಿಧ ಬೇಡಿಕೆಗಳನ್ನು ಆಗ್ರಹಿಸಿ ಜಿಲ್ಲಾ ಪೌರ ನೌಕರರು ಮುಷ್ಕರ ನಡೆಸಿದರು.


ಚಾಮರಾಜನಗರ, ಮೇ 27– ತಮ್ಮನ್ನು ಸರ್ಕಾರಿ ನೌಕರರೆಂದು ಪರಿಗಣಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘ ಜಿಲ್ಲಾ ಶಾಖೆ ಆಶ್ರಯದಲ್ಲಿ ಪೌರ ನೌಕರರು ಕರ್ತವ್ಯಕ್ಕೆ ಗೈರಾಗಿ ನಗರದ ನಗರಸಭಾ ಕಚೇರಿ ಮುಂಭಾಗದಲ್ಲಿ ಅನಿರ್ಧಿಷ್ಟಾವಧಿ ಮುಷ್ಕರ ಆರಂಭಿಸಿದರು.

ಪೌರ ಕಾರ್ಮಿಕರು, ಲೋಡರ್‌ಗಳು, ಕ್ಲೀನರ್‌ಗಳು, ನೀರು ಸರಬರಾಜುದಾರರು, ಯುಜಿಡಿ, ಉದ್ಯಾನ ನಿರ್ವಹಣೆಗಾರರು ಸೇರಿದಂತೆ ಸಂಘದಡಿ ಬರುವ ಎಲ್ಲಾ ನೌಕರರು ಕರ್ತವ್ಯಕ್ಕೆ ಗೈರಾಗಿ ಮುಷ್ಕರದಲ್ಲಿ ಭಾಗವಹಿಸಿದ್ದರು. ನ್ಯಾಯಯುತವಾದ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಸಂಘವು ಇದುವರೆಗೆ ಮುಖ್ಯಮಂತ್ರಿ, ಪೌರಾಡಳಿತ ಸಚಿವರು, ನಗರಾಭಿವೃದ್ಧಿ ಸಚಿವರು, ಇಲಾಖೆಗಳ ಕಾರ್ಯದರ್ಶಿ, ಪೌರಾಡಳಿತ ನಿರ್ದೇಶಕರು ಸೇರಿದಂತೆ ವಿವಿಧ ಹಂತಗಳ ಅಧಿಕಾರಿಗಳನ್ನು ಭೇಟಿ ಮಾಡಿ ಮನವಿ ನೀಡಿದ್ದೇವೆ. ಇದುವರೆಗೆ ನಮ್ಮ ಮನವಿಗೆ ಯಾರೂ ಸ್ಪಂದಿಸಿಲ್ಲ. ಹೀಗಾಗಿ ಸಂಘದ ರಾಜ್ಯ ಅಧ್ಯಕ್ಷರ ಆದೇಶದಂತೆ ಅನಿರ್ಧಿಷ್ಟಾವಧಿ ಮುಷ್ಕರ ನಡೆಸಲಾಗುತ್ತಿದೆ ಎಂದರು.

ನಗದು ರಹಿತ ಆರೋಗ್ಯ ಚಿಕಿತ್ಸಾ ಸೌಲಭ್ಯದ ಜ್ಯೋತಿ ಸಂಜೀವಿನಿ ಯೋಜನೆ ಪೌರ ನೌಕರರಿಗೂ ವಿಸ್ತರಿಸಬೇಕು. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜುದಾರರು, ವಾಹನ ಚಾಲಕರು, ಲೋಡರ್‌ಗಳು, ಕ್ಲೀನರ್‌ಗಳು, ಸ್ವಚ್ಛತಾ ಮೇಲ್ವಿಚಾರಕರು, ಉದ್ಯಾನ ನಿರ್ವಹಣೆಗಾರರು ಸೇರಿದಂತೆ ವಿವಿಧ ವೃಂದದ ಹೊರಗುತ್ತಿಗೆ ನೌಕರನ್ನು ನೇರ ಪಾವತಿಗೆ ಒಳಪಡಿಸಬೇಕು ಎಂದರು.

ಮುಷ್ಕರದಲ್ಲಿ ಶಿವಶಂಕರ್‌ಆರಾಧ್ಯ, ನಾಗರಾಜು, ರಾಜಪ್ಪ, ಮಂಜುನಾಥ್, ವೆಂಕಟನಾಯಕ, ಸಿದ್ದಪ್ಪಾಜಿ, ರೂಪಾ, ಪಳನಿಸ್ವಾಮಿ, ಮಹೇಶ್, ಸಂತೋಷ, ಸಿದ್ದರಾಜು, ಶ್ರೀಕಂಠಸ್ವಾಮಿ, ಅಬ್ದುಲ್, ಪೌರನೌಕರರು ಭಾಗವಹಿಸಿದ್ದರು.

ಮೊಮ್ಮಗಳಿಂದ ಪತ್ರಕರ್ತ ಎ.ಡಿ.ಸಿಲ್ವಾರ ಕೃತಿ ಲೋಕಾರ್ಪಣೆ



ಪತ್ರಕರ್ತ ಎ.ಡಿ.ಸಿಲ್ವಾ ಕೃತಿಯನ್ನು ಮೊಮ್ಮಗಳು ಕು. ಇಂಪನಾ ಬಿಡುಗಡೆ ಮಾಡಿದಳು

ಚಾಮರಾಜನಗರ, ಮೇ 27– ಘೋಷಿತ ತುರ್ತು ಪರಿಸ್ಥಿತಿಗಿಂತ ಅಘೋಷಿತ ತುರ್ತು ಪರಿಸ್ಥಿತಿ ಅತ್ಯಂತ ಅಪಾಯಕಾರಿಯಾಗಿದ್ದು. ಘಟನೆಗಳು ಮುಂದೆಂದೂ ನಡೆಯದಂತೆ ಪ್ರತಿಯೊಬ್ಬರು ಎಚ್ಚರ ವಹಿಸಬೇಕು ಎಂದು ಪಿಯುಸಿಎಲ್ ರಾಜ್ಯಾಧ್ಯಕ್ಷ ಅರವಿಂದ ನಾರಾಯಣ ಹೇಳಿದರು.

ನಗರದ ರೋಟರಿ ಭವನದಲ್ಲಿ ಪಿಯುಸಿಎಲ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ರೋಟರಿ ಸಂಸ್ಥೆ ಸಹಯೋಗದಲ್ಲಿ ಶನಿವಾರ ಸಂಜೆ ನಡೆದ ಹಿರಿಯ ಪತ್ರಕರ್ತ ಎ.ಡಿ.ಸಿಲ್ವಾ ಅವರ "ತುರ್ತು ಪರಿಸ್ಥಿತಿ ಸೆರೆವಾಸದ ಆ ದಿನಗಳು" ಕೃತಿ ಲೋಕಾರ್ಪಣೆ ಸಮಾರಂಭ'ದಲ್ಲಿ ಘೋಷಿತ ತುರ್ತುಸ್ಥಿತಿಯಿಂದ ಅಘೋಷಿತ ತುರ್ತು ಸ್ಥಿತಿಯವರೆಗೆ– ವರ್ತಮಾನದ ಸವಾಲುಗಳು ಕುರಿತು ಉಪನ್ಯಾಸ ನೀಡಿ ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಸರ್ಕಾರ ಮಾಡಿದ್ದೆ ಕಾನೂನಾಗಿತ್ತು. ಸರ್ಕಾರದ ವಿರುದ್ಧ ಪ್ರಶ್ನಿಸುವವರನ್ನು ಜೈಲಿಗೆ ಕಳುಹಿಸಲಾಗುತ್ತಿತ್ತು. ಮಾಧ್ಯಮಗಳ ಮೇಲೂ ನಿರ್ಬಂಧಹೇರಲಾಗಿತ್ತು. ದೇಶದಲ್ಲಿ ಒಂದು ರೀತಿಯ ಅಘೋಷಿತ ತುಘಲಕ್ ದರ್ಬಾರ್ ಆಡಳಿತವಿತ್ತು ಎಂದರು.

ಪಿಯುಸಿಎಲ್ ಉಪಾಧ್ಯಕ್ಷ ಕೆ.ವೆಂಕಟರಾಜು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಾಹಿತ್ಯ ಅಕಾಡೆಮಿ ಸದಸ್ಯ ಪ್ರಕಾಶ್ ರಾಜ್ ಮೇಹು ಮಾತನಾಡಿದರು. ಹಿರಿಯ ಪತ್ರಕರ್ತ ಅಬ್ರಹಾಂ ಡಿ.ಸಿಲ್ವ ಅವರ ಮೊಮ್ಮಗಳು ಕುಮಾರಿ ಇಂಪನಾ ಕೃತಿಯನ್ನು ಲೋಕಾರ್ಪಣೆ ಮಾಡಿದಳು. ಪಿಯುಸಿಎಲ್ ಜಿಲ್ಲಾಧ್ಯಕ್ಷ ಪುಣಜನೂರು ದೊರೆಸ್ವಾಮಿ ಅಧ್ಯಕ್ಷತೆ ವಹಿಸಿದ್ದರು..

ನಂಜನಗೂಡು ಕೆ.ಜಿ.ಅಲಮೇಲು, ರೋಟರಿ ಅಧ್ಯಕ್ಷ ನಾಗರಾಜು, ಸಾಹಿತಿ ಹೊರೆಯಾಲ ದೊರೆಸ್ವಾಮಿ, ಅಪೂರ್ವ ಡಿ.ಸಿಲ್ವ ಪುನರ್ಚಿತ್ ಸಂಸ್ಥೆಯ ವೀರಭದ್ರ ನಾಯಕ. ಅಬ್ರಹಾಂ ಡಿ.ಸಿಲ್ವ, ಕೋಣನೂರು ನಾಗರಾಜು, ಕುಮಾರ್ ಆರಾಧ್ಯ ನಗರದ ವಿವಿಧ ಪ್ರಗತಿ ಪರ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು,

ಪರಿಶಿಷ್ಟ ಜಾತಿಗಳ ಸಮೀಕ್ಷೆ ಅವಧಿ ವಿಸ್ತರಣೆ

ಚಾಮರಾಜನಗರ, ಮೇ 27– ಪರಿಶಿಷ್ಟ ಜಾತಿಯಲ್ಲಿನ ಜಾತಿಗಳ ದತ್ತಾಂಶ ಸಂಗ್ರಹಕ್ಕಾಗಿ ನಡೆಸಲಾಗುತ್ತಿರುವ ಸಮೀಕ್ಷೆ ಅವಧಿಯನ್ನು ಮೇ 29ರವರೆಗೆ ವಿಸ್ತರಣೆ ಮಾಡಲಾಗಿದೆ. ಈ ಮೊದಲು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸುವ ಅವಧಿಯನ್ನು ಮೇ 5ರಿಂದ 25ರವರೆಗೆ ನಿಗದಿಪಡಿಸಲಾಗಿದ್ದು, ಈಗ ಸಮೀಕ್ಷಾ ಕಾರ್ಯವನ್ನು ವಿಸ್ತರಿಸಲಾಗಿದೆ. ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ ವಿಶೇಷ ಶಿಬಿರಗಳನ್ನು ಮೂರು ದಿನಗಳ ಕಾಲ ಹಮ್ಮಿಕೊಳ್ಳಲು 28ರವರೆಗೆ ದಿನಾಂಕ ನಿಗದಿ ಮಾಡಲಾಗಿತ್ತು. ಪ್ರಸ್ತುತ ಈ ವಿಶೇಷ ಶಿಬಿರವನ್ನು ಮೇ 30 ರಿಂದ ಜೂನ್ 1ರವರೆಗೆ ಮರುನಿಗಧಿ ಮಾಡಲಾಗಿದೆ.

ದೇವಮ್ಮ ನಾಪತ್ತೆ



ಚಾಮರಾಜನಗರ, ಮೇ 27 – ತಾಲೂಕಿನ ಆಲ್ದೂರು ಗ್ರಾಮದ ದೇವಮ್ಮ ಎಂಬ ಮಹಿಳೆ ಕಾಣೆಯಾಗಿದ್ದಾರೆ. 54 ವರ್ಷದ ದೇವಮ್ಮ 5 ಅಡಿ ಎತ್ತರ, ಎಣ್ಣೆಗೆಂಪು ಬಣ್ಣ, ಕಪ್ಪು ತಲೆಗೂದಲು, ತೆಳ್ಳನೆಯ ಮೈಕಟ್ಟು, ಕೋಲು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಆಕಾಶ ಬಣ್ಣದ ಸೀರೆ, ಕೆಂಪು ಬಣ್ಣದ ರವಿಕೆ ಧರಿಸಿದ್ದರು. ಇವರ ಸುಳಿವು ದೊರೆತಲ್ಲಿ ಕುದೇರು ಪೊಲೀಸ್ ಠಾಣೆ ದೂ.ಸಂ 08226–234439, ಪಿ.ಎಸ್.ಐ ಮೊ.ಸಂ 9480804647, ಸಂತೇಮರಹಳ್ಳಿ ವೃತ್ತ ಸಿ.ಪಿ.ಐ ಮೊ.ಸಂ 9480804630, ಚಾಮರಾಜನಗರ ಜಿಲ್ಲಾ ನಿಯಂತ್ರಣ ಕೊಠಡಿ ದೂಸಂ 08226–222383 ಸಂಪರ್ಕಿಸುವಂತೆ ಕುದೇರು ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಾಮುಲ್‌ನಲ್ಲಿ ಐಸ್‌ಕ್ರೀಮ್ ಘಟಕ ವಿರೋಧಿಸಿ ಬೃಹತ್ ಪ್ರತಿಭಟನೆ



ಚಾಮುಲ್‌ನಲ್ಲಿ ಐಸ್ ಕ್ರೀಮ್ ಘಟಕ ಸ್ಥಾಪನೆ ವಿರೋಧಿಸಿ ರೈತ ಸಂಘಟನೆಗಳು ಪ್ರತಿಭಟನೆ ನಡೆಸಿದವು

ಚಾಮರಾಜನಗರ, ಮೇ 27– ತಾಲೂಕಿನ ಕುದೇರು ಗ್ರಾಮದಲ್ಲಿರುವ ಚಾಮುಲ್‌ನಲ್ಲಿ ಐಸ್ ಕ್ರೀಮ್ ಘಟಕ ಸ್ಥಾಪನೆಗೆ ಮುಂದಾಗಿರುವ ಕ್ರಮವನ್ನು ವಿರೋಧಿಸಿ ನಗರದಲ್ಲಿ ರೈತ ಸಂಘಟನೆಗಳು ಬೃಹತ್ ಪ್ರತಿಭಟನೆ ನಡೆಸಿದವು

ಪ್ರವಾಸಿ ಮಂದಿರದಿಂದ ಹೊರಟ ಪ್ರತಿಭಟನಾಕಾರರು ಜಿಲ್ಲಾಡಳಿತ ಭವನಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ, ಚಾಮುಲ್ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ, ಜಿಲ್ಲಾಧಿಕಾರಿಗಳು ಕೂಡಲೇ ಮಧ್ಯೆ ಪ್ರವೇಶಿಸಿ, ರೈತರು ಮತ್ತು ಉತ್ಪಾದಕರ ಜೊತೆ ಸಭೆ ನಡೆಸಬೇಕು. ಘಟಕ ಸ್ಥಾಪನೆಯಿಂದಾಗುವ ಆಗು–ಹೋಗುಗಳ ಬಗ್ಗೆ ಚರ್ಚೆ ನಡೆಸಬೇಕು ಎಂದು ಮನವಿ ಸಲ್ಲಿಸಿದರು.

ಜಿಲ್ಲಾ ರೈತ ಸಂಘದ ಅಧ್ಯಕ್ಷ ಹೊನ್ನೂರು ಪ್ರಕಾಶ್ ಮಾತನಾಡಿ, ಪ್ರಸ್ತುತ ಚಾಮುಲ್‌ಗೆ ಇರುವ ಸಾಲವನ್ನು ತೀರಿಸಿಲ್ಲ. ಈಗ ಐಸ್‌ಕ್ರೀಮ್ ಘಟಕ ಸ್ಥಾಪನೆಗಾಗಿ ಮತ್ತೇ 40 ಕೋಟಿ ಸಾಲ ಪಡೆಯಲು ಮುಂದಾಗಿರುವುದು ಖಂಡನೀಯವಾಗಿದೆ. ಪ್ರಸ್ತುತ ಮಾಸಿಕ ಸುಮಾರು 30 ಲಕ್ಷ ಬಡ್ಡಿಯನ್ನು ಬ್ಯಾಂಕ್‌ನ ಸಾಲಕ್ಕೆ ಪಾವತಿ ಮಾಡಲಾಗುತ್ತಿದೆ. ಮತ್ತೇ 40 ಕೋಟಿ ಸಾಲ ಮಾಡಿದರೆ ಇದು ಹಾಲು ಉತ್ಪಾದಕರಿಗೆ ಹೊರೆಯಾಗುತ್ತದೆ ಎಂದರು.

ಪ್ರತಿಭಟನೆಯಲ್ಲಿ ಚಾಮುಲ್ ನಿರ್ದೇಶಕ ವೈ.ಸಿ. ನಾಗೇಂದ್ರ, ರೈತ ಮುಖಂಡರಾದ ಚಂಗಡಿ ಕರಿಯಪ್ಪ, ಅಂಬಳೆ ಕುಮಾರ್, ಮೂಕಳ್ಳಿ ಮಹದೇವಸ್ವಾಮಿ, ಹೆಗ್ಗೋಠಾರ ಶಿವಸ್ವಾಮಿ, ಚಿಕ್ಕಬಸಪ್ಪ, ಶಿವರುದ್ರಸ್ವಾಮಿ, ಮಹದೇವಸ್ವಾಮಿ, ಚನ್ನಮಲ್ಲಪ್ಪ, ರಾಮಣ್ಣ, ರಾಜು, ರಾಣಿ, ಸುಮತಿ, ಪ್ರೇಮ, ನವೀನ್, ಸತೀಶ್, ಮಣಿ, ನಂದೀಶ್, ಸುಮಿತ್ರಾ, ಗವಿಯಪ್ಪ, ಸಿದ್ದರಾಜು, ಶಂಕರಪ್ಪ, ಮಹೇಶ್ ಇತರರು ಭಾಗವಹಿಸಿದ್ದರು.

ಈಜಲು ಹೋದ ವೈದ್ಯಕೀಯ ವಿದ್ಯಾರ್ಥಿ ನಾಪತ್ತೆ

ಪ್ರಾಣಾಪಾಯದಿಂದ ಪಾರಾದ ಮೂವರು ವಿದ್ಯಾರ್ಥಿಗಳು



ಕೊಳ್ಳೇಗಾಲ, ಮೇ 27– ಪ್ರವಾಸಾರ್ಥ ಶಿವನ ಸಮುದ್ರಕ್ಕೆ ಆಗಮಿಸಿದ್ದ ವೈದ್ಯಕೀಯ ವಿದ್ಯಾರ್ಥಿಗಳಲ್ಲಿ ಮೋಜಿಗಾಗಿ ಈಜಲು ಹೋಗಿ ಅಲೆಯ ರಭಸಕ್ಕೆ ಓರ್ವ ನಾಪತ್ತೆಯಾಗಿ ಮೂವರು ವಿದ್ಯಾರ್ಥಿಗಳು ಪ್ರಾಣಾಪಾಯದಿಂದ ಪಾರಾದ ಘಟನೆ ಸಂಭವಿಸಿದೆ.

ಬೆಂಗಳೂರು ಮೂಲದ ದಯಾನಂದ ಸಾಗರ್ ಮೆಡಿಕಲ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಏಳು ಮಂದಿ ವಿದ್ಯಾರ್ಥಿಗಳು ಮಂಗಳವಾರ ಪ್ರವಾಸ ನಿಮಿತ್ತ ಶಿವನ ಸಮುದ್ರಕ್ಕೆ ಆಗಮಿಸಿದ್ದರು. ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದಾಗಿ ನೀರು ರಭಸವಾಗಿ ಹರಿಯುತ್ತಿದ್ದರೂ, ಅದನ್ನು ಲೆಕ್ಕಿಸದೆ ಈ ಏಳು ಮಂದಿ ವಿದ್ಯಾರ್ಥಿಗಳಲ್ಲಿ ನಾಲ್ವರು ಮಧ್ಯಾಹ್ನ ಶಿವನಸಮುದ್ರದ ದರ್ಗಾದ ಹಿಂಭಾಗ ದಲ್ಲಿನ ಕಾವೇರಿ ನದಿಯಲ್ಲಿ ನೀರಿಗೆ ಇಳಿದಿದ್ದಾರೆ. ಆದರೆ ಅಲೆಯ ಸೆಳೆತಕ್ಕೆ ನಾಲ್ವರು ವಿದ್ಯಾರ್ಥಿಗಳು ಈಜಲು ಸಾಧ್ಯವಾಗದೆ ಪರದಾಡುತ್ತಿರುವುದನ್ನು ಕಂಡ ಸ್ಥಳೀಯರು ಅಗ್ನಿಶಾಮಕದವರಿಗೆ ದೂರು ನೀಡಿದರು.

ಕೊಳ್ಳೇಗಾಲ ಅಗ್ನಿಶಾಮಕ ಠಾಣಾಧಿಕಾರಿ ಅರುಣ್ ಕುಮಾರ್ ನೇತೃತ್ವದ ತಂಡ ಕೂಡಲೇ ಸ್ಥಳಕ್ಕೆ ಧಾವಿಸಿ, ನಾಲ್ವರು ವೈದ್ಯಕೀಯ ವಿದ್ಯಾರ್ಥಿಗಳ ಪೈಕಿ ಪ್ರಫುಲ್ಲ, ತುಷಾರಾ ಮತ್ತು ಪ್ರಮೋದ್ ಎಂಬವರನ್ನು ಅಗ್ನಿಶಾಮಕ ಸಿಬ್ಬಂದಿ ಸುರಕ್ಷಿತವಾಗಿ ರಕ್ಷಣೆ ಮಾಡಿದರು. ಆದರೆ ನಂದಕುಮಾರ್ ಎಂಬ ವಿದ್ಯಾರ್ಥಿ ಇನ್ನೂ ನಾಪತ್ತೆಯಾಗಿದ್ದು, ಅಗ್ನಿಶಾಮಕ ಸಿಬ್ಬಂದಿ ಶೋಧ ಕಾರ್ಯ ಮುಂದುವರೆಸಿದ್ದಾರೆ. ಪೋಲೀಸರು ದೂರನ್ನು ದಾಖಲಿಸಿಕೊಂಡು ಮುಂದಿನ ತನಿಖೆ ನಡೆಸುತ್ತಿದ್ದಾರೆ.

ತಂಬಾಕು ಬೆಳೆಗಾರರ ಸಮಸ್ಯೆ ನಿವಾರಣೆ

ಸಂಸದ ಯದುವೀರ್ ಭರವಸೆ



ಮೈಸೂರು, ಮೇ 27– ತಂಬಾಕು ಬೆಳೆಗಾರರ ಸಮಸ್ಯೆಗಳನ್ನು ಪರಿಹರಿಸಲು ಸದಾ ಬದ್ಧನಾಗಿದ್ದು, ಬೆಳೆ ಪ್ರಮಾಣ ಕಡಿಮೆಯಾದ ರೈತರಿಗೆ ಯಾವುದೇ ದಂಡ ವಿಧಿಸದಂತೆ ತಂಬಾಕು ಮಂಡಳಿ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ತಂಬಾಕು ಮಂಡಳಿಯ ಕಾರ್ಯಕಾರಿ ನಿರ್ದೇಶಕರ ಜೊತೆ ಮಾತನಾಡಿದ್ದು, ಪರವಾನಗಿ ಹೊಂದಿರುವ ರೈತರು ಒಂದು ವೇಳೆ ಕಡಿಮೆ ಪ್ರಮಾಣದಲ್ಲಿ ಬೆಳೆದರೆ ಅಂತಹವರಿಗೆ ಯಾವುದೇ ದಂಡ ವಿಧಿಸದಂತೆ ಸೂಚಿಸಲಾಗಿದೆ. ಈ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾಗಿ ಹೇಳಿದ್ದಾರೆ.

ನಮ್ಮ ಕ್ಷೇತ್ರದಲ್ಲಿ ತಂಬಾಕು ಬೆಳೆಗಾರರ ಸಂಖ್ಯೆ ಹೆಚ್ಚಾಗಿದೆ. ಇವರ ಸಮಸ್ಯೆಗಳನ್ನು ನನ್ನ ಗಮನಕ್ಕೆ ತಂದ ಕೂಡಲೇ ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಿದ್ದೇನೆ. ತಂಬಾಕು ಬೆಳೆಗಾರರ ಕಷ್ಟ–ನಷ್ಟಗಳ ಬಗ್ಗೆ ನನಗೆ ಅರಿವಿದೆ. ಕೆಲವೊಮ್ಮೆ ವಿವಿಧ ಕಾರಣಗಳಿಂದಾಗಿ ನಿಗದಿತ ಪ್ರಮಾಣಕ್ಕಿಂತ ಕಡಿಮೆ ಬೆಳೆಯುವ ಸಾಧ್ಯತೆ ಇರುತ್ತದೆ. ಅಂಥವರ ಮೇಲೆ ದಂಡ ವಿಧಿಸಲು ಅಧಿಕಾರಿಗಳು ಮುಂದಾಗಿದ್ದರು. ಹಾಗೆ ಮಾಡಿದರೆ ರೈತರಿಗೆ ತೊಂದರೆಯಾಗುತ್ತದೆ ಎಂದು ಮಂಡಳಿಯ ಅಧಿಕಾರಿಗಳಿಗೆ ಮನದಟ್ಟು ಮಾಡಿ, ಕೂಡಲೇ ನಿರ್ಧಾರ ಕೈಬಿಡಲು ತಿಳಿಸಲಾಗಿದೆ ಎಂದಿದ್ದಾರೆ.

ಚಂಚಲಗೂಡ ಜೈಲಿನಿಂದ ಪರಪ್ಪನ ಅಗ್ರಹಾರಕ್ಕೆ ರೆಡ್ಡಿ ಶಿಫ್ಟ್



ಬೆಂಗಳೂರು, ಮೇ 27– ಓಎಂಸಿ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಬಂಧನಕ್ಕೆ ಒಳಗಾದ ಶಾಸಕ ಜನಾರ್ದನ ರೆಡ್ಡಿ ಚಂಚಲಗೂಡ ಜೈಲಿನಿಂದ ಬೆಂಗಳೂರು ಪರಪ್ಪನ ಅಗ್ರಹಾರ ಜೈಲಿಗೆ ಸ್ಥಳಾಂತರವಾಗಲಿದ್ದಾರೆ.

ಇಂದು ಬಾಡಿ ವಾರಂಟ್ ಮೇಲೆ ಜನಾರ್ದನ ರೆಡ್ಡಿ ಅವರನ್ನು ಹೈದರಾಬಾದ್ ಪೊಲೀಸರು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಿದರು.

ವಿಚಾರಣೆ ನಡೆಸಿದ ನ್ಯಾ. ಸಂತೋಷ್ ಗಜಾನನ್ ಭಟ್ ಅವರು ಜನಾರ್ಧನ ರೆಡ್ಡಿ ಅವರನ್ನು ಪರಪ್ಪನ ಅಗ್ರಹಾರ ಜೈಲಿಗೆ ಸ್ಥಳಾಂತರ ಮಾಡುವಂತೆ ಆದೇಶ ಪ್ರಕಟಿಸಿ ಮುಂದಿನ ವಿಚಾರಣೆಯನ್ನು ಜೂನ್ 2ಕ್ಕೆ ಮುಂದೂಡಿಕೆ ಮಾಡಿದರು.

ಬೆಲೆಕೇರಿ ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜನಾರ್ಧನ ರೆಡ್ಡಿ ಸೇರಿದಂತೆ ಎಲ್ಲಾ ಆರೋಪಿಗಳು ಇಂದು ನ್ಯಾಯಾಲಯಕ್ಕೆ ಹಾಜರಾಗಿದ್ದರು. ಇಂದು ಖುದ್ದು ಹಾಜರಾತಿಗೆ ಕೋರ್ಟ್ ಸೂಚಿಸಿದ್ದರಿಂದ ರೆಡ್ಡಿ ಅವರನ್ನು ಪೊಲೀಸರು ಕೋರ್ಟ್‌ಗೆ ಹಾಜರು ಪಡಿಸಿದ್ದರು.

ಏನಿದು ಕೇಸ್: ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ರೆಡ್ಡಿ ಮೇಲಿದ್ದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಸಿಬಿಐ ನ್ಯಾಯಾಲಯ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ. ಶಿಕ್ಷೆ ವಿಧಿಸಿದ ನಂತರ ಪೊಲೀಸರು ರೆಡ್ಡಿಯನ್ನು ಬಂಧಿಸಿ ಚಂಚಲಗೂಡ ಜೈಲಿಗೆ ಶಿಫ್ಟ್ ಮಾಡಿದ್ದರು. ಈ ಮೂಲಕ 10 ವರ್ಷಗಳ ಬಳಿಕ ಮತ್ತೆ ಜನಾರ್ದನ ರೆಡ್ಡಿ ಜೈಲುಪಾಲಾಗಿದ್ದಾರೆ.

ಹೈದರಾಬಾದ್‌ನ ನಾಂಪಲ್ಲಿ ಸಿಬಿಐ ವಿಶೇಷ ನ್ಯಾಯಾಲಯವು ಓಎಂಸಿ ಅಕ್ರಮ ಗಣಿಗಾರಿಕೆ ಪ್ರಕರಣದ ಸುದೀರ್ಘ ವಿಚಾರಣೆ ನಡೆಸಿ ತೀರ್ಪು ಪ್ರಕಟಿಸಿತ್ತು. ರೆಡ್ಡಿ ಜತೆಗೆ ಓಎಂಸಿ ಕಂಪನಿ ವ್ಯವಸ್ಥಾಪಕ ನಿರ್ದೇಶಕ ಬಿ.ವಿ.ಶ್ರೀನಿವಾಸ ರೆಡ್ಡಿ, ರೆಡ್ಡಿ ಆಪ್ತ ಎಂ.ಅಲಿಖಾನ್, ಗಣಿ ಇಲಾಖೆ ಮಾಜಿ ಅಧಿಕಾರಿ ವಿ.ಡಿ.ರಾಜಗೋಪಾಲ್ ದೋಷಿಗಳು ಎಂದು ಹೇಳಿದೆ. ಕೋರ್ಟ್ ರೆಡ್ಡಿಗೆ 7 ವರ್ಷ ಜೈಲು ಶಿಕ್ಷೆ, 10 ಲಕ್ಷ ರೂ. ದಂಡ ಹಾಗೂ ಓಎಂಸಿ ಗಣಿ ಕಂಪನಿಗೆ 2 ಲಕ್ಷ ರೂ. ದಂಡ ವಿಧಿಸಿದೆ.

ಜೂನ್‌ನಲ್ಲಿ ವಾಡಿಕೆಗಿಂತ ಅಧಿಕ ಮಳೆ ಸಾಧ್ಯತೆ



ನವದೆಹಲಿ, ಮೇ 27– ದೇಶದ ಹಲವು ಭಾಗಗಳಲ್ಲಿ ಜೂನ್‌ನಲ್ಲಿ ವಾಡಿಕೆಗಿಂತ ಹೆಚ್ಚು ಮಳೆ ಸುರಿಯಲಿದ್ದು, ಇದು ಗರಿಷ್ಠ ತಾಪಮಾನ ದಾಖಲಾಗುವ ಪ್ರದೇಶಗಳಲ್ಲಿನ ಉಷ್ಣಾಂಶವನ್ನು ತಗ್ಗಿಸಲು ಸಹಕಾರಿಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮಂಗಳವಾರ ಹೇಳಿದೆ.

ಭೂವಿಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಂ.ರವಿಚಂದ್ರನ್, ಈ ಕುರಿತು ಮಾಹಿತಿ ನೀಡಿ, ಜೂನ್‌ನಲ್ಲಿ ವಾಡಿಕೆಯಂತೆ 166.9 ಮಿ.ಮೀ. ಮಳೆ ಸುರಿಯಬೇಕು. ಆದರೆ ಈ ವರ್ಷ ಶೇ 108ರಷ್ಟು ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣದ ರಾಜ್ಯಗಳು, ಈಶಾನ್ಯ ಮತ್ತು ವಾಯುವ್ಯ ಭಾಗಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆ ಬೀಳುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

ಐಎಂಡಿ ಮಹಾನಿರ್ದೇಶಕ ಮೃತ್ಯುಂಜಯ ಮೋಹಪಾತ್ರ ಅವರು ಮಾಹಿತಿ ನೀಡಿ, ಉತ್ತಮ ಮಳೆಯ ನಿರೀಕ್ಷೆ ಇರುವುದರಿಂದ, ದೇಶದ ಉತ್ತರದ ಹಲವು ಭಾಗಗಳಲ್ಲಿ ಜೂನ್‌ನಲ್ಲಿ ದಾಖಲಾಗುತ್ತಿದ್ದ ಗರಿಷ್ಠ ಉಷ್ಣಾಂಶವೂ ತಗ್ಗುವ ಸಾಧ್ಯತೆ ಇದೆ. ದೇಶದ ಮಧ್ಯ ಭಾಗದಲ್ಲಿ ಮೋಡ ಕವಿದ ವಾತಾವರಣ ಇರಲಿದೆ ಎಂದಿದ್ದಾರೆ.

ಜೂನ್‌ನಿಂದ ಸೆಪ್ಟೆಂಬರ್‌ವರೆಗೂ ಮಳೆಯ ಪ್ರಮಾಣ ಶೇ 106ರಷ್ಟು ಸುರಿಯಲಿದೆ. ಕಳೆದ 50 ವರ್ಷಗಳ ದಾಖಲೆಯ ಪ್ರಕಾರ ಈ ಅವಧಿಯಲ್ಲಿ (87 ಸೆಂ.ಮೀ.) ಶೇ 96ರಿಂದ ಶೇ 104ರಷ್ಟು ಮಳೆ ಸುರಿದಿದೆ. ವಾಯುವ್ಯ ಭಾಗದಲ್ಲಿ ಸಾಮಾನ್ಯ ಮಳೆಯಾಗಲಿದೆ. ಈಶಾನ್ಯದಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಲಿದೆ. ಕೇಂದ್ರ ಭಾಗ ಹಾಗೂ ದಕ್ಷಿಣದಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

'ವಾಡಿಕೆಗಿಂತ ಹೆಚ್ಚು ಮಳೆ ಸುರಿಯುವ ರಾಜ್ಯಗಳಲ್ಲಿ ಮಧ್ಯಪ್ರದೇಶ, ಛತ್ತೀಸಗಢ, ಮಹಾರಾಷ್ಟ್ರ, ಒಡಿಶಾ, ಹಿಮಾಚಲ ಪ್ರದೇಶ, ಬಿಹಾರ, ಜಾರ್ಖಂಡ್, ಪಶ್ಚಿಮ ಬಂಗಾಳ ಸೇರಿವೆ. ಪಂಜಾಬ್, ಹರಿಯಾಣ, ಕೇರಳ ಹಾಗೂ ತಮಿಳುನಾಡಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಲಿದೆ' ಎಂದು ತಿಳಿಸಿದ್ದಾರೆ.

ಆಟೋ ಮೇಲೆ ಉರುಳಿ ಬಿದ್ದ ಮರ; ಪ್ರಯಾಣಿಕರು ಪಾರು

ಮೈಸೂರು, ಮೇ 27(ಎಸ್‌ಪಿಎನ್)– ಚಲಿಸುತ್ತಿದ್ದ ಆಟೋ ಮೇಲೆ ಮರವೊಂದು ಉರುಳಿ ಬಿದ್ದಿರುವ ಘಟನೆ ಮೈಸೂರಿನ ಕೆಆರ್‌ಎಸ್ ರಸ್ತೆ ಆಕಾಶವಾಣಿ ಸಮೀಪ ಮಂಗಳವಾರ ನಡೆದಿದೆ. ಅದೃಷ್ಟವಶಾತ್ ಆಟೋದಲ್ಲಿದ್ದ ಇಬ್ಬರು ಪ್ರಯಾಣಿಕರು ಮತ್ತು ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಕಳೆದ ಮೂರು ದಿನಗಳಿಂದ ನಗರದಲ್ಲಿ ಗಾಳಿ ಸಹಿತ ಮಳೆಯಾಗಿರುವ ಹಿನ್ನಲೆಯಲ್ಲಿ ಬೃಹತ್ ನೀಲಗಿರಿ ಮರ ಆಟೋ ಮೇಲೆ ಏಕಾಏಕಿ ಬಿದ್ದಿದೆ. ಆಟೋದಲ್ಲಿದ್ದ ಇಬ್ಬರು ಪ್ರಯಾಣಿಕರು ಮತ್ತು ಆಟೋ ಚಾಲಕನ್ನು ಸ್ಥಳದಲ್ಲಿದ್ದ ಸಾರ್ವಜನಿಕರು ರಕ್ಷಿಸಿದ್ದಾರೆ. ಈ ಘಟನೆ ವಿವಿ ಪುರಂ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಮನೆ ಬಾಗಿಲು ಮೀಟಿ ಚಿನ್ನಾಭರಣ, ಇನ್ನಿತರೆ ಪದಾರ್ಥ ಕಳವು

ಮೈಸೂರು, ಮೇ 27– ಮನೆಯ ಬಾಗಿಲು ಮೀಟಿ, ಚಿನ್ನಾಭರಣ ಇನ್ನಿತರ ವಸ್ತುಗಳನ್ನು ಕಳ್ಳತನ ಮಾಡಿರುವ ಘಟನೆ ವರುಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಬನ್ನೂರು ರಸ್ತೆಯ ಶ್ರೀರಂಗ ಎನ್ಕ್ಲೇವ್ ನಿವಾಸಿ ಕೆ.ಮಂಜುನಾಥ್ ಅವರು ಕುಟುಂಬದವರೊಂದಿಗೆ ಪ್ರವಾಸಕ್ಕೆ ತೆರಳಿದ್ದಾಗ ಕಳ್ಳತನವಾಗಿದ್ದು, ನಿನ್ನೆ ಬೆಳಕಿಗೆ ಬಂದಿದೆ. ತಾಳಿ ಸೇರಿದಂತೆ 75 ಸಾವಿರ ಮೌಲ್ಯದ ಸುಮಾರು 15 ಗ್ರಾಂ ಚಿನ್ನಾಭರಣ, 15 ಸಾವಿರ ಮೌಲ್ಯದ ಬೆಳ್ಳಿ ವಸ್ತುಗಳು ಹಾಗೂ 25 ಸಾವಿರ ಬೆಲೆಯ ಲ್ಯಾಪ್‌ಟಾಪ್ ಅನ್ನು ಖದೀಮರು ದೋಚಿದ್ದಾರೆ.

ಮಂಜುನಾಥ್, ಕುಟುಂಬ ಸಮೇತ ಮೇ 22ರಂದು ಬೆಳಗ್ಗೆ ಮನೆಗೆ ಬೀಗ ಹಾಕಿಕೊಂಡು ಗೋವಾಕ್ಕೆ ತೆರಳಿದ್ದರು. ವಾಪಸ್ ಬರುವಾಗ ಮಂಜುನಾಥ್ ಮಾವ ಕರೆ ಮಾಡಿ ಯಾರೋ ನಿಮ್ಮ ಮನೆಯ ಬೀಗ ಒಡೆದು ಕಳ್ಳತನ ಮಾಡಿರುವುದಾಗಿ ತಿಳಿಸಿದರು. ನಿನ್ನೆ ಸಂಜೆ ಮನೆಗೆ ಬಂದು ಪರಿಶೀಲಿಸಿದಾಗ ಕೊಠಡಿಯ ವಾರ್ಡ್ರೋಬ್‌ನಲ್ಲಿದ್ದ ಚಿನ್ನದ ತಾಳಿ, ಗುಂಡು ಹಾಗೂ ಕಾಸು, ಓಲೆ, ಎರಡು ಜೊತೆ ಬೆಳ್ಳಿಯ ಕಾಲು ಚೈನು, 4 ಜೊತೆ ಅರಿಶಿನ–ಕುಂಕುಮ ಬಟ್ಟಲುಗಳು ಹಾಗೂ ಡೆಲ್ ಕಂಪನಿ ಲ್ಯಾಪ್‌ಟಾಪ್ ಕಳುವಾಗಿದ್ದವು. ಈ ಸಂಬಂಧ ವರುಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಟ ಅನಂತನಾಗ್ ಸೇರಿ 71 ಗಣ್ಯರಿಗೆ ಪದ್ಮ ಪ್ರಶಸ್ತಿ ಪ್ರದಾನ

ನವದೆಹಲಿ, ಮೇ 27– ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು (ಮಂಗಳವಾರ) ದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ 2ನೇ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ವಿವಿಧ ವಿಭಾಗಗಳು ಮತ್ತು ಕ್ಷೇತ್ರಗಳ ಪುರಸ್ಕೃತರಿಗೆ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಕರ್ನಾಟಕದ ಖ್ಯಾತ ನಟ ಅನಂತನಾಗ್ ಅವರಿಗೆ ಪದ್ಮಭೂಷಣ, ಕರ್ನಾಟಕದ ವಯಲಿನ್ ವಾದಕ ಎಲ್. ಸುಬ್ರಹ್ಮಣ್ಯಂ ಅವರಿಗೆ ಪದ್ಮವಿಭೂಷಣ, ಕರ್ನಾಟಕ ಮೂಲದ ಸಂಗೀತ ನಿರ್ದೇಶಕ ರಿಕಿ ಕೇಜ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಪದ್ಮಭೂಷಣ ಪ್ರಶಸ್ತಿ ಸ್ವೀಕರಿಸುತ್ತಿರುವ ಅನಂತ್‌ನಾಗ್



ಪದ್ಮವಿಭೂಷಣ ಪ್ರಶಸ್ತಿ ಸ್ವೀಕರಿಸುತ್ತಿರುವ ಜಗದೀಶ್ ಸಿಂಗ್ ಖೇಹರ್

ಇಂದು ನಡೆದ ಪದ್ಮ ಪ್ರಶಸ್ತಿಗಳ ಪ್ರದಾನ ಕಾರ್ಯಕ್ರಮದಲ್ಲಿ 71 ವ್ಯಕ್ತಿಗಳನ್ನು ಸನ್ಮಾನಿಸಲಾಯಿತು. ರಾಷ್ಟ್ರಪತಿ ಭವನದಲ್ಲಿ ವಿವಿಧ ಕ್ಷೇತ್ರಗಳಲ್ಲಿನ ಗಮನಾರ್ಹ ಕೊಡುಗೆ ಮತ್ತು ಕೆಲಸಕ್ಕಾಗಿ 71 ಗಣ್ಯ ವ್ಯಕ್ತಿಗಳಿಗೆ ರಾಷ್ಟ್ರಪತಿಗಳು ಪದ್ಮ ಪ್ರಶಸ್ತಿಗಳನ್ನು ನೀಡಿ ಗೌರವಿಸಿದರು. ಈ ವೇಳೆ ಪ್ರಧಾನಿ ನರೇಂದ್ರ ಮೋದಿ, ಉಪ ರಾಷ್ಟ್ರಪತಿ ಜಗದೀಪ್ ಧಂಕರ್, ಕೇಂದ್ರ ಸಚಿವರಾದ ಅಮಿತ್ ಶಾ, ಎಸ್ ಜೈಶಂಕರ್, ಪ್ರಹ್ಲಾದ್ ಜೋಶಿ, ಜಿತೇಂದ್ರ ಸಿಂಗ್, ಜಿ ಕಿಶನ್ ರೆಡ್ಡಿ ಮತ್ತು ಇತರ ಹಲವಾರು ಸಚಿವರು ಮತ್ತು ಗಣ್ಯರು ಉಪಸ್ಥಿತರಿದ್ದರು.

ಕಲಾ ಕ್ಷೇತ್ರದ ಸಾಧನೆಗಾಗಿ ಕನ್ನಡದ ಖ್ಯಾತ ನಟ ಅನಂತನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಲಾಯಿತು. ಹಾಗೇ, ನಟಿ ಶೋಭನಾ, ತೆಲುಗು ನಟ ನಂದಮೂರಿ ಬಾಲಕೃಷ್ಣ ಅವರಿಗೆ ಕೂಡ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. ದೇಶದ ಅತ್ಯುನ್ನತ ನಾಗರಿಕ ಗೌರವಗಳಲ್ಲಿ ಒಂದಾದ ಪದ್ಮಶ್ರೀ, ಪದ್ಮಭೂಷಣ ಮತ್ತು ಪದ್ಮವಿಭೂಷಣ ಎಂಬ ಮೂರು ವಿಭಾಗಗಳಲ್ಲಿ ಪದ್ಮ ಪ್ರಶಸ್ತಿಗಳನ್ನು ನೀಡಲಾಗುತ್ತದೆ. ಕಲೆ, ಸಾಮಾಜಿಕ ಕಾರ್ಯ, ಸಾರ್ವಜನಿಕ ವ್ಯವಹಾರಗಳು, ವಿಜ್ಞಾನ ಮತ್ತು ಎಂಜಿನಿಯರಿಂಗ್, ವ್ಯಾಪಾರ ಮತ್ತು ಕೈಗಾರಿಕೆ, ಔಷಧ ಮತ್ತು ಸಾಹಿತ್ಯ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತದೆ.

ಈ ಸಮಾರಂಭದಲ್ಲಿ, ರಾಷ್ಟ್ರಪತಿ ಮುರ್ಮು ಅವರು ಭಾರತದ ಎರಡನೇ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಪದ್ಮವಿಭೂಷಣವನ್ನು ಭಾರತದ ಮಾಜಿ ಮುಖ್ಯ ನ್ಯಾಯಮೂರ್ತಿ (ನಿವೃತ್ತ) ಜಗದೀಶ್ ಸಿಂಗ್ ಖೇಹರ್ ಅವರಿಗೆ ಸಾರ್ವಜನಿಕ ವ್ಯವಹಾರಗಳ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಪ್ರದಾನ ಮಾಡಿದರು. ಜಾನಪದ, ಭಕ್ತಿ ಮತ್ತು ಛಠ್ ಗೀತೆಗಳಿಗೆ ಹೆಸರುವಾಸಿಯಾದ ಪ್ರಸಿದ್ಧ ಜಾನಪದ ಗಾಯಕಿ ಶಾರದಾ ಸಿನ್ಹಾ ಅವರಿಗೆ ಕಲೆ–ಜಾನಪದ ಸಂಗೀತ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿಯನ್ನು ನೀಡಲಾಗಿದೆ. ಅವರ ಪುತ್ರ ಅಂಶುಮಾನ್ ಸಿನ್ಹಾ ಅವರ ಪರವಾಗಿ ಪ್ರಶಸ್ತಿಯನ್ನು ಸ್ವೀಕರಿಸಿದರು.

ಸಂಗೀತ ಕ್ಷೇತ್ರದ ಸಾಧನೆಗಾಗಿ ವಯಲಿನ್ ವಾದಕ ಎಲ್. ಸುಬ್ರಮಣ್ಯಂ ಪದ್ಮವಿಭೂಷಣ ಸ್ವೀಕರಿಸಿದರು. ಡಾ. ಶೋಭನಾ ಚಂದ್ರಕುಮಾರ್ ಅವರು ಜಾನಪದ ನೃತ್ಯ ಕಲೆಗಳಿಗೆ ನೀಡಿದ ಕೊಡುಗೆಗಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಪದ್ಮಭೂಷಣ ಪ್ರಶಸ್ತಿಯನ್ನು ಪಡೆದರು. ಕುಮುದಿನಿ ರಜನಿಕಾಂತ್ ಲಖಿಯಾ ಅವರು ಕಲಾ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ರಾಷ್ಟ್ರಪತಿ ಮುರ್ಮು ಅವರು ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಅವರ ಮೊಮ್ಮಗ ಅವರ ಪರವಾಗಿ ಪ್ರಶಸ್ತಿಯನ್ನು ಪಡೆದರು.

ಪ್ರಧಾನಿಯವರ ಆರ್ಥಿಕ ಸಲಹಾ ಮಂಡಳಿಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅರ್ಥಶಾಸ್ತ್ರಜ್ಞ ಬಿಬೇಕ್ ದೇಬ್ರಾಯ್ ಅವರಿಗೆ ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಮರಣೋತ್ತರವಾಗಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಲಾಗಿದೆ. ಅವರ ಪತ್ನಿ ಅವರ ಪರವಾಗಿ ಪ್ರಶಸ್ತಿಯನ್ನು ಪಡೆದರು.

ನಾಳೆ ವೀರ ಸಾವರ್ಕರ್ ಜಯಂತಿ ಆಚರಣೆ

ಚಿಂತಕ ಜಿ.ಬಿ.ಹರೀಶರಿಗೆ ಸಾವರ್ಕರ್ ಸಮ್ಮಾನ್ ಪ್ರಶಸ್ತಿ ಪ್ರದಾನ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಸಮಾರಂಭದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಮೈಸೂರು,ಮೇ 27(ಪಿಎಂ)– ಸಾವರ್ಕರ್ ಪ್ರತಿಷ್ಠಾನ ಮೈಸೂರು ವತಿಯಿಂದ ಮೇ 29ರಂದು ಸಂಜೆ 5.30ಕ್ಕೆ ವೀರ ಸಾವರ್ಕರ್ ಅವರ 142ನೇ ಜಯಂತಿ ಹಾಗೂ ಸಾವರ್ಕರ್ ಸಮ್ಮಾನ್ ಪ್ರಶಸ್ತಿ–2025ರ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಪ್ರತಿಷ್ಠಾನದ ಕಾರ್ಯದರ್ಶಿ ಸಂದೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ವೀರ ಸಾವರ್ಕರ್ 142ನೇ ಜನ್ಮ ಜಯಂತಿ ಕಾರ್ಯಕ್ರಮ ಸಹ ನಡೆಯಲಿದ್ದು, ಸಾವರ್ಕರ್ ಕುರಿತು ಅಧ್ಯಯನಗಳನ್ನು ಮಾಡಿ, ಅನ್ಯ ಭಾಷೆಯಿಂದ ಕನ್ನಡಕ್ಕೆ ಪುಸ್ತಕಗಳನ್ನು ಅನುವಾದಿಸಿರುವುದರ ಜೊತೆಗೆ ಸ್ವತಃ ಅನೇಕ ಪುಸ್ತಕಗಳನ್ನು ಬರೆದಿರುವ ಖ್ಯಾತ ಲೇಖಕರು ಹಾಗೂ ಚಿಂತಕ ಜಿ.ಬಿ. ಹರೀಶ ಅವರಿಗೆ ಈ ಬಾರಿಯ 'ಸಾವರ್ಕರ್ ಸಮ್ಮಾನ್ ಪ್ರಶಸ್ತಿ–2025' ಅನ್ನು ಪ್ರದಾನ ಮಾಡಲಾಗುವುದು ಎಂದರು.

ಪ್ರಶಸ್ತಿಯು ವೀರ ಸಾವರ್ಕರ್ ಪುತ್ಥಳಿ, ಒಂದು ಲಕ್ಷ ರೂ. ನಗದು, ಪ್ರಶಸ್ತಿ ಫಲಕ, ನೆನಪಿನ ಕಾಣಿಕೆ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿದೆ. ಮೈಸೂರು ರಾಜವಂಶಸ್ಥರೂ ಆದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರಶಸ್ತಿ ಪ್ರಧಾನ ಮಾಡುವರು. ಮುಖ್ಯ ಅತಿಥಿಯಾಗಿ ಆದಿತ್ಯ ಅಧಿಕಾರಿ ಆಸ್ಪತ್ರೆಯ ವೈದ್ಯ ಡಾ.ಚಂದ್ರಶೇಖರ್ ಪಾಲ್ಗೊಳ್ಳಲಿದ್ದು, ಪ್ರತಿಷ್ಠಾನದ ಅಧ್ಯಕ್ಷೆ ಡಾ.ಎಸ್.ಯಶಸ್ವಿನಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ಸ್ವಾತಂತ್ರ್ಯ ವೀರ ವಿನಾಯಕ ದಾಮೋದರ್ ಸಾವರ್ಕರ್ ಅವರ ಬದುಕು, ಬರಹ ಹಾಗೂ ವಿಚಾರಧಾರೆಗಳನ್ನು ಜನರಿಗೆ ತಲುಪಿಸಲು ಪ್ರತಿಷ್ಠಾನ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಅಂತಹ ಕಾರ್ಯಕ್ರಮಗಳಲ್ಲಿ ಸಾವರ್ಕರ್ ಸಮ್ಮಾನ್ ಪ್ರಶಸ್ತಿ ಪ್ರದಾನ ಸಮಾರಂಭವೂ ಒಂದು. ಈ ಪ್ರಶಸ್ತಿಯನ್ನು ಸಾವರ್ಕರ್ ವಿಷಯದಲ್ಲಿ ಗಣನೀಯವಾಗಿ ಕೆಲಸ ಮಾಡಿರುವವರನ್ನು ಗುರುತಿಸಿ ಪ್ರತಿವರ್ಷ ವೀರ ಸಾವರ್ಕರ್ ಜಯಂತಿ ಸಂದರ್ಭದಲ್ಲಿ ಕೊಡಮಾಡಲಾಗುತ್ತಿದೆ ಎಂದು ವಿವರಿಸಿದರು. ಪ್ರತಿಷ್ಠಾನದ ಸದಸ್ಯರಾದ ರಾಕೇಶ್ ಭಟ್, ಶಿವಕುಮಾರ್ ಚಿಕ್ಕಕಾನ್ಯ, ಎ. ರಾಘವೇಂದ್ರ ಗೋಷ್ಠಿಯಲ್ಲಿದ್ದರು.

ಸಂಸ್ಕೃತ ಪಾಠಶಾಲೆ ಕಟ್ಟಡ ಪರಿಶೀಲನೆ



ಮೈಸೂರಿನ ಮಹಾರಾಜ ಸಂಸ್ಕೃತ ಪಾಠಶಾಲೆಯ ಅಭಿವೃದ್ಧಿಯ ವಿಚಾರವಾಗಿ ಕಾಲೇಜಿನ ಪ್ರಾಂಶುಪಾಲ ಸತ್ಯನಾರಾಯಣ ಮತ್ತು ಅಧ್ಯಾಪಕ ವೃಂದ, ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಅವರಿಗೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಮಂಗಳವಾರ ಶಾಸಕರು ಸಂಸ್ಕೃತ ಪಾಠಶಾಲೆಗೆ ಭೇಟಿ ಕೊಟ್ಟು ಅಲ್ಲಿಯ ಕಟ್ಟಡದ ದುಸ್ಥಿತಿ ಬಗ್ಗೆ ಖುದ್ದು ಪರಿಶೀಲಿಸಿ, ಜಿಲ್ಲಾಧಿಕಾರಿಗಳು ಮತ್ತು ಪಿಡಬ್ಲ್ಯೂಡಿ ಅಭಿಯಂತರರಿಗೆ ದೂರವಾಣಿ ಮುಖೇನ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಐಪಿಎಲ್ ಫೈನಲ್‌ನಲ್ಲಿ 'ಆಪರೇಷನ್ ಸಿಂಧೂರ'ಕ್ಕೆ ಗೌರವ

ಸೇನಾಪಡೆಗಳ ಮುಖ್ಯಸ್ಥರಿಗೆ ಆಹ್ವಾನ

ನವದೆಹಲಿ, ಮೇ 27– ಜೂನ್ 3ರಂದು ಅಹಮದಾಬಾದ್‌ನಲ್ಲಿ ನಡೆಯಲಿರುವ ಐಪಿಎಲ್ ಫೈನಲ್ ಪಂದ್ಯಕ್ಕೆ ಭಾರತೀಯ ಸಶಸ್ತ್ರ ಪಡೆಗಳ ಮೂವರೂ ಮುಖ್ಯಸ್ಥರನ್ನು ಆಹ್ವಾನಿಸಲಾಗಿದೆ ಎಂದು ಬಿಸಿಸಿಐ ಮಂಗಳವಾರ ತಿಳಿಸಿದೆ. ಆಪರೇಷನ್ ಸಿಂಧೂರವನ್ನು ಯಶಸ್ವಿಯಾಗಿ ಕೈಗೊಂಡ ಭಾರತೀಯ ಸೇನಾಪಡೆಗಳಿಗೆ ಗೌರವ ಸಲ್ಲಿಸುವ ಸಮಾರಂಭವನ್ನು ಫೈನಲ್ ಪಂದ್ಯದ ಸಂದರ್ಭದಲ್ಲಿ ಹಮ್ಮಿಕೊಳ್ಳಲಾಗಿದೆ. ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಮಾಧ್ಯಮ ಹೇಳಿಕೆಯಲ್ಲಿ ಈ ಘೋಷಣೆ ಮಾಡಿದ್ದಾರೆ.

ಆಪರೇಷನ್ ಸಿಂಧೂರದ ಯಶಸ್ಸನ್ನು ಆಚರಿಸಲು ಅಹಮದಾಬಾದ್‌ನಲ್ಲಿ ನಡೆಯಲಿರುವ ಐಪಿಎಲ್ ಫೈನಲ್‌ಗೆ ನಾವು ಭಾರತೀಯ ಸಶಸ್ತ್ರಪಡೆಗಳ ಮೂವರೂ ಮುಖ್ಯಸ್ಥರು, ಉನ್ನತ ಶ್ರೇಣಿಯ ಅಧಿಕಾರಿಗಳು ಮತ್ತು ಸೈನಿಕರಿಗೆ ಆಹ್ವಾನವನ್ನು ನೀಡಿದ್ದೇವೆ ಎಂದು ಸೈಕಿಯಾ ಮಂಗಳವಾರ ಪಿಟಿಐಗೆ ತಿಳಿಸಿದ್ದಾರೆ.

ದೇಶದ ಸಶಸ್ತ್ರ ಪಡೆಗಳ ಶೌರ್ಯ, ಧೈರ್ಯ ಮತ್ತು ನಿಸ್ವಾರ್ಥ ಸೇವೆಗೆ ಬಿಸಿಸಿಐ ವಂದಿಸುತ್ತದೆ ಎಂದು ಸೈಕಿಯಾ ಹೇಳಿದ್ದಾರೆ. ಆಪರೇಷನ್ ಸಿಂಧೂರದ ಕಾರ್ಯಾಚರಣೆ ಅಡಿಯಲ್ಲಿನ ಯೋಧರ ವೀರೋಚಿತ ಹೋರಾಟ ರಾಷ್ಟ್ರವನ್ನು ರಕ್ಷಿಸಿತು ಮತ್ತು ಸ್ಫೂರ್ತಿ ತುಂಬಿತು ಎಂದು ಅವರು ಶ್ಲಾಘಿಸಿದ್ದಾರೆ.

ಆಪರೇಷನ್ ಸಿಂಧೂರ ಕಾರ್ಯಾಚರಣೆಗೆ ಗೌರವ ಸೂಚಕವಾಗಿ ನಾವು ಐಪಿಎಲ್ ಸಮಾರೋಪ ಸಮಾರಂಭವನ್ನು ಸಶಸ್ತ್ರ ಪಡೆಗಳಿಗೆ ಅರ್ಪಿಸಲು ಮತ್ತು ನಮ್ಮ ವೀರ ಯೋಧರನ್ನು ಗೌರವಿಸಲು ನಿರ್ಧರಿಸಿದ್ದೇವೆ. ರಾಷ್ಟ್ರ ಮತ್ತು ಅದರ ಸಾರ್ವಭೌಮತ್ವ, ಸಮಗ್ರತೆ ಮತ್ತು ನಮ್ಮ ದೇಶದ ಭದ್ರತೆಗಿಂತ ದೊಡ್ಡದು ಯಾವುದೂ ಇಲ್ಲ ಎಂದು ಸೈಕಿಯಾ ಹೇಳಿದ್ದಾರೆ.

ಕನ್ನಡ ಹುಟ್ಟಿದ್ದು ತಮಿಳಿನಿಂದ: ಶಿವಣ್ಣನ ಮುಂದೆಯೇ ಕಮಲ್‌ಹಾಸನ್ ವಿವಾದಾತ್ಮಕ ಹೇಳಿಕೆ



ಚೆನ್ನೈ, ಮೇ 27–ಕಾಲಿವುಡ್ ನಟ ಕಮಲ್ ಹಾಸನ್ ನಟನೆಯ 'ಥಗ್ ಲೈಫ್' ಸಿನಿಮಾ ಜೂನ್ 5ರಂದು ಬಿಡುಗಡೆಗೆ ಸಿದ್ಧವಾಗಿದೆ. ಇತ್ತೀಚೆಗೆ ಚೆನ್ನೈನಲ್ಲಿ ಚಿತ್ರದ ಆಡಿಯೋ ಲಾಂಚ್ ಕಾರ್ಯಕ್ರಮ ನಡೆದಿದ್ದು ಈ ವೇಳೆ, ತಮಿಳಿನಿಂದ ಕನ್ನಡ ಹುಟ್ಟಿದ್ದು ಎಂದ ಕಮಲ್ ಹಾಸನ್ ಹೇಳಿಕೆ ನೀಡಿ ವಿವಾದದ ಕಿಡಿ ಹೊತ್ತಿಸಿದ್ದಾರೆ. ಅದು ಸ್ಯಾಂಡಲ್ ವುಡ್ ಹ್ಯಾಟ್ರಿಕ್ ಹೀರೋ ಶಿವರಾಜಕುಮಾರ್ ಎದುರೇ ಕನ್ನಡದ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ್ದು, ಕನ್ನಡಿಗರು ಕೆರಳಿ ಕೆಂಡವಾಗಿದ್ದಾರೆ.

ಚೆನ್ನೈನಲ್ಲಿ ನಡೆದ 'ಥಗ್ ಲೈಫ್' ಸಿನಿಮಾದ ಆಡಿಯೋ ಲಾಂಚ್ ಕಾರ್ಯಕ್ರಮದಲ್ಲಿ ನಟ ಶಿವಣ್ಣ ಅತಿಥಿಯಾಗಿ ಭಾಗವಹಿಸಿದ್ದರು. ಈ ವೇಳೆ, ರಾಜ್‌ಕುಮಾರ್ ಜೊತೆಗಿನ ಒಡನಾಟವನ್ನು ಕಮಲ್ ಹಾಸನ್ ಸ್ಮರಿಸಿದ್ದಾರೆ. ಬಳಿಕ ಶಿವಣ್ಣ ಎದುರೇ ನಿಮ್ಮ ಕನ್ನಡ ಹುಟ್ಟಿದ್ದು ತಮಿಳಿನಿಂದ ಎಂದು ಹೇಳಿದ್ದಾರೆ. ಕನ್ನಡಿಗರ ಪ್ರೀತಿ, ಗೌರವಕ್ಕೆ ನಮಿಸುತ್ತಲೇ ನಿಮ್ಮ ಕನ್ನಡ ನಮ್ಮಿಂದ ಬಂದಿದ್ದು ಎಂದ ಕಮಲ್ ಹೇಳಿಕೆಗೆ ಕನ್ನಡಿಗರು ಕೆಂಡಾಮಂಡಲರಾಗಿದ್ದಾರೆ.

ಶಿವಣ್ಣ ಮುಂದೆಯೇ ಕಮಲ್‌ಹಾಸನ್ ಆಡಿರುವ ಮಾತಿಗೆ ಸೋಷಿಯಲ್ ಮೀಡಿಯಾದಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಕನ್ನಡ ತಮಿಳಿನಿಂದ ಬಂದಿಲ್ಲ. ತಮಿಳಿಗಿಂತ ಕನ್ನಡ ಭಾಷೆಯೇ ಪುರಾತನವಾದದ್ದು ಎಂದು ಕನ್ನಡಿಗರು ತರಾಟೆಗೆ ತೆಗೆದುಕೊಂಡಿದ್ದಾರೆ.

ಈ ಸಂಬಂಧ ಸೋಶಿಯಲ್ ಮೀಡಿಯಾದಲ್ಲಿ ಇದೇ ವಿಚಾರ ಬಹಳ ಚರ್ಚೆ ಆಗುತ್ತಿದ್ದು, ಕಮಲ್ ಹಾಸನ್ ಹೇಳಿದ್ದು ಸರಿ ಎಂದು ತಮಿಳಿನ ಕೆಲವರು ವಾದಿಸುತ್ತಿದ್ದಾರೆ ಇದಕ್ಕೆ ಪ್ರತಿಯಾಗಿ ಕನ್ನಡಿಗರು ಕನ್ನಡದ ಭಾಷೆಯ ಇತಿಹಾಸದ ಬಗ್ಗೆ ಪಾಠ ಮಾಡುತ್ತಿದ್ದಾರೆ. ದ್ರಾವಿಡ ಭಾಷೆಗಳಲ್ಲಿ ಒಂದಾಗಿರುವ ಕನ್ನಡ ಅತ್ಯಂತ ಪ್ರಾಚೀನ ಭಾಷೆ. ಸಂಶೋಧನೆಗಳ ಪ್ರಕಾರ ಕನ್ನಡ ಭಾಷೆ ಕ್ರಿಪೂ. 3ನೇ ಶತಮಾನಕ್ಕಿಂತಲೂ ಹಳೆಯದು ಎನ್ನಲಾಗುತ್ತೆ ಇದೇ ಕಾರಣಕ್ಕೆ ಕಮಲ್ ಹಾಸನ್ ಹೇಳಿಕೆಯನ್ನು ಕೆಲವರು ಒಪ್ಪಲು ಸಿದ್ಧರಿಲ್ಲ.

ಗಿಡ ನೆಟ್ಟ ಸ್ಥಳೀಯರು



ಮೈಸೂರು ಹೆಬ್ಬಾಳಿನ ವಾಣಿವಿಲಾಸ ಬಡಾವಣೆಯಲ್ಲಿ ಸ್ಥಳೀಯರಾದ ಎಸ್.ಆರ್.ಯಶಸ್, ರಘು ಹಾಗೂ ವಿನೋದ್ ಗಿಡ ನೆಡುವ ಮೂಲಕ ಬಡಾವಣೆಯ ಹಸಿರೀಕರಣಕ್ಕೆ ಸಾರ್ವಜನಿಕರನ್ನು ಪ್ರೇರೇಪಿಸಿದರು.

ಒಳ ಮೀಸಲಾತಿ ಜಾರಿವರೆಗೆ ಬಡ್ತಿ ಪ್ರಕ್ರಿಯೆಗೆ ತಡೆ ನೀಡಿ

● ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ ಆಗ್ರಹ ● ಇನ್ನಿತರೆ ಬೇಡಿಕೆಗಳೊಂದಿಗೆ ಪ್ರತಿಭಟನೆ; ಧರಣಿ

ಮೈಸೂರು, ಮೇ 27(ಎಂಟಿವೈ)– ಒಳ ಮೀಸಲಾತಿ ಜಾರಿಯಾಗುವವರೆಗೂ ಎಲ್ಲಾ ಇಲಾಖೆಯಲ್ಲೂ ಬಡ್ತಿ ಪ್ರಕ್ರಿಯೆ ಸ್ಥಗಿತಗೊಳಿಸುವುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಮೈಸೂರಲ್ಲಿ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿದರು.



ಒಳಮೀಸಲಾತಿ ಜಾರಿಗೊಳಿಸುವಂತೆ ಆಗ್ರಹಿಸಿ ಮೈಸೂರಲ್ಲಿ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮೈಸೂರಿನ ಲಲಿತಮಹಲ್ ಮೈದಾನದಿಂದ ಸಿದ್ಧಾರ್ಥನಗರದ ಹೊಸ ಜಿಲ್ಲಾಧಿಕಾರಿ ಕಚೇರಿವರೆಗೂ ಪ್ರತಿಭಟನಾ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಕಚೇರಿ ಬಳಿ ಮಧ್ಯಾಹ್ನದವರೆಗೂ ಧರಣಿ ನಡೆಸಿದರು.

ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಮೈಸೂರಿಂದ ಬೆಂಗಳೂರಿಗೆ ಪಾದಯಾತ್ರೆ ನಡೆಸಲು ಮುಂದಾಗಿರುವ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿಯ ಮುಖಂಡ ನೆಲಮಂಗಲದ ಭಾಸ್ಕರ್ ಪ್ರಸಾದ್ ಅವರ ಮೇಲೆ ಕಿಡಿಗೇಡಿಗಳು ಹಲ್ಲೆಗೆ ಮುಂದಾಗಿದ್ದಾರೆ. ಉದ್ದೇಶಪೂರ್ವಕವಾಗಿ ಪೊಲೀಸರು ಭಾಸ್ಕರ್ ಪ್ರಸಾದ್ ಅವರನ್ನು ಬಂಧಿಸಿದ್ದಾರೆ. ಒಳ ಮೀಸಲಾತಿ ವಿರೋಧಿಸುವ ಕೆಲ ಮುಖಂಡರು ಕಲ್ಲು ತೂರಾಟ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಹಲ್ಲೆ ಮಾಡಿರುವವರ ಬಂಧಿಸಬೇಕು. ನಮ್ಮ ಮುಖಂಡರ ಬಂಧಿಸುವ ವೇಳೆ ಕೆಲ ಪೊಲೀಸ್ ಸಿಬ್ಬಂದಿ ಹಲ್ಲೆ ಮಾಡಿದ್ದು, ಅವರ ವಿರುದ್ಧವೂ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಒಳ ಮೀಸಲಾತಿ ಜಾರಿಗೊಳಿಸುವಂತೆ ಆಗ್ರಹಿಸಿ ನಡೆಸಲು ಉದ್ದೇಶಿಸಿರುವ ಬೆಂಗಳೂರು ಪಾದಯಾತ್ರೆಗೆ ಪೊಲೀಸ್ ಭದ್ರತೆ ಒದಗಿಸಬೇಕು. ಪಾದಯಾತ್ರೆಗೆ ಅಡ್ಡಿಯುಂಟು ಮಾಡುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ನ್ಯಾ.ನಾಗಮೋಹನ್ ದಾಸ್ ನೇತೃತ್ವದಲ್ಲಿ ಆರಂಭಿಸಿರುವ ಪರಿಶಿಷ್ಟ ಜಾತಿಯ ಸಮೀಕ್ಷಾ ವರದಿ ಸಲ್ಲಿಕೆಯಾಗಿ ಒಳ ಮೀಸಲಾತಿ ಕಲ್ಪಿಸುವವರೆಗೂ ವಿವಿಧ ಇಲಾಖೆಯಲ್ಲಿ ನೀಡುವ ಬಡ್ತಿಯನ್ನು ತಡೆ ಹಿಡಿಯಬೇಕು. ಒಳ ಮೀಸಲಾತಿ ಜಾರಿಯಿಂದ ಮಾತ್ರ ಮಾದಿಗ ಸಮುದಾಯಕ್ಕೆ ನ್ಯಾಯ ದೊರಕುತ್ತದೆ. ಪರಿಶಿಷ್ಟ ಜಾತಿಯ ಸಮೀಕ್ಷೆಯನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕು. ವರದಿ ಸ್ವೀಕರಿಸಿದ ಕೂಡಲೇ ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲಾಧಿಕಾರಿಗಳಿಗೆ ಮನವಿ: ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸುತ್ತಿದ್ದ ಕೆಲ ಮುಖಂಡರನ್ನು ಕಚೇರಿಗೆ ಕರೆಸಿಕೊಂಡ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ಅವರ ಸಮಸ್ಯೆ ಆಲಿಸಿದರು. ಈ ವೇಳೆ ಬೆಂಗಳೂರಿಗೆ ನಡೆಸಲು ಉದ್ದೇಶಿಸಿರುವ ಪಾದಯಾತ್ರೆಗೆ ಭದ್ರತೆ ನೀಡಬೇಕು. ಹಲ್ಲೆ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಮನವಿ ಸಲ್ಲಿಸಿದರು. ಇದಕ್ಕೆ ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಬೆಂಗಳೂರಿನತ್ತ ಪಾದಯಾತ್ರೆ: ಭದ್ರತೆಯ ಭರವಸೆ ನೀಡಿದ ಹಿನ್ನೆಲೆಯಲ್ಲಿ ಬೆಂಗಳೂರಿಗೆ ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಪಾದಯಾತ್ರೆ ಆರಂಭಿಸಿದರು.

ಪ್ರತಿಭಟನೆಯಲ್ಲಿ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿಯ ಭಾಸ್ಕರ್ ಪ್ರಸಾದ್, ವಕೀಲ ಎಸ್.ಅರುಣ್ ಕುಮಾರ್, ಕೈಲಾಸಪುರಂ ಪ್ರಸನ್ನ ಚಕ್ರವರ್ತಿ, ಗಾಂಧಿನಗರದ ಪ್ರಕಾಶ, ಮರಡಿಪುರ ರವಿಕುಮಾರ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಯುವಕನ ಬಲಿ ಪಡೆದಿರುವುದು ಹುಲಿಯಲ್ಲ, ಚಿರತೆ

ಅರಣ್ಯ ಇಲಾಖೆ ಸ್ಪಷ್ಟನೆ





ಸೊಳ್ಳೇಪುರ ಅರಣ್ಯ ಪ್ರದೇಶದ ಸಾಕಾನೆಗಳಿಂದ ಕೂಂಬಿಂಗ್ ಕಾರ್ಯಾಚರಣೆ ನಡೆಸುತ್ತಿರುವುದು. ಮತ್ತೊಂದು ಚಿತ್ರದಲ್ಲಿ ಚಿರತೆ ಸೆರೆಗೆ ಬೋನ್ ಅಳವಡಿಸುತ್ತಿರುವುದು.

ಹುಣಸೂರು, ಮೇ 27(ಎಂಟಿವೈ)– ಹುಣಸೂರು ತಾಲೂಕಿನ ವೀರನಹೊಸಳ್ಳಿ ಸಮೀಪದ ನಾಗಾಪುರ ಹಾಡಿ 5ನೇ ಬ್ಲಾಕ್ ಬಳಿ ಯುವಕನ ಬಲಿ ಪಡೆದಿರುವುದು ಹುಲಿಯಲ್ಲ, ಚಿರತೆ ಎಂದು ಸ್ಪಷ್ಟನೆ ನೀಡಿರುವ ಅರಣ್ಯ ಇಲಾಖೆ, ಯುವಕನನ್ನು ಬಲಿ ಪಡೆದ ಚಿರತೆ ಸೆರೆಗೆ ಕಾರ್ಯಾಚರಣೆ ಆರಂಭಿಸಿರುವುದಾಗಿ ತಿಳಿಸಿದೆ.

ನಾಗಾಪುರ ಹಾಡಿ 5ನೇ ಬ್ಲಾಕ್ ನಿವಾಸಿ ಕೃಷ್ಣ ಮತ್ತು ನಾಗಮಣಿ ದಂಪತಿ ಪುತ್ರ ಹರೀಶ್(29) ಸೋಮವಾರ ಸೊಳ್ಳೇಪುರ ಅರಣ್ಯ ಪ್ರದೇಶದಂಚಿನ ಜಮೀನಿನಲ್ಲಿ ಮೇಕೆ ಮೇಯಿಸುತ್ತಿದ್ದಾಗ ಈ ದಾಳಿ ನಡೆದಿತ್ತು. ಕೆಲವು ಮಾಹಿತಿಯಂತೆ ಹರೀಶನ ಮೇಲೆ ಹುಲಿ ದಾಳಿ ನಡೆಸಿದೆ ಎಂದು ಹೇಳಲಾಗಿತ್ತಾದರೂ, ಅರಣ್ಯ ಸಿಬ್ಬಂದಿ ಮಾತ್ರ ಯುವಕನ ಮೇಲೆ ದಾಳಿ ನಡೆಸಿರುವುದು ಚಿರತೆ ಎಂದು ತಿಳಿಸಿದೆ. ಅಲ್ಲದೆ, ಚಿರತೆ ಸೆರೆಗೆ ಬೋನ್ ಅಳವಡಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಯುವಕನ ದೇಹ ಪತ್ತೆಯಾದ ಸ್ಥಳದ ಸುತ್ತಮುತ್ತ ಡ್ರೋನ್ ಮೂಲಕ ಪರಿಶೀಲಿಸಲಾಗಿದ್ದು, ಡ್ರೋನ್‌ನಲ್ಲಿ ಚಿರತೆ, ಹುಲಿಯಂತಹ ಪ್ರಾಣಿಗಳ ದೃಶ್ಯ ಕಂಡು ಬಂದಿಲ್ಲ ಆನೆ ಹಾಗೂ ಚಿರತೆ ಕಾರ್ಯಪಡೆ, ನಾಗರಹೊಳೆ, ಹುಣಸೂರು ವಲಯದ ಸಿಬ್ಬಂದಿಗಳೊಂದಿಗೆ ಎರಡು ಸಾಕಾನೆ ಬಳಸಿ, ಸುತ್ತಮುತ್ತಲಿನ ಪ್ರದೇಶದಲ್ಲಿ ಕೂಂಬಿಂಗ್ ಕಾರ್ಯಾಚರಣೆ ನಡೆಸಲಾಗಿದೆ. ಜೊತೆಗೆ ಒಂದು ದೊಡ್ಡ ಹಾಗೂ 4 ಚಿಕ್ಕ ಬೋನ್ ಅಳವಡಿಸಲಾಗಿದೆ. 15 ಕ್ಯಾಮರಾ ಟ್ರ್ಯಾಪ್ ಅಳವಡಿಸಿ, ಯುವಕನ ಮೃತದೇಹ ಸಿಕ್ಕ ಪ್ರದೇಶದ ಸುತ್ತಮುತ್ತ ಸೂಕ್ಷ್ಮವಾಗಿ ಪರಿ ಶೀಲಿಸಲಾಗುತ್ತಿದೆ. ಎಲ್ಲಾ ಕ್ಯಾಮರಾ ಟ್ರ್ಯಾಪ್‌ನಲ್ಲಿ ಸೆರೆಯಾಗುತ್ತಿರುವ ದೃಶ್ಯವನ್ನು ದಿನದ 24 ಗಂಟೆಯೂ ಪರಿಶೀಲಿಸಲಾಗುತ್ತಿದ್ದು, ಹುಲಿ ಅಥವಾ ಚಿರತೆ ಸುಳಿವು ಕಂಡ ಕೂಡಲೇ ಕಾರ್ಯಾಚರಣೆ ಮುಂದುವರೆಸಲು ಸಿಬ್ಬಂದಿಗಳನ್ನು ಸಜ್ಜುಗೊಳಿಸಲಾಗಿದೆ.

ಕಾರ್ಯಾಚರಣೆ ಸ್ಥಳಕ್ಕೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರಾದ ಪಿ.ಎ.ಸೀಮಾ, ಎಸಿಎಫ್ ಲಕ್ಷ್ಮೀಕಾಂತ್ ಸೇರಿದಂತೆ ಇನ್ನಿತರರು ಭೇಟಿ ನೀಡಿ ಪರಿಶೀಲಿಸಿದರು.

70 ಗಿಡ ನೆಟ್ಟು ಟ್ರೀ ಗಾರ್ಡ್ ಅಳವಡಿಕೆ



ರುದ್ರಭೂಮಿಯಲ್ಲಿ ಗಿಡಗಳನ್ನು ನೆಡಲಾಯಿತು.

ತಿ.ನರಸೀಪುರ, ಮೇ 27– ಮೈಸೂರಿನ ರಘುಲಾಲ್ ಸಂಸ್ಥೆ ಮತ್ತು ಜೀವನ್ ಮುಕ್ತಿ ಫೌಂಡೇಷನ್ ವತಿಯಿಂದ ಮಂಗಳವಾರ ತಾಲೂಕಿನ ಕಿರಗಸೂರು ಗ್ರಾಮದ ರುದ್ರಭೂಮಿಯಲ್ಲಿ 70 ಗಿಡಗಳನ್ನು ನೆಟ್ಟು, ಅವುಗಳಿಗೆ ಟ್ರೀ ಗಾರ್ಡ್ ಅಳವಡಿಸಲಾಯಿತು.

ಗ್ರಾಪಂ ಸದಸ್ಯ ಕಿರಗಸೂರು ಮಹದೇವಸ್ವಾಮಿ ನೇತೃತ್ವದಲ್ಲಿ ವಿವಿಧ ತಳಿಯ 70 ಸಸಿಗಳನ್ನು ನೆಟ್ಟು ಅವುಗಳಿಗೆ ನೀರು ಹಾಕಲಾಯಿತು. ರಘುಲಾಲ್ ಸಂಸ್ಥೆಯವರು ಟ್ರೀ ಗಾರ್ಡ್‌ಗಳನ್ನು ಅಳವಡಿಸಿ ಜಾನುವಾರುಗಳ ಪಾಲಾಗದಂತೆ ಕ್ರಮ ಕೈಗೊಳ್ಳಲಾಯಿತು.

ಈ ವೇಳೆ ಮಾತನಾಡಿದ ಮಹದೇವಸ್ವಾಮಿ, ಅಂತ್ಯಕ್ರಿಯೆ ನೆರವೇರಿಸಲು ಬರುವ ಮೃತರ ಸಂಬಂಧಿಕರು ಮತ್ತು ಸಾರ್ವಜನಿಕರಿಗೆ ನೆರಳಿನ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಮತ್ತು ಹಸಿರೀಕರಣ ಮಾಡುವ ಸಲುವಾಗಿ ಈ ಸಸಿಗಳನ್ನು ನೆಡಲಾಗಿದ್ದು, ಅವುಗಳು ನೀರು ಹಾಕಿ ಪೋಷಿಸುವ ಅಗತ್ಯವಿದೆ ಎಂದರು.

ಗ್ರಾಮದ ಮುಖಂಡರಾದ ಶಿವಮೂರ್ತಿ, ಸಂತೋಷ್ ಕುಮಾರ್, ಸಂಗೀತ ವಿದ್ವಾನ್ ಆರ್.ರಾಜಪ್ಪ ಮಾಸ್ಟರ್, ಗುರುಸ್ವಾಮಿ, ಶೇಟು, ಪ್ರತಾಪ್ ಬಸವೇಗೌಡ ಮತ್ತು ನಂಜುಂಡಿ ಸೇರಿದಂತೆ ಇತರರಿದ್ದರು.

ಬಸವ ಜಯಂತಿಯಲ್ಲಿ ಶಾಸಕ ಗಣೇಶ್ ಪ್ರಸಾದ್ ಭಾಷಣಕ್ಕೆ ಅಡ್ಡಿ

ಅಖಿಲ ಭಾರತ ವೀರಶೈವ ಮಹಾಸಭಾ ವಿಷಾದ



ಮಹಾಸಭಾ ತಾಲೂಕು ಅಧ್ಯಕ್ಷ ಎಸ್.ಎಂ. ಕೆಂಪಣ್ಣ ಮಾತನಾಡಿದರು.

ನಂಜನಗೂಡು, ಮೇ 27– ಅಖಿಲ ಭಾರತ ವೀರಶೈವ ಮಹಾಸಭಾ ಹಾಗೂ ವೀರಶೈವ ಸಂಘಗಳ ವತಿಯಿಂದ ಮೇ 25ರಂದು ನಗರದಲ್ಲಿ ಅದ್ಧೂರಿಯಾಗಿ ನಡೆದ ಬಸವ ಜಯಂತಿಯಲ್ಲಿ ಕೆಲವರು ಘೋಷಣೆ ಕೂಗಿ ಶಾಸಕ ಗಣೇಶ್ ಪ್ರಸಾದ್ ಭಾಷಣಕ್ಕೆ ಅಡ್ಡಿಪಡಿಸಿರುವ ಘಟನೆಗೆ ಅಖಿಲ ಭಾರತ ವೀರಶೈವ ಮಹಾಸಭಾ ವಿಷಾದ ವ್ಯಕ್ತಪಡಿಸುತ್ತದೆ ಎಂದು ಮಹಾಸಭಾ ತಾಲೂಕು ಅಧ್ಯಕ್ಷ ಎಸ್.ಎಂ. ಕೆಂಪಣ್ಣ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಂಜನಗೂಡಿನಲ್ಲಿ ಕಳೆದ 10 ವರ್ಷಗಳ ಹಿಂದೆ ಅದ್ಧೂರಿಯಾಗಿ ಬಸವ ಜಯಂತಿ ಆಚರಿಸಲಾಗಿತ್ತು. ಈ ಬಾರಿಯ ಬಸವ ಜಯಂತಿ ತಾಲೂಕಿನ ಎಲ್ಲಾ ಜನಾಂಗದವರ, ಎಲ್ಲಾ ಮಠದ ಸ್ವಾಮೀಜಿಗಳ ಪ್ರಸಂಶೆಗೆ ಪಾತ್ರವಾಗಿದೆ. ಆದರೆ ಅಂದಿನ ಧಾರ್ಮಿಕ ಸಭೆಯಲ್ಲಿ ಭಾಗವಹಿಸಿದ್ದ ಕೆಲವರು ಘೋಷಣೆ ಕೂಗಿ ಗಣೇಶ್ ಪ್ರಸಾದ್ ಅವರ ಭಾಷಣಕ್ಕೆ ಅಡ್ಡಿಪಡಿಸಿದ್ದಾರೆ. ಈ ಘಟನೆಗೆ ಅಖಿಲ ಭಾರತ ವೀರಶೈವ ಮಹಾಸಭಾ ವಿಷಾದ ವ್ಯಕ್ತಪಡಿಸುತ್ತದೆ. ಅಲ್ಲದೇ ಘಟನೆ ಸಂಬಂಧ ಗಣೇಶ್ ಪ್ರಸಾದ್ ಅವರನ್ನು ಭೇಟಿ ಮಾಡಿ ಮನವರಿಕೆ ಮಾಡಿಕೊಡಲಾಗಿದೆ. ಅವರು ಸಹ ಕೆಲವರು ಮಾಡಿದ ಕಾರ್ಯಕ್ಕೆ ಆಯೋಜಕರು ಬೇಸರ ಮಾಡಿಕೊಳ್ಳಬೇಡಿ. ನಿಮ್ಮ ತಪ್ಪೇನಿಲ್ಲ. ನಾನು ಸಹ ಬೇಸರ ಮಾಡಿಕೊಂಡಿಲ್ಲ ಎಂದು ನಮ್ಮನ್ನು ಸಮಾಧಾನಪಡಿಸಿ ದೊಡ್ಡತನ ಮೆರೆದಿದ್ದಾರೆ. ಅದ್ಧೂರಿ ಬಸವ ಜಯಂತಿ ಯಶಸ್ಸಿಗೆ ಸಹಕರಿಸಿದ ಗಣೇಶ ಪ್ರಸಾದ್ ಮತ್ತು ಶಾಸಕ ದರ್ಶನ್ ಹಾಗೂ ಎಲ್ಲಾ ಮಠಾಧ್ಯಕ್ಷರು, ಭಾಗವಹಿಸಿದ ಮಹಾ ಜನತೆಗೆ ಮಹಾಸಭಾ ಕೃತಜ್ಞತೆ ಸಲ್ಲಿಸುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಹಾಸಭಾ ಕಾರ್ಯದರ್ಶಿ ಶಿವಪ್ಪ ದೇವರು, ಯುವ ಘಟಕ ಅಧ್ಯಕ್ಷ ಮಹದೇವಸ್ವಾಮಿ, ನಿರ್ದೇಶಕರಾದ ಮಹೇಶ್, ಮಂಜುನಾಥ್ ಉಪಸ್ಥಿತರಿದ್ದರು.

ಸರ್ಕಾರಿ ಭೂಮಿ ಅಡವಿಟ್ಟು ನೂರಾರೂ ಕೋಟಿ ಸಾಲ

ಕಬಿನಿ ಸುಭಾಷ್ ಪವರ್ ಸ್ಟೇಷನ್ ವಿರುದ್ಧ ಪ್ರಕರಣ ದಾಖಲಿಸಿ

ಅಧಿಕಾರಿಗಳಿಗೆ ಶಾಸಕ ಅನಿಲ್ ಸೂಚನೆ



ಸಭೆಯಲ್ಲಿ ಶಾಸಕ ಅನಿಲ್ ಮಾತನಾಡಿದರು.

ಹೆಚ್.ಡಿ.ಕೋಟೆ, ಮೇ 27– ಸರ್ಕಾರಿ ಭೂಮಿ ಗುತ್ತಿಗೆ ಪಡೆದು ಅದನ್ನು ಅಡಮಾನವಿಟ್ಟು ನೂರಾರು ಕೋಟಿ ಸಾಲ ಪಡೆದಿರುವ ಕಬಿನಿ ಸುಭಾಷ್ ಪವರ್ ಸ್ಟೇಷನ್ ಎಂಬ ಖಾಸಗಿ ಕಂಪನಿ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿ ಎಂದು ಶಾಸಕ ಅನಿಲ್, ತಹಸೀಲ್ದಾರ್ ಮೋಹನ್ ಕುಮಾರಿ ಹಾಗೂ ಕಬಿನಿ ಸಹಾಯಕ ಕಾರ್ಯಪಾಲಕ ಅಭಿಯಂತರ ಗಣೇಶ್‌ಗೆ ಸೂಚಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನ ಕಬಿನಿ ಜಲಾಶಯದಲ್ಲಿ ವಿದ್ಯುತ್ ಉತ್ಪಾದಿಸಲು 18 ಎಕರೆ ಸರ್ಕಾರಿ ಭೂಮಿಯನ್ನು 30 ವರ್ಷಗಳಿಗೆ ಗುತ್ತಿಗೆ ಪಡೆದ ಕಬಿನಿ ಸುಭಾಷ್ ಪವರ್ ಸ್ಟೇಷನ್‌ನವರು ಜಮೀನನ್ನು ರಾಜ್ಯದ ವಿವಿಧ ಬ್ಯಾಂಕುಗಳಲ್ಲಿ ಅಡಮಾನ ಇಟ್ಟು ಸುಮಾರು 250 ಕೋಟಿ ರೂ. ಸಾಲ ಪಡೆದು ಸರ್ಕಾರಕ್ಕೆ ವಂಚನೆ ಮಾಡಿರುವ ಆರೋಪ ಪತ್ರಿಕೆಗಳಲ್ಲಿ, ಮಾಧ್ಯಮಗಳಲ್ಲಿ ಪ್ರಕಟವಾಗಿವೆ. ಅಲ್ಲದೆ ಕೆಲವು ರೈತರು ಇದನ್ನು ಎತ್ತಿ ಹಿಡಿದಿದ್ದಾರೆ. ಹಾಗಾಗಿ ನೀರಾವರಿ ಇಲಾಖೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಕಡತ ಪರಿಶೀಲನೆ ಮಾಡಿ ತಪ್ಪು ಮಾಡಿದವರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲು ಮುಂದಾಗಬೇಕು ಎಂದರು.

ಕಬಿನಿ ನೀರಾವರಿ ಇಲಾಖೆ ಸಹಾಯಕ ಇಂಜಿನಿಯರ್ ಗಣೇಶ್ ಮಾತನಾಡಿ, ಸುಭಾಷ್ ಪವರ್ ಸ್ಟೇಷನ್‌ನವರು ಕಬಿನಿ ಜಲಾಶಯದ ಮುಂಭಾಗದ 18 ಎಕರೆ ಭೂಮಿಯನ್ನು 1998ರಲ್ಲಿ ಗುತ್ತಿಗೆ ಪಡೆದಿದ್ದು, 2022–23ರಲ್ಲಿ ಏಕಾಏಕಿ ಗುತ್ತಿಗೆ ಪಡೆದ ಭೂಮಿ ಅವರ ಹೆಸರಿಗೆ ಖಾತೆ ಆಗಿರುತ್ತದೆ. ಜೊತೆಗೆ ಆರ್‌ಟಿಸಿ ಕಾಲಂ 11 ರಲ್ಲಿ ವಿವಿಧ ಬ್ಯಾಂಕುಗಳಲ್ಲಿ ಸಾಲ ಪಡೆದಿರುವ ಬಗ್ಗೆ ನಮೂದಾಗಿದೆ. ಈ ಬಗ್ಗೆ ಹಿರಿಯ ಅಧಿಕಾರಿಗಳಿಗೆ ವರದಿ ಮಾಡಲಾಗಿದೆ. ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸರಗೂರು ತಹಶೀಲ್ದಾರ್ ಮೋಹನ್ ಕುಮಾರಿ ಮಾತನಾಡಿ, ಆರ್‌ಟಿಸಿ ಕಾಲಂ 11 ಬದಲು ಕಾಲಂ 9 ರಲ್ಲಿ ಗುತ್ತಿಗೆ ಪಡೆದವರ ಹೆಸರಿದೆ. ಇದರ ಆಧಾರದ ಮೇಲೆ ಸುಭಾಷ್ ಪವರ್ ಸ್ಟೇಷನ್ ಮಾಲೀಕರು ವಿವಿಧ ಬ್ಯಾಂಕುಗಳಿಂದ ನೂರಾರು ಕೋಟಿ ರೂ. ಸಾಲ ಪಡೆದಿದ್ದಾರೆ. ಈ ಬಗ್ಗೆ ವರದಿ ನೀಡಲು 15 ದಿನಗಳ ಹಿಂದೆ ಸುಭಾಷ್ ಪವರ್ ಸ್ಟೇಷನ್ ಕಂಪನಿ ಅವರಿಗೆ ನೋಟೀಸ್ ಜಾರಿ ಮಾಡಿದ್ದರೂ ಕೂಡ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಶಾಸಕರ ಗಮನಕ್ಕೆ ತಂದರು.

ಈ ವೇಳೆ ಹೆಚ್.ಡಿ.ಕೋಟೆ ತಹಸೀಲ್ದಾರ್ ಶ್ರೀನಿವಾಸ್, ಕಬಿನಿ ಸಹಾಯಕ ಕಾರ್ಯ ಪಾಲಕ ಅಭಿಯಂತರ ಗಣೇಶ್ ಇನ್ನಿತರರಿದ್ದರು.

ತಿ.ನರಸೀಪುರ ಸರ್ಕಾರಿ ಕಾಲೇಜಿಗೆ ಅಮೆರಿಕಾ ವಿಜ್ಞಾನಿ ಭೇಟಿ

ವಿದ್ಯಾರ್ಥಿಗಳೊಂದಿಗೆ ಸಂವಾದ



ಅಮೆರಿಕಾದ ಪ್ರಖ್ಯಾತ ಕಂಪ್ಯೂಟರ್ ವಿಜ್ಞಾನಿ ಹಾಗೂ ರೋಬೋಟಿಕ್ ತಜ್ಞ ಪ್ರೊ.ಸುಂದರರಾಜ ಸೀತಾರಾಮ್ ಐಯ್ಯಂಗಾರ್ ಅವರನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ಮೇ 27– ಪಟ್ಟಣದ ಪ್ರಥಮ ದರ್ಜೆ ಕಾಲೇಜಿಗೆ ತಾಲೂಕಿನ ಹೆಮ್ಮಿಗೆ ಮೂಲದ ಅಮೆರಿಕಾದ ಪ್ರಖ್ಯಾತ ಕಂಪ್ಯೂಟರ್ ವಿಜ್ಞಾನಿ ಹಾಗೂ ರೋಬೋಟಿಕ್ ತಜ್ಞ ಪ್ರೊ.ಸುಂದರರಾಜ ಸೀತಾರಾಮ್ ಐಯ್ಯಂಗಾರ್ ಅವರು ಭೇಟಿ ನೀಡಿ ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಿದರು.

ತಂತ್ರಜ್ಞಾನ, ಶಿಕ್ಷಣದ ಮಹತ್ವ ಮತ್ತು ಮಾನವೀಯ ಮೌಲ್ಯಗಳ ಬಗ್ಗೆ ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಿದ ಅವರು, ವಿದ್ಯಾರ್ಥಿಗಳು ತಂತ್ರಜ್ಞಾನ ಬಳಕೆಯಲ್ಲಿ ಎದುರಿಸುವ ಹಲವು ಸಮಸ್ಯೆಗಳ ಬಗ್ಗೆ ಸಲಹೆ ಸೂಚನೆ ನೀಡಿದರು.

ನಂತರ ಮಾತನಾಡಿದ ಅವರು, ಜೀವನದಲ್ಲಿ ಎಂತಹ ಕ್ಲಿಷ್ಟಕರ ಸನ್ನಿವೇಶ ಬಂದರೂ ಅವುಗಳನ್ನು ಎದುರಿಸಿ ಬದುಕುವುದೇ ನೈಜ ಜೀವನ. ವಿದ್ಯಾಭ್ಯಾಸದ ಅವಧಿಯಲ್ಲಿ ಶಿಸ್ತು, ಶ್ರದ್ಧೆ ಮತ್ತು ಏಕಾಗ್ರತೆಯನ್ನು ಸೂಕ್ಷ್ಮವಾಗಿ ಬಳಸಬೇಕು. ವಿದ್ಯಾರ್ಥಿಗಳು ತಾವು ಆಸಕ್ತಿವುಳ್ಳ ವಿಷಯದಲ್ಲಿ ಪರಿಣಿತಿ ಹೊಂದಿ ಉತ್ತಮ ಶಿಕ್ಷಣ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಬಹುದು ಎಂದರು.

ಕಾಲೇಜಿನ ಪ್ರಾಂಶುಪಾಲ ಹೆಚ್.ವಿ. ಉದಯ್ ಕುಮಾರ್ ಮಾತನಾಡಿ, ಅಮೆರಿಕಾದ ಕೆಲ ವಿವಿಗಳ ಸಂದರ್ಶಕ ಪ್ರಾಧ್ಯಾಪಕರು ಹಾಗೂ ಫ್ಲೋರಿಡಾದ ಅಂತಾರಾಷ್ಟ್ರೀಯ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನ ವಿಭಾಗದ ನಿರ್ದೇಶಕರು ಹಾಗೂ ಕಂಪ್ಯೂಟರ್ ವಿಜ್ಞಾನದ ನಿರ್ದೇಶಕರೂ ಆದ ಪ್ರೊ.ಸುಂದರರಾಜ ಸೀತಾರಾಮ್ ಐಯ್ಯಂಗಾರ್ ಅವರು ನಮ್ಮ ಕಾಲೇಜಿಗೆ ಭೇಟಿ ನೀಡಿರುವುದು ಹೆಮ್ಮೆಯ ವಿಷಯ. ಇವರು ಗ್ರಾಮೀಣ ಭಾಗದ ಪ್ರತಿಭಾನ್ವಿತ ವಿದ್ಯಾರ್ಥಿಗಳ ಬಗ್ಗೆ ಅತ್ಯಂತ ಕಾಳಜಿವುಳ್ಳ ವ್ಯಕ್ತಿಯಾಗಿದ್ದು, ಈ ಭಾಗದ ವಿದ್ಯಾರ್ಥಿಗಳಿಗೆ ಅವರ ಮಾರ್ಗದರ್ಶನದ ಅಗತ್ಯ ಎಂದರು.

ಈ ವೇಳೆ ಪ್ರೊ.ಸುಂದರರಾಜ ಸೀತಾರಾಮ್ ಐಯ್ಯಂಗಾರ್ ಅವರು, ಆರ್ಟಿಫಿಶಿಯಲ್ ಇಂಟಲಿಜೆನ್ಸ್, ಮೆಷಿನ್ ಲಾಂಗ್ವೇಜ್ ಇನ್ನಿತರೆ ಸಾಫ್ಟ್‌ವೇರ್‌ಗಳನ್ನು ಒಳಗೊಂಡ ವಿಶೇಷ ಕಂಪ್ಯೂಟರ್‌ವೊಂದನ್ನು ಕಾಲೇಜಿಗೆ ಉಡುಗೊರೆ ನೀಡಿದರು. ಅವರನ್ನು ಕಾಲೇಜಿನ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಲೇಖಕಿ ಕಮಲಾ ರಾಜೇಶ್, ರಾಜೇಶ್, ಡಾ.ವಿಠ್ಠಲ್, ಡಾ. ನಂದೀಶ್ವರ್, ಗ್ರಂಥಪಾಲಕ ಡಾ.ಪುಟ್ಟಸ್ವಾಮಿ, ಸಹ ಪ್ರಾಧ್ಯಾಪಕರಾದ ಡಾ.ಡಿ.ಕವಿತಾ, ಡಾ.ಆರ್.ಕೆಂಪರಾಜು, ಪಿ.ಆರ್.ಸವಿತಾ, ಪ್ರೊ.ಬಿ.ಎಂ.ರಾಮಮೂರ್ತಿ, ಪ್ರೊ.ಮಹೇಶ್, ಪ್ರೊ.ರಾಘವೇಂದ್ರ ಪ್ರಸಾದ್ ಮತ್ತು ಬೋಧಕೇತರ ವೃಂದ, ವಿದ್ಯಾರ್ಥಿಗಳು ಹಾಜರಿದ್ದರು.

ಶೀಘ್ರ ಒಳ ಮೀಸಲಾತಿ ಜಾರಿಗೊಳಿಸಲು ಒತ್ತಾಯ



ಸುದ್ದಿಗೋಷ್ಠಿಯಲ್ಲಿ ವಿಜಯ್ ಕುಮಾರ್ ಮಾತನಾಡಿದರು.

ಪಿರಿಯಾಪಟ್ಟಣ, ಮೇ 27– ಸರ್ಕಾರದಿಂದ ನಡೆಸುತ್ತಿರುವ ಜಾತಿ ಜನಗಣತಿ ಸಮೀಕ್ಷೆ ಕಾರ್ಯ ಮುಗಿಯುವ ಹಂತದಲ್ಲಿದ್ದು, ಶೀಘ್ರ ಒಳ ಮೀಸಲಾತಿ ಜಾರಿಗೊಳಿಸುವಂತೆ ಆದಿಜಾಂಬವ ಮಾದಿಗ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಉಪಾಧ್ಯಕ್ಷ ವಿಜಯ್ ಕುಮಾರ್ ಒತ್ತಾಯಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ಒಳ ಮೀಸಲಾತಿ ಜಾರಿಗಾಗಿ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ನೇತೃತ್ವದಲ್ಲಿ ಸಮೀಕ್ಷೆ ನಡೆಸುತ್ತಿದ್ದು, ಇನ್ನೆರಡು ದಿನಗಳಲ್ಲಿ ಸಮೀಕ್ಷೆ ಪೂರ್ಣಗೊಳ್ಳಲಿದೆ. ಸಮೀಕ್ಷೆ ಮುಗಿದ ತಕ್ಷಣ ಸಿಎಂ ಸಿದ್ದರಾಮಯ್ಯ ಸರ್ಕಾರ ಕೂಡಲೇ ಒಳ ಮೀಸಲಾತಿ ಜಾರಿ ಮಾಡಬೇಕು. ಮಾದಿಗ ಜನಾಂಗ ಶತಮಾನದಿಂದ ಶೋಷಣೆಗೆ ಒಳಗಾಗಿದ್ದು, ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಹಿಂದುಳಿದಿದೆ. ಅಲ್ಲದೇ ಇನ್ನೂ ಅನೇಕ ಜಾತಿಗಳಿಗೆ ಸಾಮಾಜಿಕ ನ್ಯಾಯ ಸಿಗಬೇಕೆಂದು ಬಹಳ ವರ್ಷಗಳಿಂದ ಮಾದಿಗ ಜನಾಂಗದ ವಿವಿಧ ಸಂಘಟನೆಗಳು ರಾಜ್ಯಾದ್ಯಂತ ಹೋರಾಟ ಮಾಡುತ್ತಾ ಬಂದಿವೆ. ಇದನ್ನು ಮನಗಂಡು ನಮ್ಮ ಜನಾಂಗದ ರಾಜ್ಯ ಮುಖಂಡರು ಸುಪ್ರೀಂಕೋರ್ಟ್‌ಗೆ ಮನವಿ ಸಲ್ಲಿಸಿದ್ದು, ಕೋರ್ಟ್ 101 ಜಾತಿಗಳಿಗೆ ಅನುಕೂಲವಾಗುವಂತೆ ಒಳಮೀಸಲಾತಿ ಅವಶ್ಯಕತೆ ಇದೆ. ಆದ್ದರಿಂದ ಆಯ ರಾಜ್ಯಗಳು ಒಳಮೀಸಲಾತಿ ನೀಡಬಹುದು ಎಂದು ಆದೇಶ ನೀಡಿದೆ. ಈ ಹಿನ್ನೆಲೆಯಲ್ಲಿ ಮನೆ ಮನೆ ಸಮೀಕ್ಷೆ ನಡೆಸಿ ವರದಿ ಪಡೆಯುತ್ತಿದ್ದು, ಈಗ ಮುಗಿಯುವ ಹಂತ ತಲುಪಿದೆ. ಆದ್ದರಿಂದ ಈ ಕೂಡಲೇ ಸರ್ಕಾರ ಒಳ ಮೀಸಲಾತಿ ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಸಂಘದ ತಾಲೂಕು ಅಧ್ಯಕ್ಷ ರವಿ ಮಾತನಾಡಿದರು. ಗೋಷ್ಠಿಯಲ್ಲಿ ಸಂಘದ ಗೌರವಾಧ್ಯಕ್ಷ ಶಿವಣ್ಣ, ಉಪಾಧ್ಯಕ್ಷ ಕುಮಾರ್, ಸಂಘಟನಾ ಕಾರ್ಯದರ್ಶಿ ಆನಂದ ಹಾಜರಿದ್ದರು.

ಎಲ್‌ಕೆಜಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ನಂಜನಗೂಡು, ಮೇ 27– ತಾಲೂಕಿನ ಹೆಮ್ಮರಗಾಲ ಗ್ರಾಮದ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗೆ 2025–26ನೇ ಸಾಲಿನ ಎಲ್‌ಕೆಜಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಮೇ 28 ರಿಂದ ಅರ್ಜಿಗಳನ್ನು ವಿತರಿಸಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ಮೇ 30ರ 3 ಗಂಟೆಯೊಳಗೆ ಸಲ್ಲಿಸತಕ್ಕದ್ದು. ಮೊದಲ ಹಂತದ ಆಯ್ಕೆ ಪಟ್ಟಿಯನ್ನು ಮೇ 31ರಂದು ಪ್ರಕಟಿಸಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು 2025ರ ಜೂ.1ಕ್ಕೆ 4 ವರ್ಷ ಪೂರ್ಣಗೊಂಡಿರಬೇಕು ಹಾಗೂ ಗರಿಷ್ಠ 5 ವರ್ಷ ವಯೋಮಿತಿ ಒಳಗಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸಸ್ಥಳ ದೃಢೀಕರಣ ಪತ್ರ, ವಿದ್ಯಾರ್ಥಿ ಮತ್ತು ತಂದೆ ತಾಯಿ ಆಧಾರ್ ಕಾರ್ಡ್ ನಕಲು ಪ್ರತಿ ಮತ್ತು 4 ಭಾವಚಿತ್ರಗಳ ಸಹಿತ ಅರ್ಜಿ ಸಲ್ಲಿಸುವಂತೆ ಕರ್ನಾಟಕ ಪಬ್ಲಿಕ್ ಶಾಲೆ ಮುಖ್ಯೋಪಾಧ್ಯಾಯ ಮಹದೇವ ಪ್ರಸಾದ್ ಪ್ರಕಟಣೆಯಲ್ಲಿ ಕೋರಿದ್ದಾರೆ.



ಸನ್ಮಾನ

ಮೂಗೂರು ಸಮೀಪದ ಹೊಸಹಳ್ಳಿ ಮೋಳೆ ಗ್ರಾಮದಲ್ಲಿ ನೂತನ ಶ್ರೀಸಿದ್ದಪ್ಪಾಜಿ ದೇಗುಲ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಉದ್ಯಮಿ ಮೂಗೂರು ಗೌಡರ ಎಂ.ಪಿ.ಛಾಯ ಕುಮಾರ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಗ್ರಾಮದ ಯಜಮಾನರು, ಮುಖಂಡರು, ಯುವಕ ಸಂಘದ ಪದಾಧಿಕಾರಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

ಭಾರೀ ಮಳೆಗೆ ಮನೆ ಗೋಡೆಗಳು ಕುಸಿತ



ಸರಗೂರು, ಮೇ 27– ಕಳೆದ ಮೂರ್‍ನಾಲ್ಕು ದಿನಗಳಿಂದ ಸುರಿದ ಭಾರೀ ಮಳೆಗೆ ಪಟ್ಟಣದ 9ನೇ ವಾರ್ಡ್‌ನಲ್ಲಿ 11 ಮನೆ ಗೋಡೆಗಳು ಕುಸಿದು ಲಕ್ಷಾಂತರ ರೂ. ನಷ್ಟ ಸಂಭವಿಸಿದೆ

ಸೋಮವಾರ ರಾತ್ರಿ ವಾರ್ಡ್‌ನ ನಿವಾಸಿಗಳಾದ ನಾಗಮಣಿ ಶಿವಕುಮಾರ್, ರತ್ನಮ್ಮ ಚನ್ನನಾಯಕ, ಲಕ್ಷ್ಮಿ ಲೇ.ಭೈರನಾಯಕ, ಚಿಕ್ಕದೇವಮ್ಮ ಉಚ್ಚಿರನಾಯಕ, ಲಕ್ಷ್ಮೀ ಈರಪ್ಪನಾಯಕ, ಗೀತಾ ಲಕ್ಷ್ಮಣ ನಾಯಕ, ಶಾರದಮ್ಮ ಲೇ.ಈರಪ್ಪನಾಯಕ, ಲಕ್ಷ್ಮೀ ಲೇ ರಂಗಪ್ಪನಾಯಕ, ಚಿಕ್ಕಣ್ಣಮ್ಮ ಲೇ ರಂಗಸ್ವಾಮಿ ನಾಯಕ, ಲಕ್ಷ್ಮೀ ಲೇ ಚನ್ನನಾಯಕ, ಜವರಮ್ಮ ಅವರ ಮನೆ ಗೋಡೆಗಳು ಸಂಪೂರ್ಣ ಕುಸಿದಿದ್ದು ದಿನಬಳಕೆಯ ವಸ್ತುಗಳು ಸೇರಿದಂತೆ ಲಕ್ಷಾಂತರ ರೂ. ನಷ್ಟ ಸಂಭವಿಸಿದೆ ಎನ್ನಲಾಗಿದೆ. ವಿಷಯ ತಿಳಿದು ಮಂಗಳವಾರ ಬೆಳಗ್ಗೆ ಕಂದಾಯ ಇಲಾಖೆ ಅಧಿಕಾರಿ ಸತ್ಯನಾರಾಯಣ್ ಹಾಗೂ ಸಿಬ್ಬಂದಿ ಪರಿಶೀಲನೆ ನಡೆಸಿದರು.

ಪಪಂ ಸದಸ್ಯ ಶ್ರೀನಿವಾಸ್ ಮಾತನಾಡಿ, ಮಳೆಯಿಂದಾಗಿ ವಾರ್ಡ್‌ನಲ್ಲಿ 11 ಮನೆ ಗೋಡೆಗಳು ಸಂಪೂರ್ಣ ಕುಸಿದಿವೆ. ಹೀಗಾಗಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ತಕ್ಷಣ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸಬೇಕು ಎಂದು ಮನವಿ ಮಾಡಿದರು. ಈ ವೇಳೆ ಪಪಂ ಅಧಿಕಾರಿಗಳಾದ ಪಳನಿಸ್ವಾಮಿ ಹಾಗೂ ವಾರ್ಡ್ ನಿವಾಸಿ ಎಸ್.ಎ. ನಾಗೇಂದ್ರ ಇದ್ದರು.

ಎಲ್‌ಐಸಿ ಕಚೇರಿ ಬಳಿಗೆ ತರಕಾರಿ ವ್ಯಾಪಾರಸ್ಥರ ಸ್ಥಳಾಂತರ

ಪರ್ಯಾಯ ಸ್ಥಳ ಕಲ್ಪಿಸಲು ಸಮಾಲೋಚನಾ ಸಭೆ



ಸಮಾಲೋಚನಾ ಸಭೆಯಲ್ಲಿ ಅಧ್ಯಕ್ಷ ಶಿವುನಾಯಕ್ ಮಾತನಾಡಿದರು.

ಕೆ.ಆರ್.ನಗರ, ಮೇ 27– ಮುಖ್ಯಮಂತ್ರಿ ಸಿದ್ದರಾಮಯ್ಯ ಮೇ 23ರಂದು ಪಟ್ಟಣಕ್ಕೆ ಆಗಮಿಸಿದ ವೇಳೆ ಇಲ್ಲಿನ ಬಜಾರ್ ಮತ್ತು ಹುಣಸೂರು ರಸ್ತೆಯಲ್ಲಿದ್ದ ತರಕಾರಿ ವ್ಯಾಪಾರಸ್ಥರನ್ನು ಎಲ್‌ಐಸಿ ಕಚೇರಿ ಎದುರಿಗೆ ಸ್ಥಳಾಂತರಿಸಿದ ಹಿನ್ನೆಲೆಯಲ್ಲಿ ಅವರಿಗೆ ಪರ್ಯಾಯ ಸ್ಥಳ ನಿಗದಿ ಮಾಡಲು ಪುರಸಭೆ ಕಚೇರಿಯಲ್ಲಿ ಅಧ್ಯಕ್ಷ ಶಿವುನಾಯಕ್ ನೇತೃತ್ವದಲ್ಲಿ ಸಮಾಲೋಚನಾ ಸಭೆ ನಡೆಸಲಾಯಿತು.

ಸಭೆಯಲ್ಲಿ ಮಾತನಾಡಿದ ಅಧ್ಯಕ್ಷರು, ಬಜಾರ್ ರಸ್ತೆಯಲ್ಲಿ ವ್ಯಾಪಾರಿಗಳು ಈ ಹಿಂದೆ ರಸ್ತೆ ತುಂಬಾ ವಸ್ತುಗಳನ್ನು ಇಟ್ಟುಕೊಂಡು ಸಾರ್ವಜನಿಕರಿಗೆ ತೊಂದರೆ ನೀಡುತ್ತಿದ್ದರಿಂದ ಸಂಚಾರಕ್ಕೆ ಸಮಸ್ಯೆಯಾಗಿತ್ತು. ಹಾಗಾಗಿ ಈಗ ಇದಕ್ಕೆ ಶಾಶ್ವತ ಪರಿಹಾರ ಕಂಡು ಹಿಡಿಯಲು ಸದಸ್ಯರು ಸಲಹೆ ನೀಡಬೇಕು ಎಂದರು.

ಪುರಸಭೆಗೆ ಸೇರಿದ ತರಕಾರಿ ಸಂಕುಲ ಕಳೆದ ಒಂದು ವರ್ಷದಿಂದ ಖಾಲಿ ಬಿದ್ದಿದ್ದು, ಇಲ್ಲಿಗೆ ಎಲ್ಲಾ ವ್ಯಾಪಾರಿಗಳನ್ನು ಸ್ಥಳಾಂತರ ಮಾಡುವುದರ ಜೊತೆಗೆ ಹೂ, ಹಣ್ಣು ಹಾಗೂ ಇತರೆ ವಸ್ತುಗಳನ್ನು ಮಾರಾಟ ಮಾಡಲು ಪರ್ಯಾಯ ಸ್ಥಳಗಳನ್ನು ಗುರುತಿಸಲು ಎಲ್ಲರೂ ಸಹಕಾರ ನೀಡಬೇಕು ಎಂದು ಕೋರಿದರು.

ಸದಸ್ಯ ಪ್ರಕಾಶ್ ಮಾತನಾಡಿ, ಪಟ್ಟಣದ ಪುರಸಭೆ ಬಗ್ಗೆ ಸಾರ್ವಜನಿಕರು ಟೀಕೆ ಮಾಡುತ್ತಿದ್ದು, ಇದು ನಮಗೆ ಸಹಿಸಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಎಲ್ಲರೂ ಒಟ್ಟಿಗೆ ಕುಳಿತು ತರಕಾರಿ ವ್ಯಾಪಾರಿಗಳಿಗೆ ಪರ್ಯಾಯ ಸ್ಥಳ ನಿಗದಿ ಸೇರಿದಂತೆ ಇತರ ವಿಚಾರಗಳಲ್ಲಿ ಜನ ಸ್ನೇಹಿಯಾಗಿ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಸದಸ್ಯ ಉಮೇಶ್ ಮಾತನಾಡಿ, ಮುಖ್ಯಮಂತ್ರಿಗಳು ಪಟ್ಟಣಕ್ಕೆ ಆಗಮಿಸಿದ ಸಂದರ್ಭ ಬಜಾರ್ ಮತ್ತು ಹುಣಸೂರು ರಸ್ತೆಯಲ್ಲಿದ್ದ ತರಕಾರಿ ವ್ಯಾಪಾರಿಗಳನ್ನು ಸ್ಥಳಾಂತರ ಮಾಡಿದ್ದಕ್ಕೆ ನಮ್ಮ ವಿರೋಧ ವಿಲ್ಲ. ಆದರೆ ಅವರಿಗೆ ಶಾಶ್ವತ ಸ್ಥಳ ನಿಗದಿ ಮಾಡಿ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸದಸ್ಯ ಜಾವಿದ್ ಪಾಷ ಮಾತನಾಡಿ, ಬಸ್ ನಿಲ್ದಾಣದ ಸುತ್ತಮುತ್ತ ಹಣ್ಣು ಮತ್ತು ಹೂ ವ್ಯಾಪಾರ ಮಾಡುವವರಿಗೆ ಸ್ಥಳ ನಿಗದಿ ಮಾಡಿದರೆ ಸಾರ್ವಜನಿಕರಿಗೆ ಅನುಕೂಲವಾಗಲಿದ್ದು, ಈ ವಿಚಾರದ ಬಗ್ಗೆ ಅಧ್ಯಕ್ಷರು ಮತ್ತು ಮುಖ್ಯಾಧಿಕಾರಿಗಳು ಗಂಭೀರವಾಗಿ ಚಿಂತಿಸಬೇಕು ಎಂದರು.

ಹಿರಿಯ ಸದಸ್ಯ ಕೆ.ಪಿ.ಪ್ರಭುಶಂಕರ್ ಮಾತನಾಡಿ, ರಸ್ತೆ ಬದಿ ತರಕಾರಿ, ಹೂ, ಹಣ್ಣು ಸೇರಿದಂತೆ ಇನ್ನಿತರ ವ್ಯಾಪಾರ ಮಾಡುವವರು ತಮ್ಮ ಬದುಕು ಕಟ್ಟಿಕೊಂಡಿದ್ದು ಅವರಿಗೆ ಯಾವುದೇ ತೊಂದರೆಯಾಗದಂತೆ ನಿರ್ಧಾರ ಕೈಗೊಂಡು ಅವರ ಬೆನ್ನಿಗೆ ನಿಲ್ಲಬೇಕೆಂದರು.

ಈ ಸಂದರ್ಭ ಪರಸ್ಪರ ಚರ್ಚೆ ನಡೆಸಿದ ಅಧ್ಯಕ್ಷರು, ಸ್ಥಾಯಿ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ತರಕಾರಿ, ಹೂ, ಹಣ್ಣು ಮತ್ತು ಇತರೆ ವ್ಯಾಪಾರಿಗಳಿಗೆ ನಿಗದಿತ ಸ್ಥಳ ನಿಗದಿಪಡಿಸಲು ಉಪ–ಸಮಿತಿ ರಚಿಸಲು ನಿರ್ಧರಿಸಿದರು.

ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಶಂಕರ್, ಸೈಯದ್ ಸಿದ್ದಿಕ್, ಸದಸ್ಯರಾದ ನಟರಾಜು, ಕೆ.ಎಲ್. ಜಗದೀಶ್, ಸಂತೋಷ್‌ಗೌಡ, ತೋಂಟದಾರ್ಯ, ಇತರರು ಸಲಹೆ ನೀಡಿದರು. ಸದಸ್ಯ ಶಂಕರ್‌ಸ್ವಾಮಿ, ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್, ಕಂದಾಯಾಧಿಕಾರಿ ರಮೇಶ್ ಮತ್ತಿತರರಿದ್ದರು.

ತರಕಾರಿ ಸಂಕುಲಕ್ಕೆ ವ್ಯಾಪಾರಿಗಳ ಸ್ಥಳಾಂತರ

ಕೆ.ಆರ್.ನಗರ: ಬಜಾರ್ ರಸ್ತೆ ಮತ್ತು ಹುಣಸೂರು ರಸ್ತೆಯಲ್ಲಿ ತರಕಾರಿ ವ್ಯಾಪಾರ ಮಾಡುತ್ತಿದ್ದವರನ್ನು ಪುರಸಭೆಗೆ ಸೇರಿದ ತರಕಾರಿ ಸಂಕುಲಕ್ಕೆ ಸ್ಥಳಾಂತರಿಸಲಿದ್ದು, ಇವರ ಜೊತೆಗೆ ಹಣ್ಣು ವ್ಯಾಪಾರ ಮಾಡುವವರಿಗೂ ಪಕ್ಕದಲ್ಲಿಯೇ ಅನುಕೂಲ ಕಲ್ಪಿಸುವುದಾಗಿ ಅಧ್ಯಕ್ಷ ಶಿವು ನಾಯಕ್ ಘೋಷಿಸಿದರು.

ಪುರಸಭೆ ಕೃಷ್ಣರಾಜೇಂದ್ರ ಸಭಾಂಗಣದಲ್ಲಿ ನಡೆದ ಸರ್ವ ಸದಸ್ಯರ ಸಮಾಲೋಚನಾ ಸಭೆ ನಂತರ ತರಕಾರಿ ವ್ಯಾಪಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಪಟ್ಟಣದ ವ್ಯಾಪ್ತಿಯ ವ್ಯಾಪಾರಿಗಳಿಗೆ ಮೊದಲ ಆದ್ಯತೆ ನೀಡಲಿದ್ದು ಲಾಟರಿ ಮೂಲಕ ಆಯ್ಕೆ ಮಾಡಿ ತರಕಾರಿ ಸಂಕುಲದಲ್ಲಿ ಸ್ಥಳ ನಿಗದಿ ಮಾಡಲಾಗುತ್ತದೆ ಎಂದರು.

ಪಟ್ಟಣವನ್ನು ಸ್ವಚ್ಛವಾಗಿಡಲು ಎಲ್ಲಾ ವ್ಯಾಪಾರಿಗಳು ನಮ್ಮೊಡನೆ ಸಹಕಾರ ನೀಡಬೇಕು. ಯಾವುದೇ ಕಾರಣಕ್ಕೂ ವ್ಯಾಪಾರಿಗಳಿಗೆ ತೊಂದರೆ ನೀಡುವುದಿಲ್ಲ. ಈ ವಿಚಾರದಲ್ಲಿ ಪುರಸಭೆ ಆಡಳಿತ ಮಂಡಳಿ ನಿಮ್ಮ ಜೊತೆಗೆ ಇರುತ್ತದೆ ಎಂದರು.

ಈಗಿರುವ ಎಲ್ಲಾ ತರಕಾರಿ ವ್ಯಾಪಾರಿಗಳು ಪುರಸಭೆ ಕಚೇರಿಗೆ ಬಂದು ಆಧಾರ್ ಕಾರ್ಡ್ ಸಹಿತ ತಮ್ಮ ಹೆಸರು ನೋಂದಾಯಿಸಿಕೊಂಡರೆ ಅವರಿಗೆ ತರಕಾರಿ ಸಂಕುಲದಲ್ಲಿ ಸ್ಥಳ ನಿಗದಿಯಾದ ನಂತರ ಹೆಚ್ಚುವರಿ ಆಗಿರುವವರಿಗೂ ಬೇರೆ ಅನುಕೂಲ ಕಲ್ಪಿಸುವುದಾಗಿ ಪ್ರಕಟಿಸಿದರು. ರಸ್ತೆಬದಿ ತರಕಾರಿ ಸೇರಿದಂತೆ ಇನ್ನಿತರ ವ್ಯಾಪಾರ ಮಾಡುವವರು ತಮ್ಮ ತಳ್ಳುವ ಗಾಡಿಗಳನ್ನು ನಿಗದಿತ ಸ್ಥಳದಲ್ಲಿ ನಿಲ್ಲಿಸಿಕೊಂಡು ವ್ಯಾಪಾರ ಮುಗಿದ ನಂತರ ಕಡ್ಡಾಯವಾಗಿ ಮನೆಗೆ ತೆಗೆದುಕೊಂಡು ಹೋಗಬೇಕು. ಇಲ್ಲವಾದಲ್ಲಿ ಅಂತವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದರು.

ಐಪಿಎಲ್ ಹಂಗಾಮ

ಲಕ್ನೋ ವಿರುದ್ಧ ಜಯ: ಕ್ವಾಲಿಫೈಯರ್–1ಗೆ ಆರ್‌ಸಿಬಿ

ನಾಳೆ ಫೈನಲ್ ತಲುಪಲು ಪಂಜಾಬ್ ವಿರುದ್ಧ ಸೆಣಸಾಟ





ಲಕ್ನೋ, ಮೇ 27– ನಾಯಕನಿಗೆ ತಕ್ಕ ಆಟವಾಡಿದ ಜಿತೇಶ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಅವರ ಅರ್ಧಶತಕಗಳ ನೆರವಿನಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ 6 ವಿಕೆಟ್‌ಗಳ ಅಮೋಘ ಜಯ ಸಾಧಿಸಿದೆ.

ಇದರೊಂದಿಗೆ ಆರ್‌ಸಿಬಿ ಲೀಗ್ ಹಂತದಲ್ಲಿ ಆಡಿರುವ 14 ಪಂದ್ಯಗಳ ಪೈಕಿ 9 ಜಯ, 4 ಸೋಲು, 1 ಪಂದ್ಯ ಡ್ರಾದೊಂದಿಗೆ ಅಂಕಪಟ್ಟಿಯಲ್ಲಿ 19 ಅಂಕ ಗಳಿಸಿ ಮೇ 29 ರಂದು ನಡೆಯುವ ಕ್ವಾಲಿಫೈಯರ್–1ಕ್ಕೆ ಲಗ್ಗೆ ಹಾಕಿದ್ದು, ಫೈನಲ್ ತಲುಪಲು ಪಂಜಾಬ್ ಕಿಂಗ್ಸ್ ಎದುರಿಸಲಿದೆ. ಮತ್ತೊಂದೆಡೆ ಸೋಲಿನೊಂದಿಗೆ ಲಕ್ನೋ ಟೂರ್ನಿಗೆ ವಿದಾಯ ಹೇಳಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಲಕ್ನೋ ರಿಷಬ್ ಪಂತ್ ಅವರ ಅಮೋಘ ಶತಕದ ನೆರವಿನಿಂದ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 227 ರನ್‌ಗಳ ಬೃಹತ್ ಮೊತ್ತ ದಾಖಲಿಸಿತು. ಕಠಿಣ ಗುರಿ ಬೆನ್ನತ್ತಿದ ಆರ್‌ಸಿಬಿ 18.4 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 230 ರನ್ ಗಳಿಸಿ ಗೆದ್ದು ಬೀಗಿದೆ. ಅಲ್ಲದೇ ಏಕನಾ ಕ್ರೀಡಾಂಗಣದಲ್ಲಿ ಅತಿದೊಡ್ಡ ಮೊತ್ತ ಚೇಸಿಂಗ್ ಮಾಡಿದ ದಾಖಲೆ ಬರೆದಿದೆ.

ತಂಡದ ಪರ ಚೇಸಿಂಗ್ ಆರಂಭಿಸಿದ ವಿರಾಟ್ ಕೊಹ್ಲಿ ಹಾಗೂ ಫಿಲಿಪ್ ಸಾಲ್ಟ್ ಮೊದಲ ವಿಕೆಟ್‌ಗೆ 61 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಉತ್ತಮ ಆರಂಭ ಒದಗಿಸಿದರು. ಆದರೆ ಫಿಲ್ ಸಾಲ್ಟ್ 19 ಎಸೆತಗಳಲ್ಲಿ 30 ರನ್‌ಗಳಿಸಿ ಔಟಾಗುತ್ತಿದ್ದಂತೆ ರನ್ ವೇಗವೂ ಕಡಿತಗೊಂಡಿತ್ತು. ಅಲ್ಲದೇ ರಜತ್ ಪಾಟೀದಾರ್, ಲಿಯಾಮ್ ಲಿವಿಂಗ್‌ಸ್ಟೋನ್ ಬ್ಯಾಟಕ್ ಟು ಬ್ಯಾಕ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ವಿರಾಟ್ ಕೊಹ್ಲಿ 30 ಎಸೆತಗಳಲ್ಲಿ 10 ಬೌಂಡರಿ ಒಳಗೊಂಡ 54 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಇದರಿಂದ ಆರ್‌ಸಿಬಿಗೆ ಗೆಲುವು ಕಠಿಣವಾಗಿತ್ತು.

5ನೇ ವಿಕೆಟ್‌ಗೆ ಜೊತೆಯಾದ ಜಿತೇಶ್ ಶರ್ಮಾ, ಮಯಾಂಕ್ ಅಗರ್ವಾಲ್ 45 ಎಸೆತಗಳಲ್ಲಿ ಸ್ಫೋಟಕ 107 ರನ್ ಬಾರಿಸಿ ತಂಡಕ್ಕೆ ಗೆಲುವು ತಂದು ಕೊಟ್ಟರು. ಅಬ್ಬರದ ಬ್ಯಾಟಿಂಗ್ ಮಾಡಿದ ಜಿತೇಶ್ ಶರ್ಮಾ 33 ಎಸೆತಗಳಲ್ಲಿ 6 ಸಿಕ್ಸರ್, 8 ಬೌಂಡರಿ ಒಳಗೊಂಡ ಅಜೇಯ 85 ರನ್, ಮಯಾಂಕ್ ಅಗರ್ವಾಲ್ 23 ಎಸೆತಗಳಲ್ಲಿ 5 ಬೌಂಡರಿ ಒಳಗೊಂಡ ಅಜೇಯ 41ರನ್ ಗಳಿಸಿದರು. ಲಕ್ನೋ ಪರ ವಿಲಿಯಮ್ ಓರೂರ್ಕಿ 2, ಆಕಾಶ್ ಸಿಂಗ್, ಆವೇಶ್ ಖಾನ್ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಲಕ್ನೋ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 227 ರನ್ ಗಳಿಸಿತ್ತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಮ್ಯಾಥ್ಯೂ ಬ್ರೀಟ್ಜ್ಕೆ 14 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. 2ನೇ ವಿಕೆಟ್‌ಗೆ ಜೊತೆಗೂಡಿದ ನಾಯಕ ರಿಷಬ್ ಪಂತ್ ಹಾಗೂ ಮಿಚೆಲ್ ಮಾರ್ಷ್ ಕೇವಲ 78 ಎಸೆತಗಳಲ್ಲಿ 152 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ಆರ್‌ಸಿಬಿ ಬೌಲರ್‌ಗಳ ಮೇಲೆ ಸವಾರಿ ಮಾಡಿದ ರಿಷಬ್ ಪಂತ್ 61 ಎಸೆತಗಳಲ್ಲಿ 8 ಸಿಕ್ಸರ್, 11 ಬೌಂಡರಿ ಒಳಗೊಂಡ ಅಜೇಯ 118 ರನ್ ಗಳಿಸಿದರು. ಮಿಚೆಲ್ ಮಾರ್ಷ್ 5 ಸಿಕ್ಸರ್, 4 ಬೌಂಡರಿ ಒಳಗೊಂಡ 67 ರನ್ ಗಳಿಸಿ ನಿರ್ಗಮಿಸಿದರು. ಉಳಿದಂತೆ ನಿಕೋಲಸ್ ಪೂರನ್ 13 ರನ್ ಗಳಿಸಿದರು. ಆರ್‌ಸಿಬಿ ಪರ ನುವಾನ್ ತುಷಾರ, ಭುವನೇಶ್ವರ್ ಕುಮಾರ್, ರೊಮಾರಿಯೊ ಶೆಫರ್ಡ್ ತಲಾ ಒಂದೊಂದು ವಿಕೆಟ್ ಪಡೆದರು. ಜಿತೇಶ್ ಶರ್ಮಾ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ನಾಳೆಯಿಂದ ಪ್ಲೇಆಫ್ ಪಂದ್ಯಗಳು

ಬೆಂಗಳೂರು: 18ನೇ ಆವೃತ್ತಿಯ ಐಪಿಎಲ್ ಪಂದ್ಯಾವಳಿಯ ಲೀಗ್ ಹಂತದ ಎಲ್ಲಾ ಪಂದ್ಯಗಳು ಮುಕ್ತಾಯಗೊಂಡಿದ್ದು, ನಾಳೆ(ಮೇ 29) ಚಂಡೀಗಡದಲ್ಲಿ ನಡೆಯುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ.

ಈ ಪಂದ್ಯದಲ್ಲಿ ಗೆಲ್ಲುವ ತಂಡ ನೇರವಾಗಿ ಫೈನಲ್ ಪ್ರವೇಶಿಸಿದರೇ, ಸೋತ ತಂಡ ಎಲಿಮನೇಟರ್ ಪಂದ್ಯದಲ್ಲಿ ಗೆದ್ದ ತಂಡದೊಂದಿಗೆ 2ನೇ ಕ್ವಾಲಿಫೈಯರ್ ಪಂದ್ಯದಲ್ಲಿ ಸೆಣಸಾಡಲಿದೆ. ಮೇ 30 ರಂದು ಗುಜರಾತ್ ಟೈಟಾನ್ಸ್ ಹಾಗೂ ಮುಂಬೈ ಇಂಡಿಯನ್ಸ್ ನಡುವೆ ಚಂಡೀಗಡದಲ್ಲಿ ಎಲಿಮನೇಟರ್ ಪಂದ್ಯ ನಡೆಯಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಜೂ.1ರಂದು 2ನೇ ಕ್ವಾಲಿಫೈಯರ್ ಪಂದ್ಯ ಹಾಗೂ ಜೂ.4ರಂದು ಫೈನಲ್ ಪಂದ್ಯ ನಡೆಯಲಿದೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಏಸ್ (ತ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಧಡ್ಕನ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕಿರಿಕ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಟಕೀಲಾ (ಕ)	4 ಪ್ರದರ್ಶನಗಳು
ರಾಜಕಮಲ್	
ಡೆವಿಲ್ಸ್ ಡಬಲ್ ನೆಕ್ಸ್ಟ್ ಲೆವಲ್ (ತ)	4 ಪ್ರದರ್ಶನಗಳು
ಸಂಗಂ	
ಸೈನೈಡ್ (ಕ)	4 ಪ್ರದರ್ಶನಗಳು
ಲಿಡೋ	
ಯುದ್ಧಕಾಂಡ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಅರ್ಜಿ ಆಹ್ವಾನ

ಮೈಸೂರು, ಮೇ 27– ಕಡಕೊಳ ಪಟ್ಟಣ ಪಂಚಾಯಿತಿಯ ಕಾರ್ಯಾಲಯದ ವತಿಯಿಂದ ಕಡಕೊಳ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸಚ್ಚ ಭಾರತ ಅಭಿಯಾನದಡಿ 3 ವರ್ಷಗಳ ಅವಧಿಗೆ ಶಿಕ್ಷಣ ಮತ್ತು ಸಂವಹನ(IEC) ಚಟುವಟಿಕೆ ಕೈಗೊಳ್ಳಲು ಸ್ವಸಹಾಯ ಗುಂಪುಗಳ (SHG) ಸದಸ್ಯರನ್ನು Community mobiliser ಎಂಬುದಾಗಿ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಕಡಕೊಳ ಪಟ್ಟಣ ಪಂಚಾಯಿತಿಯ ಕಚೇರಿ ವೇಳೆಯಲ್ಲಿ ಸಮುದಾಯ ಸಂಘಟನಾಧಿಕಾರಿಯವರನ್ನು ಸಂಪರ್ಕಿಸಬಹುದಾಗಿದೆ.

ಷರತ್ತುಗಳು: ಕಡಕೊಳ ಪಟ್ಟಣ ಪಂಚಾಯಿತಿಯಲ್ಲಿ Day-NULM ಯೋಜನೆಯಡಿ ನೋಂದಾಯಿತ ಸ್ವಸಹಾಯ ಗುಂಪುಗಳ ಸದಸ್ಯರಾಗಿರಬೇಕು, ಕನಿಷ್ಠ ಎಸ್.ಎಸ್.ಎಲ್.ಸಿ/10 ನೇ ತರಗತಿ ಉತೀರ್ಣರಾಗಿಬೇಕು, ಸ್ಪಷ್ಟವಾಗಿ ಕನ್ನಡ ಮಾತನಾಡುವ ಹಾಗೂ ಗಣಕ ಯಂತ್ರದಲ್ಲಿ MS-Excel ಮತ್ತು MS-Office ದಾಖಲೀಕರಣ ಅನುಭವ ಹೊಂದಿರಬೇಕು, ಎಸ್.ಹೆಚ್.ಜಿ ನೊಂದಣಿಯಾಗಿರುವ ಬಗ್ಗೆ ಸ್ಥಳೀಯ ಸಂಸ್ಥೆಯ ಸಮುದಾಯ ಸಂಘಟನಾಧಿಕಾರಿಗಳಿಂದ ದೃಢೀಕರಣ ದಾಖಲೆಗಳನ್ನು ಸಲ್ಲಿಸಬೇಕು ಎಂದು ಕಡಕೊಳ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಫ್2 ರೇಸ್ ಗೆದ್ದು ಇತಿಹಾಸ ಬರೆದ ಬೆಂಗಳೂರಿಗ

ಮೊನಾಕೊದಲ್ಲಿ ಮೊಳಗಿದ ರಾಷ್ಟ್ರಗೀತೆ!



ಭಾರತದ ಕುಶ್ ಮೈನಿ ಅವರು ಪಡೆದಿರುವ ಪ್ರಶಸ್ತಿಗಳು ಮತ್ತು ಬಹುಮಾನಗಳು



ಮೊನಾಕೊ, ಮೇ 27– ಫಾರ್ಮುಲಾ 2 ಚಾಂಪಿಯನ್‌ಶಿಪ್‌ನ ಮೊನಾಕೊ ಸ್ಪ್ರಿಂಟ್ ರೇಸ್‌ನಲ್ಲಿ ಭಾರತದ ಕುಶ್ ಮೈನಿ ಐತಿಹಾಸಿಕ ಗೆಲುವು ಸಾಧಿಸಿದ್ದಾರೆ. ಮೊನಾಕೊದಲ್ಲಿ ಎಫ್ 2 ರೇಸ್ ಗೆದ್ದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಬೆಂಗಳೂರಿನ ಕುಶ್ ಮೈನಿಯ ಈ ಗೆಲುವು ಭಾರತದ ಫಾರ್ಮುಲಾ 1 ಕನಸುಗಳಿಗೆ ಹೊಸ ಚೈತನ್ಯ ತುಂಬಿದೆ.

ಡಿಎಎಂಎಸ್ ಲ್ಯೂಕಸ್ ಆಯಿಲ್ ತಂಡದ ಪರ ಆಡುತ್ತಿರುವ 24 ವರ್ಷದ ಕುಶ್ ಮೈನಿ, ಕಳೆದ ಶನಿವಾರ ನಡೆದ (ಮೇ 24) ಸ್ಪ್ರಿಂಟ್ ರೇಸ್‌ನಲ್ಲಿ ಪೋಲ್ ಪೊಸಿಷನ್‌ನಿಂದ ಆರಂಭಿಸಿ, ರೇಸ್ ಮುಗಿಯುವವರೆಗೂ ತಮ್ಮ ಪ್ರಾಬಲ್ಯ ಮೆರೆದರು. ಈ ಅದ್ಭುತ ಗೆಲುವು ಪ್ರಪಂಚದ ಅತ್ಯಂತ ಕಠಿಣವಾದ ಮೊನಾಕೊ ಟ್ರ್ಯಾಕ್‌ನಲ್ಲಿ ಬಂದದ್ದು ಗಮನಾರ್ಹ.

ಈ ಗೆಲುವಿನ ಬಗ್ಗೆ ಕುಶ್ ಮೈನಿ ಮಾತನಾಡಿ, 'ಪಿ1 ಮತ್ತು ಮೊನಾಕೊದಲ್ಲಿ ಗೆದ್ದ ಮೊದಲ ಭಾರತೀಯ ನಾನು. ಇದು ದೊಡ್ಡ ಗೌರವ, ನಿಜಕ್ಕೂ ಕನಸು ನನಸಾದಂತೆ. ಡಿಎಎಂಎಸ್ ತಂಡಕ್ಕೆ ಮತ್ತು ನನಗೆ ಬೆಂಬಲ ನೀಡಿದ ಎಲ್ಲರಿಗೂ ಧನ್ಯವಾದಗಳು' ಎಂದರು.

ಭಾರತದ ರಾಷ್ಟ್ರಗೀತೆ ಮೊಳಗಿದಾಗ ಮೈನಿ ಹೆಮ್ಮೆಯಿಂದ ಹಾಡಿದ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಕುಶ್ ಮೈನಿಯ ಈ ಸಾಧನೆಗೆ ವಿವಿಧ ವಲಯಗಳಿಂದ ಪ್ರಶಂಸೆ ವ್ಯಕ್ತವಾಗಿದೆ.

ಆನಂದ್ ಮಹೀಂದ್ರಾ ಪ್ರಶಂಸೆ: ಉದ್ಯಮಿ ಆನಂದ್ ಮಹೀಂದ್ರಾ ತಮ್ಮ ಎಕ್ಸ್ (ಟ್ವಿಟರ್) ಪೋಸ್ಟ್‌ನಲ್ಲಿ, 'ನೀವು ಎತ್ತರಕ್ಕೆ ಏರಿದ್ದೀರಿ ಕುಶ್ ಮೈನಿ, ದೇಶವೂ ನಿಮ್ಮೊಂದಿಗೆ ಎತ್ತರಕ್ಕೆ ಏರಿದೆ. ಮಾಂಟೆ ಕಾರ್ಲೋದಲ್ಲಿ ಎಫ್2 ರೇಸ್ ಗೆದ್ದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದೀರಿ. ಮಹೀಂದ್ರಾ ರೇಸಿಂಗ್ ತಂಡದಲ್ಲಿ ನಿಮ್ಮನ್ನು ಹೊಂದಿರುವುದು ನಮಗೆ ಹೆಮ್ಮೆ' ಎಂದು ಬರೆದಿದ್ದಾರೆ.

ಒಂದು ಕಾಲದಲ್ಲಿ ಫಾರ್ಮುಲಾ 1 ಭಾರತೀಯ ಗ್ರ್ಯಾಂಡ್ ಪ್ರಿಕ್ಸ್ ಅನ್ನು ಆಯೋಜಿಸಿದ್ದ ಭಾರತ, ಹೆಚ್ಚಿನ ವೆಚ್ಚಗಳು, ಮೂಲಸೌಕರ್ಯಗಳ ಕೊರತೆ ಮತ್ತು ಆಡಳಿತಾತ್ಮಕ ಸಮಸ್ಯೆಗಳಿಂದಾಗಿ ವಿಶ್ವ ಮೋಟಾರ್ ಸ್ಪೋರ್ಟ್‌ನಲ್ಲಿ ಹಿಂದುಳಿದಿತ್ತು. ಆದರೆ, ಕುಶ್ ಮೈನಿಯ ಮೊನಾಕೊ ಗೆಲುವು ಭಾರತದಲ್ಲಿ ಮೋಟಾರ್‌ಸ್ಪೋರ್ಟ್‌ಗೆ ಹೊಸ ಭರವಸೆ ಮೂಡಿಸಿದೆ.

ಈ ಗೆಲುವಿನ ನಂತರ ಕುಶ್ ಮೈನಿ ಬರುವ ಭಾನುವಾರ ನಡೆಯಲಿರುವ ಫೀಚರ್ ರೇಸ್ ಮತ್ತು ಮುಂದಿನ ವಾರ ಬಾರ್ಸಿಲೋನಾದಲ್ಲಿ ನಡೆಯಲಿರುವ ಸ್ಪರ್ಧೆಗೆ ಆತ್ಮವಿಶ್ವಾಸದಿಂದ ಸಜ್ಜಾಗಿದ್ದಾರೆ.

ಕರ್ನಾಟಕ ಸಾಲದ ಸುಳಿಯಲ್ಲಿರುವಾಗ ಕೆ.ಆರ್.ನಗರದ ಒಂದು ಗಂಟೆ ಕಾರ್ಯಕ್ರಮಕ್ಕೆ ಹೆಲಿಕಾಪ್ಟರ್ ಅಗತ್ಯವಿತ್ತೆ!

ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮಾಜಿ ಸಚಿವ ಸಾ.ರಾ.ಮಹೇಶ್ ಪ್ರಶ್ನೆ

- ಸಿದ್ದರಾಮಯ್ಯ ಚೀಪ್ ಪಾಲಿಟಿಕ್ಸ್ ಮಾಡುತ್ತಿದ್ದಾರೆ
- ನನ್ನ ಅವಧಿಯಲ್ಲಿ ಮಂಜೂರಾದ ಯೋಜನೆಗಳಿಗೆ ಶಂಕುಸ್ಥಾಪನೆ
- ನಿಮ್ಮ ಸಾಧನೆ ತೋರಿಸುವ ಬಹಿರಂಗ ಚರ್ಚೆಗೆ ಬನ್ನಿ



ಮೈಸೂರಿನ ರಮಾವಿಲಾಸ ರಸ್ತೆಯ ತಮ್ಮ ಕಚೇರಿಯಲ್ಲಿ ಮಂಗಳವಾರ ಮಾಜಿ ಸಚಿವ ಸಾ.ರಾ.ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಮೇ27(ಬಿಎಲ್‌ಯು)– ಕರ್ನಾಟಕ ರಾಜ್ಯ ಸಾಲದ ಸುಳಿಯಲ್ಲಿ ಸಿಲುಕಿರುವ ಇಂತಹ ಸಂದರ್ಭದಲ್ಲಿ ಕೆ.ಆರ್.ನಗರದಲ್ಲಿನ ಕೇವಲ ಒಂದೇ ಒಂದು ಗಂಟೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಲಿಕಾಪ್ಟರ್ ಬಳಕೆ ಮಾಡುವುದರೊಂದಿಗೆ ದುಂದು ವೆಚ್ಚ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ದೂರಿದ್ದಾರೆ.

ನಗರದ ರಮಾವಿಲಾಸ ರಸ್ತೆಯ ತಮ್ಮ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆ.ಆರ್.ನಗರದ ಒಂದು ಗಂಟೆ ಕಾರ್ಯಕ್ರಮಕ್ಕೆ ಸಿದ್ದರಾಮಯ್ಯ ಹೆಲಿಕಾಪ್ಟರ್‌ನಲ್ಲಿ ಬಂದು ಹೋಗಿದ್ದಾರೆ. ಈ ಮೂಲಕ ರಾಜ್ಯದ ಜನರ ತೆರಿಗೆ ಹಣವನ್ನು ಪೋಲು ಮಾಡುತ್ತಿದ್ದಾರೆ ಎಂದು ಆಪಾದಿಸಿದರು.

ಕರ್ನಾಟಕದ ಸಮಗ್ರ ಸಾಲ 7.81 ಲಕ್ಷ ಕೋಟಿಯಾಗಿದೆ. ಇದರಲ್ಲಿ ಸಿದ್ದರಾಮಯ್ಯ ಒಬ್ಬರೇ 4.91 ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಇದಲ್ಲದೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ಕೂಡ ಮಾಡಿದ್ದಾರೆ. ಲಕ್ಷಾಂತರ ಕೋಟಿ ಸಾಲ ಮಾಡಿ, ವಸ್ತುಗಳ ಬೆಲೆ ಗಗನಕ್ಕೇರಿಸಿ ಬಜೆಟ್ ಮಂಡಿಸುವುದು ಒಂದು ದೊಡ್ಡ ಸಾಧನೆಯೇ ಎಂದು ಪ್ರಶ್ನಿಸಿದರು.

ನಾನು ಸಮಾಜವಾದಿ ಎಂದು ಹೇಳುವ ಸಿದ್ದರಾಮಯ್ಯ ಅವರು ಹೀಗೆ ಅನಾವಶ್ಯಕವಾಗಿ ಖರ್ಚು ಮಾಡುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದ ಸಾ.ರಾ.ಮಹೇಶ್, ಈ ಬಗ್ಗೆ ಸಿದ್ದರಾಮಯ್ಯ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಾನು ಶಾಸಕನಾಗಿದ್ದಾಗ ಮಂಜೂರು ಮಾಡಿಸಿದ್ದ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮಾಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಚೀಪ್ ಪಾಲಿಟಿಕ್ಸ್ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸಿದ್ದರಾಮಯ್ಯ ಅವರು ಮೊನ್ನೆ ಕೆ.ಆರ್.ನಗರದಲ್ಲಿ ಶಿಲಾನ್ಯಾಸ ನೆರವೇರಿಸಿರುವ ಯೋಜನೆಗಳಲ್ಲಿ 150 ಕೋಟಿ ನನ್ನ ಅವಧಿಯಲ್ಲಿ ಮಂಜೂರಾದ ಯೋಜನೆಗಳಾಗಿವೆ ಎಂದು ತಿಳಿಸಿದರು.

ಈಗ ಇವರು 237 ಕೋಟಿ ರೂಪಾಯಿ ಯೋಜನೆಗೆ ಗುದ್ದಲಿ ಪೂಜೆ ನೆರವೇರಿಸಿದ್ದಾರೆ. ಟೆಂಡರ್ ಆಗದಿದ್ದರೂ ತರಾತುರಿಯಲ್ಲಿ ಶಿಲಾನ್ಯಾಸ ಮಾಡುವ ಪ್ರಮೇಯ ವೇನಿತ್ತು ಎಂದು ಸಾ.ರಾ.ಮಹೇಶ್ ಪ್ರಶ್ನಿಸಿದರು.

ಸಿದ್ದರಾಮಯ್ಯ ಮೊನ್ನೆ ಶಂಕುಸ್ಥಾಪನೆ ನೆರವೇರಿಸಿದ 20 ಕೋಟಿ ರೂಪಾಯಿ ಕಾಮಗಾರಿಗೆ ಮಾತ್ರ ಆಡಳಿತಾತ್ಮಕ ಮಂಜೂರಾತಿ ದೊರೆತಿದೆ. ಉಳಿದ ಯಾವ ಯೋಜನೆಗೂ ಅನುಮೋದನೆ ದೊರೆತಿಲ್ಲ. ಆದರೂ ಆತುರವಾಗಿ ಶಂಕುಸ್ಥಾಪನೆ ನೆರವೇರಿಸಿದ್ದಾರೆ ಎಂದು ದೂರಿದರು.

ನನ್ನ ಕಾಲದಲ್ಲಿ ಮಂಜೂರಾತಿ ದೊರೆತ ಯೋಜನೆಗಳಿಗೆ ಹೆಸರು ಬದಲಾಯಿಸಿ ಶಂಕುಸ್ಥಾಪನೆ ನಡೆಸಿ, ಉದ್ಘಾಟನೆ ಕೂಡ ಮಾಡಿದ್ದಾರೆ. ಇದನ್ನು ದಾಖಲಾತಿ ಸಮೇತ ಸಾಬೀತು ಮಾಡುತ್ತೇನೆ ಎಂದು ಸಿದ್ದರಾಮಯ್ಯಗೆ ಬಹಿರಂಗ ಚರ್ಚೆಗೆ ಆಹ್ವಾನಿಸಿದರು.

15 ವರ್ಷಗಳ ಕಾಲ ಕೆ.ಆರ್.ನಗರವನ್ನು ಹಾಳು ಮಾಡಿದ್ದರು, ಈಗ ಇರುವವರು ಸರಿ ಮಾಡುತ್ತಾರೆ ಎಂದು ಪರೋಕ್ಷವಾಗಿ ನನ್ನನ್ನು ಟೀಕಿಸಿದ್ದಾರೆ. 2023ರ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಇಡೀ ಕುಟುಂಬ ತಾಲೂಕಿನಾದ್ಯಂತ ಸುತ್ತಿ ಸೆರಗೊಡ್ಡಿ ಮತ ಬೇಡಿದರು. ಇದರಿಂದ ಜನತೆ ಅವರನ್ನು ಗೆಲ್ಲಿಸಿದರು. ಇದಾದ ಒಂದೇ ವರ್ಷಕ್ಕೆ ನಡೆದ ಲೋಕಸಭಾ ಚುನಾವಣೆಯಲ್ಲಿ ತಾಲೂಕಿನ ಜನತೆ ಜೆಡಿಎಸ್‌ಗೆ ಲೀಡ್ ನೀಡಿದರು ಎಂದು ಹೇಳಿದರು.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹಾಗೂ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರು ಕುಟುಂಬ ರಾಜಕಾರಣ ಮಾಡುತ್ತಾರೆ ಎಂದು ಟೀಕಿಸುತ್ತಾರೆ. ಹಾಗಾದರೆ ನೆಹರು ಹಾಗೂ ಇಂದಿರಾಗಾಂಧಿ ಕುಟುಂಬ ರಾಜಕಾರಣ ಮಾಡಲಿಲ್ಲವೇ? ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಜೆಡಿಎಸ್ ನಗರಾಧ್ಯಕ್ಷ ಕೆ.ಟಿ.ಚಲುವೇಗೌಡ, ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ರಾಜ್ಯ ವಕ್ತಾರ ರವಿಚಂದ್ರ, ಮಾಜಿ ಮೇಯರ್ ಆರ್.ಲಿಂಗಪ್ಪ, ಮಾಜಿ ಉಪ ಮೇಯರ್ ಕೃಷ್ಣ, ಮಾಜಿ ಕಾರ್ಪೋರೇಟರ್ ಶ್ರೀಧರ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ತಮನ್ನಾರನ್ನು ಜಾಹಿರಾತಲ್ಲಿ ನೋಡಿ ರಾಯಭಾರಿ ಮಾಡಿರಬಹುದು!

ಮೈಸೂರು ಸ್ಯಾಂಡಲ್ ಸೋಪ್‌ಗೆ ಬಾಲಿವುಡ್ ನಟಿ ತಮನ್ನಾ ಭಾಟಿಯಾ ಅವರನ್ನು ರಾಯಭಾರಿಯಾಗಿ ಆಯ್ಕೆ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಾ.ರಾ.ಮಹೇಶ್, ಜಾಹಿರಾತುಗಳನ್ನು ನೋಡಿ ತಮನ್ನಾ ಭಾಟಿಯಾರಂತೆ ಡ್ಯಾನ್ಸ್ ಮಾಡಬಹುದು, ಬಟ್ಟೆ ಹಾಕಿಕೊಳ್ಳಬಹುದು ಎಂಬ ಭ್ರಮೆ ಬಿಡಿ ಎಂದು ಸರ್ಕಾರಕ್ಕೆ ಸಲಹೆ ನೀಡಿದರು.

ನಾನು ಪ್ರವಾಸೋದ್ಯಮ ಸಚಿವನಾಗಿದ್ದಾಗ ಯದುವೀರ್ ಭೇಟಿ ಮಾಡಿ ಪ್ರವಾಸೋದ್ಯಮ ರಾಯಭಾರಿಯಾಗುವಂತೆ ಮನವಿ ಮಾಡಿದ್ದೆ. ಯದುವಂಶಸ್ಥರು ಸಮಾಜಕ್ಕೆ ಅಪಾರ ಕೊಡುಗೆ ನೀಡಿದ್ದರಿಂದ ಯದುವೀರ್ ಅವರನ್ನು ನೇಮಕ ಮಾಡಲಾಯಿತು. ಆಗ ಯದುವೀರ್ ಅವರು ಇನ್ನು ರಾಜಕೀಯಕ್ಕೆ ಬಂದಿಲ್ಲದ ಕಾರಣ ರಾಯಭಾರಿಯಾಗಲು ಸಮ್ಮತಿಸಿದ್ದರು ಎಂದರು.

ಕಲ್ಪನಾ ಚಾವ್ಲಾರಂತೆ ಸಾಧನೆ ಮಾಡಿದ ಬಹಳಷ್ಟು ಸಾಧಕರಿದ್ದಾರೆ. ಅವರನ್ನು ಬಿಟ್ಟು ತಮನ್ನಾ ಭಾಟಿಯಾ ಅವರನ್ನು ರಾಯಭಾರಿಯಾಗಿ ಏಕೆ ಮಾಡಿದ್ದಾರೋ ತಿಳಿಯದು ಎಂದು ಹೇಳಿದರು. ಮೈಸೂರಿನಲ್ಲಿ ಅಪರಾಧ ಪ್ರಕರಣ ಹೆಚ್ಚಾಗುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಾ.ರಾ.ಮಹೇಶ್, ಪುಡಿ ರೌಡಿಗಳು ತಲೆ ಎತ್ತಿದ್ದಾರೆ. ಇದನ್ನೆಲ್ಲಾ ಸರಿ ಮಾಡುವವರು ಯಾರೆಂದು ತಿಳಿಯುತ್ತಿಲ್ಲ. ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷವಾಯಿತು. ಆದರೆ ಈ ತನಕ ಇದಕ್ಕೆಲ್ಲಾ ಕಡಿವಾಣ ಹಾಕಿಲ್ಲ ಎಂದು ಆರೋಪಿಸಿದರು.

ಮೇ 30ಕ್ಕೆ 'ಸ್ವಾತಂತ್ರ್ಯದ ಓಟ' ನಾಟಕ ಪ್ರದರ್ಶನ

ಮೈಸೂರು, ಮೇ 27(ಎಂಟಿವೈ)– ಮೈಸೂರಿನ ಕಲಾಮಂದಿರದ ಕಿರುರಂಗ ಮಂದಿರದಲ್ಲಿ ಮೇ 30ರಂದು ಸಂಜೆ 6.30ಕ್ಕೆ ಭಾರತ – ಪಾಕಿಸ್ತಾನ ವಿಭಜನೆಯ ಸಂದರ್ಭದಲ್ಲಿ ಬಿಂಬಿತವಾದ 'ಮಾನವೀಯ ಮೌಲ್ಯ'ಗಳ ಕಥಾ ಹಂದರವುಳ್ಳ 'ಸ್ವಾತಂತ್ರ್ಯದ ಓಟ' ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ಪ್ರಕಾಶಕ ಡಿ.ಎನ್. ಲೋಕಪ್ಪ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿರಿಗೆರೆಯ ತರಳಬಾಳು ಕಲಾಸಂಘ ಹಾಗೂ ಮೈಸೂರಿನ ತರಳಬಾಳು ಸಮಾಗಮ ಸಂಸ್ಥೆ ವತಿಯಿಂದ 'ಸ್ವಾತಂತ್ರ್ಯದ ಓಟ' ನಾಟಕ ಏರ್ಪಡಿಸಲಾಗಿದೆ. ಬೋಳುವಾರು ಮಹಮದ್ ಕುಂಯಿ ಅವರ ಕೃತಿ ಆಧಾರಿತ ನಾಟಕ 'ಸ್ವಾತಂತ್ರ್ಯದ ಓಟ' ಪ್ರದರ್ಶನದ ಸಾನಿಧ್ಯವನ್ನು ತರಳಬಾಳು ಜಗದ್ಗುರು ಶ್ರೀ 1108 ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿ ವಹಿಸಲಿದ್ದಾರೆ. ಕಾರ್ಯಕ್ರಮವನ್ನು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಉದ್ಘಾಟಿಸಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಅತಿಥಿಗಳಾಗಿರುವರು. ಶಶಿಧರ ಭಾರಿಘಾಟ್ ನಿರ್ದೇಶಿಸಿದ್ದು, ಸಹ ನಿರ್ದೇಶನ ನಿರಂಜನ ಖಾಲಿಕೊಡ, ಸಂಗೀತ ದಿಗ್ವಿಜಯ ಹೆಗ್ಗೋಡು, ಬೆಳಕು ಎಂ.ಎಸ್.ಸಿದ್ದೇಶ್ ಮತ್ತು ಇರ್ಫಾನ್, ಧ್ವನಿ ಎಸ್.ಸಿ.ಪ್ರಕಾಶ್ ಮತ್ತು ಎಂ.ಎಸ್.ಸಿದ್ದೇಶ್ ಅವರದ್ದಾಗಿದೆ ಎಂದರು.

ಹಿರಿಯ ಸಾಹಿತಿ ಮೊರಬದ ಮಲ್ಲಿಕಾರ್ಜುನ ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿನ ಸೂಕ್ಷ್ಮ ವಿಷಯದ ಹಿನ್ನೆಲೆಯಲ್ಲಿ ಈ ನಾಟಕ ಸಮಕಾಲೀನವೂ ಆಗಿದೆ. ಸ್ವಾತಂತ್ರ್ಯ ಸಂಗ್ರಾಮ ಆಧಾರಿತವಾದುದಾಗಿದ್ದು, ನಂತರ ವಿಭಜನೆ, ಅಂದಿನ ಮಾನವೀಯ ಸಂಗತಿಗಳನ್ನು ಇದು ಒಳಗೊಂಡಿದೆ. ಅಂತಃಕರಣ ಕಲಕುವ ವಿಷಯಗಳನ್ನು ಇಲ್ಲಿ ಅಭಿವ್ಯಕ್ತಿಗೊಳಿಸಿದ್ದಾರೆ. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ತರಳಬಾಳು ಸಂಸ್ಥೆಯ ಅಧ್ಯಕ್ಷ ಡಾ.ಎಸ್.ಬಿ.ವಸಂತಕುಮಾರ್, ಡಾ. ಗುರುಮೂರ್ತಿ, ಇದ್ದರು.

ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 27– ಕೆ.ಆರ್.ನಗರ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಪಿಯುಸಿ, ಐ.ಟಿ.ಐ ಮತ್ತು ಡಿಪ್ಲೋಮಾ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025–26 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಇಲಾಖೆ ವೆಬ್‌ಸೈಟ್ https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂ.20 ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸಬಹುದು ಎಂದು ಕೆ.ಆರ್.ನಗರ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಣೆಯಾಗಿದ್ದಾರೆ



ಹರೀಂದ್ರ ಯು. ಆರ್.

48 ವರ್ಷದ ಇವರು ದಿನಾಂಕ 7/5/2025 ರಿಂದ ಉಡುಪಿಯ ಬಡಗುಪೇಟೆಯಿಂದ ಕಾಣೆಯಾಗಿದ್ದು, ಇವರ ಬಗ್ಗೆ ಮಾಹಿತಿ ದೊರೆತಲ್ಲಿ ಮೈಸೂರಿನ ಪೊಲೀಸ್ ಠಾಣೆ 0821–2418324, ಉಡುಪಿ ಪೊಲೀಸ್ ಸ್ಟೇಷನ್ ಮೊ: 9880945913 ಅಥವಾ ಮೊ. 9980564318ಗೆ ಕರೆ ಮಾಡಿ ತಿಳಿಸಬೇಕಾಗಿ ವಿನಂತಿ.

ಸಾರ್ವಜನಿಕರ ತಿಳುವಳಿಕೆಗಾಗಿ

ನನ್ನ ಕಕ್ಷಿದಾರರಾದ ಶ್ರೀ ಮಹಾಸಾಗರ್.ಸಿ.ಎನ್ (ಆಧಾರ್ ನಂ.68164132 6096), ಬಿನ್ ಶ್ರೀ ಸಿ. ಡಿ. ನಾಗೇಶ, ಸುಮಾರು 27 ವರ್ಷ, ಚಿಕ್ಕೂರು ಗ್ರಾಮ, ಸರಗೂರು ಹೋಬಳಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ–571125, ಈ ಕೆಳಗೆ ನಮೂದಿಸಿರುವ ಅನುಸೂಚಿ ಜಮೀನನ್ನು ಅದರ ಮಾಲೀಕರಾದ ಶ್ರೀಮತಿ ಸಾಕಮ್ಮ ಮತ್ತು ಇತರರಿಂದ ಕ್ರಯಕ್ಕೆ ಪಡೆಯಲು ಇಚ್ಛಿಸಿದ್ದು, ಅನುಸೂಚಿ ಸ್ವತ್ತಿನ ಸಂಬಂಧವಾಗಿ ಬೇರೆ ಯಾರಿಗಾದರೂ ಯಾವುದೇ ಹಕ್ಕು, ಆಸಕ್ತಿ, ಸ್ವಾಮ್ಯಗಳು, ತಕರಾರು ಹಾಗೂ ಪಕ್ಕೊತ್ತಾಯ–ಗಳು ಇದ್ದಲ್ಲಿ, ಈ ತಿಳುವಳಿಕೆ ಪತ್ರವು ಪ್ರಕಟವಾದ ದಿನಾಂಕದಿಂದ ಏಳು ದಿನಗಳ ಒಳಗಾಗಿ ದಾಖಲೆ ಸಹಿತ ನನಗೆ ಈ ಕೆಳಕಂಡ ವಿಳಾಸಕ್ಕೆ ಲಿಖಿತವಾಗಿ ತಿಳಿಸತಕ್ಕದ್ದು. ಒಂದು ವೇಳೆ ಯಾವುದೇ ತಕರಾರು ಬಾರದೇ ಇದ್ದಲ್ಲಿ, ಯಾರಿಂದಲೂ ಯಾವುದೇ ತಕರಾರು ಇಲ್ಲವೆಂದು ಪರಿಗಣಿಸಿ ನನ್ನ ಕಕ್ಷಿದಾರರು ಅನುಸೂಚಿ ಸ್ವತ್ತನ್ನು ನೋಂದಾಯಿತ ದಸ್ತಾವೇಜು ಮೂಲಕ ಕ್ರಯಕ್ಕೆ ಪಡೆಯುವ–ವರಿದ್ದು, ಆ ನಂತರ ಉಂಟಾಗತಕ್ಕ ಯಾವುದೇ ತಂಟೆ ತಕರಾರುಗಳು ನನ್ನ ಕಕ್ಷಿದಾರರನ್ನು ಬದ್ಧಪಡಿಸುವುದಿಲ್ಲವೆಂದು ತಿಳಿಯತಕ್ಕದ್ದು.

ಅನುಸೂಚಿ ಸ್ವತ್ತಿನ ವಿವರ

ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಕೇರಗಳ್ಳಿ ಗ್ರಾಮದ ಸರ್ವೆ ನಂ.158/4 ರಲ್ಲಿ ಇರುವ 1 (ಒಂದು) ಎಕರೆ 7 (ಏಳು) ಗುಂಟೆ ಜಮೀನಿನ ಪೈಕಿ 10.08 ಗುಂಟೆ 11ಇ–ಸ್ಕೆಚ್ ಸಂಖ್ಯೆ: 26151124840927001 ರ ಬ್ಲಾಕ್–2 ರಲ್ಲಿ ವಿವರಿಸಿರುವ ಖುಷ್ಕಿ ಜಮೀನಿಗೆ ಚೆಕ್ಕುಬಂದಿ: ಪೂರ್ವಕ್ಕೆ: ಲಾ ಸ ನಂ.156 ರ ಜಮೀನು, ಪಶ್ಚಿಮಕ್ಕೆ: ಲಾ ಬ್ಲಾಕ್ ನಂ.1 ರ ಜಮೀನು, ಉತ್ತರಕ್ಕೆ: ಲಾ ಬ್ಲಾಕ್ ನಂ.1 ರ ಜಮೀನು ಮತ್ತು ದಕ್ಷಿಣಕ್ಕೆ: ಲಾ ಸ ನಂ.157, 156 ರ ಜಮೀನು.

(ಹೆಚ್.ಎಂ. ಸುಧಾಕರ)
ವಕೀಲರು, ಕೆಎಆರ್ 51/97
ನಂ. 23, ಪೆಟ್ರೋಲ್ ಬಂಕ್ ಹಿಂಭಾಗ, ನಿವೇದಿತನಗರ, ಮೈಸೂರು Ph: 94485 58136
ದಿನಾಂಕ : 27–05–2025
ಸ್ಥಳ: ಮೈಸೂರು

ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ನನ್ನ ಕಕ್ಷಿದಾರರುಗಳು ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತುಗಳನ್ನು ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಧನಗಳ್ಳಿ ದಾಖಲೆ, ದೊಡ್ಡಹುಂಡಿ ಗ್ರಾಮದಲ್ಲಿ ವಾಸವಾಗಿರುವ ಶ್ರೀ. ಪುಟ್ಟಬಸವೇಗೌಡ ಮತ್ತು ಇವರ ಧರ್ಮಪತ್ನಿ ಶ್ರೀಮತಿ. ಶಿವಮ್ಮ ಮತ್ತು ಇತರರಿಂದ ಖರೀದಿಸಲು ಉದ್ದೇಶಿಸಿರುತ್ತಾರೆ.

ಷೆಡ್ಯೂಲ್ ಸ್ವತ್ತುಗಳ ಮೇಲೆ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಭಾಗಾಂಶ, ಋಣ, ವ್ಯಾಜ್ಯ, ಬಾಧ್ಯತೆಗಳು ಇದ್ದಲ್ಲಿ, ಇಂದಿನಿಂದ ಹದಿನೈದು (15) ದಿನಗಳ ಒಳಗೆ ತಮ್ಮ ಲಿಖಿತ ತಕರಾರು ಮತ್ತು ಪೂರಕ ದಾಖಲಾತಿಗಳನ್ನು ಈ ಕೆಳಗೆ ಸಹಿ ಮಾಡಿದವ-ರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಈ ಅವಧಿಯಲ್ಲಿ ಯಾವುದೇ ತಕರಾರುಗಳು ಈ ಕೆಳಗೆ ಸಹಿ ಮಾಡಿದವ-ರಿಗೆ ಬಾರದಿದ್ದಲ್ಲಿ, ಷೆಡ್ಯೂಲ್ ಸ್ವತ್ತುಗಳ ಮೇಲೆ ಇತರೆ ಯಾರಿಗೂ ಯಾವುದೇ ರೀತಿಯ ಹಕ್ಕು ಅಧಿಕಾರ, ಹಿತಾಸಕ್ತಿ, ಭಾಗಾಂಶ, ಋಣ, ವ್ಯಾಜ್ಯ, ಬಾಧ್ಯತೆಗಳು ಇರುವುದಿಲ್ಲ ಮತ್ತು ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡಲು ಸ್ವತ್ತಿನ ಮಾಲೀಕರು ಪೂರ್ಣ ಹಕ್ಕುಳ್ಳವರಾಗಿರುತ್ತಾರೆ ಎಂದು ಪರಿಗಣಿಸಿ ಕ್ರಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು. ಅನಂತರ ಬರುವ ಮೇಲ್ಕಂಡ ಯಾವುದೇ ರೀತಿಯ ಆಕ್ಷೇಪಣೆಗಳಿಗೆ ನನ್ನ ಕಕ್ಷಿದಾರರುಗಳು ನಿರ್ಬಂಧಿತರಾಗುವುದಿಲ್ಲ.

ಷೆಡ್ಯೂಲ್ ಸ್ವತ್ತುಗಳು ವಿವರ : ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ತೊರೆಯನಕಟ್ಟೂರು ಗ್ರಾಮ, ಈ ಕೆಳಕಂಡ ಸರ್ವೆ ನಂಬರ್‌ಗಳ ಖುಷ್ಕಿ ಜಮೀನು:-

ಸರ್ವೆ ನಂ. 169/3 ರಲ್ಲಿರುವ ಒಟ್ಟು ವಿಸ್ತೀರ್ಣ 1-35 ಖುಷ್ಕಿ ಜಮೀನಿಗೆ ಚೆಕ್ಕುಬಂದಿ:- ಪೂರ್ವಕ್ಕೆ : ಸಿದ್ಧನಾಯ್ಕ ಮತ್ತು ಚಿಕ್ಕದೇವನಾಯ್ಕ ರವರ ಜಮೀನು, ಪಶ್ಚಿಮಕ್ಕೆ : ಜವರನಾಯ್ಕ ರವರ ಜಮೀನು, ಉತ್ತರಕ್ಕೆ : ಅಂಕನಾಯ್ಕ ರವರ ಜಮೀನು, ದಕ್ಷಿಣಕ್ಕೆ : ಸರ್ವೆ ನಂ. 170/2 ರಲ್ಲಿ ಎಂ.ಎಸ್.ಎಸ್. ಕುಮಾರ್ ರವರ ಬಾಬ್ತು ಜಮೀನು.

ಸರ್ವೆ ನಂ. 170/2 ರಲ್ಲಿರುವ ಒಟ್ಟು ವಿಸ್ತೀರ್ಣ 2-17 ಖುಷ್ಕಿ ಜಮೀನಿಗೆ ಚೆಕ್ಕುಬಂದಿ:- ಪೂರ್ವಕ್ಕೆ : ರಸ್ತೆ, ಪಶ್ಚಿಮಕ್ಕೆ : ಚಿಕ್ಕತಮ್ಮಶೆಟ್ಟಿರವರ ರವರ ಜಮೀನು, ಉತ್ತರಕ್ಕೆ : ಸಿದ್ಧನಾಯ್ಕರ ಜಮೀನು ಮತ್ತು ಸರ್ವೆ ನಂ. 169/3 ರಲ್ಲಿ ಪುಟ್ಟಬಸವೇಗೌಡ ರವರ ಜಮೀನು, ದಕ್ಷಿಣಕ್ಕೆ : ಎಂ.ಡಿ. ಬಸವರಾಜು ರವರ ಜಮೀನು.

ಸರ್ವೆ ನಂ. 169/1 ರಲ್ಲಿರುವ ಒಟ್ಟು ವಿಸ್ತೀರ್ಣ 1-02 ಖುಷ್ಕಿ ಜಮೀನಿಗೆ ಚೆಕ್ಕುಬಂದಿ:- ಪೂರ್ವಕ್ಕೆ : ರಸ್ತೆ, ಪಶ್ಚಿಮಕ್ಕೆ : ಪುಟ್ಟಬಸವೇಗೌಡ ರವರ ಜಮೀನು, ಉತ್ತರಕ್ಕೆ : ಚಿಕ್ಕದೇವನಾಯಕ ರವರ ಜಮೀನು, ದಕ್ಷಿಣಕ್ಕೆ : ಪುಟ್ಟಬಸವೇಗೌಡ ರವರ ಜಮೀನು. (ಒಟ್ಟು 5 ಎಕರೆ 14 ಗುಂಟೆ ಖುಷ್ಕಿ ಜಮೀನು)

Sd/- S. Kamala ,B.A.L., LL,B.
KAR 2420/03
ADVOCATE , #25, Muda Complex, Near Sub Register Office, Ramakrishnanagar 'I' Block, Mysore- 22 , Mob: 9845568157

46 ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಅಭಿನಂದನೆಗಳು



ನಿಧೀಶ್ ಕೆ.ಕೆ.
608 (97.2%)
ಎಸ್.ಎಸ್.ಎಲ್.ಸಿ. – 2024-25
ಐಡಿಯಲ್ ಜಾವ ರೋಟರಿ ಶಾಲೆ
ಶುಭಾಶಯ ಕೋರುವವರು
ಕೆ.ಎಂ. ಕೃಷ್ಣ ವಕೀಲರು, ನಂದಿನಿ, ಪ್ರೀತಮ್
ಕೆ.ಜಿ. ಕೊಪ್ಪಲ್ ಮೈಸೂರು

ಮೈಸೂರು ಮಹಾನಗರ ಪಾಲಿಕೆ, ಮೈಸೂರು

ಕಾರ್ಯಪಾಲಕ ಅಭಿಯಂತರರು (ಪಶ್ಚಿಮ) ರವರ ಕಚೇರಿ, ಸಯ್ಯಾಜಿರಾವ್ ರಸ್ತೆ, ಮೈಸೂರು ಮಹಾನಗರ ಪಾಲಿಕೆ, ಮೈಸೂರು–570024
ಇಮೇಲ್: mcchealthofficer@gmail.com

ಸಂಖ್ಯೆ: ಹೆಚ್1/ಘವನಿ–3/10/2025–26 ದಿನಾಂಕ: 26.05.2025

–: ಆಸಕ್ತಿ ಅಭಿವ್ಯಕ್ತಿಯ ಅವಧಿ ವಿಸ್ತರಣೆ :–
(Extention of Date for EOI)

ದಿನಾಂಕ:14.05.2025 ರಂದು ನೋಂದಾಯಿತ SHG ಸದಸ್ಯರಿಂದ "ಆಸಕ್ತಿಅಭಿವ್ಯಕ್ತಿ"ಯನ್ನು ಆಹ್ವಾನಿಸಿದ್ದ ಅವಧಿಯನ್ನು ದಿನಾಂಕ:05–06–2025ರ ಸಂಜೆ 5:00 ಗಂಟೆಯವರೆಗೆ ವಿಸ್ತರಿಸಲಾಗಿದೆ, ಆಸಕ್ತಿಯುಳ್ಳ SHG ಸದಸ್ಯರು ಹೆಚ್ಚಿನ ಮಾಹಿತಿಯನ್ನು ಪಾಲಿಕೆ ವೆಬ್‌ಸೈಟ್:www.mysurucity.mrc.gov.in ನಲ್ಲಿ ಪಡೆಯಬಹುದಾಗಿದೆ.

ಸಹಿ/– ಕಾರ್ಯಪಾಲಕ ಅಭಿಯಂತರರು (ಪಶ್ಚಿಮ)
ಮೈಸೂರು ಮಹಾನಗರ ಪಾಲಿಕೆ,
ಮೈಸೂರು.

DIPR/MYS/KAVITA/251/2025-26